ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 29 ಮಂಗಳವಾರ 2023

ಸಂಪುಟ: 44 | ಸಂಚಿಕೆ: 134 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹ 4

ಮೊದಲು ನಮ್ಮ ರೈತರ ಬೆಳೆಗೆ ನೀರು ಬಿಡಿ

'ನಮ್ಮ ರೈತರಿಗೆ ಅನ್ಯಾಯ ಮಾಡಿ ತಮಿಳುನಾಡಿಗೆ ನೀರು ಬಿಡಬೇಕು ಅಂತಿಲ್ಲ'

ಕಟ್ಟು ಪದ್ಧತಿಯಡಿ ನೀರು ಬಿಡುವ ನಿರ್ಧಾರದ ಬಗ್ಗೆ ನೀರಾವರಿ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತರಾಟೆ; ಮೊದಲು ನಮ್ಮ ರೈತರು, ನಮ್ಮ ಬೆಳೆಗೆ ಆದ್ಯತೆ



ನಮಸ್ತೆ: ಪ್ರಗತಿ ಪರಿಶೀಲನಾ ಸಭೆಗೆ ಆಗಮಿಸುತ್ತಿದ್ದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೆರೆದಿದ್ದ ಅಧಿಕಾರಿಗಳಿಗೆ ನಮಸ್ಕರಿಸಿದರು.

ಮೈಸೂರು, ಆ.28(ಬಿಎಲ್‌ಯು)– ಕಾವೇರಿ ಜಲಾನಯನ ಪ್ರದೇಶದ ಬೆಳೆಗಳಿಗೆ ಕಟ್ಟು ಪದ್ಧತಿ ಬದಲು ಪೂರ್ಣ ಪ್ರಮಾಣದಲ್ಲಿ ನೀರು ಬಿಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ನೀರಾವರಿ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಿದರು.



ಮೈಸೂರಿನ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ನಡೆದ ಕೆಡಿಪಿ ಸಭೆಯಲ್ಲಿ ನೀರಾವರಿ ಇಲಾಖೆಯ ಪ್ರಗತಿ ಪರಿಶೀಲನೆ ವೇಳೆ ಕಾವೇರಿ ಜಲಾನಯನ ಪ್ರದೇಶದ ರೈತರಿಗೆ ಕಟ್ಟು ಪದ್ಧತಿಯಡಿ ನೀರು ಬಿಡುತ್ತಿರುವ ವಿಚಾರ ಕೇಳಿ ಕೆಂಡ ಮಂಡಲವಾದರು. ಕೆಆರ್‌ಎಸ್, ಕಬಿನಿ ಹಾಗೂ ಹಾರಂಗಿ ಜಲಾಶಯಗಳಿಂದ ಕಟ್ಟು ಪದ್ಧತಿಯಲ್ಲಿ ಅರೆ ಬೇಸಾಯಕ್ಕೆ ನೀರು ಬಿಟ್ಟಿದ್ದೇವೆ ಎಂದು ನೀರಾವರಿ ಇಲಾಖೆಯ ಚೀಫ್ ಇಂಜಿನಿಯರ್ ವೆಂಕಟೇಶ್ ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದರು.

ಈ ವಿಚಾರ ಕಿವಿಗೆ ಬೀಳುತ್ತಿದ್ದಂತೆ ಏರುಧ್ವನಿಯಲ್ಲಿ ಚೀಫ್ ಇಂಜಿನಿಯರ್ ವೆಂಕಟೇಶ್ ಅವರನ್ನು ಸಿದ್ದರಾಮಯ್ಯ ತರಾಟೆಗೆ ತೆಗೆದುಕೊಂಡರು. ತಮಿಳುನಾಡು ಕಾವೇರಿ ನೀರು ಕೇಳುತ್ತಿರುವುದು ನಿಜ. ಹಾಗಂತ ನಮ್ಮ ರೈತರಿಗೆ ಅನ್ಯಾಯ ಮಾಡಿ ತಮಿಳುನಾಡಿಗೆ ನೀರು ಬಿಡಬೇಕು ಅಂತಿಲ್ಲ. ಮೊದಲು ನಮ್ಮ ರೈತರು, ಅವರ ಬೆಳೆ ರಕ್ಷಣೆ ಮಾಡಬೇಕು. ನಂತರ ತಮಿಳುನಾಡಿಗೆ ನೀರು ಬಿಡಬೇಕು. ನಮ್ಮ ರೈತರ ಬೆಳೆಗೆ ಕಟ್ಟು ಪದ್ಧತಿ (ಆನ್ ಅಂಡ್ ಆಫ್ ಸಿಸ್ಟಂ)ಯಲ್ಲಿ ನೀರು ಬಿಟ್ಟು ತಮಿಳುನಾಡಿನವರು ಕೇಳಿದಷ್ಟು ನೀರು ಬಿಡುವುದು ಯಾವ ನ್ಯಾಯ ಎಂದು ಪ್ರಶ್ನಿಸಿದರು.

ಕಾವೇರಿ ನ್ಯಾಯಾಧಿಕರಣದ ತೀರ್ಪಿನ ಪ್ರಕಾರ ತಮಿಳುನಾಡಿನವರು 1.85 ಲಕ್ಷ ಎಕರೆ ಬೆಳೆ ಬೆಳೆಯಲು ಮಾತ್ರ ಅವಕಾಶವಿದೆ. ಆದರೆ ತಮಿಳುನಾಡಿನವರು 3 ಲಕ್ಷ ಎಕರೆ ತನಕ ವಿಸ್ತರಣೆ ಮಾಡಿಕೊಂಡು ಬೆಳೆ ಬೆಳೆಯುತ್ತಿದ್ದಾರೆ. ಮೆಟ್ಟೂರಿನಿಂದ 63 ಟಿಎಂಸಿ ನೀರನ್ನು ಬಳಕೆ ಮಾಡಿಕೊಂಡಿದ್ದಾರೆ. ಹೀಗಿರುವಾಗ ತಮಿಳುನಾಡು ಕೇಳಿದಷ್ಟು ನೀರು ಬಿಟ್ಟು ನಮ್ಮ ರೈತರಿಗೆ ಅನ್ಯಾಯ ಮಾಡಲು ನಿಮಗೆ ಯಾರು ಹೇಳಿದರು? ಎಂದು ಸಿದ್ದರಾಮಯ್ಯ ಏರುಧ್ವನಿಯಲ್ಲಿ ಪ್ರಶ್ನಿಸಿದರು.

ನೀರಾವರಿ ಸಲಹಾ ಸಮಿತಿ (ಐಸಿಸಿ) ಸಭೆಯಲ್ಲಿ ತೀರ್ಮಾನ ಮಾಡಿದಂತೆ ನೀರು ಬಿಟ್ಟಿದ್ದೇವೆ ಎಂದು ಚೀಫ್ ಇಂಜಿನಿಯರ್ ವೆಂಕಟೇಶ್, ಶಾಸಕರತ್ತ ಬೊಟ್ಟು ಮಾಡಿ ತೋರಿಸಿದರು. ಈ ಮಾತು ಕೇಳಿ ಕೋಪೋದ್ರಿಕ್ತರಾದ ಪಶು ಸಂಗೋಪನಾ ಸಚಿವ ವೆಂಕಟೇಶ್, ನೀರಿನ ಅಭಾವ ಇದ್ದ ಹಿನ್ನೆಲೆ ನಮ್ಮ ● 9ನೇ ಪುಟಕ್ಕೆ

ಮೋಡ ಬಿತ್ತನೆ ಮಾಡಲ್ಲ; ಮುಂದಿನ ಸಂಪುಟ ಸಭೆಯಲ್ಲಿ ಬರದ ನಿರ್ಧಾರ

- ಘರ್ ವಾಪಸಿಗೆ ಸ್ವಾಗತ
- ಬಿಜೆಪಿ ದಿವಾಳಿಯಾಗಿದೆ
- ಬೀದಿಯಲ್ಲಿ ನಿಂತ ಕೇಸರಿ ನಾಯಕರ ಬಗ್ಗೆ ಸಿದ್ದರಾಮಯ್ಯ ವ್ಯಂಗ್ಯ

ಮೈಸೂರು, ಆ.28(ಬಿಎಲ್‌ಯು)– ರಾಜ್ಯದ ಕೆಲವು ತಾಲೂಕುಗಳಲ್ಲಿ ಬರಗಾಲ ಇದ್ದರೂ ಮಳೆಗಾಗಿ ಮೋಡ ಬಿತ್ತನೆ ಮಾಡುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಮೈಸೂರಿನಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಮೋಡ ಬಿತ್ತನೆ ಯಾವ ಕಾಲದಲ್ಲಿಯೂ ಯಶಸ್ವಿಯಾಗಿಲ್ಲ. ಇದನ್ನು ನೋಡಿಯೂ ಮೋಡ ಬಿತ್ತನೆ ಮಾಡಿದರೆ ಯಾವುದೇ ಪ್ರಯೋಜನ ಆಗುವುದಿಲ್ಲ. ಈ ಕಾರಣದಿಂದ ಮೋಡ ಬಿತ್ತನೆ ಮಾಡದಿರಲು ಸರ್ಕಾರ ತೀರ್ಮಾನಿಸಿದೆ ಎಂದರು. ಮೋಡ ಬಿತ್ತನೆ ಬದಲು ಬರಗಾಲದಿಂದ ಸಂಕಷ್ಟದಲ್ಲಿರುವ ರೈತರ ನೆರವಿಗಾಗಿ ಕೆಲವು ಕಾರ್ಯಕ್ರಮಗಳನ್ನು ರೂಪಿಸಲಾಗುವುದು. ರಾಜ್ಯದಲ್ಲಿ ಬರದ ಛಾಯೆ ಇರುವ ಬಗ್ಗೆ ಸಚಿವ ಸಂಪುಟದ ಉಪ ಸಮಿತಿ ಸಭೆಯಲ್ಲಿ ಚರ್ಚೆ ನಡೆಯಲಿದೆ. ಇಂದು ಅಥವಾ ನಾಳೆ ನಡೆಯುವ ಸಚಿವ ಸಂಪುಟ ಉಪ ಸಮಿತಿ ಸಭೆಯಲ್ಲಿ ಬರಗಾಲದ ಬಗ್ಗೆ ಚರ್ಚೆ ಮಾಡಿ ವರದಿ ನೀಡಲಿದೆ. ● 9ನೇ ಪುಟಕ್ಕೆ

ರೈತರು ನಿಮಗಿಂತ ಬುದ್ಧಿವಂತರು, ನಾವೇ ಬುದ್ಧಿವಂತರು ಎಂಬ ಭ್ರಮೆ ಬಿಡಿ

ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೀತಿ ಪಾಠ



- ಫೋಟೋ ತೋರಿಸಲು ಮೀಟಿಂಗ್‌ಗೆ ಬಂದಿದ್ದೀರಾ
- ಅಧಿಕಾರಿಗಳು ರಾಜಕೀಯ ಮಾಡಬಾರದು
- ಪರಿಹಾರ ನೀಡದ ಅಧಿಕಾರಿಗಳಿಗೆ ತರಾಟೆ
- 400 ಪಶು ವೈದ್ಯರು, 250 ಸಹಾಯಕರ ನೇಮಕ

ಮೈಸೂರು, ಆ.28(ಬಿಎಲ್‌ಯು)– ಕೃಷಿಯೇ ಬದುಕು ಎಂದು ನಂಬಿರುವ ರೈತರು ನಿಮಗಿಂತ ಬುದ್ಧಿವಂತರಿದ್ದಾರೆ. ನಾವೇ ಬುದ್ಧಿವಂತರು ಎಂಬ ಭ್ರಮೆ ಬಿಟ್ಟು, ಮೊದಲು ರೈತರಿಗೆ ಗೌರವ ಕೊಡಿ. ರೈತರಿಂದ ಸಲಹೆ ಪಡೆಯಿರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಕೃಷಿ ಇಲಾಖೆಯ ಪ್ರಗತಿ ಪರಿಶೀಲನೆ ವೇಳೆ ಮೈಸೂರು ಜಿಲ್ಲೆಯ ಕೃಷಿ ಚಟುವಟಿಕೆ ಬಗ್ಗೆ ಸಿದ್ದರಾಮಯ್ಯ ಅಂಕಿ ಅಂಶಗಳ ಸಹಿತ ಸಮಗ್ರ ಮಾಹಿತಿ ಪಡೆದು ಯೋಜನೆ, ಗುರಿ ಹಾಗೂ ಅನುಷ್ಠಾನದಲ್ಲಿ ಸಾಧಿಸಿರುವ ಪ್ರಗತಿ ಬಗ್ಗೆ ವಿವರ ಕೇಳಿದರು.

ಈ ವೇಳೆ ಮಾಹಿತಿ ನೀಡಿದ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಚಂದ್ರಶೇಖರ್, ಮೈಸೂರು ಜಿಲ್ಲೆಯಲ್ಲಿ 3.98 ಲಕ್ಷ ಎಕರೆ ● 9ನೇ ಪುಟಕ್ಕೆ

ಬಿಲ್ ಮಾಡುವಾಗ ಮಾತ್ರ ಇಂಜಿನಿಯರ್ ಸ್ಥಳಕ್ಕೆ ಹೋಗ್ತಾರೆ!

–ವಿಧಾನಪರಿಷತ್ ಸದಸ್ಯ ವಿಶ್ವನಾಥ್

ಮೈಸೂರು: ಕೆರೆ ನೀರು ಬಿಡಲು ಸಲಹಾ ಸಮಿತಿ ಇಲ್ಲ. ಒಬ್ಬರು ಮತ್ತೊಬ್ಬ ಇಲಾಖಾ ಅಧಿಕಾರಿಗಳ ಕಡೆ ಬೊಟ್ಟು ಮಾಡಿ ತೋರಿಸುತ್ತಾರೆ. ಅಷ್ಟರಲ್ಲಿ ನೀರು ಖಾಲಿಯಾಗಿ ಕೆರೆ ಬರಿದಾಗುತ್ತದೆ. ಅಧಿಕಾರಿಗಳ ನಡುವೆ ಸಮನ್ವಯತೆ ಇಲ್ಲ. ಒಬ್ಬ ಅಧಿಕಾರಿಯೂ ನಾಲೆ ಬಳಿ ಹೋಗುವುದಿಲ್ಲ. ಬಿಲ್ಲಿಂಗ್ ಮಾಡುವ ಸಮಯದಲ್ಲಿ ಮಾತ್ರ ಹೋಗುತ್ತಾರೆ ಎಂದು ವಿಧಾನಪರಿಷತ್ ಸದಸ್ಯ ವಿಶ್ವನಾಥ್ ಆಕ್ರೋಶ ವ್ಯಕ್ತಪಡಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ನವರು, ಇಲಾಖೆಗಳ ಅಧಿಕಾರಿಗಳ ನಡುವೆ ಸಮನ್ವಯತೆ ಹಾಗೂ ಹೊಂದಾಣಿಕೆ ಇರಬೇಕು. ಇಂಜಿನಿಯರ್‌ಗಳು ನಾಲೆ ಮೇಲೆ ತಿರುಗಾಡಿ ಕೊನೆ ಹಂತದ ತನಕ ನೀರು ಮುಟ್ಟುತ್ತಿದೆಯೇ ಎಂದು ಖಚಿತಪಡಿಸಿಕೊಳ್ಳಬೇಕು. ಯಾವುದೇ ಪಕ್ಷದ ಶಾಸಕರಿದ್ದರೂ ಶಿಷ್ಟಾಚಾರ ಪಾಲನೆ ಮಾಡಬೇಕು. ಅಧಿಕಾರಿಗಳು ರಾಜಕೀಯ ಮಾಡಬಾರದು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ನಾಲೆಗೆ ನೀರು ಬಿಟ್ಟು ಹೂಳೆತ್ತಲು ಬರ್ತಾರೆ...


–ಹುಣಸೂರು ಶಾಸಕ ಜಿ.ಡಿ.ಹರೀಶ್‌ಗೌಡ


ಮೈಸೂರು: ನೀರು ಬಿಟ್ಟ ನಂತರ ನಾಲೆಗಳಲ್ಲಿ ಹೂಳು ತೆಗೆಯಲು ನೀರಾವರಿ ಇಲಾಖೆ ಅಧಿಕಾರಿಗಳು ಬರುತ್ತಾರೆ. ಆಗ ಮೋಟಾರ್ ಪಂಪ್ ಕೆಟ್ಟಿತ್ತು ಅಂತ ಸಬೂಬು ಹೇಳಿ ಜಾಗ ಖಾಲಿ ಮಾಡುತ್ತಾರೆ. ಹೀಗಾದರೆ ರೈತರಿಗೆ ನಾವು ಏನು ಉತ್ತರ ಹೇಳುವುದು ಎಂದು ಹುಣಸೂರು ಶಾಸಕ ಜಿ.ಡಿ.ಹರೀಶ್‌ಗೌಡರು ಮುಖ್ಯಮಂತ್ರಿ ಸಿದ್ದರಾಮಯ್ಯರ ಗಮನ ಸೆಳೆದರು. ಅದಕ್ಕೆ ಮುಖ್ಯಮಂತ್ರಿಗಳು, ನಾಲೆಗಳಿಗೆ ನೀರು ಬಿಡುವ ಒಂದು ತಿಂಗಳ ಮುಂಚೆಯೇ ಹೂಳು ಎತ್ತಬೇಕು. ಜೊತೆಗೆ ಮೋಟಾರ್ ಪಂಪ್‌ಗಳು ಸರಿಯಾಗಿದೆಯೇ ಎಂದು ಖಚಿತಪಡಿಸಿಕೊಳ್ಳಬೇಕು. ಯುದ್ಧ ಕಾಲೇ ಶಸ್ತ್ರಾಭ್ಯಾಸ ಎಂಬಂತೆ ಕೆಲಸ ಮಾಡುವುದಲ್ಲ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಕಾಂಗ್ರೆಸ್ ಹೊಸ್ತಿಲಲ್ಲಿರುವ ಬಿಜೆಪಿ ಶಾಸಕರು

'ಗೃಹಲಕ್ಷ್ಮಿ' ಯಶಸ್ಸಿಗೆ ಅವಿರತ ಪರಿಶ್ರಮ

- ತಮ್ಮ ತಮ್ಮ ಕ್ಷೇತ್ರದಲ್ಲಿ ಸರಣಿ ಸಭೆ ನಡೆಸುತ್ತಿರುವ ಎಸ್.ಟಿ.ಸೋಮಶೇಖರ್, ಭೈರತಿ ಬಸವರಾಜ್, ಶಿವರಾಂ ಹೆಬ್ಬಾರ್ ಸೇರಿ 16 ಕಮಲ ಕಲಿಗಳು!
- 'ಗೃಹಲಕ್ಷ್ಮಿ'ಗೆ ಚಾಲನೆ ನೀಡುವ ಮೈಸೂರು ಕಾರ್ಯಕ್ರಮಕ್ಕೆ ಸಾಕಷ್ಟು ಫಲಾನುಭವಿಗಳ ಕಳಿಸಲು ಸಿದ್ಧತೆ






ಬೆಂಗಳೂರು, ಆ.28(ಕೆಎಂಶಿ)– ಬಿಜೆಪಿ ತೊರೆಯಲು ಮುಂದಾಗಿರುವ ಶಾಸಕರು ಮತ್ತು ಮುಖಂಡರು ತಮ್ಮ ತಮ್ಮ ಕ್ಷೇತ್ರಗಳಲ್ಲಿ ಗೃಹಲಕ್ಷ್ಮಿ ಯೋಜನೆ ಅನುಷ್ಠಾನದ ಯಶಸ್ಸಿಗೆ ಸರಣಿ ಸಭೆಗಳನ್ನು ನಡೆಸುತ್ತಿದ್ದಾರೆ.

ಆ.30ರಂದು ಮೈಸೂರಿನಲ್ಲಿ ಗೃಹಲಕ್ಷ್ಮಿ ಯೋಜನೆಗೆ ರಾಜ್ಯ ಸರ್ಕಾರ ಚಾಲನೆ ನೀಡುತ್ತಿದ್ದು, ಈ ಕಾರ್ಯಕ್ರಮಕ್ಕೆ ತಮ್ಮ ತಮ್ಮ ಕ್ಷೇತ್ರಗಳಿಂದ ದೊಡ್ಡ ಸಂಖ್ಯೆಯಲ್ಲಿ ಫಲಾನುಭವಿಗಳನ್ನು ಗುರುತಿಸಿ ಕಳಿಸಲು ಸಭೆಗಳನ್ನು ಮಾಡುತ್ತಿದ್ದಾರೆ. ಅಧಿಕಾರದಲ್ಲಿದ್ದಾಗ ಪಕ್ಷದ ಕಾರ್ಯಕ್ರಮಗಳಿಗೆ ಇಂತಹ ಸಭೆಗಳನ್ನು ಮಾಡದ ಸದಸ್ಯರು, ಇದೀಗ ಕಾಂಗ್ರೆಸ್ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಟೊಂಕ ಕಟ್ಟಿ ನಿಂತಿದ್ದಾರೆ. ಮಾಜಿ ಸಚಿವ ಹಾಗೂ ಹಾಲಿ ಶಾಸಕರಾದ ಎಸ್.ಟಿ.ಸೋಮಶೇಖರ್, ಭೈರತಿ ಬಸವರಾಜ್, ಶಿವರಾಂ ಹೆಬ್ಬಾರ್ ಸೇರಿದಂತೆ 16 ಶಾಸಕರು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರ ಸಲಹೆ ಮೇರೆಗೆ ಕಾಂಗ್ರೆಸ್ ಸರ್ಕಾರದ ಕಾರ್ಯಕ್ರಮ ಅನುಷ್ಠಾನಗೊಳಿಸಲು ಶ್ರಮಿಸುತ್ತಿದ್ದಾರೆ. ಇಂತಹ ಸಭೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ● 6ನೇ ಪುಟಕ್ಕೆ

ಕಾಂಗ್ರೆಸ್ ನಂಬಿ ನಮ್ಮವರು ಯಾರೂ ಜೆಡಿಎಸ್ ತೊರೆಯಲ್ಲ

- ಮಾಜಿ ಪ್ರಧಾನಿ ದೇವೇಗೌಡರ ಅಚಲ ವಿಶ್ವಾಸ
- ಕೇವಲ ಊಹಾಪೋಹದ ಮೇಲೆ ಪಕ್ಷ ವಿಭಜನೆ ಎಂದು ಬಿಂಬಿಸಬೇಡಿ
- ಲೋಕಸಭಾ ಚುನಾವಣೆಗೆ ಯಾರ್‍ಯಾರು ಸ್ಪರ್ಧಿಸಬೇಕು ಎಂಬುದರ ಬಗ್ಗೆ ನಾಯಕರ ಸಭೆಯಲ್ಲಿ ನಿರ್ಧಾರ



ಬೆಂಗಳೂರು, ಆ.28 (ಕೆಎಂಶಿ)– ಕಾಂಗ್ರೆಸ್ ನಂಬಿ ನಮ್ಮ ಪಕ್ಷದ ಯಾವುದೇ ಶಾಸಕರು ಮತ್ತು ಮುಖಂಡರು ಜೆಡಿಎಸ್ ತೊರೆಯುವುದಿಲ್ಲ ಎಂದು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇವಲ ಊಹಾಪೋಹಗಳ ಮೇಲೆ ಪಕ್ಷ ವಿಭಜನೆ ಆಗುತ್ತದೆ. ಒಂದು ಗುಂಪು ಕಾಂಗ್ರೆಸ್ ಸೇರಲಿದೆ ಎಂಬುದು ಸರಿಯಲ್ಲ. ನಿಮಗೆ ಪಕ್ಷ ಬಿಟ್ಟುಹೋಗುವವರ ಹೆಸರು ಗೊತ್ತಿದ್ದರೆ ಹೇಳಿ ಸರಿಪಡಿಸುವೆ. ಗೊಂದಲ ಸೃಷ್ಟಿಸಬೇಡಿ. ಎರಡು ರಾಷ್ಟ್ರೀಯ ಪಕ್ಷಗಳ ನಡುವೆ ಜೆಡಿಎಸ್ ಉಳಿಸುವ ಕೆಲಸವನ್ನು ಶಕ್ತಿ ಮೀರಿ ಮಾಡಲಾಗುವುದು, ಪಕ್ಷ ಬಲವರ್ಧನೆ ಹಿನ್ನೆಲೆಯಲ್ಲಿ ಸೆ.10ರಂದು ಅರಮನೆ ಮೈದಾನದಲ್ಲಿ ಬೃಹತ್ ಸಮಾವೇಶ ನಡೆಸಲಾಗುವುದು.

ಪ್ರಾದೇಶಿಕ ಪಕ್ಷ ಜೆಡಿಎಸ್ ಉಳಿಸಲು 91ನೇ ವಯಸ್ಸಿನಲ್ಲೂ ತಮ್ಮೆಲ್ಲಾ ಅನುಭವವನ್ನು ಪಕ್ಷಕ್ಕಾಗಿ ಧಾರೆಯೆರೆಯುತ್ತಿದ್ದೇನೆ. ಜನರ ಮುಂದೆ ನಿಮ್ಮ ವಿಚಾರಗಳ ಮಂಡಿಸುತ್ತೇನೆ. ಸುಮ್ಮನೆ ಮನೆಯಲ್ಲಿ ಕೂರುವುದಿಲ್ಲ ಎಂದರು.

ಮುಂಬರುವ ಲೋಕಸಭಾ ಚುನಾವಣೆಗೆ ಯಾರು ಸ್ಪರ್ಧೆ ಮಾಡಬೇಕೆಂಬ ಬಗ್ಗೆ ಪಕ್ಷದ ನಾಯಕರು, ಮುಖಂಡರೊಂದಿಗೆ ಚರ್ಚಿಸಿ ತೀರ್ಮಾನ ಮಾಡಲಾಗುವುದು. ಮಾಜಿ ಸಚಿವ ಜಿ.ಟಿ. ದೇವೇಗೌಡರ ಅಧ್ಯಕ್ಷತೆಯಲ್ಲಿ ಕೋರ್ ಕಮಿಟಿ ರಚನೆ ಮಾಡಲಾಗಿದೆ. ಅವರು ರಾಜ್ಯಾದ್ಯಂತ ಪ್ರವಾಸ ಕೈಗೊಂಡು ಪಕ್ಷ ಸಂಘಟನೆ ಮಾಡುವುದರ ಜೊತೆಗೆ ಮುಂಬರುವ ತಾಲೂಕು, ಜಿಲ್ಲಾ, ಬಿಬಿಎಂಪಿ ಹಾಗೂ ಲೋಕಸಭೆ ಚುನಾವಣೆಗೂ ಸಿದ್ಧತೆ ನಡೆಸಲಿದ್ದಾರೆ. ಕೋರ್ ಕಮಿಟಿಯಲ್ಲಿ ಪಕ್ಷದ ರಾಜ್ಯಾಧ್ಯಕ್ಷರು ಹಾಗೂ ಶಾಸಕಾಂಗ ಪಕ್ಷದ ನಾಯಕರ ನಿರ್ಧಾರದಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ. ಆದರೆ ಕಾಂಗ್ರೆಸ್ ಹಾಗೂ ಬಿಜೆಪಿ ನಡುವೆ ಜೆಡಿಎಸ್ ಪಕ್ಷವನ್ನು ಉಳಿಸುವ ಕೆಲಸ ಮಾಡುತ್ತೇನೆ.

ಪ್ರಾದೇಶಿಕ ಪಕ್ಷಗಳನ್ನು ಯಾವ ರೀತಿ ತುಳಿಯುತ್ತಿದ್ದಾರೆ. ಅದನ್ನು ಹೇಗೆ ಉಳಿಸಿಕೊಳ್ಳಬೇಕೆಂಬ ಬಗ್ಗೆ ● 6ನೇ ಪುಟಕ್ಕೆ

ಸೂರ್ಯಯಾನಕ್ಕೆ ಮುಹೂರ್ತ ಫಿಕ್ಸ್

ಸೆ.2ರಂದು ಆದಿತ್ಯಾ ಎಲ್1 ಉಡಾವಣೆ: ಇಸ್ರೋ



ಬೆಂಗಳೂರು: ಭಾರತದ ಹೆಮ್ಮೆಯ ಬಾಹ್ಯಾಕಾಶ ಸಂಸ್ಥೆ ಇಸ್ರೋ ಚಂದ್ರಯಾನ–3 ಯಶಸ್ಸಿನ ಹುರುಪಿನಲ್ಲೇ ತನ್ನ ಬಹು ನಿರೀಕ್ಷಿತ ಸೂರ್ಯಯಾನ ಯೋಜನೆ ಉಡಾವಣೆಗೆ ಮುಹೂರ್ತ ಫಿಕ್ಸ್ ಮಾಡಿದೆ.

ಸೂರ್ಯನನ್ನು ಅಧ್ಯಯನ ಮಾಡುವ ಆದಿತ್ಯ ಎಲ್1 ಗಗನ ನೌಕೆಯನ್ನು ಸೆಪ್ಟೆಂಬರ್2 ಉಡಾವಣೆ ಮಾಡಲಾಗುವುದು ಎಂದು ಇಸ್ರೋ ಮಾಹಿತಿ ನೀಡಿದೆ. ಸೆಪ್ಟೆಂಬರ್ 2 ಶನಿವಾರ ಬೆಳಗ್ಗೆ 11:50ಕ್ಕೆ PSLV-C57 ಉಡಾವಣಾ ನೌಕೆಯ ಮೂಲಕ ಆದಿತ್ಯಾ ಎಲ್1 ಉಪಗ್ರಹವನ್ನು ಉಡಾವಣೆ ಮಾಡಲಾಗುತ್ತದೆ. ಶ್ರೀಹರಿಕೋಟಾದ ಸತೀಶ್ ಧವನ್ ಉಡಾವಣಾ ಕೇಂದ್ರದಿಂದ ಈ ಉಡಾವಣೆ ನಡೆಯಲಿದೆ ಎಂದು ಇಸ್ರೋ ಮಾಹಿತಿ ನೀಡಿದೆ.

ಆದಿತ್ಯ–ಐ1 ಸೂರ್ಯನನ್ನು ಅಧ್ಯಯನ ಮಾಡುವ ಮೊದಲ ಬಾಹ್ಯಾಕಾಶ ಆಧಾರಿತ ಭಾರತೀಯ ವೀಕ್ಷಣಾಲಯ. ಇದು ಭೂಮಿಯಿಂದ ಸರಿಸುಮಾರು 1.5 ಮಿಲಿಯನ್ ಕಿಲೋ ಮೀಟರ್ ದೂರದಲ್ಲಿರುವ ಸೂರ್ಯನ ಲ್ಯಾಗ್ರೇಂಜ್ ಪಾಯಿಂಟ್ 1 (ಐ1) ಸುತ್ತ ಹಾಲೋ ಕಕ್ಷೆಯಲ್ಲಿ ನೆಲೆಗೊಳ್ಳಲಿದೆ. ಉಡಾವಣೆಯ ಬಳಿಕ ಐ1 ಪಾಯಿಂಟ್‌ಗೆ ಪ್ರಯಾಣಿಸಲು ಸುಮಾರು 120 ದಿನಗಳನ್ನು ತೆಗೆದುಕೊಳ್ಳುತ್ತದೆ. ● 6ನೇ ಪುಟಕ್ಕೆ

ಮೈಸೂರು ಮಿತ್ರ

ಮಂಗಳವಾರ 29 ಆಗಸ್ಟ್ 2023

ಆರೋಗ್ಯ ಇಲಾಖೆಯಿಂದ ಇಂದು ವಿವಿಧ ಕಾರ್ಯಕ್ರಮಗಳ ಉದ್ಘಾಟನಾ ಸಮಾರಂಭ

ಮೈಸೂರು,ಆ.28–ವೈದ್ಯಕೀಯ ಶಿಕ್ಷಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಂಜಿನಿಯರ್ ಘಟಕ, ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ವತಿಯಿಂದ ಸಂಸ್ಥೆಯ ಶತಮಾನೋತ್ಸವ ಕಾರ್ಯಕ್ರಮದ ಲೋಗೋ ಅನಾವರಣ, ಕಾರ್ಯಕ್ರಮ, ಶತಮಾನೋತ್ಸವ ಆಚರಣೆಯ ಬ್ರೋಷರ್ ಬಿಡುಗಡೆ, ಕೆ.ಆರ್ ಆಸ್ಪತ್ರೆಯ ಆವರಣದಲ್ಲಿರುವ ಸುಟ್ಟ ಗಾಯಗಳ ವಿಭಾಗದ ನವೀಕರಣಗೊಂಡ ಕಟ್ಟಡ, ಕೆ.ಆರ್. ಆಸ್ಪತ್ರೆಯ ರೇಡಿಯಾಲಜಿ ವಿಭಾಗದ ಎಂಆರ್‌ಐ ಯಂತ್ರೋಪಕರಣ ಇದರ ಉದ್ಘಾಟನೆ ಕಾರ್ಯಕ್ರಮವನ್ನು ನಾಳೆ (ಮಂಗಳವಾರ) ಮಧ್ಯಾಹ್ನ 1.45 ಗಂಟೆಗೆ ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಗ್ರಂಥಾಲಯ ಕಟ್ಟಡದಲ್ಲಿ ಹಮ್ಮಿಕೊಳ್ಳಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಉಪಸ್ಥಿತರಿರುವರು. ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಅಧ್ಯಕ್ಷತೆ ವಹಿಸಲಿದ್ದು, ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಜ್ಯೋತಿ ಬೆಳಗಿಸುವರು. ಮುಖ್ಯ ಅತಿಥಿಗಳಾಗಿ ಮೇಯರ್ ಶಿವಕುಮಾರ್, ಸಂಸದರಾದ ಪ್ರತಾಪ್ ಸಿಂಹ, ವಿ.ಶ್ರೀನಿವಾಸ್‌ಪ್ರಸಾದ್ ಹಾಗೂ ಸುಮಲತಾ ಅಂಬರೀಶ್ ಭಾಗವಹಿಸಲಿದ್ದಾರೆ.

ಸಮಾರಂಭದ ಅತಿಥಿಗಳಾಗಿ ವಿಧಾನ ಸಭಾ ಶಾಸಕರಾದ ತನ್ವೀರ್ ಸೇಠ್, ಜಿ.ಟಿ. ದೇವೇಗೌಡ, ಅನಿಲ್‌ಕುಮಾರ್, ರವಿಶಂಕರ್, ಜಿ.ಡಿ.ಹರೀಶ್‌ಗೌಡ, ದರ್ಶನ್ ಧ್ರುವ ನಾರಾಯಣ, ಟಿ.ಎಸ್.ಶ್ರೀವತ್ಸ, ವಿಧಾನ ಪರಿಷತ್ತಿನ ಶಾಸಕರಾದ ಮರಿತಿಬ್ಬೇಗೌಡ, ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಮಧು ಜಿ.ಮಾದೇಗೌಡ, ಸಿ.ಎನ್.ಮಂಜೇಗೌಡ ಹಾಗೂ ಉಪಮೇಯರ್ ಡಾ.ಜಿ.ರೂಪ ಭಾಗವಹಿಸುವರು ಎಂದು ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಪ್ರಕಟಣೆಯಲ್ಲಿ ತಿಳಿಸಿದೆ.

ಆ.31, ಬ್ರಹ್ಮಶ್ರೀ ನಾರಾಯಣಗುರು ಜಯಂತಿ



ಮೈಸೂರು,ಆ.28–ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮೈಸೂರು ಹಾಗೂ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಆಚರಣಾ ಸಮಿತಿ ಸಹಯೋಗದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿಯನ್ನು ಆ.31ರಂದು ಮಧ್ಯಾಹ್ನ 3 ಗಂಟೆಗೆ ಕರ್ನಾಟಕ ಕಲಾಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ.ವೆಂಕಟೇಶ್ ಉಪಸ್ಥಿತಿಯಲ್ಲಿ, ಕಾರ್ಯಕ್ರಮದ ಉದ್ಘಾಟನೆಯನ್ನು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪನವರು ನೆರವೇರಿಸಲಿದ್ದು, ಅಧ್ಯಕ್ಷತೆಯನ್ನು ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ವಹಿಸುವರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮೇಯರ್ ಶಿವಕುಮಾರ್, ಸಂಸದರಾದ ಪ್ರತಾಪ್ ಸಿಂಹ, ವಿ.ಶ್ರೀನಿವಾಸಪ್ರಸಾದ್ ಹಾಗೂ ಸುಮಲತಾ ಅಂಬರೀಶ್ ಭಾಗವಹಿಸಲಿದ್ದಾರೆ.

ಸಮಾರಂಭದ ಅತಿಥಿಗಳಾಗಿ ವಿಧಾನ ಸಭಾ ಶಾಸಕರಾದ ತನ್ವೀರ್‌ಸೇಠ್, ಜಿ.ಟಿ.ದೇವೇಗೌಡ, ಅನಿಲ್ ಕುಮಾರ್, ರವಿಶಂಕರ್, ಜಿ.ಡಿ. ಹರೀಶ್‌ಗೌಡ, ದರ್ಶನ್ ಧ್ರುವ ನಾರಾಯಣ, ಟಿ.ಎಸ್.ಶ್ರೀವತ್ಸ, ವಿಧಾನಪರಿಷತ್ತಿನ ಶಾಸಕರಾದ ಮರಿತಿಬ್ಬೇಗೌಡ, ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಮಧು ಜಿ.ಮಾದೇಗೌಡ, ಸಿ.ಎನ್.ಮಂಜೇಗೌಡ ಹಾಗೂ ಉಪಮೇಯರ್ ಡಾ.ಜಿ ರೂಪ, ಮುಖ್ಯ ಭಾಷಣಕಾರರಾಗಿ ನಿವೃತ ಪ್ರಾಧ್ಯಾಪಕರಾದ ಡಾ.ಮಮತೇಶ್ ಕಡೂರು, ಆಹ್ವಾನಿತರಾಗಿ ಕರ್ನಾಟಕ ರಾಜ್ಯ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಜೆ.ಗೋವಿಂದ ರಾಜು, ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಭಾಗವಹಿಸುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶಾಲಾ ವಾಹನಗಳ ಮೇಲೆ ಪೊಲೀಸರ ನಿಗಾ ಅವಶ್ಯ

ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡರ ಸಲಹೆ



ಮೈಸೂರು,ಆ.28–ಮಕ್ಕಳನ್ನು ಶಾಲೆಗೆ ಕರೆದುಕೊಂಡು ಹೋಗುವ ವಾಹನಗಳ ಮೇಲೆ ಪೊಲೀಸರು ನಿಗಾ ವಹಿಸಿ, ಸುರಕ್ಷತೆ ಬಗ್ಗೆ ವಾಹನ ಚಾಲಕರಿಗೆ ಸಲಹೆ ನೀಡಬೇಕೆಂದು ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವುದೇ ದುರುದ್ದೇಶವಿಟ್ಟುಕೊಂಡು ನಾನು ವಿಷಯ ಪ್ರಸ್ತಾಪಿಸುತ್ತಿಲ್ಲ. ವಾಹನ ಚಾಲಕರಿಗೆ ತೊಂದರೆ ಕೊಡುವ ಉದ್ದೇಶ ನನಗಿಲ್ಲ. ಆದರೆ ಕೆಲವರು ಮಾರುತಿ ವ್ಯಾನ್, ಆಟೋಗಳಲ್ಲಿ ಮಕ್ಕಳನ್ನು ಕುರಿ ತುಂಬಿದಂತೆ ತುಂಬಿಕೊಂಡು ಸ್ಪೀಡ್ ಆಗಿ ಹೋಗುತ್ತಾರೆ. ಆಗ ವಾಹನದ



ಮೇಲಿನ ಬ್ಯಾಗ್‌ಗಳು ಕೆಳಗೆ ಬಿದ್ದಿವೆ. ಕೆಲವೊಮ್ಮೆ ಅಪಘಾತಗಳಾಗುತ್ತಿವೆ. ಮಕ್ಕಳು ಈ ದೇಶದ ಸಂಪತ್ತು. ಅವರನ್ನು ಜೋಪಾನವಾಗಿ ಕಾಪಾಡುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಆದ್ದರಿಂದ ಪೊಲೀಸರು ಎಲ್ಲಾ ಶಾಲೆಗಳಲ್ಲಿ ರಸ್ತೆ ಸುರಕ್ಷತೆಯ ಬಗ್ಗೆ ವಾಹನ ಚಾಲಕರಿಗೆ, ಶಾಲೆಯ ಮುಖ್ಯಸ್ಥರಿಗೆ, ಪೋಷಕರಿಗೆ ಸೂಕ್ತ ಸಲಹೆ ಸೂಚನೆ ನೀಡುವ ಮುಖಾಂತರ ಜಾಗೃತಿ ಮೂಡಿಸಬೇಕು ಎಂದು ಕರೆ ನೀಡಿದರು.



ಮೈಸೂರಿನ ಸಿಕೆಸಿ ಶಾಲಾ ಆವರಣದಲ್ಲಿ ಸೋಮವಾರ ನಡೆದ ಮೈಸೂರು ದಕ್ಷಿಣ ವಲಯ 3ರ ಪ್ರಾಥಮಿಕ ಶಾಲಾ ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಮೈಸೂರಿನ ಜಾಕಿ ಕ್ವಾರ್ಟಸ್‌ನಲ್ಲಿರುವ ಸರ್ಕಾರಿ ಆದರ್ಶ ವಿದ್ಯಾಲಯದ ಬಾಲಕ ಹಾಗೂ ಬಾಲಕಿಯರ ತಂಡ ಪ್ರಥಮ ಸ್ಥಾನ ಗಳಿಸಿ ಮೆಚ್ಚುಗೆಗೆ ಪಾತ್ರವಾಗಿದೆ. ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ದೈಹಿಕ ಶಿಕ್ಷಣ ಶಿಕ್ಷಕರಾದ ಎಸ್.ಆರ್. ರಾಮಚಂದ್ರ, ಶ್ರೀಮತಿ ಜಯಶೀಲ, ಶಿಕ್ಷಕ ವರ್ಗ ಅಭಿನಂದಿಸಿದೆ.

ಸೆ.3ಕ್ಕೆ ತುಂಟಕೃಷ್ಣ–ಮುದ್ದುರಾಧೆ ವೇಷಭೂಷಣ ಸ್ಪರ್ಧೆ

ಮೈಸೂರು,ಆ.28–ಸಖಿ ಫೌಂಡೇಶನ್ ಮತ್ತು ಸೂರ್ಯ ಚಾರಿಟಬಲ್ ಟ್ರಸ್ಟ್ ವತಿಯಿಂದ ಸೂರ್ಯಸಖಿ ಕಲ್ಚರಲ್ ಫೆಸ್ಟ್–ತುಂಟಕೃಷ್ಣ ಮುದ್ದುರಾಧೆ ವೇಷ ಭೂಷಣ ಸ್ಪರ್ಧೆಯನ್ನು ಸೆಪ್ಟೆಂಬರ್ 3ರ ಭಾನುವಾರ ಆಯೋಜಿಸಲಾಗಿದೆ.

ರಾಮಕೃಷ್ಣನಗರದ ಐ ಬ್ಲಾಕ್ ಗಣಪತಿ ದೇವಸ್ಥಾನದ ಆವರಣದಲ್ಲಿ ಅಂದು ಬೆಳಗ್ಗೆ 10 ಗಂಟೆಗೆ 2ರಿಂದ 8 ವರ್ಷದ ಗಂಡು ಮಕ್ಕಳಿಗಾಗಿ ತುಂಟಕೃಷ್ಣ, 2ರಿಂದ 10 ವರ್ಷದ ಹೆಣ್ಣು ಮಕ್ಕಳಿಗಾಗಿ ಮುದ್ದು ರಾಧೆ ಹಾಗೂ 35ರೊಳಗಿನ ವಯೋಮಾನ ಮಾತೆಯರಿಗಾಗಿ ಅಮ್ಮ ಯಶೋಧೆ ವೇಷ ಭೂಷಣ ಸ್ಪರ್ಧೆ ನಡೆಯಲಿದೆ. ಸ್ಪರ್ಧಿಗಳು 2 ನಿಮಿಷದ ಸಮಯಾವಕಾಶದಲ್ಲಿ ಶ್ಲೋಕ, ಅಭಿನಯ, ಹಾಡು, ನೃತ್ಯ ಯಾವುದಾದರೂ ಒಂದನ್ನು ಪ್ರಸ್ತುತಪಡಿಸಬಹುದಾಗಿದೆ. ಕಾರ್ಯಕ್ರಮದಲ್ಲಿ ಭಾಗವಹಿಸುವ ಎಲ್ಲಾ ಸ್ಪರ್ಧಿಗಳಿಗೂ ಅಭಿನಂದನಾ ಪತ್ರ ದೊರೆಯಲಿದೆ. ನೋಂದಣಿಗೆ ಸೆ.2 ಕಡೇ ದಿನ. ಹೆಚ್ಚಿನ ಮಾಹಿತಿಗಾಗಿ 9964790442, 8310306882 ಸಂಪರ್ಕಿಸಬಹುದಾಗಿದೆ.

ವಿವಿಧ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು,ಆ.28–ಮೈಸೂರಿನ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ SSLC, ITI, DIPLOMA, BE (EC,E&C,ME,E&E,SC,IP) ಪಾಸಾದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮುಖ್ಯಮಂತ್ರಿಗಳ ಕೌಶಲ್ಯ ಅಭಿವೃದ್ಧಿ ಹಾಗೂ AITT ಕಾರ್ಯಕ್ರಮದ ಅಡಿಯಲ್ಲಿ ಅಲ್ಪಾವಧಿ ತರಬೇತಿ ಹಾಗೂ ವರ್ಷದ ಪೋಸ್ಟ್ ಇನ್ ಟೂಲ್ ಡಿಸೈನ್ ತರಬೇತಿಯನ್ನು ಉಚಿತವಾಗಿ ನೀಡಲು ಅರ್ಜಿ ಆಹ್ವಾನಿಸಿದೆ.

ಅರ್ಜಿ ಸಲ್ಲಿಸಲು ಸೆ.3 ಕೊನೆಯ ದಿನಾಂಕ. ಡಿಪ್ಲೊಮ ಹಾಗೂ ಬಿ.ಇ ಇಂಜಿನಿಯರಿಂಗ್ ಅಭ್ಯರ್ಥಿಗಳಿಗೆ ಇಂಟರ್ನ್‌ಶಿಪ್ ಟ್ರೈನಿಂಗ್ ಪ್ರೋಗ್ರಾಮ್ ಆಯೋಜಿಸಲಾಗಿದೆ. ಇನ್ನಿತರ ಎಲ್ಲಾ ವರ್ಗದ ಅರ್ಹ ಅಭ್ಯರ್ಥಿಗಳಿಗೆ ಉಚಿತವಾಗಿ ಅಲ್ಪಾವಧಿ ತರಬೇತಿಯನ್ನು ನೀಡಲಾಗುತ್ತಿದೆ. ಹೆಚ್ಚಿನ ಮಾಹಿತಿ ಮತ್ತು ಕೋರ್ಸ್ ವಿವರಗಳಿಗಾಗಿ ದೂ.ಸಂ: 99454 42654, 99453 49638, 9945479700, 944992 9667 ಅನ್ನು ಸಂಪರ್ಕಿಸಬಹುದು.

ಕೋವಿಡ್ ಹಗರಣ, ಆಕ್ಸಿಜನ್ ದುರಂತ, ಪಿಎಸ್‌ಐ ನೇಮಕಾತಿ ಅಕ್ರಮ ಸಂಬಂಧ ನ್ಯಾಯಾಂಗ ತನಿಖೆಗೆ ಬಿಜೆಪಿಗರಿಗೆ ಭಯವೇಕೆ?

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಶ್ನೆ

ಬೆಂಗಳೂರು,ಆ.28(ಕೆಎಂಶಿ)–ಬಿಜೆಪಿ ಸರ್ಕಾರದ ವಿರುದ್ಧ ಕೋವಿಡ್ ಹಗರಣ, ಆಮ್ಲಜನಕ ದುರಂತ, ಪಿಎಸ್‌ಐ ನೇಮಕಾತಿ ಹಗರಣ ಸೇರಿದಂತೆ ನಾವು ನೂರಾರು ಆರೋಪ ಮಾಡಿದ್ದೇವೆ. ಅವರು ಯಾವ ರೀತಿ ತನಿಖೆ ಮಾಡಿದ್ದರು ಎಂಬುದು ನಮಗೆ ಗೊತ್ತಿದೆ. ಅವರು ಹಾಕಿಕೊಟ್ಟ ಹಾದಿಯಲ್ಲಿ ನಾವು ಮುಂದುವರೆಯುತ್ತಾ ಇದ್ದೇವೆ. ಬಿಜೆಪಿಯವರು ಪ್ರಾಮಾಣಿಕವಾಗಿದ್ದರೆ ನ್ಯಾಯಾಂಗ ತನಿಖೆ ಬಗ್ಗೆ ಭಯ ಏಕೆ? ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಶ್ನಿಸಿದರು.

ರಾಜ್ಯ ಸರ್ಕಾರ ಕೋವಿಡ್ ಹಗರಣಗಳನ್ನು ನ್ಯಾಯಾಂಗ ತನಿಖೆಗೆ ಆದೇಶಿಸಿರುವುದರ ಹಿಂದೆ ದ್ವೇಷದ ರಾಜಕೀಯವಿದೆ ಎಂಬ ಬಿಜೆಪಿ ಆರೋಪದ ಬಗ್ಗೆ ಸುದ್ದಿಗಾರರೊಂದಿಗೆ ಪ್ರತಿಕ್ರಿಯಿಸಿದ ಅವರು, ಬೆಳಗಾವಿ ಗುತ್ತಿಗೆದಾರ ಸಂತೋಷ್ ಪಾಟೀಲ್ ಅವರ ಪತ್ನಿ ಇತ್ತೀಚೆಗೆ ಮುಖ್ಯಮಂತ್ರಿಗಳು ಹಾಗೂ ನನ್ನನ್ನು ಭೇಟಿಯಾಗಿ ನ್ಯಾಯ ದೊರಕಿಸಿಕೊಡಬೇಕಾಗಿ ಮನವಿ ಮಾಡಿದರು. ಅವರ ಮನವಿಗೆ ಸ್ಪಂದಿಸಿದ್ದೇವೆ ಎಂದರು.

ಬಿಜೆಪಿಯವರು ಈ ಪ್ರಕರಣಗಳನ್ನು ಏನು ಮಾಡಿದರು? ತನಿಖೆ ನಡೆಯುವುದಕ್ಕೆ ಮುಂಚಿತವಾಗಿಯೇ ಅಂದಿನ ಮುಖ್ಯಮಂತ್ರಿಗಳಾದಿಯಾಗಿ, ಸಚಿವರು, ಯಡಿಯೂರಪ್ಪ ಅವರೆಲ್ಲಾ ಈಶ್ವರಪ್ಪ ದೋಷಮುಕ್ತರಾಗಿ ಬರುತ್ತಾರೆ ಎಂದು ತನಿಖಾಧಿಕಾರಿಗಳಿಗೆ ಸುಳಿವು ನೀಡಿದರು. ಆದರೆ ನಾವು ಆ ರೀತಿ ಕೆಲಸ ಮಾಡಲು ಹೋಗುವುದಿಲ್ಲ, ನಾವು ಕಾನೂನಿನ ಚೌಕಟ್ಟಿನಲ್ಲಿ ಕೆಲಸ ಮಾಡುತ್ತಿದ್ದೇವೆ. ನಾವು ಕಾನೂನಿನ ಚೌಕಟ್ಟಿನಲ್ಲೇ ತನಿಖಾ ಆಯೋಗ ರಚಿಸಿದ್ದೇವೆ.

ಇದರಲ್ಲಿ ಯಾವುದೇ ದ್ವೇಷ ರಾಜಕಾರಣವಿಲ್ಲ. ಬೊಮ್ಮಾಯಿ ಅವರಿಂದ ನಮಗೆ ಪ್ರಮಾಣ ಪತ್ರ ಬೇಡ. ಆಕ್ಸಿಜನ್ ದುರಂತದಲ್ಲಿ 36 ಜನ ಸತ್ತಿದ್ದರು. ಆದರೆ ಆಗಿನ ಸಚಿವರು ಕೇವಲ 3 ಜನ ಮಾತ್ರ ಸತ್ತಿದ್ದಾರೆ ಎಂದು ಹೇಳಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾರನ್ನೂ ಹೊಣೆಗಾರಿಕೆ ಮಾಡಿಲ್ಲ ಯಾರ ವಿರುದ್ಧವೂ ಕ್ರಮ ಕೈಗೊಂಡಿಲ್ಲ.



ಈ ಪ್ರಕರಣ ತನಿಖೆ ಆಗಬಾರದೇ? ಕೋವಿಡ್ ಉಪಕರಣಗಳ ಖರೀದಿಯಲ್ಲಿ ಕೇಂದ್ರ ಸರ್ಕಾರ ಮಾಡಿರುವ ವೆಚ್ಚದ ದರಕ್ಕೂ ರಾಜ್ಯ ಸರ್ಕಾರದ ವೆಚ್ಚದ ದರಕ್ಕೂ ಭಾರಿ ವ್ಯತ್ಯಾಸವಿದೆ. ಇನ್ನು ಬೆಡ್ ಬ್ಲಾಕಿಂಗ್ ವಿಚಾರವಾಗಿ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಆರೋಪ ಮಾಡಿದ್ದರು. ಇದೆಲ್ಲದರ ಬಗ್ಗೆ ತನಿಖೆ ಮಾಡಬೇಕಲ್ಲವೇ? ಇನ್ನು ಸರ್ಕಾರ ರೂಪಿಸಿದ 10 ಸಾವಿರ ಬೆಡ್‌ಗಳ ಕೇಂದ್ರದಲ್ಲಿ ಯಾರೂ ಚಿಕಿತ್ಸೆ ಪಡೆಯಲಿಲ್ಲ. ಇದಕ್ಕೆ ಸಂಬಂಧಿಸಿದ ಗುತ್ತಿಗೆದಾರರು ಕಣ್ಣೀರು ಹಾಕುತ್ತಿದ್ದಾರೆ. ಈ ಎಲ್ಲದರ ಬಗ್ಗೆ ತನಿಖೆ ಮಾಡಿ ರಾಜ್ಯದ ಜನರಿಗೆ ನ್ಯಾಯ ಒದಗಿಸಿ ಕೊಡಬೇಕು ಎಂಬುದು ನಮ್ಮ ಬದ್ಧತೆ ಎಂದರು.

ನೈಸ್ ತನಿಖೆ ಮಾಡಿಸಲಿ: ನೈಸ್ ವಿಚಾರವಾಗಿ ಏನು ಬೇಕಾದರೂ ಮಾಡಲಿ, ಯಾವುದೇ ದಾಖಲೆ ಬಿಚ್ಚಿಡಲಿ. ಎಲ್ಲಿಗೆ ಬೇಕಾದರೂ ಹೋಗಲಿ, ತಪ್ಪು ಮಾಡಿದ್ದರೆ ಗಲ್ಲಿಗೆ ಹಾಕಲಿ, ತನಿಖೆ ಮಾಡುವ ಅಧಿಕಾರ ಎಲ್ಲರಿಗೂ ಇತ್ತು. ಈಗಲೂ ತನಿಖೆಗೆ ದೂರು ಕೊಟ್ಟು ತನಿಖೆ ಮಾಡಿಸಲಿ. ಈ ರಾಜ್ಯದ ರಾಜಕಾರಣಿಗಳು ಹಾಗೂ ಕುಟುಂಬದವರದ್ದೂ ಇಲ್ಲವೇ? ಯಾವ ಅಧಿಕಾರಿ ಇದ್ದರು, ಯಾವ ರೈತರು ಇದ್ದರು, ಎಲ್ಲ ಪಟ್ಟಿಯೂ ನನ್ನ ಬಳಿ ಇದೆ. ನನಗೆ ಏನು ಬೇಕಾದರೂ ಮಾಡಲಿ. ಏಕೆಂದರೆ ಈಗಾಗಲೇ ಸಿಬಿಐ, ಇಡಿಯವರು ಏನೇನು ಸ್ಕ್ಯಾನ್ ಮಾಡಬೇಕೋ ಎಲ್ಲವನ್ನು ನನ್ನ ವಿರುದ್ಧ ಮಾಡಿದ್ದಾರೆ. ನೈಸ್ ವಿಚಾರ ಏನೂ ಹೊಸದಲ್ಲ ಎಂದು ತಿಳಿಸಿದರು.

ಕನಕಪುರಕ್ಕೆ ಮೆಡಿಕಲ್ ಕಾಲೇಜು: ಮುಖ್ಯಮಂತ್ರಿ ಆಗಿದ್ದಾಗ ಕನಕಪುರಕ್ಕೆ ಮೆಡಿಕಲ್ ಕಾಲೇಜು ಮಂಜೂರು ಮಾಡಿದ್ದವರು ಈಗ ವಿರೋಧ ಏಕೆ? ಕುಮಾರಸ್ವಾಮಿ ಅವರು ಮುಖ್ಯಮಂತ್ರಿಗಳಾಗಿದ್ದಾಗ ಅಧಿವೇಶನದಲ್ಲಿ ಕನಕಪುರದಲ್ಲಿ ಮೆಡಿಕಲ್ ಕಾಲೇಜು ಮಾಡಲು ಮನವಿ ಮಾಡಿದ್ದೆ. ಅದಕ್ಕೆ ಅವರು ಸಮ್ಮತಿ ಸೂಚಿಸಿದ್ದರು. ನಮಗೆ ನಮ್ಮ ಕ್ಷೇತ್ರದ ಮೇಲೆ ಸ್ವಾರ್ಥ, ಅಭಿಮಾನ ಇಲ್ಲವೇ. ಈಗ ಏಕೆ ರಾಜಕೀಯ. ಪ್ರಸ್ತುತ ವೈದ್ಯಕೀಯ ಕಾಲೇಜು ರಾಮನಗರ ಕ್ಷೇತ್ರದ ಗಡಿಯಿಂದ ಮೂರು ಕಿಲೋ ಮೀಟರ್ ದೂರದಲ್ಲಿದೆ. ಎರಡು ತಾಲೂಕುಗಳಿಗೆ ಉಪಯೋಗವಾಗಲಿ ಎಂದು ಇದರ ಆಸ್ಪತ್ರೆ ಇದಾಗಿದೆ.

ಅನ್ಯ ಪಕ್ಷಗಳ ಶಾಸಕರು ಕಾಂಗ್ರೆಸ್ ಸೇರ್ಪಡೆ ವಿಚಾರವಾಗಿ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಅನ್ಯ ಪಕ್ಷಗಳ ಶಾಸಕರು ಕಾಂಗ್ರೆಸ್ ಸೇರುವ ವಿಚಾರದ ಬಗ್ಗೆ ನನ್ನ ಬಳಿ ಯಾರೂ ಚರ್ಚೆ ಮಾಡಿಲ್ಲ. ನಾವು ಬೇರೆ ಪಕ್ಷಗಳ ಶಾಸಕರನ್ನು ಕರೆದುಕೊಳ್ಳುವುದಕ್ಕಿಂತ ನಮ್ಮ ಮತ ಪ್ರಮಾಣ ಹೆಚ್ಚಿಸಿಕೊಳ್ಳುವತ್ತ ಹೆಚ್ಚು ಗಮನಹರಿಸುತ್ತಿದ್ದೇವೆ. ಎಸ್.ಟಿ ಸೋಮಶೇಖರ್, ಶಿವರಾಂ ಹೆಬ್ಬಾರ್ ಸೇರಿದಂತೆ ಬೇರೆ ಶಾಸಕರು ನಿಮ್ಮ ಪಕ್ಷದ ನಾಯಕರ ಸಂಪರ್ಕದಲ್ಲಿ ಇಲ್ಲವೇ ಎಂದು ಕೇಳಿದಾಗ, "ಈ ಬಗ್ಗೆ ನೀವು ಅವರನ್ನೇ ಕೇಳಬೇಕು. ನಾವು ಬಿಜೆಪಿ ಶಾಸಕರ ಕ್ಷೇತ್ರಗಳಲ್ಲೂ ಜನರಿಗೆ ನೆರವಾಗಿ ಅವರ ಸಮಸ್ಯೆ ಬಗೆಹರಿಸಲು ಮುಂದಾಗಿದ್ದೇವೆ. ನಮಗೆ ಇಡೀ ರಾಜ್ಯದ ಅಭಿವೃದ್ಧಿ ಬಹಳ ಮುಖ್ಯ. ಸೋಮಶೇಖರ್ ಅವರು ನೀರಿನ ಸಮಸ್ಯೆ ಬಗ್ಗೆ ಚರ್ಚೆ ಮಾಡಿದ್ದರು. ಅದನ್ನು ಬಗೆಹರಿಸುವ ಪ್ರಯತ್ನ ಮಾಡಿದ್ದೇನೆ. ಇದರಲ್ಲಿ ರಾಜಕೀಯ ಯಾಕೆ ಮಾಡಬೇಕು?" ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

ಗೃಹಲಕ್ಷ್ಮಿ ಸರ್ಕಾರಿ ಕಾರ್ಯಕ್ರಮ. ಇಲ್ಲಿ ಜನರನ್ನು ಯಾರೂ ಸೇರಿಸಬೇಕಿಲ್ಲ. ನಾವು ಕೇವಲ ಆಮಂತ್ರಣ ನೀಡುತ್ತೇವೆ. ಇದು ಪಕ್ಷದ ಕಾರ್ಯಕ್ರಮವಲ್ಲ. ಪಕ್ಷಭೇದ ಮರೆತು ಕಾರ್ಯಕ್ರಮ ಮಾಡಬೇಕು. ಬಿಜೆಪಿ ಹಾಗೂ ದಳದ ಶಾಸಕರುಗಳು ಅವರ ಅಧ್ಯಕ್ಷತೆಯಲ್ಲಿ ತಮ್ಮ ಕ್ಷೇತ್ರಗಳಲ್ಲಿ ಈ ಕಾರ್ಯಕ್ರಮ ಮಾಡಬೇಕು ಎಂದು ಹೇಳಿದ್ದೇವೆ ಎಂದು ತಿಳಿಸಿದರು.

> ನಮ್ಮ ಸರ್ಕಾರಕ್ಕೆ ನೂರು ದಿನಗಳು ಪೂರ್ಣಗೊಂಡಿವೆ. ಚುನಾವಣೆ ಸಮಯದಲ್ಲಿ ನಾನು ಹಾಗೂ ಸಿದ್ದರಾಮಯ್ಯ ಅವರು ನಾಡದೇವತೆ ತಾಯಿ ಚಾಮುಂಡೇಶ್ವರಿ ಸನ್ನಿಧಾನಕ್ಕೆ ಹೋಗಿ, ಗ್ಯಾರಂಟಿ ಕಾರ್ಡ್‌ಗೆ ಸಹಿ ಹಾಕಿ ಈ ಯೋಜನೆ ಜಾರಿ ಮಾಡುವ ಶಕ್ತಿ ನೀಡುವಂತೆ ಪ್ರಾರ್ಥನೆ ಮಾಡಿದ್ದೆವು. ಹೀಗಾಗಿ ಈ ಯೋಜನೆಯನ್ನು ತಾಯಿಯ ಆಶೀರ್ವಾದದ ಮೂಲಕ ಜಾರಿ ಮಾಡಲು ಈ ಕಾರ್ಯಕ್ರಮ ಮಾಡುತ್ತಿದ್ದೇವೆ. ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಸೇರಿದಂತೆ ಎಐಸಿಸಿ ನಾಯಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.
>
> –ಡಿ.ಕೆ.ಶಿವಕುಮಾರ್, ಡಿಸಿಎಂ

ಆ.31, ರಕ್ಷಾ ಬಂಧನ ಪಾವನ ಪರ್ವದ ಸಂಭ್ರಮಾಚರಣೆ

ಮೈಸೂರು,ಆ.28–ನಗರದ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ವತಿಯಿಂದ ಆ.31ರಂದು ಗುರುವಾರ ಸಂಜೆ 6.30ಕ್ಕೆ ಯಾದವಗಿರಿ, 3ನೇ ಮುಖ್ಯ ರಸ್ತೆ, 'ಜ್ಞಾನ ಪ್ರಕಾಶ ಭವನ'ದಲ್ಲಿ 'ರಕ್ಷಾ ಬಂಧನ ಪಾವನ ಪರ್ವದ ಸಂಭ್ರಮಾಚರಣೆ'ಯನ್ನು ಆಯೋಜಿಸಲಾಗಿದೆ. ಮುಖ್ಯ ಅತಿಥಿಯಾಗಿ ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್ ಆಗಮಿಸಲಿದ್ದು, ದಿವ್ಯ ಸಾನ್ನಿಧ್ಯವನ್ನು ಈಶ್ವರೀಯ ವಿವಿ ಮೈಸೂರು ಉಪವಲಯದ ಮುಖ್ಯ ಸಂಚಾಲಕಿ ರಾಜಯೋಗಿನಿ ಬಿಕೆ ಲಕ್ಷ್ಮೀಜಿ ವಹಿಸಲಿದ್ದಾರೆ. ಮಾಹಿತಿಗೆ ಮೊ. 9008004670

ರಾಮನಗರ ಬಳಿ ಬಸ್ ಡಿಕ್ಕಿ: ಕಾರಿನಲ್ಲಿದ್ದ 6 ಮಂದಿ ದುರ್ಮರಣ



ಕನಕಪುರ: ಮಲೆ ಮಹದೇಶ್ವರ ಬೆಟ್ಟದಿಂದ ವಾಪಸಾಗುತ್ತಿದ್ದಾಗ ಕಾರು ಹಾಗೂ ಕೆಎಸ್‌ಆರ್‌ಟಿಸಿ ಬಸ್ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಆರು ಮಂದಿ ದುರ್ಮರಣ ಹೊಂದಿದ್ದಾರೆ. ರಾಮನಗರ ಜಿಲ್ಲೆ ಕನಕಪುರ ತಾಲೂಕಿನ ಕೆಮ್ಮಾಳೆ ಗೇಟ್ ಬಳಿ ಅಪಘಾತ ಸಂಭವಿಸಿದ್ದು ಆರು ಮಂದಿ ಸ್ಥಳದಲ್ಲೇ ಸಾವನ್ನಪ್ಪಿದ್ದು ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಕೆಎ01ಎಂಎಫ್ 8055 ಸಂಖ್ಯೆಯ ಟೊಯೊಟೊ ಕ್ವಾಲಿಸ್ ಕಾರಿನಲ್ಲಿ ದೇವಸ್ಥಾನಕ್ಕೆ ತೆರಳಿ ವಾಪಸಾಗುತ್ತಿದ್ದಾಗ ಅಪಘಾತ ಸಂಭವಿಸಿದೆ. ಅಪಘಾತದ ವೇಳೆ ಕಾರಿನಲ್ಲಿ ಸಿಲುಕಿದ್ದ ಗಾಯಾಳುಗಳನ್ನು ಕ್ರೇನ್ ಮೂಲಕ ಹೊರತೆಗೆದು ಆಸ್ಪತ್ರೆಗೆ ರವಾನಿಸಲಾಗಿದೆ. ಸಾತನೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಪಘಾತ ನಡೆದಿದ್ದು ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಉಚಿತ ಸಾಮೂಹಿಕ ಯಜುರುಪಾಕರ್ಮ

ಮೈಸೂರು,ಆ.28–ಶ್ರೀರಾಮಚಂದ್ರಾಪುರ ಮಠದ ಹವ್ಯಕ ಮಹಾಮಂಡಲ ಮೈಸೂರು ವಲಯದ ವತಿಯಿಂದ ಆ.30ರಂದು ಬೆಳಗ್ಗೆ 9ಗಂಟೆಗೆ ಉಚಿತ ಸಾಮೂಹಿಕ ಯಜುರುಪಾಕರ್ಮವನ್ನು ಬೋಗಾದಿಯ ಸಾಯಿ ಸರಸ್ವತಿ ವಿದ್ಯಾಕೇಂದ್ರದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಭಾಗವಹಿಸುವವರು ಪಂಚಪಾತ್ರೆ, ಉದ್ದರಣೆ, ಚಾಪೆ, ಪೂಜಾ ಸಾಮಗ್ರಿಗಳು, ಜನಿವಾರ ಹಾಗೂ ದಾನಾದಿಗಳನ್ನು ತರಬೇಕು. ಎಲ್ಲಾ ತ್ರಿಮತಸ್ಥ ಬ್ರಾಹ್ಮಣರು ಭಾಗವಹಿಸಬಹುದು. ಆಸಕ್ತರು ವಲಯದ ಕಾರ್ಯದರ್ಶಿ ರಾಕೇಶ್ ಭಟ್ ಅವರನ್ನು 99162 21184 ಮೂಲಕ ಸಂಪರ್ಕಿಸಬಹುದು.

ಇಸ್ರೋ ವಿಜ್ಞಾನಿಗಳಿಗೆ ಶ್ರೀ ವ್ಯಾಸರಾಜ ಮಠದಿಂದ ಅಭಿನಂದನೆ

ಮೈಸೂರು,ಆ.28–ಜಾಗತಿಕ ಮಟ್ಟದಲ್ಲಿ ವಿಶೇಷ ಸಾಧನೆ ಮಾಡಿರುವ ಇಸ್ರೋದ ಚಂದ್ರಯಾನ–3 ಮೂಲಕ ಜಗತ್ತೇ ಭಾರತದತ್ತ ಆಶ್ಚರ್ಯದಿಂದ ನೋಡುವಂತೆ ಮಾಡಿದ ನಮ್ಮ ದೇಶದ ಹೆಮ್ಮೆಯ ವಿಜ್ಞಾನಿಗಳಿಗೆ ಶ್ರೀ ಸೋಸಲೆ ವ್ಯಾಸರಾಜ ಮಠದ ಪ್ರಸ್ತುತ ಪೀಠಾಧಿಪತಿಗಳಾದ ಶ್ರೀ ವಿದ್ಯಾಶ್ರೀಶ ತೀರ್ಥ ಶ್ರೀಪಾದರ ಏಳನೇ ಚಾತುರ್ಮಾಸ್ಯದ ಸಂದರ್ಭದಲ್ಲಿ ಬೆಂಗಳೂರಿನ ಗಾಂಧಿ ಬಜಾರ್‌ನ ಬೆಣ್ಣೆ ಗೋವಿಂದಪ್ಪ ರಸ್ತೆಯ ಶ್ರೀ ವಿದ್ಯಾಪಯೋನಿಧಿ ಸಭಾ ಮಂದಿರದಲ್ಲಿ ಅಭಿನಂದಿಸಿದರು.



ಹಿರಿಯ ವಿಜ್ಞಾನಿಗಳಾದ ಇಸ್ರೋ ನಿರ್ದೇಶಕ ಬಿ.ಎನ್.ರಾಮಕೃಷ್ಣ, ಬಿಎಸ್ ಕಿರಣ್, ಎಂ.ಆರ್.ರಾಘವೇಂದ್ರ, ನಂದಿನಿ ಹರಿನಾಥ್, ಸುಧೀಂದ್ರ ಬಿಂಡಗಿ, ವೈ.ಎಲ್.ಮಧುಸೂದನ, ಎಂ.ಎಸ್. ಶ್ರೀನಿಧಿ, ಶ್ರೀಮತಿ ದ್ವಾರಕನಾಥ್, ಸುಕನ್ಯಾ ಮೂರ್ತಿ, ವೀಣಾ ರಾಮಪ್ರಸಾದ್, ಜೈಲಕ್ಷ್ಮಿ ಚಂದ್ರಶೇಖರ್ ಅವರನ್ನು ಪೂಜ್ಯ ಶ್ರೀಪಾದರು ರಜತ ಫಲಕ, ಶಾಲು, ಅಭಿನಂದನಾ ಪತ್ರ ನೀಡಿ ಸತ್ಕರಿಸಿ ಮಾತನಾಡುತ್ತಾ, ವಿಜ್ಞಾನಕ್ಕೂ, ತತ್ವಜ್ಞಾನಕ್ಕೂ ನಿಕಟ ಸಂಬಂಧವಿದೆ. ಅದನ್ನು ತಿಳಿಯಲು ಜ್ಞಾನಿಗಳಿಂದ ಮಾತ್ರ ಸಾಧ್ಯ ಎಂದರು. ಪ್ರೊ.ಕೆ.ಜೆ.ರಾವ್ ಪ್ರಾಸ್ತಾವಿಕ ನುಡಿಗಳನ್ನಾಡಿದರು. ನಿವೃತ್ತ ಹಿರಿಯ ಅಧಿಕಾರಿ ಕೆ ಜಯರಾಜ್ ಮತ್ತು ಮುದ್ದುಮೋಹನ್, ಹಿರಿಯ ಪತ್ರಕರ್ತ ಎಸ್.ಕೆ. ಶೇಷ ಚಂದ್ರಿಕಾ, ನಿವೃತ್ತ ಎಡಿಜಿಪಿ ಭಾಸ್ಕರ ರಾವ್, ಕ್ಯಾಪ್ಟನ್ ರಾಜಾರಾವ್, ನ್ಯಾಯಮೂರ್ತಿ ಸುಧೀಂದ್ರರಾವ್, ಎಸ್ಪಿಬಿಸಿ ನಿರ್ದೇಶಕ ಡಿ.ಪಿ.ಅನಂತ, ಮೈಸೂರಿನ ಪ್ರಾಚ್ಯ ಸಂಶೋಧನಾ ನಿರ್ದೇಶಕ ಡಿ.ಪಿ.ಮಧುಸೂದನ್ ಆಚಾರ್ಯ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

29.8.2023 ಮಂಗಳವಾರ, ಮಳೆ ನಕ್ಷತ್ರ: ಮಖ 17.08.2023ರಿಂದ 30.08.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯಣ, ವರ್ಷ ಋತು, ಶ್ರಾವಣ ಮಾಸ,
ಶುಕ್ಲ ಪಕ್ಷ, ತಿಥಿ: ತ್ರಯೋದಶಿ, ನಕ್ಷತ್ರ: ಶ್ರವಣ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

■ **ಮೈಸೂರು ವಿಶ್ವವಿದ್ಯಾನಿಲಯವನ್ನು ಪ್ರತಿನಿಧಿಸಿರುವ ಕ್ರೀಡಾಪಟುಗಳ ಅಲ್ಯೂಮ್ನಿ ಅಸೋಸಿಯೇಷನ್:** ಬೆಳಗ್ಗೆ 7ಕ್ಕೆ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಅಂಗವಾಗಿ ಬಾಲಕ ಮತ್ತು ಬಾಲಕಿಯರ ಎಂ. ವಿಜಯಕುಮಾರ್ ಸ್ಮರಣಾರ್ಥ ರಸ್ತೆ ಓಟ, ಉದ್ಘಾಟನೆ: ಶಾಸಕ ದರ್ಶನ್ ಪುಟ್ಟಣ್ಣಯ್ಯ, ಬೆಳಗ್ಗೆ 8.30ಕ್ಕೆ ಸಮಾರೋಪ ಸಮಾರಂಭ, ಬಹುಮಾನ ವಿತರಣೆ: ಸಮಾಜ ಸೇವಕ ಹೆಚ್.ಎಂ.ಗಣೇಶ್‌ಪ್ರಸಾದ್, ಉಪಸ್ಥಿತರು: ಶಶಿಕಲಾ ವಿಜಯಕುಮಾರ್, ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ.ವೆಂಕಟೇಶ್, ಅಧ್ಯಕ್ಷತೆ: ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ನಿವೃತ್ತ ನಿರ್ದೇಶಕ ಡಾ.ಕೃಷ್ಣ, ಸ್ಥಳ: ಮೈಸೂರು ವಿವಿ ಓವಲ್ ಮೈದಾನ.

■ **ಮೈಸೂರು ವುಶು ಅಸೋಸಿಯೇಷನ್, ಕರ್ನಾಟಕ ವುಶು ಅಸೋಸಿಯೇಷನ್ :** ಬೆಳಗ್ಗೆ 10ಕ್ಕೆ ರಾಜ್ಯ ಮಟ್ಟದ ಖೇಲೋ ಇಂಡಿಯಾ ಮಹಿಳಾ ವುಶು ಲೀಗ್–2023, ಉದ್ಘಾಟನೆ : ರಾಜವಂಸ್ಥರಾದ ತ್ರಿಷಿಕಾಕುಮಾರಿ ಒಡೆಯರ್, ಅಧ್ಯಕ್ಷತೆ : ಶಾಸಕ ಕೆ. ಹರೀಶ್‌ಗೌಡ, ಮುಖ್ಯ ಅತಿಥಿಗಳು : ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ, ಜಿಪಂ ಸಿಇಓ ಕೆ.ಎಂ. ಗಾಯತ್ರಿ, ಎಸ್‌ಪಿ ಸೀಮಾ ಲಾಟ್ಕರ್, ಎಎಸ್‌ಪಿ ಬಿ.ಎನ್. ನಂದಿನಿ, ಜೆಡಿಎಸ್ ಯುವ ಘಟಕದ ಉಪಾಧ್ಯಕ್ಷ ಆರ್. ಪ್ರತಾಪ್‌ಗೌಡ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಭಾಸ್ಕರ್ ನಾಯಕ್, ರಂಗಾಯಣ ಉಪನಿರ್ದೇಶಕರಾದ ನಿರ್ಮಲ ಮಠಪತಿ, ದೇವರಾಜ ಮಾರುಕಟ್ಟೆ ಅಸೋಸಿಯೇಷನ್ ಅಧ್ಯಕ್ಷ ಕೆ. ದಿನೇಶ್, ಆಯುಷ್ ಪ್ರಭಾರ ನಿರ್ದೇಶಕರಾದ ಪಿ. ಮಂಜುಳ, ಕೆಡಬ್ಲ್ಯುಎ ಕಾರ್ಯದರ್ಶಿ ಅಶೋಕ ಡಿ. ಮೋಕಾಶಿ, ಅಧ್ಯಕ್ಷ ಡಾ. ವೀರಣ್ಣ ಸಿ. ಚಿರಂತಿಮಠ, ಬಾಗಲಕೋಟೆ ಜಿಲ್ಲಾ ವುಶು ಅಸೋಸಿಯೇಷನ್ ಅಧ್ಯಕ್ಷ ಡಾ. ರಾಜು ವಿ. ನಾಯ್ಕರ್, ಎಂಡಬ್ಲ್ಯುಎ ಕಾರ್ಯದರ್ಶಿ ಎಂ.ಎ. ಧರ್ಮ, ಬೆಳಗ್ಗೆ 10ಕ್ಕೆ ಸಮಾರೋಪ ಸಮಾರಂಭ, ಬಹುಮಾನ ವಿತರಣೆ, ಸ್ಥಳ: ಚಾಮುಂಡಿವಿಹಾರ ಒಳಾಂಗಣ ಕ್ರೀಡಾಂಗಣ, ನಜರ್‌ಬಾದ್, ಸಂಜೆ 5ಕ್ಕೆ.

■ **ಶ್ರೀ ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ :** ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 108ನೇ ಜಯಂತಿ ಮಹೋತ್ಸವ, ಸಾನ್ನಿಧ್ಯ :ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಶ್ರೀ ಆದಿಚುಂಚನಗಿರಿ ಮಠದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಶ್ರೀ ಸಿದ್ಧಗಂಗಾ ಮಠದ ಶ್ರೀ ಸಿದ್ಧಲಿಂಗ ಸ್ವಾಮೀಜಿ, ಉಡುಪಿ ಶ್ರೀ ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನತೀರ್ಥ ಸ್ವಾಮೀಜಿ, ಉದ್ಘಾಟನೆ: ಮುಖ್ಯಮಂತ್ರಿ ಸಿದ್ದರಾಮಯ್ಯ, ಅಧ್ಯಕ್ಷತೆ: ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ರಾಜಗುರುತಿಲಕ ಕೃತಿ ಬಿಡುಗಡೆ: ಸಂಸದ ಪ್ರತಾಪ್ ಸಿಂಹ, ಪ್ರಸಾದ ವಿಶೇಷ ಸಂಚಿಕೆ ಬಿಡುಗಡೆ: ಶಾಸಕ ಜಿ.ಟಿ. ದೇವೇಗೌಡ, ಮುಖ್ಯ ಅತಿಥಿಗಳು: ಶಾಸಕರಾದ ತನ್ವೀರ್ ಸೇಠ್, ಟಿ.ಎಸ್.ಶ್ರೀವತ್ಸ, ಕೆ.ಹರೀಶ್‌ಗೌಡ, ಮೇಯರ್ ಶಿವಕುಮಾರ್, ಸ್ಥಳ: ಶ್ರೀ ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು, ಬೆಳಗ್ಗೆ 10.30ಕ್ಕೆ.

■ **ಎಸ್. ಪ್ರಕಾಶ್ ಪ್ರಿಯಾದರ್ಶನ್ ಸ್ನೇಹಬಳಗ :** ಕುರುಬರಿಂದ ಕುರುಬರಿಗಾಗಿ ಉಳ್ಳವರಿಂದ ಅವಶ್ಯಕತೆ ಇರುವವರಿಗಾಗಿ ಕಾರ್ಯಕ್ರಮ, ಉಚಿತ ಕುರಿ ಮರಿಗಳು, ಮಾತೆಯರಿಗೆ ಸೀರೆ, ವಾಟರ್ ಕ್ಯಾನ್ ಮತ್ತು ಹಣ್ಣಿನ ಗಿಡ ವಿತರಣೆ, ಸ್ಥಳ: ಆರಾಧ್ಯ ಮಹಾಸಭಾ, ಜೆಎಲ್‌ಬಿ ರಸ್ತೆ, ಬೆಳಗ್ಗೆ 11.30ಕ್ಕೆ.

■ **ಶ್ರೀ ವೀರಭದ್ರೇಶ್ವರಸ್ವಾಮಿ ಹಾಗೂ ಶ್ರೀಚಾಮರಾಜೇಶ್ವರಸ್ವಾಮಿ ದೇವಸ್ಥಾನ:** ಶ್ರೀ ವೀರಭದ್ರೇಶ್ವರಸ್ವಾಮಿಯ ಜನ್ಮೋತ್ಸವ, ಮಹಾ ರಥೋತ್ಸವ ಹಾಗೂ ಶ್ರಾವಣ ಮಾಸದಲ್ಲಿ ನಡೆಯುವ ಪೂಜಾ ಕಾರ್ಯಕ್ರಮ, ಸ್ಥಳ: ದೇವಸ್ಥಾನ ಆವರಣ, ಡಿ. ಬನುಮಯ್ಯ ರಸ್ತೆ, ಕೆಆರ್ ಮೊಹಲ್ಲಾ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಶ್ರದ್ಧೆಯಶಿಲ್ಪ, ಲೇಖನ ಮತ್ತು ಪ್ರಸ್ತುತಿ–ಟಿ.ಎಸ್.ಗೋಪಾಲ್, 6.40 ಪದಸಂಸ್ಕೃತಿ, ಪ್ರಸ್ತುತಿ–ಪ್ರೊ.ವಸಂತ ಕುಷ್ಟಗಿ, 9.05 ವಸುದೈವ ಕುಟುಂಬಕಂ–ಭಾರತ ಜಿ20 ಶೃಂಗಸಭೆಯ ಅಧ್ಯಕ್ಷತೆ ವಹಿಸಿದ ಸಂದರ್ಭದಲ್ಲಿ ವಿಶೇಷ ಸರಣಿ ಕಾರ್ಯಕ್ರಮ, 10.00 ಚಿತ್ರಾ ಬಿಲ್ವಂ–ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ, 12.45 ಅರಣ್ಯ ವಾಸಿಗಳ ಶಿಕ್ಷಣ ವ್ಯವಸ್ಥೆ ಕುರಿತು DEE ಸಂಸ್ಥೆಯ ಎಸ್.ಶ್ರೀಕಾಂತ ಅವರೊಡನೆ ಸಂದರ್ಶನ, ಸಂದರ್ಶಕರು–ದಿವಾಕರ ಹೆಗಡೆ, 1.20 ಭಾವಗೀತೆಗಳು–ಟಿ.ಎಸ್.ಸ್ನೇಹಾ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.00 ಡಾ.ಎಂ.ಮಂಜುನಾಥ್–ವಯೋಲಿನ್ ವಾದನ, 4.00 ಕಥಾ ಕಾಲಕ್ಷೇಪ, ಶ್ರೀ ರಾಘವೇಂದ್ರ ವಿಜಯ, ಪ್ರಸ್ತುತಿ–ಬೇಲೂರು ವಸಂತ ಲಕ್ಷ್ಮಿ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಶುಂಠಿ ಬೇಸಾಯ ಕುರಿತು ಬಿ.ಎನ್. ಹೇಮಂತ್‌ಕುಮಾರ್ ಅವರೊಂದಿಗೆ ಸಂದರ್ಶನ, 7.45 ಅಂತಾರಾಷ್ಟ್ರೀಯ ಪ್ಯಾರಾ ಬ್ಯಾಡ್‌ಮಿಂಟನ್ ಕ್ರೀಡಾಪಟುಗಳಾದ ಪಲ್ಲವಿ ಮತ್ತು ಚಾಪರ ಪೂರ್ಣರಾವ್ ಅವರೊಂದಿಗೆ ಮಾತುಕತೆ, 9.30 ಮಲ್ಲಾಡಿ ಸೂರಿ ಬಾಬು–ಹಾಡುಗಾರಿಕೆ, 10.00 ಗಮಕ ವ್ಯಾಖ್ಯಾನ, ವಾಚನ–ಶ್ರೀಲಕ್ಷ್ಮಿ, ವ್ಯಾಖ್ಯಾನ–ನಿರಂಜನ್

■ **ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ:** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇಂಜಿನಿಯರಿಂಗ್ ಘಟಕ ಉದ್ಘಾಟನಾ ಸಮಾರಂಭ, ಉದ್ಘಾಟನೆ: ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಸ್ಥಿತರು: ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್, ಜ್ಯೋತಿ ಬೆಳಗುವಿಕೆ: ಸಚಿವ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್, ಅಧ್ಯಕ್ಷತೆ: ಶಾಸಕ ಕೆ.ಹರೀಶ್‌ಗೌಡ, ಮುಖ್ಯ ಅತಿಥಿಗಳು: ಮೇಯರ್ ಶಿವಕುಮಾರ್, ಸಂಸದರಾದ ಪ್ರತಾಪ್ ಸಿಂಹ, ವಿ.ಶ್ರೀನಿವಾಸಪ್ರಸಾದ್, ಸುಮಲತಾ ಅಂಬರೀಷ್, ಸ್ಥಳ: ಗ್ರಂಥಾಲಯ ಕಟ್ಟಡ, ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಮಧ್ಯಾಹ್ನ 1.45ಕ್ಕೆ

■ **ಟಿ.ಎಸ್.ಸುಬ್ಬಣ್ಣ ಸಾರ್ವಜನಿಕ ಪ್ರೌಢಶಾಲೆ, ಹಿರಣ್ಮಯಿ ಪ್ರತಿಷ್ಠಾನ, ಕಾವೇರಿ ಬಳಗ:** ಸಂಸ್ಕೃತಿ ಸಂಭ್ರಮ, ಅಧ್ಯಕ್ಷತೆ: ಮುಖ್ಯ ಶಿಕ್ಷಕ ರಮೇಶ್, ಮುಖ್ಯ ಅತಿಥಿಗಳು: ಸಾಹಿತಿ ಬನ್ನೂರು ಕೆ.ರಾಜು, ಪ್ರಧಾನ ಭಾಷಣ: ಡಯಟ್ ಉಪನ್ಯಾಸಕ ಆರ್.ತಮ್ಮಯ್ಯ, ಸ್ಥಳ: ಟಿ.ಎಸ್.ಸುಬ್ಬಣ್ಣ ಸಾರ್ವಜನಿಕ ಪ್ರೌಢಶಾಲೆ, ಮಧ್ಯಾಹ್ನ 2ಕ್ಕೆ

■ **ಗಾನಭಾರತೀ:** ನೃತ್ಯ ಶಾಲಾ ಕೌಶಲ ಪ್ರದರ್ಶನ, ಸುಗಮ ಸಂಗೀತ, ಸಂಜೆ 6 ರಿಂದ ಶ್ರೀಮತಿ ತೇಜಸ್ವಿನಿ ಅವರಿಂದ ಗಾಯನ, ಬಿ.ಉಮಾಪತಿ–ಕೀಬೋರ್ಡ್, ಜಿ.ಎಸ್.ಕುಮಾರ್–ತಬಲ, ಸಂಜೆ 7.15 ರಿಂದ ವಿದ್ವಾನ್ ಪವನ್‌ಕುಮಾರ್‌ರಿಂದ ಭರತನಾಟ್ಯ ಕಾರ್ಯಕ್ರಮ, ಸ್ಥಳ: ವೀಣೆಶೇಷಣ್ಣ ಭವನ, ಕುವೆಂಪುನಗರ.

■ **ಶ್ರೀ ಸುತ್ತೂರು ಮಠ (ಮೈಸೂರು ಶಾಖೆ), ಚಾಮುಂಡಿಬೆಟ್ಟದ ತಪ್ಪಲು:** ಶ್ರಾವಣಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ಜೆಎಸ್‌ಎಸ್ ಮಹಾ ವಿದ್ಯಾಪೀಠ, ಪ್ರಕಟಣ ವಿಭಾಗದ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ ಅವರಿಂದ ಪ್ರವಚನ, ವಾಚನ–ಕಾರ್ಯಪಾಲಕ ಅಭಿಯಂತರ ವಿದ್ವಾನ್ ಕೃ.ರಾಮಚಂದ್ರ, ಸ್ಥಳ: ಮಠದ ಆವರಣ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6.30ಕ್ಕೆ. ಸಾಮೂಹಿಕ ಪ್ರಾರ್ಥನೆ: ಸಂಜೆ 6 ಗಂಟೆಗೆ.

■ **ಸನಾತನ ಸಭಾ, ಮೈಸೂರು:** ರಾಮಾಯಣ ಪ್ರವಚನ ಮಾಲಿಕೆ (ಕಿಷ್ಕಿಂದಾ ಕಾಂಡ, ಪ್ರವಚನ ಏಳನೆಯ ಸರಣಿ), ವಿಮರ್ಶಕ ಚಿಂತಕ ವಿದ್ವಾನ್ ಗ.ನಾ. ಭಟ್ಟ ಅವರಿಂದ, ಸ್ಥಳ: ನಾದಬ್ರಹ್ಮ, ಸಂಗೀತಸಭಾ ಕೆ.ವಾಸುದೇವಾಚಾರ್ಯ ಭವನ, ಜೆಎಲ್‌ಬಿ ರಸ್ತೆ, ಸಂಜೆ 6 ಗಂಟೆಗೆ.

■ **ಮೈಸೂರು ವಕೀಲರ ಸಂಘ:** ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಅಭಿನಂದನಾ ಸಮಾರಂಭ, ಉದ್ಘಾಟನೆ : ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಬಿ.ಎಸ್. ಸಂಗ್ರೇಶಿ, ಮುಖ್ಯ ಅತಿಥಿಗಳು : ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಅಧ್ಯಕ್ಷತೆ : ಮೈಸೂರು ವಕೀಲರ ಸಂಘದ ಅಧ್ಯಕ್ಷ ಎಂ. ಮಹದೇವಸ್ವಾಮಿ, ಸ್ಥಳ: ಜಿಲ್ಲಾ ನ್ಯಾಯಾಲಯದ ಆವರಣ, ಸಂಜೆ 6ಕ್ಕೆ.

ಹೆಚ್.ಡಿ. ಕೋಟೆಯಲ್ಲಿಂದು

■ **ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ :** ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿಯವರ 108ನೇ ಜಯಂತಿ ಅಂಗವಾಗಿ ಸಂಸ್ಥಾಪಕರ ದಿನಾಚರಣೆ, ದತ್ತಿ ಉಪನ್ಯಾಸ, ಸಾನ್ನಿಧ್ಯ : ಶ್ರೀ ಚಂದ್ರಶೇಖರ ಸ್ವಾಮೀಜಿ, ಅಧ್ಯಕ್ಷತೆ : ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಹೆಳವರಹುಂಡಿ ಸಿದ್ದಪ್ಪ, ಮಧ್ಯಾಹ್ನ 2ಕ್ಕೆ.

ಮೈಸೂರು ವಿಭಾಗದಲ್ಲಿ ಡ್ರಗ್ಸ್ ಜಾಲ ಹತ್ತಿಕ್ಕಲೇಬೇಕು

ಜಿಪಂ ಸಭಾಂಗಣದಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ದಕ್ಷಿಣ ವಲಯ ಡಿಐಜಿ ಬೋರಲಿಂಗಯ್ಯರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಖಡಕ್ ಸೂಚನೆ



ಮೈಸೂರು ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಕೆಡಿಪಿ ಸಭೆ ನಡೆಯಿತು. ಚಿತ್ರದಲ್ಲಿ ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಸಂಸದ ಪ್ರತಾಪ್ ಸಿಂಹ, ವಿಧಾನಸಭಾ ಸದಸ್ಯರಾದ ತನ್ವೀರ್ ಸೇಠ್, ಕೆ.ಹರೀಶ್‌ಗೌಡ, ಜಿ.ಡಿ.ಹರೀಶ್‌ಗೌಡ, ಅನಿಲ್ ಚಿಕ್ಕಮಾದು, ಡಿ.ರವಿಶಂಕರ್, ವಿಧಾನಪರಿಷತ್ ಸದಸ್ಯರಾದ ಎ.ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ ಇನ್ನಿತರರನ್ನು ಕಾಣಬಹುದು.

ಮೈಸೂರು, ಆ.28(ಎಸ್‌ಬಿಡಿ)– ವಿದ್ಯಾರ್ಥಿಗಳು ಸೇರಿದಂತೆ ಯುವ ಸಮುದಾಯವನ್ನು ದಾರಿತಪ್ಪಿಸುತ್ತಿರುವ ಡ್ರಗ್ಸ್ ಜಾಲವನ್ನು ಹತ್ತಿಕ್ಕುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ದಕ್ಷಿಣ ವಲಯ ಡಿಐಜಿ ಟಿ.ಬೋರಲಿಂಗಯ್ಯ ಅವರಿಗೆ ಖಡಕ್ ಸೂಚನೆ ನೀಡಿದ್ದಾರೆ.

ಮೈಸೂರು ಜಿಲ್ಲಾ ಪಂಚಾಯ್ತಿಯಲ್ಲಿ ಸೋಮವಾರ ನಡೆದ ಕೆಡಿಪಿ ಸಭೆಯಲ್ಲಿ ಪೊಲೀಸ್ ಅಧಿಕಾರಿಗಳಿಂದ ಮಾಹಿತಿ ಪಡೆದ ಮುಖ್ಯಮಂತ್ರಿಗಳು, ಮೈಸೂರು ಸೇರಿದಂತೆ ದಕ್ಷಿಣ ವಲಯ ವ್ಯಾಪ್ತಿಯ ಮಂಡ್ಯ, ಚಾಮರಾಜನಗರ, ಕೊಡಗು, ಹಾಸನ ಜಿಲ್ಲೆಗಳಲ್ಲಿ ಯಾವುದೇ ಕಾರಣಕ್ಕೂ ಡ್ರಗ್ಸ್ ಜಾಲಕ್ಕೆ ಅವಕಾಶ ನೀಡಬಾರದು. ಅನಧಿಕೃತ ಕ್ಲಬ್ ಹಾಗೂ ಬಾರ್‌ಗಳನ್ನು ಬಂದ್ ಮಾಡಿಸಬೇಕು ಎಂದು ತಿಳಿಸಿದರು.

ಯಾವುದಾದರೂ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಡ್ರಗ್ಸ್ ಮಾರಾಟವಾಗುತ್ತಿದ್ದರೆ, ಇದರಿಂದ ವಿದ್ಯಾರ್ಥಿಗಳು ಹಾಗೂ ಯುವಕರು ಹಾಳಾಗುತ್ತಾರೆ. ಅದಕ್ಕೆ ಆಯಾ ವ್ಯಾಪ್ತಿಯ ಇನ್‌ಸ್ಪೆಕ್ಟರ್‌ಗಳನ್ನೇ ಹೊಣೆಗಾರರನ್ನಾಗಿ ಮಾಡಿ. ಏಕೆಂದರೆ ಇನ್‌ಸ್ಪೆಕ್ಟರ್‌ಗಳಿಗೆ ಗೊತ್ತಿಲ್ಲದೆ ಕಳ್ಳತನ, ದರೋಡೆ ಆಗುವುದಿಲ್ಲ. ಬಾರ್ ಮತ್ತು ಕ್ಲಬ್‌ಗಳು ನಡೆಯಲು ಸಾಧ್ಯವಿಲ್ಲ. ಡ್ರಗ್ಸ್ ತಡೆಗೆ ಪರಿಣಾಮಕಾರಿ ಕ್ರಮ ವಹಿಸಬೇಕು. ಈ ಸಂಬಂಧ ಅಧಿಕಾರಿಗಳಿಗೆ ಸೂಚನೆ ನೀಡಬೇಕು ಎಂದರು.

ಶೂನ್ಯ ದಾಖಲಾತಿಗೆ ಕಾರಣವೇನು?: ಜಿಲ್ಲೆಯ 26 ಶಾಲೆಗಳಲ್ಲಿ ಶೂನ್ಯ ದಾಖಲಾತಿ ವಿಚಾರದ ಬಗ್ಗೆ ಬೇಸರ ವ್ಯಕ್ತಪಡಿಸಿದ ಸಿದ್ದರಾಮಯ್ಯನವರು, ಮಕ್ಕಳ ಶಾಲೆಗೆ ಸೇರದಿರಲು ಕಾರಣವೇನು? ಅವರ ಪೋಷಕರೊಂದಿಗೆ ಮಾತನಾಡಿದ್ದೀರಾ? ಎಂದು ಪ್ರಶ್ನಿಸಿದರು. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಗಣಿತಶಾಸ್ತ್ರ ಹಾಗೂ ಇಂಗ್ಲಿಷ್‌ನಲ್ಲಿ ಫೇಲ್ ಆಗುತ್ತಾರೆ. ಹೀಗಿರುವಾಗ ಅವರೇಕೆ ಇಂಗ್ಲಿಷ್ ಮಾಧ್ಯಮ ಆಯ್ಕೆ ಮಾಡುತ್ತಾರೆ. ಸರ್ಕಾರಿ ಶಾಲೆಗೆ ದಾಖಲಾಗದಿರಲು ಇದು ಕಾರಣವಲ್ಲ. ವಿವಿಧ ತರಬೇತಿ ನೀಡಿದ್ದರೂ ಶಿಕ್ಷಕರು ಸರಿಯಾಗಿ ಪಾಠ ಮಾಡುವುದಿಲ್ಲ. ಸರ್ಕಾರಿ ಶಾಲೆಗಳಲ್ಲಿರುವ ಸೌಲಭ್ಯ, ಖಾಸಗಿ ಶಾಲೆಗಳಲ್ಲಿ ಸಿಗುವುದಿಲ್ಲ. ಸರಿಯಾಗಿ ಪಾಠ ಮಾಡಿದರೆ ಮಕ್ಕಳು ಶಾಲೆಗೆ ಸೇರುತ್ತಾರೆ. ಶೂನ್ಯ ದಾಖಲಾತಿಗೆ ನಮ್ಮ ತಪ್ಪುಗಳೇ ಕಾರಣ. ಪೋಷಕರೊಂದಿಗೆ ಸಭೆ ಮಾಡಿ, ಶೂನ್ಯ ದಾಖಲಾತಿಗೆ ನಿಖರ ಕಾರಣಗಳೇನು? ಮುಂದೆ ಯಾವ ಕ್ರಮ ವಹಿಸಬೇಕು? ಎಂಬುದರ ಬಗ್ಗೆ ಸಮಗ್ರ ವರದಿ ನೀಡಬೇಕೆಂದು ಹೇಳಿದರು.

ಗುರು ನೆನೆದ ಸಿಎಂ: ನಾನು ಶಾಲೆಗೆ ಸೇರಲು ರಾಜಪ್ಪ ಮೇಷ್ಟ್ರು ಕಾರಣ. ಅವರು ಮನೆ ಮನೆಗೆ ಹೋಗಿ ಮಕ್ಕಳನ್ನು ಶಾಲೆಗೆ ಕರೆತರುತ್ತಿದ್ದರು. ನನ್ನನ್ನೂ ಸೇರಿದಂತೆ ಮೂವರನ್ನು ನೇರವಾಗಿ ಐದನೇ ತರಗತಿಗೆ ದಾಖಲು ಮಾಡಿಕೊಂಡು ಪಾಠ ಹೇಳಿಕೊಟ್ಟರು. ಅವರು ಮುಖ್ಯೋಪಾಧ್ಯಯರಾಗಿ ಬರದಿದ್ದರೆ ನಾನು ಶಾಲೆಗೇ ಸೇರುತ್ತಿರಲಿಲ್ಲ ಎಂದು ಸ್ಮರಿಸಿ ಕೊಂಡು ಸಿಎಂ ಸಿದ್ದರಾಮಯ್ಯ, ಈಗಿನ ಶಿಕ್ಷಕರಿಗೆ ಮಕ್ಕಳ ಪೋಷಕರೊಂದಿಗೆ ಸಂಪರ್ಕವೇ ಇರುವುದಿಲ್ಲ. ಹಿಂದೆ ಶಿಕ್ಷಕರು ಆಯಾ ಗ್ರಾಮಗಳಲ್ಲೇ ಬಾಡಿಗೆ ಮನೆಯಲ್ಲಿ ವಾಸವಿರುತ್ತಿದ್ದರು. ಆದರೆ ಈಗಿನ ಶಿಕ್ಷಕರು ನಗರಗಳಲ್ಲಿ ವಾಸವಿರುತ್ತಾರೆ. ಮಧ್ಯಾಹ್ನ 3 ಗಂಟೆಗೇ ಶಾಲೆಯಿಂದ ಮನೆಯತ್ತ ತೆರಳುತ್ತಾರೆ ಎಂದು ಹೇಳಿದರು.

ಉತ್ತಮ ಆರೋಗ್ಯ ಸೇವೆ ನೀಡಿ: ಆರೋಗ್ಯ ಇಲಾಖೆಯಲ್ಲಿನ ಸಮಸ್ಯೆ ಹಾಗೂ ಪ್ರಗತಿ ಬಗ್ಗೆ ಜಿಲ್ಲಾ ಆರೋಗ್ಯಾಧಿಕಾರಿ, ಮೈಸೂರು ವೈದ್ಯಕೀಯ ಕಾಲೇಜು ಹಾಗೂ ಸಂಶೋಧನಾ ಸಂಸ್ಥೆ ಡೀನ್ ಹಾಗೂ ಜಿಲ್ಲಾ ಸರ್ಜನ್‌ನಿಂದ ಮಾಹಿತಿ ಪಡೆದ ಸಿಎಂ ಸಿದ್ದರಾಮಯ್ಯ, ನಾವು ತೀರ್ಮಾನ ಮಾಡಿ 15 ದಿನಗಳಾದರೂ ಎಂಆರ್‌ಐ ಸೌಲಭ್ಯ ಇನ್ನೂ ಕಲ್ಪಿಸಿಲ್ಲವೇಕೆ?. ಜಿಲ್ಲಾ ಆಸ್ಪತ್ರೆಗಳಲ್ಲಿ ಅಲ್ಟ್ರಾಸೌಂಡ್, ಸಿಟಿ ಸ್ಕ್ಯಾನ್, ಎಂಆರ್‌ಐ, ಎಕ್ಸ್‌ರೇ ಸೇರಿದಂತೆ ಎಲ್ಲಾ ತಪಾಸಣಾ ವ್ಯವಸ್ಥೆ ಇರಬೇಕು. ಇಲ್ಲವಾದರೆ ರೋಗಿಗಳು ಅನಿವಾರ್ಯವಾಗಿ ಖಾಸಗಿ ಆಸ್ಪತ್ರೆಗಳಿಗೆ ಹೋಗಬೇಕಾಗುತ್ತದೆ. ಬಡವರು ಹಣ ಕೊಡುವುದು ಹೇಗೆ?. ರಾಷ್ಟ್ರೀಯ ಆರೋಗ್ಯ ಮಿಷನ್ ಯೋಜನೆಯ ಹಣ ಬಳಕೆಯೇ ಆಗುತ್ತಿಲ್ಲ. ನಮ್ಮ ಗ್ರಾಮ (ಸಿದ್ದರಾಮನಹುಂಡಿ)ದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಕ್ವಾಟ್ರರ್ಸ್ ಇದೆ. ಆದರೆ ಅಲ್ಲಿ ವೈದ್ಯರೇ ಉಳಿದುಕೊಳ್ಳುವುದಿಲ್ಲ. ಜಿಲ್ಲಾ ಆರೋಗ್ಯಾಧಿಕಾರಿ, ಜಿಲ್ಲಾ ಸರ್ಜನ್, ಮತ್ತು ಮೆಡಿಕಲ್ ಕಾಲೇಜಿನ ಡೀನ್‌ಗಳಿಗೆ ಪ್ರತ್ಯೇಕ ಜವಾಬ್ದಾರಿಗಳಿರುತ್ತವೆ. ನಿಮ್ಮ ಜವಾಬ್ದಾರಿಯನ್ನು ಪರಸ್ಪರ ಹೊಂದಾಣಿಕೆಯಿಂದ ನಿರ್ವಹಿಸದಿದ್ದರೆ ಆರೋಗ್ಯ ವ್ಯವಸ್ಥೆ ಏರುಪೇರಾಗುತ್ತದೆ. ಲೋಪವಾದರೆ ಸುಮ್ಮನಿರುವುದಿಲ್ಲ. ಜಿಲ್ಲಾ ಆರೋಗ್ಯಾಧಿಕಾರಿ, ತಾಲೂಕು ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರ, ಉಪಕೇಂದ್ರಗಳಿಗೆ ಭೇಟಿ ನೀಡಿ, ಪರಿಶೀಲಿಸಬೇಕು. ಡೈರಿ ನಿರ್ವಹಣೆ ಮಾಡಬೇಕು. ಮೈಸೂರು ವೈದ್ಯಕೀಯ ಕಾಲೇಜಿನ ಶತಮಾನೋತ್ಸವ ಹಿನ್ನೆಲೆಯಲ್ಲಿ ಕೆ.ಆರ್.ಆಸ್ಪತ್ರೆ ಉನ್ನತೀಕರಿಸುವುದು ಸೇರಿದಂತೆ ಇನ್ನಿತರೆ ಅಗತ್ಯತೆಗಳನ್ನು ಪೂರೈಸುವ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ. ಮಹದೇವಪ್ಪ ಅವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗುವುದು ಎಂದರು. ಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯರು, ಸಿಬ್ಬಂದಿಗಳೇ ಇರುವುದಿಲ್ಲ. ರೋಗಿಗಳನ್ನು ಕೆ.ಆರ್.ಆಸ್ಪತ್ರೆಗೆ ಸಾಗಿ ಹಾಕುತ್ತಾರೆ ಎಂದು ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ದೂರಿದರು. ಮಹಿಳೆ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ವೈದ್ಯರೇ ಇರುವುದಿಲ್ಲ. ಆರೋಗ್ಯ ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡುತ್ತಿಲ್ಲ ಎಂದು ವಿಧಾನಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಬೇಸರ ವ್ಯಕ್ತಪಡಿಸಿದರು. ಹೀಗೆ ಜನಪ್ರತಿನಿಧಿಗಳಿಂದ ದೂರುಗಳು ಕೇಳಿಬಂದ ಹಿನ್ನೆಲೆಯಲ್ಲಿ ಎಲ್ಲವೂ ಸರಿಯಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು.

ಸುಳ್ಳು ಸುದ್ದಿ ಹಬ್ಬಿಸುವವರು, ಶಾಂತಿ ಕದಡುವವರ ಸೆಂಟ್ರಲ್ ಜೈಲಿಗೆ ಕಳುಹಿಸಿ

ಡ್ರಗ್ಸ್ ತಡೆ ಜೊತೆಗೆ ಸಾಮಾಜಿಕ ಜಾಲತಾಣಗಳ ಮೇಲೆ ನಿಗಾ ಇಡಬೇಕು. ಸುಳ್ಳು ಸುದ್ದಿ ಹರಡುವವರು, ತೇಜೋವಧೆ ಮಾಡುವವರು, ಸಮಾಜದ ಶಾಂತಿ ಕದಡುವವರನ್ನು ಸುಮ್ಮನೆ ಬಿಡಬೇಡಿ. ಈ ಬಗ್ಗೆ ದೂರು ಬರುವವರೆಗೂ ಕಾಯದೆ ಸುಮೋಟೋ ಕೇಸ್ ದಾಖಲಿಸಿ. ಜಾಮೀನು ರಹಿತ ಅಪರಾಧವೆಂದು ಪರಿಗಣಿಸಿ ಎಫ್‌ಐಆರ್ ದಾಖಲಿಸಿ, ಆರೋಪಿಗಳನ್ನು ಕೂಡಲೇ ಬಂಧಿಸಿ, ಸೆಂಟ್ರಲ್ ಜೈಲಿಗೆ ಕಳುಹಿಸುವ ಕೆಲಸ ಮಾಡಬೇಕು ಎಂದು ಡಿಐಜಿ ಬೋರಲಿಂಗಯ್ಯ, ನಗರ ಪೊಲೀಸ್ ಆಯುಕ್ತ ರಮೇಶ್ ಬಾನೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್‌ಗೆ ಖಡಕ್ ಸೂಚನೆ ನೀಡಿದರು.

ಹುಣಸೂರು ತಾಲೂಕು ಆಸ್ಪತ್ರೆ ನೂತನ ಕಟ್ಟಡಕ್ಕೆ ಯಂತ್ರೋಪಕರಣ ಹಾಗೂ ಸೌಕರ್ಯಕ್ಕೆ ಹೆಚ್ಚುವರಿ ಅನುದಾನ ಬಿಡುಗಡೆಗೆ ಸಂಸದ ಪ್ರತಾಪ್ ಸಿಂಹ ಹಾಗೂ ಶಾಸಕ ಜಿ.ಡಿ.ಹರೀಶ್‌ಗೌಡ ಒತ್ತಾಯಿಸಿದರು.

ಈ ಬಗ್ಗೆ ಕ್ರಮ ವಹಿಸುವುದಾಗಿ ತಿಳಿಸಿದ ಮುಖ್ಯಮಂತ್ರಿಗಳು, ಬಿಳಿಕೆರೆ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಬೇಕೆಂಬ ಸಂಸದ ಪ್ರತಾಪ್ ಸಿಂಹ ಮನವಿಗೂ ಸಕಾರಾತ್ಮಕವಾಗಿ ಸ್ಪಂದಿಸಿದರು.

ಐದು ಸ್ಥಾನದೊಳಗಿರಬೇಕು: ಇಲ್ಲ ನಿಮ್ಮ ವಿರುದ್ಧ ಕ್ರಮ

ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಮೈಸೂರು ಜಿಲ್ಲೆ 14ನೇ ಸ್ಥಾನದಲ್ಲಿರುವುದು ಹಾಗೂ ಜಿಲ್ಲೆಯ 26 ಶಾಲೆಗಳಲ್ಲಿ ಶೂನ್ಯ ದಾಖಲಾತಿ ವಿಷಯ ತಿಳಿದು ಸಿಟ್ಟಿಗೆದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, ಮಹಾರಾಜರ ಕಾಲದಿಂದಲೂ ಮೈಸೂರಿನಲ್ಲಿ ಶಿಕ್ಷಣಕ್ಕೆ ಪ್ರೋತ್ಸಾಹವಿದ್ದು, ಉತ್ತಮ ಸಾಧನೆಯಾಗಿದೆ. ಆದರೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶದಲ್ಲಿ ಜಿಲ್ಲೆ 14ನೇ ಸ್ಥಾನದಲ್ಲಿರುವುದು ನಾಚಿಕೇಡಿನ ಸಂಗತಿ. ಇದನ್ನು ಯಾವ ಮುಖ ಇಟ್ಟುಕೊಂಡು ಹೇಳುತ್ತೀರಿ. ಮುಂದಿನ ಬಾರಿ 1ರಿಂದ 5ನೇ ಸ್ಥಾನದಲ್ಲಿ ಮೈಸೂರು ಜಿಲ್ಲೆ ಇರಬೇಕು. ಈ ನಿಟ್ಟಿನಲ್ಲಿ ಈಗಿನಿಂದಲೇ ಗುರಿ ಇಟ್ಟುಕೊಂಡು ಕೆಲಸ ಮಾಡಬೇಕು. ಇದನ್ನು ಸಾಧಿಸದಿದ್ದರೆ ನಿಮ್ಮ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಡಿಡಿಪಿಐ ಹೆಚ್.ಕೆ.ಪಾಂಡು ಅವರನ್ನು ಮುಖ್ಯಮಂತ್ರಿಗಳು ಎಚ್ಚರಿಸಿದರು.



ಸ್ವಲ್ಪ ದಿನ ಹೊಸ ಬಡಾವಣೆ ನಿರ್ಮಾಣಕ್ಕೆ ಅನುಮೋದನೆ ನೀಡಬೇಡಿ

ಮುಡಾ ಆಯುಕ್ತರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ

ಮೈಸೂರು,ಆ.28(ಎಸ್‌ಬಿಡಿ)– ಸ್ವಲ್ಪ ದಿನ ಹೊಸ ಬಡಾವಣೆ ನಿರ್ಮಾಣಕ್ಕೆ ಅನುಮೋದನೆ ನೀಡಬೇಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮುಡಾ ಆಯುಕ್ತರಿಗೆ ಸೂಚನೆ ನೀಡಿದರು.

ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್ ಶ್ರೀವತ್ಸ ಮಾತನಾಡಿ, 21 ಬಡಾವಣೆಗಳಲ್ಲಿ ಯಾವುದೇ ಮೂಲ ಸೌಕರ್ಯಗಳಿಲ್ಲ. ವಾರದಲ್ಲಿ 2 ದಿನ ಅದರಲ್ಲೂ 2 ಗಂಟೆಗಳ ಕಾಲ ಮಾತ್ರ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಹಲವು ಬಡಾವಣೆಗಳು ಮುಡಾದಿಂದ ನಗರ ಪಾಲಿಕೆಗೆ ಹಸ್ತಾಂತರ ಆಗಿದೆ ಎನ್ನುತ್ತಾರೆ. ಆದರೆ ಯಾವ ಸ್ಥಳೀಯ ಸಂಸ್ಥೆಯಲ್ಲೂ ತೆರಿಗೆ ಕಟ್ಟಿಸಿಕೊಳ್ಳದ ಕಾರಣ ನಿವಾಸಿಗಳು ಕಂಗಾಲಾಗಿದ್ದಾರೆ ಎಂದು ತಿಳಿಸಿದರು.

ಆಗ ಮುಖ್ಯಮಂತ್ರಿಗಳು, ಬಡಾವಣೆಗಳನ್ನು ಪಾಲಿಕೆಗೆ ಹಸ್ತಾಂತರಿಸುವಾಗ ಮೂಲ ಸೌಕರ್ಯ ಕಲ್ಪಿಸಲಾಗಿದೆಯೇ ಎಂದು ಪರಿಶೀಲಿಸುವುದಿಲ್ಲವೇ? ಎಂದು ಪ್ರಶ್ನಿಸಿದರು. ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಪರಿಶೀಲಿಸಿದ ಬಳಿಕವೇ ಹಸ್ತಾಂತರ ಪ್ರಕ್ರಿಯೆ ನಡೆಸಲಾಗುವುದು. 10–15 ವರ್ಷಗಳ ಹಿಂದಿನ ಬಡಾವಣೆಗಳಲ್ಲಿ ಮಾತ್ರ ಈ ಸಮಸ್ಯೆ ಇದೆ ಎಂದರು.

ಬಡಾವಣೆಗೆ ಅನುಮೋದನೆ ನೀಡಿ, ಸುಮ್ಮನೆ ಕುಳಿತುಕೊಳ್ಳುವುದಲ್ಲ. ಇದು ಮುಡಾ ಅಧಿಕಾರಿಗಳ ಜವಾಬ್ದಾರಿ. ಯಾವುದೇ ಕಾರಣಕ್ಕೂ ಸೌಕರ್ಯಗಳಿಲ್ಲದ ಬಡಾವಣೆಗಳನ್ನು ಪಾಲಿಕೆಗೆ ಹಸ್ತಾಂತರ ಮಾಡಬಾರದು. ಬೆಂಗಳೂರಿಗೆ ಹೋಲಿಸಿದರೆ ಮೈಸೂರು ಪರವಾಗಿಲ್ಲ. ಆದರೆ ನಿರ್ಲಕ್ಷ ಮಾಡಿದರೆ ಹಾಳಾಗುತ್ತದೆ. ಹಾಗಾಗಿ ಸ್ವಲ್ಪ ದಿನ ಹೊಸ ಬಡಾವಣೆಗಳಿಗೆ ಅನುಮತಿ ನೀಡುವುದು ಬೇಡ. ಮುಡಾಗೆ ಸಂಬಂಧಿಸಿದಂತೆ ಪ್ರತ್ಯೇಕ ಸಭೆ ಮಾಡಿ, ಚರ್ಚೆ ನಡೆಸೋಣ ಎಂದು ಸಿಎಂ ಸೂಚನೆ ನೀಡಿದರು.

ಮುಡಾ ವತಿಯಿಂದ ಬಡವರಿಗೆ ಒಂದೂ ನಿವೇಶನ ನೀಡಿಲ್ಲ. ರಿಯಲ್ ಎಸ್ಟೇಟ್ ಉದ್ಯಮಿಗಳಿಗೆ ಅನುಕೂಲಕಾರಿಯಾಗಿದೆ ಎಂದು ಎಂಎಲ್‌ಸಿ ಹೆಚ್.ವಿಶ್ವನಾಥ್ ಆರೋಪಿಸಿದರು. ಸಂಸದ ಪ್ರತಾಪ್ ಸಿಂಹ ಮಾತನಾಡಿ, ಜನಪ್ರತಿನಿಧಿಗಳೇ ಮುಡಾ ಆಡಳಿತ ಮಂಡಳಿಯಲ್ಲಿದ್ದಾರೆ. ಸಭೆಯಲ್ಲೇ ಈ ಬಗ್ಗೆ ಮಾತನಾಡಬೇಕಿತ್ತು. ಈಗ ಮುಡಾವನ್ನು ಕಟಕಟೆಗೆ ತರುವುದು ಬೇಡ. ಔಟರ್ ಪೆರಿಫೆರಲ್ ರಿಂಗ್ ರಸ್ತೆ ಹಾಗೂ 1 ನಗರಸಭೆ, 4 ಪಟ್ಟಣ ಪಂಚಾಯ್ತಿ, 5 ಗ್ರಾಮ ಪಂಚಾಯ್ತಿ ವ್ಯಾಪ್ತಿ ಒಳಗೊಂಡ ಗ್ರೇಟರ್ ಮೈಸೂರು ಯೋಜನೆ ನಮ್ಮ ಗುರಿಯಾಗಬೇಕು ಎಂದರು.

ಇದಕ್ಕೆ ಮುಖ್ಯಮಂತ್ರಿಗಳು ಪ್ರತಿಕ್ರಿಯಿಸಿ, ಪಾಲಿಕೆ ಚುನಾವಣೆ ಮುಗಿದು ನಂತರ ಈ ಸಂಬಂಧ ಮುಂದು ವರೆಯಬೇಕು. ಚುನಾವಣೆ ಹೊಸ್ತಿಲಲ್ಲಿ ಕ್ರಮಕ್ಕೆ ಮುಂದಾದರೆ ನ್ಯಾಯಾಲಯ ಛೀಮಾರಿ ಹಾಕುತ್ತದೆ. ನಗರ ವ್ಯವಸ್ಥಿತವಾಗಿ ಬೆಳೆಯದಿದ್ದರೆ ಬೆಂಗಳೂರಿನಂತೆ ಸಮಸ್ಯೆಯ ಗೂಡಾಗುತ್ತದೆ. ಮೈಸೂರು ನಗರಕ್ಕೆ ಸಂಬಂಧಪಟ್ಟಂತೆ ಪ್ರತ್ಯೇಕ ಸಭೆ ನಡೆಸಿ, ಚರ್ಚೆ ಮಾಡೋಣ. ಹಾಗೆಯೇ ಸಿಎ ನಿವೇಶನಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ. ಪಡೆದ ಉದ್ದೇಶಕ್ಕೆ ಬಳಸಿಕೊಳ್ಳದ ನಿವೇಶನಗಳನ್ನು ಕೂಡಲೇ ವಶಪಡಿಸಿಕೊಳ್ಳಿ ಎಂದು ಮುಡಾ ಅಧಿಕಾರಿಗಳಿಗೆ ಸೂಚಿಸಿದರು.

ನಗರ ಪ್ರದಕ್ಷಿಣೆಗೆ ಸೂಚನೆ: ರಾಜಕಾಲುವೆ ನಿರ್ವಹಣೆ ಇಲ್ಲದ ಕಾರಣ ಮಳೆ ಬಂದಾಗ ನಮ್ಮ ಕ್ಷೇತ್ರದ 2–3 ಬಡಾವಣೆಗಳು ಜಲಾವೃತವಾಗುತ್ತವೆ ಎಂದು ಶಾಸಕ ಶ್ರೀವತ್ಸ ಹೇಳಿದರು. ಇದಕ್ಕೆ ಸಿಎಂ ಸಿದ್ದರಾಮಯ್ಯ ಪ್ರತಿಕ್ರಿಯಿಸಿ, ಮೈಸೂರು ನಗರ ಮೊದಲಿನಿಂದಲೂ ಸ್ವಚ್ಛತೆಗೆ ಪ್ರಸಿದ್ಧಿ. ಹಾಗಾಗಿ ಸ್ವಚ್ಛತೆಗೆ ಆದ್ಯತೆ ನೀಡುವುದರ ಜೊತೆಗೆ ಕುಡಿಯುವ ನೀರು, ರಸ್ತೆ, ಬೀದಿದೀಪ ಸೇರಿದಂತೆ ಎಲ್ಲಾ ವ್ಯವಸ್ಥೆಯೂ ಸಮರ್ಪಕವಾಗಿರಬೇಕು. ಈ ನಿಟ್ಟಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಜಿಲ್ಲಾಧಿಕಾರಿ, ಜಿಪಂ ಸಿಇಓ, ಪಾಲಿಕೆ ಆಯುಕ್ತರು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಒಂದೇ ವಾಹನದಲ್ಲಿ ನಗರ ಪ್ರದಕ್ಷಿಣೆ ನಡೆಸಿ. ಸಾಧ್ಯವಾದರೆ ಸ್ಥಳದಲ್ಲೇ ಸಮಸ್ಯೆ ಪರಿಹರಿಸಿ, ಸರ್ಕಾರ ಮಟ್ಟದಲ್ಲಿ ಆಗಬೇಕಿದ್ದರೆ ಪ್ರಸ್ತಾವನೆ ಕಳುಹಿಸಿ ಎಂದರು.

ಸಕಾಲಕ್ಕೆ ಟಿಸಿ ಬದಲಿಸಿ: ಇಂಧನ ಇಲಾಖೆ ಪ್ರಗತಿ ಬಗ್ಗೆ ಮಾಹಿತಿ ಪಡೆದ ಸಿಎಂ, ಟ್ರಾನ್ಸ್‌ಫಾರ್ಮರ್ ಬದಲಿಸಲು ಮೂರು ದಿನ ಸಾಕು ಎಂದು ಈಗ 7 ದಿನ ಬೇಕಾಗುತ್ತದೆ ಎನ್ನುತ್ತೀರಿ. ಸತ್ಯ ಹೇಳಬೇಕು. ಸಾಕಷ್ಟು ಟಿಸಿಗಳು ಲಭ್ಯವಿದ್ದು, 9 ದುರಸ್ತಿ ಕೇಂದ್ರಗಳಿದ್ದರೂ ಸಕಾಲದಲ್ಲಿ ಟಿಸಿ ಬದಲಿಸಲು ಏಕೆ ಸಾಧ್ಯವಾಗುತ್ತಿಲ್ಲ. ಎಂದು ಪ್ರಶ್ನಿಸಿದರು. ಸಚಿವ ಕೆ.ವೆಂಕಟೇಶ್, ಶಾಸಕರಾದ ಡಿ.ರವಿಶಂಕರ್, ಜಿ.ಡಿ.ಹರೀಶ್‌ಗೌಡ, ಸೆಸ್ಕ್ ಅಧಿಕಾರಿಗಳು ಜನರ ಸಮಸ್ಯೆಗೆ ಸರಿಯಾಗಿ ಸ್ಪಂದಿಸುವುದಿಲ್ಲ ಎಂದು ದೂರಿದ್ದಕ್ಕೆ ಪ್ರತಿಕ್ರಿಯಿಸಿ, ನಿಗದಿತ ಸಮಯಕ್ಕೆ ಟಿಸಿ ಬದಲಿಸಬೇಕು. ಕುಡಿಯುವ ನೀರಿಗೆ ಯಾವುದೇ ಕಾರಣಕ್ಕೂ ತೊಂದರೆಯಾಗಬಾರದು. ಈ ಸಂಬಂಧ ಜಿಪಂ ಸಿಇಓ ನಿಗಾ ವಹಿಸಬೇಕು. ಸಮರ್ಪಕವಾಗಿ ಕುಡಿಯುವ ನೀರು ಕಲ್ಪಿಸಲು ಯಾವುದೇ ಕ್ರಮ ವಹಿಸಿದರೂ ಸರ್ಕಾರ ನೆರವು ನೀಡಲಿದೆ ಎಂದು ಸಿದ್ದರಾಮಯ್ಯ ಭರವಸೆ ನೀಡಿದರು.

ಜನರೇ ಸರ್ಕಾರದ ಮಾಲೀಕರು; ಅವರ ಕಚೇರಿಗೆ ಅಲೆಸದೇ ಕೆಲಸ ಮಾಡಿಕೊಡಿ

● ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಿವಿಮಾತು


● ಜನರ ನಿರೀಕ್ಷೆಯಂತೆ ಕೆಲಸ ಮಾಡದಿದ್ದರೆ ಕ್ರಮ ಖಚಿತ

ಮೈಸೂರು: ಜನರ ನಿರೀಕ್ಷೆಗೆ ತಕ್ಕಂತೆ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವ ಮೂಲಕ ಅಭಿವೃದ್ಧಿಗೆ ಶ್ರಮಿಸಬೇಕು. ಇಲ್ಲವಾದರೆ ಶಿಸ್ತು ಕ್ರಮ ಖಚಿತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಎಚ್ಚರಿಕೆ ಸಂದೇಶ ರವಾನಿಸಿದ್ದಾರೆ.

ಏಳು ಗಂಟೆ ಸುದೀರ್ಘ ಅವಧಿಯ ಕೆಡಿಪಿ ಸಭೆಯ ಕೊನೆಯಲ್ಲಿ ಸುಮಾರು 20 ನಿಮಿಷ ಅಧಿಕಾರಿಗಳಿಗೆ ನೀತಿ ಪಾಠ ಮಾಡಿದ ಅವರು, ಅಧಿಕಾರಿ ಹಾಗೂ ಸಿಬ್ಬಂದಿ ಜನರಿಗೆ ಸಿಗಬೇಕು. ಖಾತೆ ಮಾಡಿಸಿ ಕೊಡಿ, ಜಾತಿ ಪ್ರಮಾಣ ಪತ್ರ ಕೊಡಿಸಿ ಎಂದು ಜನ ವಿಧಾನಸೌಧಕ್ಕೆ ಬರುತ್ತಾರೆ. ನೀವು ವಿಶ್ವಾಸದಿಂದ ಜನರ ಕೆಲಸ ಮಾಡಿದ್ದರೆ ಸಣ್ಣಪುಟ್ಟ ಕೆಲಸಗಳಿಗೆಲ್ಲಾ ನನ್ನ ಹತ್ತಿರ ಏಕೆ ಬರುತ್ತಾರೆ. ಜನರೇ ನಮ್ಮ ಮಾಲೀಕರು. ನಾವು ಜನಗಳ ಸೇವಕರಷ್ಟೇ. ಜನರ ಹಣದಲ್ಲಿ ನಿಮಗೆ, ನಮಗೆ ಎಲ್ಲಾ ರೀತಿಯ ಸವಲತ್ತುಗಳು ಸಿಗುತ್ತಿವೆ. ಹೀಗಾಗಿ ಜನರನ್ನು ಸರ್ಕಾರಿ ಕಚೇರಿಗಳಿಗೆ ಅಲೆಸದಂತೆ ಕೆಲಸ ಮಾಡಿಕೊಡಬೇಕು. ಜನ ಸಣ್ಣ ಕೆಲಸಗಳಿಗೆ ವಿಧಾನಸೌಧಕ್ಕೆ ಬರುತ್ತಾರೆ ಎಂದರೆ, ನನ್ನನ್ನು ಹುಡುಕಿಕೊಂಡು ಬರುತ್ತಾರೆ ಎಂದರೆ ನೀವು ಸರಿಯಾಗಿ ಕೆಲಸ ಮಾಡುತ್ತಿಲ್ಲ ಎಂದೇ ಅರ್ಥ. ಇದು ನಿಮಗೆ ಸರಿಯಾಗಿ ಅರ್ಥ ಮಾಡಿಕೊಳ್ಳದಿದ್ದರೆ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಜನ ಬರಿಗಾಲಿನಲ್ಲಿ ಬಂದರೂ, ಚಡ್ಡಿಯಲ್ಲಿ ಬಂದರೂ ಅವರೇ ಸರ್ಕಾರದ ಮಾಲೀಕರು. ಕಾರಿನಲ್ಲಿ ಓಡಾಡುವ ಅಧಿಕಾರಿಗಳು ಬರಿಗಾಲಿನಲ್ಲಿ ಬರುವವರನ್ನು ಗೌರವದಿಂದ ಕಾಣಬೇಕು. ಅವರ ಸಮಸ್ಯೆ ಆಲಿಸಿ ಪರಿಹಾರ ಒದಗಿಸಿ ಕೊಡಬೇಕು. ಮೊದಲು ನನ್ನ ಜಿಲ್ಲೆಯಲ್ಲಿ ವ್ಯವಸ್ಥೆ ಚುರುಕಾಗದಿದ್ದರೆ ಬೇರೆ ಜಿಲ್ಲೆಗಳಲ್ಲಿ ಹೇಗೆ ಸಾಧ್ಯವಾಗುತ್ತದೆ. ಜಿಲ್ಲಾಡಳಿತ ಇನ್ನಷ್ಟು ಚುರುಕಾಗಿ, ನಿಯಮ ಬದ್ಧವಾಗಿ, ಕಾಲಮಿತಿಯಲ್ಲಿ ಕೆಲಸ ಮಾಡದಿದ್ದರೆ ಸರ್ಕಾರ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಜನ ಯಾವ ನಿರೀಕ್ಷೆ ಇಟ್ಟುಕೊಂಡು ಸರ್ಕಾರವನ್ನು ಬದಲಾಯಿಸಿದ್ದಾರೆ ಎನ್ನುವುದನ್ನು ಅರ್ಥಮಾಡಿಕೊಂಡು ಕರ್ತವ್ಯ ನಿರ್ವಹಿಸಿ. ಶಿಕ್ಷಣ, ಆರೋಗ್ಯ ಸೂಚ್ಯಂಕ ಸೇರಿ ಎಲ್ಲಾ ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಮೈಸೂರು ಮಾದರಿ ಜಿಲ್ಲೆಯಾಗಲೇಬೇಕು. ಆ ರೀತಿ ದಕ್ಷತೆ ಮತ್ತು ಕಾರ್ಯಕ್ಷಮತೆ ಪ್ರದರ್ಶಿಸಿ. 6 ತಿಂಗಳ ಬಳಿಕ ಮತ್ತೆ ಕೆಡಿಪಿ ಸಭೆ ನಡೆಸುತ್ತೇನೆ. ಅಷ್ಟರೊಳಗೆ ಪರಿಸ್ಥಿತಿ ಸುಧಾರಿಸಬೇಕು. ಇಲ್ಲದಿದ್ದರೆ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಹೊಣೆ ಮಾಡುತ್ತೇನೆ. ಮಳೆ ಅಭಾವ ಇರುವುದರಿಂದ ಜನರು, ರೈತರು ಸಂಕಷ್ಟದಲ್ಲಿದ್ದಾರೆ. ಹೆಚ್ಚಿನ ರೀತಿಯಲ್ಲಿ ಸ್ಪಂದಿಸಬೇಕು. ಪೊಲೀಸ್ ವ್ಯವಸ್ಥೆಯಲ್ಲೂ ಸುಧಾರಿಸಬೇಕು ಎಂದರು.


ವಿದ್ಯಾರ್ಥಿಗಳು ಕೋಮುವಾದದಿಂದ ದೂರವಿರಬೇಕು...!

● ಮಾನಸಗಂಗೋತ್ರಿ ವಿದ್ಯಾರ್ಥಿಗಳೊಂದಿಗೆ ಸಿಎಂ ಸಿದ್ದರಾಮಯ್ಯ ಸಂವಾದ ● ಕೋಮುವಾದಿಗಳ ವಿರುದ್ಧ ಗೆಲುವು ಸಾಧಿಸಲು ಶ್ರಮಿಸಿದ್ದಕ್ಕಾಗಿ ಅಭಿನಂದನೆ



ಸಿದ್ದರಾಮಯ್ಯ ಅವರ ರಾಜಕೀಯ ಜೀವನ, ಬೆಳೆದು ಬಂದ ಹಾದಿ, ಎದುರಿಸಿದ ಅವಮಾನಗಳ ಸಮಗ್ರ ಮಾಹಿತಿ ಕಲೆ ಹಾಕಿ ಸಾಕ್ಷ್ಯಚಿತ್ರ ತಯಾರಿಸಿದ್ದು, ಅವರ ಒಪ್ಪಿಗೆ ಮೇರೆಗೆ ಸಾಕ್ಷ್ಯಚಿತ್ರ ಪ್ರಸಾರ ಮಾಡಿದರು. ವಿದ್ಯಾರ್ಥಿಗಳೊಂದಿಗೆ ಸಾಕ್ಷ್ಯಚಿತ್ರ ವೀಕ್ಷಿಸಿದ ಸಿದ್ದರಾಮಯ್ಯ ಸಂತಸಪಟ್ಟರು.

ಸೆಲ್ಫಿಗೆ ನೂಕುನುಗ್ಗಲು



ಸಿದ್ದರಾಮಯ್ಯ ಅವರೊಡನೆ ಸೆಲ್ಫಿ ಕ್ಲಿಕ್ಕಿಸಲು ವಿದ್ಯಾರ್ಥಿಗಳು ಮುಗಿಬಿದ್ದರು. ಈ ವೇಳೆ ಸಭಾಂಗಣದಲ್ಲಿ ಕೆಲಕಾಲ ಗದ್ದಲ, ನೂಕು ನುಗ್ಗಲು ಏರ್ಪಟ್ಟಿತು. ಪೊಲೀಸರು ಮಧ್ಯೆ ಪ್ರವೇಶಿಸಿ ಎಲ್ಲರನ್ನು ಕೂರಿಸಿದರು.

ಮೈಸೂರು,ಆ.28(ಸಿಎನ್)–ಕೋಮುವಾದ, ಕೋಮು ಶಕ್ತಿಗಳ ವಿರುದ್ಧ ಗೆಲುವು ಸಾಧಿಸಲು ಶ್ರಮಿಸಿದ ಎಲ್ಲಾ ವಿದ್ಯಾರ್ಥಿಗಳಿಗೆ ಅಭಿನಂದನೆಗಳು. ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಿದ್ಧಾಂತದಂತೆ ವಿದ್ಯಾರ್ಥಿಗಳು ಕೋಮುವಾದದಿಂದ ದೂರ ಉಳಿಯಬೇಕು, ಸಹಿಷ್ಣುತಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿ ಹೇಳಿದರು.

ನಜರಬಾದ್‌ನ ಖಾಸಗಿ ಹೋಟೆಲ್‌ನಲ್ಲಿ ಸೋಮವಾರ ನಡೆದ 'ಮಾನಸ ಗಂಗೋತ್ರಿ ಸಂಶೋಧನಾ ವಿದ್ಯಾರ್ಥಿಗಳೊಂದಿಗೆ ಸಂವಾದ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸೆ.10ಕ್ಕೆ ಚುನಾವಣೆ ಮುಗಿದು 4 ತಿಂಗಳು ಕಳೆದಿವೆ. ನಿಮ್ಮೆಲ್ಲರ ಹೋರಾಟ, ಚುನಾವಣಾ ಪ್ರಚಾರದಿಂದ ದೊಡ್ಡ ಮಟ್ಟದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಿದೆ. ಹಾಗಾಗಿ ಈ ಚುನಾವಣೆಯಲ್ಲಿ ಕೋಮು ಶಕ್ತಿಗಳ ವಿರುದ್ಧ ಗೆಲುವು ಸಾಧಿಸಲು ಸಹಕಾರಿಯಾಗಿದೆ ಎಂದರು.

ಬಿಜೆಪಿ, ಆರ್‌ಎಸ್‌ಎಸ್ ಕೋಮುವಾದಿಗಳು: ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿದ ಸಂವಿಧಾನ ಸಹಿಷ್ಣುತೆ, ಸಹಬಾಳ್ವೆ, ಸಮಾನತೆ, ಜಾತ್ಯಾತೀತ ತತ್ವವನ್ನು ಪ್ರತಿಬಿಂಬಿಸುತ್ತದೆ. ಇದರ ವಿರುದ್ಧ ಇರುವವರು ಕೋಮುವಾದಿ ಶಕ್ತಿಗಳು. ಆರ್‌ಎಸ್‌ಎಸ್‌ನವರು ಸಂವಿಧಾನ ವಿರುದ್ಧವಾಗಿ ಮಾತನಾಡುತ್ತಾರೆ. ಬಿಜೆಪಿ ಹಾಗೂ ಆರ್‌ಎಸ್‌ಎಸ್ ಸಂವಿಧಾನದ ಆರ್ಟಿಕಲ್ 14 ಸಿ, 15–16 ಸಿ, 34 ಸಿ ಅನ್ನು ಉಲ್ಲಂಘಿಸಿವೆ. ಅಂತಹ ಕೋಮು ಶಕ್ತಿಗಳ ವಿರುದ್ಧ ಹೋರಾಟ ಮಾಡಿರುವುದು ನಿಜವಾಗಲೂ ಒಳ್ಳೆಯ ಬೆಳವಣಿಗೆಯಾಗಿದೆ ಎಂದರು.

ಸಂವಿಧಾನದ ರಕ್ಷಣೆಯಾಗಬೇಕು: ಸಂವಿಧಾನ ಉಳಿದರೆ ನಾವೆಲ್ಲಾ ಉಳಿಯುತ್ತೇವೆ. ಸಂವಿಧಾನ ಉಳಿಯದಿದ್ದರೇ ನಾವು ಯಾರು ಉಳಿಯುವುದಿಲ್ಲ. ಸಂವಿಧಾನ ಇಲ್ಲದಿದ್ದರೆ ನಾನು ಮುಖ್ಯಮಂತ್ರಿ ಆಗುತ್ತಿರಲಿಲ್ಲ. ನರೇಂದ್ರ ಮೋದಿ ಪ್ರಧಾನಿ ಆಗುತ್ತಿರಲಿಲ್ಲ. ಹಾಗಾಗಿ ಸಂವಿಧಾನದ ರಕ್ಷಣೆ ಜೊತೆ ಜೊತೆಗೆ ಅದರ ಮೌಲ್ಯ, ಆಶಯಗಳನ್ನು ಉಳಿಸಬೇಕಿದೆ. ಶಿಕ್ಷಣ, ಅಧಿಕಾರ, ಆಸ್ತಿ, ಸಮಾನ ಹಕ್ಕುಗಳು, ಸಮಾನ ಅವಕಾಶ ಇದ್ದರೆ ಸಮಾಜದಲ್ಲಿ ಪರಿವರ್ತನೆ ತರಲು ಸಾಧ್ಯವಾಗುತ್ತದೆ. ಸಂವಿಧಾನಕ್ಕೆ ಬದ್ಧರಾಗಿದ್ದವರ ಕೈಯ್ಯಲ್ಲಿ ಅಧಿಕಾರ ಇದ್ದರೆ 'ಯಾರಿಗೆ ಬಂತು ಎಲ್ಲಿಗೆ ಬಂತು 47ರ ಸ್ವಾತಂತ್ರ್ಯ' ಎಂಬ ಸಿದ್ದಲಿಂಗಯ್ಯ ಅವರ ಪ್ರಶ್ನೆಗೆ ಉತ್ತರ ಸಿಗಬಹುದು. ಇಲ್ಲದಿದ್ದರೆ ಪ್ರಶ್ನೆ ಪ್ರಶ್ನೆಯಾಗೇ ಉಳಿಯುತ್ತದೆ ಎಂದರು.

ಪಿಟಿಸಿಎಲ್ ಆಕ್ಟ್ ತಿದ್ದುಪಡಿ: ಚುನಾವಣೆ ಪೂರ್ವದಲ್ಲಿ ಪರಿಶಿಷ್ಟ ಜಾತಿಯವರ ಪಿಟಿಸಿಎಲ್ ಕಾಯ್ದೆ ತಿದ್ದುಪಡಿ ಮಾಡುತ್ತೇವೆ ಎಂದು ಹೇಳಿದ್ದೆವು. ಆದರೆ ಸುಪ್ರೀಂ ಕೋರ್ಟ್ ಆದೇಶದ ನಂತರ ಪಿಟಿಸಿಎಲ್ ಅನ್ನು ಎಸ್‌ಪಿಟಿಎಲ್‌ಪಿ ಕಾಯ್ದೆಯಡಿಯಲ್ಲಿ ತಂದಿದ್ದೇವೆ. ಇದರಿಂದ ಎಸ್‌ಸಿ, ಎಸ್‌ಟಿ ಸಮುದಾಯಕ್ಕೆ ಮತ್ತಷ್ಟು ಅನುಕೂಲವಾಗಲಿದೆ ಎಂದರು.

ಗ್ಯಾರಂಟಿ ಲೆಕ್ಕಾಚಾರ: 5 ಗ್ಯಾರಂಟಿಗಳನ್ನು ಈ ವರ್ಷವೇ ಜಾರಿಯಾಗುವಂತೆ ನೋಡಿಕೊಳ್ಳಲಾಗುವುದು. ಎಲ್ಲಾ ಯೋಜನೆಗಳಿಂದ ವರ್ಷಕ್ಕೆ 56 ಸಾವಿರ ಕೋಟಿ ಹಣ ಬೇಕು. ಈ ವರ್ಷದ ಯೋಜನೆ ಮುಂದುವರಿಸಲು ಇನ್ನು 36 ಸಾವಿರ ಕೋಟಿ ರೂ. ಬೇಕು. ಪ್ರತಿ ತಿಂಗಳು ಒಂದು ಕುಟುಂಬಕ್ಕೆ 4– 5 ಸಾವಿರ ಹಣ ಸಿಗಬೇಕು ಅಂತಹ ಕೆಲಸ ಮಾಡಿದ್ದೇವೆ. ಇದರಿಂದಾಗಿ 4 ಕೋಟಿ 4 ಲಕ್ಷ ಜನರಿಗೆ ಅನುಕೂಲವಾಗಿದೆ ಎಂದರು.

ಸಂವಿಧಾನದ ಆಶಯಕ್ಕೆ ಬದ್ಧ: ವಿದ್ಯಾರ್ಥಿಗಳ ಹೋರಾಟದ ಫಲದಿಂದಾಗಿ ರಾಜ್ಯದಲ್ಲಿ ನಿರೀಕ್ಷೆಗೂ ಮೀರಿದ ಫಲಿತಾಂಶ ಬಂದಿದೆ. ದಲಿತರು, ಅಲ್ಪಸಂಖ್ಯಾತರು, ಮುಸಲ್ಮಾನರು, ಕ್ರಿಶ್ಚಿಯನ್ನರು, ಬಡವರು ಮತದಾನ ಮಾಡಿ ಗೆಲ್ಲಿಸಿದ್ದಾರೆ. ಕರ್ನಾಟಕದಲ್ಲಿ 42.88% ಮತದಾನ ನಮ್ಮ ಪಕ್ಷಕ್ಕೆ ಬಂದಿದೆ. ಇದರಲ್ಲಿ ಯುವಶಕ್ತಿ ಪಾಲು ಹೆಚ್ಚಿದೆ.ಸಂವಿಧಾನ ಬದ್ಧವಾಗಿ, ಎಲ್ಲಾ ತಳಮಟ್ಟದ ಸಮುದಾಯಕ್ಕೆ ನ್ಯಾಯ ದೊರಕಿಸಿಕೊಡುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ಸಭೆಯಲ್ಲಿ ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್, ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ, ಶಾಸಕ ಕೆ.ಹರೀಶ್‌ಗೌಡ, ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ವಿವಿಗೆ ಕುಲಪತಿಗಳ ನೇಮಕವಾಗಬೇಕು. ಕೆಎಎಸ್ ಅಧಿಕಾರಿಗಳನ್ನು ಕೈಬಿಟ್ಟು ವಿವಿಯ ಹಿರಿಯರನ್ನೇ ಕುಲಸಚಿವರಾಗಿ ನೇಮಕ ಮಾಡಬೇಕು. ಹಾಸ್ಟೆಲ್ ಸೌಲಭ್ಯ ಸರಿಯಿಲ್ಲ. ಶೌಚಾಲಯ ಸಮಸ್ಯೆಗಳಿವೆ, ಉತ್ತಮ ಗುಣಮಟ್ಟದ ಆಹಾರ ಸಿಗುತ್ತಿಲ್ಲ. ವಿದ್ಯಾರ್ಥಿಗಳಿಗಾಗಿ ಒಂದು ಇಂದಿರಾ ಕ್ಯಾಂಟಿನ್ ತೆರೆಯಬೇಕು. ಆಪಲ್ ಕಂಪನಿಯ ಲ್ಯಾಪ್‌ಟ್ಯಾಪ್ ವಿತರಿಸಬೇಕು.
–ಮಹೇಶ್, ಅಧ್ಯಕ್ಷ, ಸಂಶೋಧನಾ ವಿದ್ಯಾರ್ಥಿಗಳ ಸಂಘ

ಎನ್‌ಇಪಿ ರದ್ದು ಮಾಡಿದ್ದು ತುಂಬಾ ಸಂತೋಷ ತಂದಿದೆ. ಹಾಗೆಯೇ ನಮ್ಮ ಕೆಲವು ಬೇಡಿಕೆಗಳಿಗೆ ಮುಖ್ಯಮಂತ್ರಿಗಳು ಸ್ಪಂದಿಸಬೇಕು. ವಿದ್ಯಾರ್ಥಿಗಳಿಗೆ ಗುಣಮಟ್ಟದ ಲ್ಯಾಪ್‌ಟಾಪ್ ನೀಡಬೇಕು. ಸಿಂಡಿಕೇಟ್ ಸದಸ್ಯರನ್ನು ನೇಮಿಸಬೇಕು. ಸಂಶೋಧನಾ ವಿದ್ಯಾರ್ಥಿಗಳ ವೇತನ 23 ಸಾವಿರದಿಂದ 50 ಸಾವಿರಕ್ಕೆ ಹೆಚ್ಚಿಸಬೇಕು. ಮುಖ್ಯವಾಗಿ ನಿಮ್ಮ ನಂತರ ರಾಜ್ಯಕ್ಕೆ ದಲಿತ ಮುಖ್ಯಮಂತ್ರಿಯನ್ನು ನೀವೇ ಮಾಡಬೇಕು. **–ಸೋಸಲೆ ರಮೇಶ್, ವಿದ್ಯಾರ್ಥಿ**

ನಕ್ಕರೆ ಅದೇ ಸ್ವರ್ಗ

ಪ್ರಯಾಣಿಕ : "ರೀ ಕಂಡಕ್ಟರ್, ಈ ಬಸ್ ಯಾವಾಗ ಹೊರಡುತ್ತೆ?"

ಕಂಡಕ್ಟರ್ : "ಇನ್ನು 15 ನಿಮಿಷಕ್ಕೆ ಹೊರಡುತ್ತೆ ಅಂತ ಒಂದು ಗಂಟೆಯಿಂದ ಹೇಳ್ತಿದ್ದೀನಿ ಕೇಳಿಸ್ತಾ ಇಲ್ವಾ? !"

ಮೈಸೂರು ಮಿತ್ರ

ಮಂಗಳವಾರ, 29 ಆಗಸ್ಟ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ತನ್ನ ಮೇಲೆ ಹತೋಟಿ ಇಟ್ಟುಕೊಳ್ಳದ ಯಾವನೊಬ್ಬ ಸ್ವತಂತ್ರನಲ್ಲ.

–ಪೈಥಾಗೋರಸ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಬೆಟ್ಟ ಅಗೆದು ಇಲಿ ಹಿಡಿದ ಹಾಗೆ.

ನಿಮ್ಮ ಪತ್ರಗಳು

'ಉದಯರವಿ' ರಸ್ತೆಯ ಹೆಸರು ಬದಲಿಸದಿರಿ

ಮಾನ್ಯರೆ,

ಆಗಸ್ಟ್ 22 ರಂದು ಮೈಸೂರು ನಗರ ಪಾಲಿಕೆಯ ಕೌನ್ಸಿಲ್ ಸಭೆಯಲ್ಲಿ ಮೈಸೂರು ನಗರದ ಪ್ರತಿಷ್ಠಿತ ಬಡಾವಣೆಯಾದ ಕುವೆಂಪುನಗರದ ಪ್ರಮುಖ ರಸ್ತೆಯಾದ 'ಉದಯ ರವಿ' ರಸ್ತೆಗೆ ಬೇರೊಂದು ಹೆಸರನ್ನು ನಾಮಕರಣ ಮಾಡುವಂತೆ ಕೆಲವು ನಗರಪಾಲಿಕೆ ಸದಸ್ಯರು ಒತ್ತಾಯಿಸಿದ್ದಾರೆ.

ಕಳೆದ 50 ವರ್ಷಗಳ ಹಿಂದೆಯೇ ಅಂದಿನ ಮೈಸೂರು ನಗರಾಭಿವೃದ್ಧಿ ವಿಶ್ವಸ್ಥ ಮಂಡಳಿಯು ರಸಋಷಿ, ರಾಷ್ಟ್ರಕವಿ ಕುವೆಂಪುರವರ ಹೆಸರನ್ನು ನಾಮಕರಣ ಮಾಡಿ, ಈ ಬಡಾವಣೆಯ ಎಲ್ಲಾ ರಸ್ತೆಗಳಿಗೂ ಕುವೆಂಪು ಅವರ ಸಾಹಿತ್ಯಕ್ಕೆ ಸಂಬಂಧಿಸಿದ ಕವನ ಸಂಕಲನಗಳ ಹೆಸರನ್ನು ಅನುಮೋದಿಸಿದೆ.

ಈಗ ಏಕಾಏಕಿ ಹೆಸರು ಬದಲಾವಣೆಯ ಪ್ರಸ್ತಾಪ ಮಾಡಿರುವುದು ಕೇವಲ ಕ್ಷುಲ್ಲಕ ಕಾರಣಕ್ಕಾಗಿ, ಈಗಾಗಲೇ ನೋಂದಾವಣಿ ಕಚೇರಿ ಸೇರಿದಂತೆ ಎಲ್ಲಾ ಕಡೆ ಉದಯ ರವಿ ರಸ್ತೆಯ ಹೆಸರು ಜನಜನಿತವಾಗಿರುವುದರಿಂದ ಯಾವುದೇ ಕಾರಣಕ್ಕೂ ಹೆಸರನ್ನು ಬದಲಾವಣೆ ಮಾಡಬಾರದು, ಒಂದು ವೇಳೆ ಬದಲಾವಣೆ ಮಾಡಿದರೆ ಅದು ಕುವೆಂಪು ಅವರಿಗೆ ಮಾಡಿದ ಅವಮಾನ.

–ಬೂಕನಕೆರೆ ವಿಜೇಂದ್ರ, ಕುವೆಂಪು ನಗರ, ಮೈಸೂರು

ಹಾರ್ಡ್ವಿಕ್ ಶಾಲೆಗೆ ದೀಪಾಲಂಕಾರ ಮಾಡಲಿ



ಮಾನ್ಯರೆ,

ಒಂದೂವರೆ ಶತಮಾನ (168ವರ್ಷ) ಕಂಡಿರುವ ಮೈಸೂರಿನ ಹಲವಾರು ಪಾರಂಪರಿಕ ಕಟ್ಟಡಗಳಲ್ಲಿ ಝಾನ್ಸಿ ರಾಣಿ ಲಕ್ಷ್ಮೀಬಾಯಿ ಮುಖ್ಯರಸ್ತೆಯಲ್ಲಿರುವ ಸುಪ್ರಸಿದ್ಧ ಹಾರ್ಡ್ವಿಕ್ ಪ್ರೌಢಶಾಲೆಯು ಒಂದು. ಚೌಕಾಕಾರ ಆವರಣದ ಈ ಕಟ್ಟಡ ನಿರಾಭರಣ ಸುಂದರ ಪಾರಂಪರಿಕ ಪ್ರತೀಕ. ಮದ್ರಾಸ್ ತಾರಸಿಯ ಮೂರು ಅಂತಸ್ತುಗಳ ಈ ಕಟ್ಟಡಕ್ಕೆ ಕಮಾನಿನ ದ್ವಾರ ಸ್ವಾಗತಿಸುತ್ತದೆ. ಈ ಬಾರಿಯ ದಸರಾ ದೀಪಾಲಂಕಾರದಲ್ಲಿ ಈ ಶಾಲೆಗೆ ದೀಪಾಲಂಕಾರ ಮಾಡುವಂತೆ ಮನವಿ.

– ನೊಂದ ವಿದ್ಯಾರ್ಥಿಗಳು, ಮೈಸೂರು.

ಏರ್‌ಟೆಲ್ ಮೊಬೈಲ್ ಕಂಪನಿಯಿಂದ ಆಗುತ್ತಿರುವ ಹಗಲು ದರೋಡೆ ನಿಲ್ಲಲಿ

ಮಾನ್ಯರೆ,

ಏರ್‌ಟೆಲ್ ಮೊಬೈಲ್ ಕಂಪನಿಯಿಂದ ಸಾರ್ವಜನಿಕರ (ಗ್ರಾಹಕರ) ಹಣ ಹಗಲು ದರೋಡೆ ಆಗುತ್ತಿರುವುದು ಹೇಯ ಮತ್ತು ಖಂಡನೀಯ. 155 ರೂ.ಗಳಿಗೆ 28 ದಿನಗಳಿಗೆ ಕರೆನ್ಸಿ ಹಾಕಿಸಿದರೆ ಅದನ್ನು ಕಡ್ಡಾಯವಾಗಿ 28 ದಿನದೊಳಗೆ ಕರೆನ್ಸಿ ಬಾಬ್ತು ಮುಗಿಸಲೇಬೇಕು. ಇಲ್ಲದಿದ್ದರೆ ಕಂಪನಿ ಉಳಿಕೆ ಬಾಬ್ತು ಮುಟ್ಟುಗೋಲು ಹಾಕಿಕೊಂಡು ಹಗಲು ದರೋಡೆ ಮಾಡುತ್ತಿದೆ. ಬಹುತೇಕ ಗ್ರಾಹಕರಿಗೆ ಇದೊಂದು ರೀತಿ ಮೊಬೈಲ್ ಕಂಪನಿಯ ಸುಲಿಗೆ ಅಲ್ಲವೆ? ಹಿಂದಿನ ಪದ್ಧತಿಯಂತೆ ಮೊಬೈಲ್ ಕರೆನ್ಸಿ ಪದ್ಧತಿ ಜಾರಿಗೊಳಿಸಿದರೆ ಗ್ರಾಹಕರಿಗೆ ಅನುಕೂಲವಾಗುತ್ತದೆ. ಉದಾ. 400 ರೂ.ಗಳಿಗೆ ಕರೆನ್ಸಿ ಹಾಕಿಸಿದರೆ ಸದರಿ ಬಾಬ್ತು ಮುಗಿಯುವವರೆಗೆ ಕರೆನ್ಸಿ ಉಪಯೋಗಿಸಬಹುದು. ಇದರಿಂದ ಏರ್‌ಟೆಲ್ ಮೊಬೈಲ್ ಹೊಂದಿರುವ ಎಲ್ಲಾ ಗ್ರಾಹಕರಿಗೆ ತುಂಬಾ ಅನುಕೂಲವಾಗುತ್ತದೆ. ಗ್ರಾಹಕರೆಲ್ಲಾ ಒಟ್ಟಾಗಿ ಏರ್‌ಟೆಲ್ ಕಂಪನಿಯ ಸಂಬಂಧಪಟ್ಟವರನ್ನು ಒತ್ತಾಯಿಸುವರೇ?

– ನೊಂದ ಅಸಂಖ್ಯಾತ ಏರ್‌ಟೆಲ್ ಗ್ರಾಹಕರು, ಮೈಸೂರು.

ಆರೋಗ್ಯಕ್ಕೆ ಹಾನಿಕಾರಕ ವಸ್ತುವನ್ನು ಮಾರಾಟ ಮಾಡಲು ಅನುಮತಿ ನೀಡಿದವರು ಯಾರು?

ಮಾನ್ಯರೆ,

ಇತ್ತೀಚೆಗೆ ಮೈಸೂರಿನ ಹಾರ್ಡಿಂಜ್ ವೃತ್ತದಲ್ಲಿ ಕೊಳಕು ತರಕಾರಿ ಹುಳು ಮಿಶ್ರಿತ ಗೋಲ್‌ಗಪ್ಪ ವ್ಯಾಪಾರಿಯನ್ನು ನಾಗರಿಕರು ತರಾಟೆಗೆ ತೆಗೆದುಕೊಂಡ ವಿಷಯ 'ಮೈಸೂರು ಮಿತ್ರ'ದಲ್ಲಿ ಪ್ರಕಟವಾಗಿತ್ತು. ಈಗಲೂ ಎಗ್ಗಿಲ್ಲದೇ ಪ್ರಮುಖ ವೃತ್ತಗಳಲ್ಲಿ ಶಾಲೆಗಳ ಮುಂದೆ ಈ ವ್ಯಾಪಾರ ರಾಜಾರೋಷವಾಗಿ ನಡೆಯುತ್ತಿದೆ. ಬಾಯಿ ರುಚಿಗೆ ಇದನ್ನು ತಿಂದ ಮಕ್ಕಳ ಆರೋಗ್ಯದ ಮೇಲೆ ಪರಿಣಾಮ ಬೀರುವುದಿಲ್ಲವೆ? ಈ ಬಗ್ಗೆ ಪಾಲಿಕೆ ಆರೋಗ್ಯ ಅಧಿಕಾರಿಗಳು ಏಕೆ ಕ್ರಮ ಕೈಗೊಳ್ಳುತ್ತಿಲ್ಲ. ಕೇವಲ ಲೈಸೆನ್ಸ್ ಪಡೆದ ಹೋಟೆಲ್‌ಗಳು ಮಾತ್ರ ಇವರ ವ್ಯಾಪ್ತಿಗೆ ಬರುವುದಾದರೆ; ರಸ್ತೆ ಬದಿ ಮಾರಾಟ ಮಾಡಲಾಗುತ್ತಿರುವ ಫಾಸ್ಟ್‌ಫುಡ್, ಪಾನಿಪೂರಿ, ಗೋಬಿ ಇನ್ನಿತರೆ ತರಹೇವಾರಿ ತಿಂಡಿ, ಫಾಸ್ಟ್‌ಫುಡ್‌ಗಳ ಗುಣಮಟ್ಟ, ಸ್ವಚ್ಛತೆ ಬಗ್ಗೆ ಗಮನಹರಿಸುವವರು ಯಾರು? ಇದನ್ನು ತಿಂದು ಏನಾದರೂ ಜನರ ಆರೋಗ್ಯಕ್ಕೆ ಕುತ್ತುಂಟಾದರೆ ಹೊಣೆ ಯಾರು?

– ಜೆ.ಪಿ. ರಾಜೇಶ್, ವಿ.ವಿ.ಪುರಂ, ಮೈಸೂರು.

ಸ್ವಾತಂತ್ರ್ಯ

ಮಾನ್ಯರೆ,

ಇತ್ತೀಚೆಗೆ 77ನೇ ಸ್ವಾತಂತ್ರ್ಯೋತ್ಸವವನ್ನು ಸಡಗರದಿಂದ ಆಚರಿಸಿದೆವಷ್ಟೆ, ಸೂಕ್ತಿಯೊಂದು ಸ್ಮರಣೀಯ : "Eternal vigilance is the price of liberty" (ನಿರಂತರ ಎಚ್ಚರವೇ ಸ್ವಾತಂತ್ರ್ಯದ ಬೆಲೆ) ಆ ಎಚ್ಚರ ನಮ್ಮಲ್ಲಿದೆಯೇ? ಬಹುತೇಕ ಅಹಿಂಸಾತ್ಮಕವಾಗಿ (ರಾಜಕೀಯ) ಸ್ವಾತಂತ್ರ್ಯ ಗಳಿಸಿದೆವು. ದುರ್ದೈವವೆಂದರೆ, ಈಗ ದೇಶದಲ್ಲಿ ಹಿಂಸೆಯ ಪ್ರಕಾಂಡ ತಾಂಡವ: ಮತೀಯ ಸಂಘರ್ಷಗಳು, ಜಾತೀಯತೆಯ ವಿಜೃಂಭಣೆ; ಲೈಂಗಿಕ ದೌರ್ಜನ್ಯ ಇತ್ಯಾದಿ.

ಪ್ರಜಾಪ್ರಭುತ್ವದ ಮೂರು ಕಣ್ಣುಗಳು ಸ್ವಾತಂತ್ರ್ಯ, ಸಮಾನತೆ ಮತ್ತು ಸೋದರತೆ, ಸಂವಿಧಾನವೂ ಸಾರುವ ಈ ಆದರ್ಶಗಳೂ ಸಿದ್ಧಿಸಿವೆಯೇ? ಮೌಢ್ಯ, ದಾರಿದ್ರ್ಯ, ರೋಗ ರುಜಿನಗಳಿಂದ ಪೂರ್ತಿ ಬಿಡುಗಡೆ ಸಿಕ್ಕಿದೆಯೇ? ಅಬ್ರಹಾಂ ಲಿಂಕನ್ ಪ್ರಜಾಪ್ರಭುತ್ವವನ್ನು ಹೀಗೆ ಲಕ್ಷಣಿಸಿದ (ಇದು ಪ್ರಸಿದ್ಧವಾದ ನುಡಿಗಟ್ಟು): "Govt by the people, of the people, for the people" (ಜನರಿಂದ, ಜನರದಾದ, ಜನರಿಗಾಗಿ ಸರ್ಕಾರ). ಆದರೆ ಇದು ವಿಷಾದನೀಯವಾಗಿ ಹೀಗೆ ವ್ಯಂಗ್ಯಕ್ಕೆ ಗುರಿಯಾಗಿದೆ. "Govt. buy the people, off the people, far the people!".

–ಸಿಪಿಕೆ, ಹಿರಿಯ ಸಾಹಿತಿ, ಮೈಸೂರು.



ಜಿ.ಎಲ್. ತ್ರಿಪುರಾಂತಕ
ಮೊಬೈಲ್ ನಂ.: 96866–77284

ಬೆರಗು

ಕರ್ಮಯೋಗಿ ಪೂಜ್ಯ ರಾಜೇಂದ್ರ ಶ್ರೀಗಳು



> **"ನೂರಾರು ಶಾಲೆ, ಕಾಲೇಜು, ತಾಂತ್ರಿಕ ಶಿಕ್ಷಣಾಲಯಗಳನ್ನೂ ತೆರೆದು ವಿದ್ಯಾಭ್ಯಾಸದ ಅವಕಾಶದ ದಿಗಂತಗಳನ್ನು ಸುತ್ತೂರು ಜಗದ್ಗುರು ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮಿಗಳು ವಿಸ್ತರಿಸಿದ್ದಾರೆ. ಪೂಜ್ಯರು ಸ್ಥಾಪಿಸಿದ ನೂರಾರು ವಿದ್ಯಾಸಂಸ್ಥೆಗಳು 'ವಿಶ್ವ ಮಾನವ'ರನ್ನು ಸೃಷ್ಟಿಸುವ ತೇಜೋಕೇಂದ್ರಗಳಾಗುತ್ತವೆ ಎಂಬುದು ನಮ್ಮ ಹಾರೈಕೆ.. ಜಾತಿ ವರ್ಗ ಭೇದವಿಲ್ಲದೆ ಸ್ವಾಮೀಜಿಯವರು ಜನರ ಕಲ್ಯಾಣವನ್ನು ಗಮನದಲ್ಲಿಟ್ಟುಕೊಂಡು ಆಧ್ಯಾತ್ಮದ ಹಿನ್ನೆಲೆಯಲ್ಲಿ ಲೋಕಸೇವೆಯ ಕಾರ್ಯವನ್ನು ಯಶಸ್ವಿಯಾಗಿ ನಡೆಸಿಕೊಂಡು ಹೋಗುತ್ತಿರುವುದು ಇಂದಿನ ಇಂತಹ ಸಾಮಾಜಿಕ ಪರಿಸರದಲ್ಲಿಯೂ ಸಮಾಧಾನವನ್ನು ನೀಡುವ ವಿಷಯವಾಗಿದೆ. ಅನ್ನದಾಸೋಹ, ಜ್ಞಾನದಾಸೋಹಗಳ ಉಜ್ವಲ ಕಾಯಕದಲ್ಲಿ ತೊಡಗಿರುವ ಇಂತಹ ಶ್ರೀಗಳು ಆದರಣೀಯರು ಹಾಗೂ ಅಭಿನಂದನೀಯರೂ ಆಗಿದ್ದಾರೆ.**
>
> **–ರಾಷ್ಟ್ರಕವಿ ಕುವೆಂಪು**

ರಾಜಗುರುತಿಲಕ ಪರಮ ಪೂಜ್ಯ ಜಗದ್ಗುರು ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 108ನೇ ಜಯಂತಿ ಮಹೋತ್ಸವ ಇಂದು

ತನಗೋಸ್ಕರ ಬದುಕುವವ ಭೋಗಿ, ಅನ್ಯರಿಗೋಸ್ಕರ ಚಿಂತಿಸುವವ ಯೋಗಿ, ಅನ್ಯರಿಗೋಸ್ಕರ ಬದುಕುವವ ಕರ್ಮಯೋಗಿ ಎಂಬುದು ಮಹಾತ್ಮರೊಬ್ಬರ ನುಡಿಯಾಗಿದೆ. ಸದಾ ಮನುಕುಲದ ಉನ್ನತಿಗೊಸ್ಕರ ತುಡಿಯುವವರು, ತ್ಯಾಗದಿಂದ, ಕಾಯಕ ತತ್ವದಿಂದ ಕರ್ಮಯೋಗಿ ಎನಿಸಿಕೊಳ್ಳುತ್ತಾರೆ. ಅಂತಹ ಅಪರೂಪದ ಕರ್ಮಯೋಗಿಗಳು ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು. ಅಕ್ಷರ, ಅನ್ನ ಹಾಗೂ ಆರೋಗ್ಯ ಹೀಗೆ ತ್ರಿವಿಧ ದಾಸೋಹದಿಂದ ಅನೇಕ ಅಸಹಾಯಕರ ಬದುಕಿಗೆ ಜೀವಸಂಜೀವಿನಿಯಾದವರು. ಬಡ ಕುಟುಂಬದಲ್ಲಿ ಹುಟ್ಟಿದ ಮನುಷ್ಯ ಬಡವನಾಗಿಯೇ ಉಳಿಯದೆ ಅವನು ಸಮಾಜದ ಮುಖ್ಯವಾಹಿನಿಗೆ ಬಂದು ಸ್ಥಿತಿವಂತನಂತೆ ಬದುಕಲು ಯೋಗಿಗಳ ಕೃಪಾಶೀರ್ವಾದ ಮುಖ್ಯವಾಗುತ್ತದೆ. ಶಿಕ್ಷಣ ವಂಚಿತ ಸಮುದಾಯ ವಿದ್ಯಾವಂತರಾಗಿ, ವಿವೇಕವಂತರಾಗಿ ದೇಶದ ಆಸ್ತಿಯನ್ನಾಗಿಸುವ ಸತ್ಕಾರ್ಯವನ್ನು ಪೂಜ್ಯರು ಮಾಡಿದ್ದಾರೆ. ಅವರ ಸೇವೆಯ ಫಲವಾಗಿ ಇಂದು ಲಕ್ಷಾಂತರ ಜನರ ಪಾಲಿಗೆ ಆರಾಧ್ಯ ದೈವವಾಗಿರುವವರು ಪೂಜ್ಯ ಶ್ರೀ ರಾಜೇಂದ್ರ ಮಹಾಸ್ವಾಮಿಗಳು.

ನಾಡಿನ ಕೀರ್ತಿಯನ್ನು ಇಂದು ಜಗತ್ತಿನೆಲ್ಲೆಡೆ ಪಸರಿಸಿ ಸಮಾಜಕ್ಕೆ ಬಹುಮುಖ ಸೇವೆಯನ್ನು ಒದಗಿಸುತ್ತಿರುವ ಜಗದ್ಗುರು ಶ್ರೀಮತ್ಸುತ್ತೂರು ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದವರು ಪರಮಪೂಜ್ಯ ಜಗದ್ಗುರು ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು. ಶಿವ ಪಂಚಾಕ್ಷರ ಮಂತ್ರವಾದ 'ಓಂ ನಮಃ ಶಿವಾಯ' ವನ್ನು ಕೋಟಿಗಟ್ಟಲೆ ಬರೆದು ಮಂತ್ರ ಮಹರ್ಷಿಗಳು ಎಂದೇ ಖ್ಯಾತರಾದ ಪರಮಪೂಜ್ಯ ಜಗದ್ಗುರು ಶ್ರೀ ಪಟ್ಟದ ಶಿವರಾತ್ರೀಶ್ವರರ ಕರಕಮಲ ಸಂಜಾತರಾಗಿ, ಶ್ರೀಮಠದ ಸೇವೆಯನ್ನು ಬಹುಮುಖವಾಗಿ ವಿಸ್ತರಿಸಿದ ಹೆಗ್ಗಳಿಕೆ ಪೂಜ್ಯ ರಾಜೇಂದ್ರ ಶ್ರೀಗಳವರದ್ದು. ಪೂಜ್ಯರ ಜೀವನ ಸಾಧನೆ ತಿಳಿಯುವ ಎಂತಹವರನ್ನು ಮಂತ್ರ ಮುಗ್ಧರನ್ನಾಗಿಸುತ್ತದೆ.

ಪೂಜ್ಯರು ಮೈಸೂರು ಜಿಲ್ಲೆಯ ಸುತ್ತೂರಿನಲ್ಲಿ ಶ್ರೀ ಮಲ್ಲಿಕಾರ್ಜುನ ದೇವರು ಹಾಗೂ ಶ್ರೀಮತಿ ಮರಮ್ಮಣ್ಣಿ ಶರಣ ದಂಪತಿಗಳ ಪುತ್ರರಾಗಿ ಜನ್ಮತಾಳಿದರು. ದೈವ ಸಂಕಲ್ಪದಂತೆ ಸುತ್ತೂರು ಮಠವನ್ನು ಮುನ್ನಡೆಸಲು ಮಂತ್ರ ಮಹರ್ಷಿ ಶ್ರೀಗಳವರ ಸನ್ನಿಧಾನಕ್ಕೆ ಪೋಷಕರು ಶ್ರೀ ರಾಜೇಂದ್ರರನ್ನು ಅರ್ಪಿಸುತ್ತಾರೆ. ಪ್ರಾಥಮಿಕ ಶಿಕ್ಷಣವನ್ನು ಸುತ್ತೂರಿನಲ್ಲಿ ಪೂರೈಸಿ, ಹೆಚ್ಚಿನ ವಿದ್ಯಾಭ್ಯಾಸಕ್ಕೆ ಮೈಸೂರು ನಗರಕ್ಕೆ ತೆರಳಿದ ರಾಜೇಂದ್ರ ಶ್ರೀಗಳವರು ತಮ್ಮ ವಿದ್ಯಾಭ್ಯಾಸದ ದಿನಗಳಲ್ಲಿ ಕಂಡದ್ದು ಅವರ ಬದುಕಿನ ಧ್ಯೇಯವನ್ನೇ ಬದಲಿಸುತ್ತದೆ. ಶಿಕ್ಷಣ ಅರಸಿ ಮೈಸೂರಿಗೆ ಹಳ್ಳಿಹಳ್ಳಿಗಳಿಂದ ಬರುತ್ತಿದ್ದ ಬಡ ಕುಟುಂಬದ ವಿದ್ಯಾರ್ಥಿಗಳಿಗೆ ಜ್ಞಾನದ ಹಸಿವನ್ನು ಪೂರೈಸಿಕೊಳ್ಳುವುದು ಕಷ್ಟವಾಗುತ್ತಿರಲಿಲ್ಲ. ಆದರೆ ಹೊಟ್ಟೆ ಹಸಿವನ್ನು ಪೂರೈಸಿಕೊಳ್ಳಲು ತುಂಬಾ ಕಷ್ಟಪಡುತ್ತಿದ್ದರು. ಆರ್ಥಿಕವಾಗಿ ದುರ್ಬಲವಾದ ಕುಟುಂಬಗಳಿಂದ ಬಂದಂತಹ ಅಂತಹ ಮಕ್ಕಳ ಸ್ಥಿತಿಯನ್ನು ರಾಜೇಂದ್ರ ಶ್ರೀಗಳವರು ಕಂಡು, ಮಮ್ಮಲ ಮರುಗಿ, ಅವರುಗಳಿಗೆ ಎರಡು ಹೊತ್ತಿನ ಊಟ ಹಾಕಲು ಪ್ರಸಾದ ನಿಲಯಗಳನ್ನು ಮೊದಲಿಗೆ ಪ್ರಾರಂಭಿಸುತ್ತಾರೆ.

ಮಂತ್ರಮಹರ್ಷಿ ಜಗದ್ಗುರುಗಳವರ ಮಾರ್ಗದರ್ಶನ ಹಾಗೂ ಆಶೀರ್ವಾದದಿಂದ ತಮ್ಮ ಶಿಕ್ಷಣ ಮುಂದುವರಿಸುವ ಜೊತೆಗೆ ಹಸಿದು ಬಂದ ಜೀವಗಳಿಗೆ ಹೊಟ್ಟೆ ತುಂಬ ಅನ್ನ ಹಾಕುವ ಕಾಯಕವನ್ನು ಕಿರಿಯ ವಯಸ್ಸಿಗೆ ಪ್ರಾರಂಭಿಸಿದ್ದು ಪೂಜ್ಯ ರಾಜೇಂದ್ರ ಶ್ರೀಗಳವರಲ್ಲಿದ್ದ ಮಾತೃಹೃದಯವನ್ನು ಅನಾವರಣಗೊಳಿಸುತ್ತದೆ. ಒಬ್ಬ ತಾಯಿ ತಾನು ಹೆತ್ತ ಮಕ್ಕಳ ಹಸಿವನ್ನು ನೀಗಿಸಬಹುದು. ಆದರೆ ಪೂಜ್ಯರು ಅನೇಕ ತಾಯಂದಿರ ಮಕ್ಕಳ ಹಸಿವನ್ನು ನೀಗಿಸುವ ಮಹತ್ಕಾರ್ಯಕ್ಕೆ ಮುನ್ನುಡಿ ಬರೆಯುತ್ತಾರೆ. ಮೈಸೂರಿನಲ್ಲಿ ಅಷ್ಟೇ ಅಲ್ಲದೆ ಚಾಮರಾಜನಗರ, ನಂಜನಗೂಡು, ಟಿ.ನರಸೀಪುರ..... ಹೀಗೆ ಇನ್ನೂ ಅನೇಕ ಕಡೆ ವಿದ್ಯಾರ್ಥಿನಿಲಯಗಳನ್ನು ತೆರೆದು ಬಡ ಮಕ್ಕಳು ಸಹ ವಿದ್ಯಾವಂತರಾಗಿ ಅವರ ಮನೆಗಳಿಗೆ ಆಧಾರ ಸ್ತಂಭವಾಗಲು ನೆರವಾಗುತ್ತಾರೆ. ಗಗನ ಕುಸುಮವೇ ಆಗಿದ್ದ ಶಿಕ್ಷಣ ಬಡವರ ಕೈಗೆಟಕುವಂತೆ ಮಾಡಿದ್ದ ಕಾರಣ ಇಂದು ಸಾವಿರಾರು ಕುಟುಂಬಗಳು ಆರ್ಥಿಕವಾಗಿ ಸದೃಢವಾಗಿವೆ. ವಿದ್ಯಾರ್ಥಿನಿಲಯಗಳಷ್ಟೇ ಅಲ್ಲದೆ ಶಾಲಾ ಕಾಲೇಜುಗಳನ್ನು ಪ್ರಾರಂಭಿಸುವ ಮೂಲಕ ಜ್ಞಾನಜ್ಯೋತಿಯನ್ನು ಬೆಳಗಿದ ಕೀರ್ತಿ ಪೂಜ್ಯರದ್ದು. 1954ರಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠವನ್ನು ಸ್ಥಾಪಿಸಿ ಪೂಜ್ಯರ ಅವಧಿಯಲ್ಲಿ ಸುಮಾರು ನರ್ಸರಿ ಶಾಲೆಯಿಂದ ವೈದ್ಯಕೀಯ ಶಿಕ್ಷಣ ವಿದ್ಯಾಲಯದವರೆವಿಗೆ 125 ಸಂಸ್ಥೆಗಳನ್ನು ಸ್ಥಾಪಿಸಿದರು. ಇಂದು ಶಿಕ್ಷಣ ಸಂಸ್ಥೆಗಳು ಬಹುವಿಧವಾಗಿ ವಿಸ್ತರಿಸಿ ಲಕ್ಷಾಂತರ ಮಕ್ಕಳ ಜ್ಞಾನಾನ್ನದ ಹಸಿವನ್ನು ನೀಗಿಸುತ್ತಿದೆ.

'ಜಗವೆಲ್ಲ ನಗುತಿರಲಿ ಜಗದಳವು ನನಗಿರಲಿ' ಎಂಬ ಕವಿವಾಣಿಯಂತೆ ಪೂಜ್ಯರ ಬದುಕಿಗೆ ಅನ್ವಯವಾಗುವ ನುಡಿ. ಏಕೆಂದರೆ ಸುತ್ತೂರು ಮಠದ ಆಶ್ರಯದಲ್ಲಿ ನಡೆಯುತ್ತಿದ್ದ ವಿದ್ಯಾಸಂಸ್ಥೆಗಳು ಹಾಗೂ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳ ಸಕಲ ಕ್ಷೇಮವನ್ನು ಗಮನಿಸುವಷ್ಟು ತಮ್ಮ ತನುವಿನ ಕಡೆ ಹೆಚ್ಚು ಗಮನಿಸುತ್ತಿರಲಿಲ್ಲ. ಇದು ಅವರ ವಿಶಾಲ ಹೃದಯಕ್ಕೆ ಸಾಕ್ಷಿಯಾಗಿದೆ. ಸಮಾಜದಲ್ಲಿ ಸಂತರೊಬ್ಬರ ಹೊಣೆಗಾರಿಕೆಯನ್ನರಿತು ಸಮಾಜದ ಏಳಿಗೆಗೆ ಸದಾ ಚಿಂತನೆ ನಡೆಸುತ್ತಿದ್ದ, ಕ್ರಿಯಾಶೀಲರಾಗಿ ಅಂದುಕೊಂಡ ಯೋಜನೆಗಳನ್ನು ಕಾರ್ಯರೂಪಕ್ಕೆ ತರುತ್ತಿದ್ದ ಕರ್ತೃತ್ವ ಶಕ್ತಿ ಪೂಜ್ಯರಲ್ಲಿ ಮೇಳೈಸಿತ್ತು. ಅವರು ಸ್ಥಾಪಿಸಿದ ಪ್ರತಿಯೊಂದು ಸಂಸ್ಥೆಯ ಹಿಂದೆ ಅವರ ದೂರದೃಷ್ಟಿ, ಪರಿಶ್ರಮ, ತ್ಯಾಗ ಅಡಗಿತ್ತು. ಅನೇಕ ಸಂದರ್ಭಗಳಲ್ಲಿ ವಿದ್ಯಾರ್ಥಿನಿಲಯಗಳಿಗೆ ಪಡಿಪದಾರ್ಥಗಳನ್ನು ಒದಗಿಸುವುದು ವ್ಯತ್ಯಯವಾದಾಗ ತಾವೇ ಖುದ್ದು ಹೋಗಿ ಆಹಾರ ಧಾನ್ಯಗಳನ್ನು ಒದಗಿಸಿ ಮಕ್ಕಳಿಗೆ ಊಟ ಹಾಕಿಸಿ, ಅವರ ಮುಖದಲ್ಲಿ ಮೂಡುತ್ತಿದ್ದ ಸಮಾಧಾನ ಭಾವ ಕಂಡು ತಾವು ಪ್ರಸಾದ ಮಾಡಿದಷ್ಟೇ ತೃಪ್ತಿಪಟ್ಟುಕೊಳ್ಳುತ್ತಿದ್ದರು. ವಿದ್ಯಾರ್ಥಿನಿಲಯಗಳಿಗೆ ಪಡಿ ಪದಾರ್ಥಗಳನ್ನು ಸಂಗ್ರಹಿಸಲು ಗ್ರಾಮಗಳಿಗೆ ತೆರಳಿ ಭಿಕ್ಷೆ ಮಾಡುತ್ತಿದ್ದ ಪರಿಪಾಠವಿತ್ತು. ಪೂಜ್ಯರು ಯಾವುದೇ ಹಮ್ಮು ಬಿಮ್ಮು ಇಲ್ಲದೆ, ಬಿಸಿಲು ಮಳೆ ಲೆಕ್ಕಿಸದೆ ಗ್ರಾಮಗಳಲ್ಲಿ ಸಂಚಾರ ನಡೆಸಿ ದಿನಸಿ ಭಿಕ್ಷೆ ಮಾಡಿ ಸಂಗ್ರಹಿಸುತ್ತಿದ್ದರು.

ಒಮ್ಮೆ ವಿದ್ಯಾರ್ಥಿನಿಲಯವೊಂದಕ್ಕೆ ಆಹಾರ ಪದಾರ್ಥಗಳನ್ನು ಸಾಲವಾಗಿ ನೀಡುತ್ತಿದ್ದ ಅಂಗಡಿಯವನು ಬಾಕಿ ಹೆಚ್ಚಾದ ಕಾರಣ ಮುಂದೆ ಸಾಲ ನೀಡಲಾಗದು ಎಂದು ಹೇಳಿದಾಗ, ಪೂಜ್ಯರು ಏನನ್ನೂ ಯೋಚಿಸದೆ ತಮ್ಮ ಕೊರಳಲ್ಲಿ ಇದ್ದ ಚಿನ್ನದ ಕರಡಿಗೆ ಹಾಗೂ ಚಿನ್ನದ ಹೊದಿಕೆ ಇದ್ದ ರುದ್ರಾಕ್ಷಿ ಮಾಲೆಯನ್ನು ಮಾರಿ ಆಹಾರ ಪದಾರ್ಥ ತರಿಸಿ ಅಡುಗೆ ಮಾಡಿಸಿ ಮಕ್ಕಳಿಗೆ ಊಟ ಹಾಕಿಸಿದ ಸನ್ನಿವೇಶವಂತು ಅವರ ತ್ಯಾಗ, ಮಾತೃವಾತ್ಸಲ್ಯಕ್ಕೆ ಸಾಕ್ಷಿಯಾಗಿದೆ. ಮನುಷ್ಯ ತನ್ನ ತನುವಿನ ಸೌಖ್ಯವನ್ನು ಮೊದಲು ನೋಡಿಕೊಳ್ಳುವುದು ಸಹಜ. ಆದರೆ ಸಂಸ್ಥೆಗಳ ಕೆಲಸ ನಿಮಿತ್ತ ಬೆಂಗಳೂರಿಗೆ ಹೋದ ಎಷ್ಟೋ ಸಂದರ್ಭಗಳಲ್ಲಿ ಸರಿಯಾದ ಸಮಯಕ್ಕೆ ಪ್ರಜ್ಯರಿಗೆ ಪ್ರಸಾದ ವ್ಯವಸ್ಥೆಯಾಗದೆ, ಇಷ್ಟಲಿಂಗ ಪ್ರಜೆ ಮಾಡಿ ಪ್ರಸಾದವಿಲ್ಲದೆ ನೀರು ಕುಡಿದು ಮಲಗಿದ, ಮತ್ತೆ ಕೆಲವು ದಿನ ಒಂದೊತ್ತಿನ ಪ್ರಸಾದ ಮಾಡಿ ಕಾಯಕ ಮಾಡಿದ ಉದಾಹರಣೆಗಳು ಇವೆ.

ಶಿಕ್ಷಣದಲ್ಲಿ ಸಂಸ್ಕಾರ ಎಂಬುದು ಅಪಾರ ಪಾತ್ರವನ್ನು ಹೊಂದಿದೆ. ಪೂಜ್ಯರು ಸಂಸ್ಥೆಗಳನ್ನು ಸ್ಥಾಪಿಸಿ ಮಕ್ಕಳಿಗೆ ಕೇವಲ ಪಠ್ಯಕ್ಕೆ ಸೀಮಿತವಾದ ಶಿಕ್ಷಣವನ್ನು ಒದಗಿಸದೇ ಸಂಸ್ಕಾರಯುತ ಶಿಕ್ಷಣ ಕೊಡುವಲ್ಲಿ ಅವರ ಕೊಡುಗೆ ಅಪಾರ. ಶಿಕ್ಷಣ ಕ್ಷೇತ್ರ ಅಷ್ಟೇ ಅಲ್ಲದೆ ಸಾಹಿತ್ಯ, ಸಂಗೀತ, ಲಲಿತ ಕಲೆ, ನಾಟಕ ಹೀಗೆ ಶ್ರೀಮಠದ ವತಿಯಿಂದ ಅನೇಕ ಪ್ರಕಾರಗಳಿಗೆ ಪ್ರೋತ್ಸಾಹ ನೀಡುತ್ತಲೇ ಬಂದರು. ಇದರಿಂದ ಅನೇಕ ಪ್ರತಿಭೆಗಳಿಗೆ ಸೂಕ್ತ ವೇದಿಕೆ ದೊರೆತು ಅವರು ಸಮಾಜದ ಕಣ್ಮಣಿಗಳಾದರು.

ಪೂಜ್ಯರು ಅಂದು ನೆಟ್ಟ ಸಸಿಗಳು ಇಂದು ಹೆಮ್ಮರವಾಗಿ ಅನೇಕ ಜನರಿಗೆ ನೆಮ್ಮದಿಯ ಆಶ್ರಯತಾಣಗಳಾಗಿವೆ. ಪೂಜ್ಯರ ದೂರದೃಷ್ಟಿಯ ಫಲವಾಗಿ ಜನರ ಆರೋಗ್ಯ ರಕ್ಷಣೆಗೆ ಅಂದು ಅವರು ಸ್ಥಾಪಿಸಿದ ಆರೋಗ್ಯ ಕೇಂದ್ರ ಇಂದು ಏಷ್ಯಾ ಖಂಡದಲ್ಲಿಯೇ 2ನೇ ಅತಿ ದೊಡ್ಡ ಆಸ್ಪತ್ರೆ ಎಂಬ ಹೆಗ್ಗಳಿಕೆ ಹೊಂದಿರುವ ಜೆಎಸ್‌ಎಸ್ ಆಸ್ಪತ್ರೆ ರೂಪುಗೊಂಡಿದೆ. ಬಡಜನರು ಅನಾರೋಗ್ಯಕ್ಕೆ ತುತ್ತಾದಾಗ ಅವರಿಗೆ ಕೈಗೆಟುಕುವ ದರದಲ್ಲಿ ಆರೋಗ್ಯ ಸೇವೆ ಲಭಿಸಬೇಕು ಎಂಬ ಸಂಕಲ್ಪದಿಂದ ಪ್ರಾರಂಭವಾದ ಆಸ್ಪತ್ರೆ ಇಂದು ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯಾಗಿ ಸರ್ವರಿಗೂ ಸೇವೆ ಒದಗಿಸುತ್ತಿದೆ.

ಪೂಜ್ಯಶ್ರೀಗಳವರ ಸೇವಾ ಮನೋಭಾವಕ್ಕೆ ಮನಸೋತು ಅನೇಕ ಧರ್ಮಾಧಿಕಾರಿಗಳು, ಮಠಾಧಿಪತಿಗಳು, ಆಧ್ಯಾತ್ಮಿಕ ಚಿಂತಕರು, ಸಾಹಿತಿಗಳು, ವಿಜ್ಞಾನಿಗಳು, ಜನಪ್ರತಿನಿಧಿಗಳು ಶ್ರೀಮಠಕ್ಕೆ ಭೇಟಿ ಕೊಟ್ಟು ಪೂಜ್ಯ ಶ್ರೀಗಳವರ ಸೇವಾಕಾರ್ಯಗಳನ್ನು ಮುಕ್ತಕಂಠದಿಂದ ಪ್ರಶಂಸಿಸಿರುತ್ತಾರೆ. ರಾಷ್ಟ್ರಕವಿ ಕುವೆಂಪು ಅವರು ರಾಜೇಂದ್ರ ಶ್ರೀಗಳವರ ಅವಿರತ ಸೇವೆಯನ್ನು ಹತ್ತಿರದಿಂದ ಕಂಡು ಪೂಜ್ಯರ ಕುರಿತು ತಮ್ಮ ಅಭಿಪ್ರಾಯವನ್ನು ಹೀಗೆ ದಾಖಲಿಸಿದ್ದಾರೆ, 'ಸುತ್ತೂರು ಜಗದ್ಗುರು ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮಿಗಳು ವಿದ್ಯಾಭ್ಯಾಸಕ್ಕೆ ಸಂಬಂಧಿಸಿದಂತೆ ನಡೆಸುತ್ತಿರುವ ಚಟುವಟಿಕೆಗಳನ್ನು ಸುಮಾರು 40 ವರ್ಷಗಳಿಗೂ ಹೆಚ್ಚು ಕಾಲದಿಂದ ಗಮನಿಸುತ್ತಾ ಬಂದಿದ್ದೇನೆ..... ಸಾವಿರ ಸಾವಿರ ಸಂಖ್ಯೆಯ ಬಡ ವಿದ್ಯಾರ್ಥಿಗಳಿಗಾಗಿ ವಿದ್ಯಾರ್ಥಿನಿಲಯಗಳನ್ನು ತೆರೆದು, ಉಚಿತವಾಗಿ ಊಟ ವಸತಿಗಳನ್ನು ಕಲ್ಪಿಸಿ ಅನಕ್ಷರಸ್ಥರೋ, ಅಲ್ಪ ವಿದ್ಯಾವಂತರೋ ಆಗಿಯೇ ಉಳಿಯುತ್ತಿದ್ದ ಅನೇಕಾನೇಕ ಮಂದಿಗೆ ಪೂರ್ಣವಿದ್ಯಾವಂತರಾಗುವ ಅವಕಾಶವನ್ನು ಕಲ್ಪಿಸಿದ ಮಠಾಧೀಶರ ಅಗ್ರಪಂಕ್ತಿಯಲ್ಲಿದ್ದಾರೆ ಶ್ರೀ ಸುತ್ತೂರು ಸ್ವಾಮಿಗಳವರು. ಅಷ್ಟಕ್ಕೆ ನಿಲ್ಲದೆ, ನೂರಾರು ಶಾಲೆ, ಕಾಲೇಜು, ತಾಂತ್ರಿಕ ಶಿಕ್ಷಣಾಲಯಗಳನ್ನೂ ತೆರೆದು ವಿದ್ಯಾಭ್ಯಾಸದ ಅವಕಾಶದ ದಿಗಂತಗಳನ್ನು ಅವರು ವಿಸ್ತರಿಸಿದ್ದಾರೆ. ಪೂಜ್ಯರು ಸ್ಥಾಪಿಸಿದ ನೂರಾರು ವಿದ್ಯಾಸಂಸ್ಥೆಗಳು 'ವಿಶ್ವಮಾನವ'ರನ್ನು ಸೃಷ್ಟಿಸುವ ತೇಜೋಕೇಂದ್ರಗಳಾಗುತ್ತವೆ ಎಂಬುದು ನಮ್ಮ ಹಾರೈಕೆ.. ಜಾತಿ ವರ್ಗ ಭೇದವಿಲ್ಲದೆ ಸ್ವಾಮೀಜಿಯವರು ಜನರ ಕಲ್ಯಾಣವನ್ನು ಗಮನದಲ್ಲಿಟ್ಟುಕೊಂಡು ಆಧ್ಯಾತ್ಮದ ಹಿನ್ನೆಲೆಯಲ್ಲಿ ಲೋಕಸೇವೆಯ ಕಾರ್ಯವನ್ನು ಯಶಸ್ವಿಯಾಗಿ ನಡೆಸಿಕೊಂಡು ಹೋಗುತ್ತಿರುವುದು ಇಂದಿನ ಇಂತಹ ಸಾಮಾಜಿಕ ಪರಿಸರದಲ್ಲಿಯೂ ಸಮಾಧಾನವನ್ನು ನೀಡುವ ವಿಷಯವಾಗಿದೆ. ಅನ್ನದಾಸೋಹ, ಜ್ಞಾನದಾಸೋಹಗಳ ಉಜ್ವಲ ಕಾಯಕದಲ್ಲಿ ತೊಡಗಿರುವ ಇಂತಹ ಶ್ರೀಗಳು ಆದರಣೀಯರು ಹಾಗೂ ಅಭಿನಂದನೀಯರೂ ಆಗಿದ್ದಾರೆ'.

'ಆಡದೇ ಮಾಡುವವನು ರೂಢಿಯೊಳಗುತ್ತಮನು' ಎಂದು ಸರ್ವಜ್ಞ ಹೇಳಿರುವುದು ಸರ್ವವೇದ್ಯವಾಗಿದೆ. ಪೂಜ್ಯ ಶ್ರೀಗಳವರು ಅನೇಕ ಸಾಧನೆಗಳನ್ನು ಮಾಡಿದ್ದರೂ ಅವರು ಎಂದಿಗೂ ಗರ್ವ ಪಟ್ಟವರಲ್ಲ. ಎಷ್ಟೇ ನೋವುಗಳಿದ್ದರೂ ಯಾರಿಗೂ ತೋರ್ಪಡದೆ ನಗುಮುಖದಿಂದಲೇ ತಮ್ಮ ಕಾಯಕವನ್ನು ಮಾಡಿ ಸರ್ವಶ್ರೇಷ್ಠ ಸಂತರಾಗಿ ನಾಡಿಗೆ ಕೀರ್ತಿ ತರುವ ಮುಕುಟ ಮಣಿಯಾಗುತ್ತಾರೆ, ಮಠಾಧಿಪತಿಗಳಿಗೆ ಮಾದರಿಯಾಗುತ್ತಾರೆ.

ಲಿಂಗಾಯತ ಸಮಾಜಕ್ಕೆ ಸೂಕ್ತ ಪ್ರಾತಿನಿಧ್ಯಕ್ಕೆ ಖರ್ಗೆ ಅವರಿಗೆ ವರುಣಾ ಮಹೇಶ್ ಮನವಿ



ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಕೆಪಿಸಿಸಿ ಕಾರ್ಯದರ್ಶಿ ಹಾಗೂ ಲಿಂಗಾಯತ ಮುಖಂಡ ವರುಣಾ ಮಹೇಶ್, ಖರ್ಗೆ ಅವರ ನಿವಾಸದಲ್ಲಿ ಭೇಟಿ ಮಾಡಿದರು.

ಮೈಸೂರು,ಆ.28–ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರನ್ನು ಕೆಪಿಸಿಸಿ ಕಾರ್ಯದರ್ಶಿ ಹಾಗೂ ಲಿಂಗಾಯತ ಮುಖಂಡ ವರುಣಾ ಮಹೇಶ್, ಖರ್ಗೆ ಅವರ ನಿವಾಸದಲ್ಲಿ ಇತ್ತೀಚೆಗೆ ಭೇಟಿ ಮಾಡಿದರು. ಮೈಸೂರು ಜಿಲ್ಲೆ, ಹಾಸನ, ಮಂಡ್ಯ, ಮಡಿಕೇರಿ, ಬೆಂಗಳೂರು ಸೇರಿದಂತೆ ಹಳೆ ಮೈಸೂರು ಪ್ರಾಂತ್ಯದ ಜಿಲ್ಲೆಗಳಲ್ಲಿ ಲಿಂಗಾಯತ ಸಮಾಜಕ್ಕೆ ಪಕ್ಷದ ಪ್ರಮುಖ ಹುದ್ದೆಗಳಲ್ಲಿ ಪ್ರಾತಿನಿಧ್ಯ ಇಲ್ಲದಿರುವುದನ್ನು ಮನವರಿಕೆ ಮಾಡಿಕೊಟ್ಟರು. ಇದಕ್ಕೆ ಪ್ರತಿಕ್ರಿಯಿಸಿದ ಖರ್ಗೆ ಅವರು, ಮುಂದಿನ ದಿನಗಳಲ್ಲಿ ಈ ವ್ಯತ್ಯಾಸವನ್ನು ಸರಿಪಡಿಸುತ್ತೇವೆ ಎಂದು ಭರವಸೆ ನೀಡಿದರು. ಈ ವೇಳೆ ಕಾರ್ಯಸಿದ್ದಪ್ಪ, ಕಾರಾಪುರ ಆನಂದ್, ಮಹಾಸಭೆ ರೇಣುಕಾ ಪ್ರಸನ್ನ, ಲಿಂಗಣ್ಣ ಮಧು ಇನ್ನಿತರರು ಹಾಜರಿದ್ದರು.



2022–23ನೇ ಸಾಲಿನ ಹೋಬಳಿ ಮಟ್ಟದ ಕ್ರೀಡಾಕೂಟದಲ್ಲಿ ಪಥ ಸಂಚಲನ, ಬಾಲಕಿಯರ ವಾಲಿಬಾಲ್, 200 ಮೀ. ಓಟದ ಸ್ಪರ್ಧೆಯಲ್ಲಿ ಹೆಚ್.ಡಿ.ಕೋಟೆ ತಾಲೂಕಿನ ಬಾಚೇಗೌಡನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ(ಆಂಗ್ಲ ಮಾಧ್ಯಮ) ವಿದ್ಯಾರ್ಥಿಗಳು ಪ್ರಥಮ ಬಹುಮಾನ ಗಳಿಸಿದ್ದಾರೆ. ಈ ವೇಳೆ ಮುಖ್ಯ ಶಿಕ್ಷಕ ಮರಿಕಾಳಯ್ಯ, ಸರ್ಕಾರಿ ಎನ್‌ಪಿಎಸ್ ನೌಕರರ ಸಂಘದ ಅಧ್ಯಕ್ಷ ಯಶವಂತ್‌ಕುಮಾರ್, ಸಹ ಶಿಕ್ಷಕರಾದ ಹೇಮಲತಾ, ದೈಹಿಕ ಶಿಕ್ಷಕಿ ರೇಖಾ ಇದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ವಿಶ್ವ ಅಥ್ಲೆಟಿಕ್ಸ್‌ನಲ್ಲಿ ಭಾರತಕ್ಕೆ ಐತಿಹಾಸಿಕ ಚಿನ್ನ



'ಒಲಿಂಪಿಕ್ ವೀರ' ನೀರಜ್ ಚೋಪ್ರಾ ಕೊಂಡಾಡಿದ ಪ್ರಧಾನಿ ಮೋದಿ

ನವದೆಹಲಿ: ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನ ಜಾವೆಲಿನ್ ಎಸೆತದಲ್ಲಿ ಬಂಗಾರಕ್ಕೆ ಮುತ್ತಿಟ್ಟ ಒಲಿಂಪಿಕ್ ವೀರ ನೀರಜ್ ಚೋಪ್ರಾ ಅವರನ್ನು ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಕೊಂಡಾಡಿದ್ದಾರೆ. ಸಾಮಾಜಿಕ ಜಾಲ ತಾಣ ಟ್ವಿಟರ್‌ನಲ್ಲಿ ಟ್ವೀಟ್ ಮಾಡಿರುವ ಅವರು, ಇದು ಕ್ರೀಡೆಯಲ್ಲಿ ನೀರಜ್ ಚೋಪ್ರಾ ಅವರ ಶ್ರೇಷ್ಠತೆಯನ್ನು ತೋರಿಸುತ್ತದೆ. ಅವರ ಆಟದ ನಿಖರತೆ ಮತ್ತು ಉತ್ಸಾಹವು ಅವರನ್ನು ಅಥ್ಲೆಟಿಕ್ಸ್‌ನಲ್ಲಿ ಕೇವಲ ಚಾಂಪಿಯನ್ ಆಗಿರದೆ ಇಡೀ ಕ್ರೀಡಾ ಜಗತ್ತಿನಲ್ಲಿ ಸಾಟಿಯಿಲ್ಲದ ಶ್ರೇಷ್ಠತೆಯ ಸಂಕೇತವಾಗಿ ಬೆಳೆದಿದ್ದಾರೆ. ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಚಿನ್ನ ಗೆದ್ದಿದ್ದಕ್ಕಾಗಿ ಅವರಿಗೆ ಅಭಿನಂದನೆಗಳು ಎಂದು ಹೇಳಿದ್ದಾರೆ.

ಹಂಗೇರಿಯ ಬುಡಾಪೆಸ್ಟ್‌ನಲ್ಲಿ ಭಾನುವಾರ ನಡೆದ ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನ ಜಾವೆಲಿನ್ ಥ್ರೋನಲ್ಲಿ ನೀರಜ್ ಚೋಪ್ರಾ ಫೈನಲ್ ಪಂದ್ಯದಲ್ಲಿ 88.17 ಮೀಟರ್ ದೂರ ಭರ್ಜಿ ಎಸೆಯುವ ಮೂಲಕ ಐತಿಹಾಸಿಕ ಸಾಧನೆ ಮಾಡಿದ್ದಾರೆ. ಈ ಮೂಲಕ ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಚಿನ್ನದ ಪದಕ ಗೆದ್ದ ಮೊದಲ ಭಾರತೀಯ ಎಂಬ ದಾಖಲೆ ನಿರ್ಮಿಸಿದ್ದಾರೆ.

ಮೊದಲ ಸುತ್ತಿನಲ್ಲೇ ಫೌಲ್ ಮಾಡಿದ್ದ ನೀರಜ್, 2ನೇ ಸುತ್ತಿನಲ್ಲಿ 88.17 ಮೀಟರ್ ದೂರಕ್ಕೆ ಎಸೆಯುವ ಮೂಲಕ ಚಿನ್ನದ ಪದಕವನ್ನು ತನ್ನದಾಗಿಸಿಕೊಂಡರು. ಪಾಕಿಸ್ತಾನದ ಅರ್ಷದ್ ನದೀಮ್ ಅವರು 87.82 ಮೀಟರ್ ಎಸೆಯುವ ಮೂಲಕ ಎರಡನೇ ಸ್ಥಾನ ಪಡೆದು ಬೆಳ್ಳಿ ಪದಕ ಗೆದ್ದಿದ್ದಾರೆ. 2022ರ ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್‌ನಲ್ಲಿ ನೀರಜ್ ಚೋಪ್ರಾ ಬೆಳ್ಳಿ ಪದಕ ಗೆದ್ದಿದ್ದರು. ಆದರೆ ಈ ಬಾರಿ ಚಿನ್ನದ ಪದಕ ಗೆಲ್ಲುವ ಮೂಲಕ ಹೊಸ ಇತಿಹಾಸ ಸೃಷ್ಟಿಸಿದ್ದಾರೆ. 1983ರಿಂದಲೂ ನಡೆಯುತ್ತಿರುವ ವಿಶ್ವ ಅಥ್ಲೆಟಿಕ್ಸ್ ಕೂಟದಲ್ಲಿ ಭಾರತಕ್ಕಿದು 3ನೇ ಪದಕ, 2003ರ ಪ್ಯಾರಿಸ್ ವಿಶ್ವ ಕೂಟದಲ್ಲಿ ಮಹಿಳೆಯರ ಲಾಂಗ್ ಜಂಪ್ ನಲ್ಲಿ ಅಂಜು ಬಾಬಿ ಜಾರ್ಜ್ ಮೊದಲ ಪದಕ ತಂದು ಕೊಟ್ಟಿದ್ದರು. ಕಳೆದ ವರ್ಷ ಅಮೆರಿಕಾದಲ್ಲಿ ನಡೆದಿದ್ದ ಕೂಟದಲ್ಲಿ ಪುರುಷರ ಜಾವೆಲಿನ್ ಎಸೆತದಲ್ಲಿ ನೀರಜ್ ಬೆಳ್ಳಿ ಪದಕ ಗೆದ್ದಿದ್ದರು.



ಮೈಮುಲ್ ನಷ್ಟದಲ್ಲಿದೆ; ಮುಖ್ಯಮಂತ್ರಿ ಅಚ್ಚರಿ

ಮೈಸೂರು, ಆ. 28– ಮೈಸೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ (ಮೈಮುಲ್) ನಷ್ಟದಲ್ಲಿದೆ ಎಂಬ ಆತಂಕಕಾರಿ ವಿಚಾರ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಿನಲ್ಲಿ ನಡೆಸಿದ ಕೆಡಿಪಿ ಸಭೆಯಲ್ಲಿ ಬಹಿರಂಗವಾಯಿತು.

ಮೈಮುಲ್ ಪ್ರಗತಿ ಪರಿಶೀಲನೆ ವೇಳೆ ಅದರ ವ್ಯವಸ್ಥಾಪಕ ನಿರ್ದೇಶಕ ವಿಜಯ ಕುಮಾರ್, ಹಾಲು ಉತ್ಪಾದನೆ, ರೈತರಿಗೆ ನೀಡುತ್ತಿರುವ ಸಬ್ಸಿಡಿ ಸೇರಿದಂತೆ ಹಲವಾರು ವಿಚಾರಗಳನ್ನು ಸಭೆಗೆ ಮಂಡಿಸಿದರು. ಆದರೆ, ಕೊನೆಯಲ್ಲಿ ಅವರು ಹೇಳಿದ ಒಂದು ಮಾತಂತೂ ಮುಖ್ಯಮಂತ್ರಿಗಳು ಸೇರಿದಂತೆ ಸಭೆಯಲ್ಲಿದ್ದ ಎಲ್ಲರಿಗೂ ಅಚ್ಚರಿ ಹಾಗೂ ಆಘಾತವನ್ನುಂಟುಮಾಡಿತು. ವಿಜಯಕುಮಾರ್, ಹೇಳಿದ ಆ ಮಾತು 'ಮೈಮುಲ್ ನಷ್ಟದಲ್ಲಿದೆ'.

ಇದನ್ನು ಕೇಳುತ್ತಿದ್ದಂತೆಯೇ ಮುಖ್ಯಮಂತ್ರಿಗಳು ಅಚ್ಚರಿಗೊಳಗಾದರು. ಹಾಸನ ಡೈರಿ ಲಾಭದಲ್ಲಿದೆ, ನಿಮ್ಮ ಡೈರಿಗೆ ಯಾಕೆ ನಷ್ಟ? ಬೇಕಾಬಿಟ್ಟಿ ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡಿದ್ದೀರಾ? ಎಂದು ಪ್ರಶ್ನಿಸಿದ್ದಲ್ಲದೇ, ಅದಕ್ಕೇ ನಿಮ್ಮ ಡೈರಿಗೆ ನಷ್ಟವಾಗುತ್ತಿದೆ ಎಂದು ಹೇಳಿದರು. ಇದನ್ನು ನಿರೀಕ್ಷಿಸದ ವಿಜಯಕುಮಾರ್ ಸಾವರಿಸಿಕೊಂಡು "ಸ್ಯಾಂಕ್ಷನ್ ಪೋಸ್ಟ್‌ಗಳಿಗೆ ಮಾತ್ರ ಅಪಾಯಿಂಟ್‌ಮೆಂಟ್ ಮಾಡಿಕೊಂಡಿದ್ದೇವೆ ಸರ್" ಎಂದು ಸಮಜಾಯಿಷಿ ನೀಡಿದರು. ಆಗ ಸಿದ್ದರಾಮಯ್ಯ, "ಅಯ್ಯೋ... ಇವರು ಎಂಥ ಕಿಲಾಡಿಗಳು ಅಂದ್ರೆ ಅವರ್ರಿಗೆ ಇಷ್ಟ ಬಂದಂತೆ ಪೋಸ್ಟ್ ಸ್ಯಾಂಕ್ಷನ್ ಮಾಡಿಸಿಕೊಳ್‌ತಾರೆ" ಎಂದು ನಗುತ್ತಲೇ ಕೇಳಿದರು. ಅಷ್ಟಕ್ಕೇ ನಿಲ್ಲದ ಮುಖ್ಯಮಂತ್ರಿಗಳು ಹೊರಗುತ್ತಿಗೆ ಸೇರಿದಂತೆ ಯಾವುದೇ ನೇಮಕಾತಿ ಮಾಡಿಕೊಳ್ಳಬೇಕಾದರೂ ಸರ್ಕಾರದ ಅನುಮತಿಯನ್ನು ಕಡ್ಡಾಯವಾಗಿ ಪಡೆಯಬೇಕು ಎಂದು ಖಡಕ್ಕಾಗಿ ಹೇಳಿದರು. ನಷ್ಟ ಆದರೆ ವಿಧಾನಸಭೆಯಲ್ಲಿ ಉತ್ತರ ಕೊಡುವುದು ನೀವಲ್ಲಾ, ನಾವು ಎಂದು ಗರಂ ಆಗಿಯೇ ಹೇಳಿದ ಸಿದ್ದರಾಮಯ್ಯ, ಇನ್ನು ಮುಂದೆ ಮೀಸಲಾತಿ ನಿಯಮ ಅನುಸರಿಸಿ ನೇಮಕ ಮಾಡಿಕೊಳ್ಳಬೇಕು ಎಂದರು.

ಈ ವೇಳೆ ಮಧ್ಯೆ ಪ್ರವೇಶಿಸಿದ ವಿಧಾನ ಪರಿಷತ್ ಸದಸ್ಯ ಎ.ಹೆಚ್. ವಿಶ್ವನಾಥ್, "ಐಪಿಎಸ್, ಐಎಎಸ್ ಅಧಿಕಾರಿಗಳ ಮಕ್ಕಳು ಗುತ್ತಿಗೆದಾರರಾಗಿರುತ್ತಾರೆ. ಅವರು ತಮ್ಮ ಪ್ರಭಾವ ಬಳಸಿ ಹೊರಗುತ್ತಿಗೆ ನೌಕರರನ್ನು ನೇಮಕಾತಿಗೆ ಪೋಸ್ಟ್ ಕ್ರಿಯೇಟ್ ಮಾಡುತ್ತಾರೆ. ಹೊರಗುತ್ತಿಗೆ ಈಗ ದಂಧೆಯಾಗಿದ್ದು, ನಾವು ಗುತ್ತಿಗೆದಾರನಿಗೆ 15 ಸಾವಿರ ರೂ. ವೇತನ ಕೊಟ್ಟರೆ ಅವನು ನೌಕರನಿಗೆ 12 ಸಾವಿರ ಕೊಡುತ್ತಾನೆ" ಎಂದರು.

ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಿದ್ದರಾಮಯ್ಯರದ್ದು

ಅದೇ ಗತ್ತು–ಗೈರತ್ತು



ಸಾಧನೆ ಮಾಡದ ಅಧಿಕಾರಿಗಳಿಗೆ ಚಾಟಿ; ಕೆಲಸ ಮಾಡುವ ಅಧಿಕಾರಿಗಳಿಗೆ ನೀತಿಪಾಠ

ಮೈಸೂರು, ಆ. 28– ಸಿದ್ದರಾಮಯ್ಯ ಎಂದರೆ ಗತ್ತು–ಗೈರತ್ತು... ಈ ಮಾತು ಸಿದ್ದರಾಮಯ್ಯ ಸಚಿವರು, ಉಪ ಮುಖ್ಯಮಂತ್ರಿಯಾಗಿದ್ದಾಗಿನಿಂದಲೂ ಕೇಳಿ ಬರುತ್ತಿತ್ತು. ಅವರು ಕೆಡಿಪಿ ಸಭೆ ನಡೆಸುತ್ತಾರೆಂದರೆ ಅಧಿಕಾರಿಗಳು ಒಂದು ವಾರಕ್ಕೂ ಹಿಂದಿನಿಂದಲೇ ಅಂಕಿ–ಅಂಶಗಳನ್ನು ಸಂಗ್ರಹಿಸಿಕೊಂಡು ಸಿದ್ಧವಾಗುತ್ತಿದ್ದರು. ಹಲವು ವರ್ಷಗಳ ಬಳಿಕ ಮತ್ತೆ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅದೇ ಖದರ್ ಉಳಿಸಿಕೊಂಡಿರುವುದು ಇಂದು ನಡೆದ ಕೆಡಿಪಿ ಸಭೆಯಲ್ಲಿ ಕಂಡುಬಂತು.

ಸಿದ್ದರಾಮಯ್ಯ ವಿಧಾನಸಭೆಯಲ್ಲಿ ಕೆಲವೊಮ್ಮೆ ಮಾತನಾಡುವಾಗ ಶಾಲಾ ಶಿಕ್ಷಕರಂತೆ ಕೆಲ ಉದಾಹರಣೆಗಳನ್ನು ಕೊಟ್ಟು ಮಾತನಾಡುತ್ತಾರೆ. ಅವರು ವಿರೋಧ ಪಕ್ಷದ ನಾಯಕರಾಗಿ ಮಾತನಾಡುವಾಗಲೂ ಕೂಡ ಅವರ ಗತ್ತು–ಗೈರತ್ತಿಗೆ ಆಡಳಿತ ಪಕ್ಷದ ಸದಸ್ಯರೇ ತಲೆದೂಗುವುದುಂಟು. ಇನ್ನು ಕೆಡಿಪಿ ಸಭೆಗಳಲ್ಲಿ ಅಧಿಕಾರಿಗಳು ಹೋಂ ವರ್ಕ್ ಮಾಡದ ವಿದ್ಯಾರ್ಥಿಗಳಂತೆ ಸಿದ್ದರಾಮಯ್ಯ ಮುಂದೆ ಸ್ವಲ್ಪ ಹಿಂಜರಿಕೆಯಿಂದಲೇ ಕುಳಿತಿರಬೇಕಾಗುತ್ತದೆ. ಅದು ಯಾವುದೇ ಇಲಾಖೆ ಇರಲೀ ಅದಕ್ಕೆ ಸಂಬಂಧಿಸಿದ ಎಲ್ಲಾ ವಿವರಗಳನ್ನು ಸಿದ್ದರಾಮಯ್ಯ ನೆನಪಿನಲ್ಲಿಟ್ಟುಕೊಂಡಿರುತ್ತಾರೆ. ಅದುವೇ ಅವರ ತಾಕತ್ತು.

ಇಂದು ನಡೆದದ್ದೂ ಅದೇ. ಕೃಷಿ ಇಲಾಖೆಯ ಪ್ರಗತಿ ಪರಿಶೀಲನೆ ವೇಳೆ ಸಿದ್ದರಾಮಯ್ಯ ಅವರು, "ಅಧಿಕಾರಿಗಳು ಹಳ್ಳಿಗಳಿಗೆ ಹೋಗಿ ರೈತರನ್ನು ಭೇಟಿ ಮಾಡಿ, ಅವರ ಸಮಸ್ಯೆಯನ್ನು ಅರಿಯಬೇಕು. ನಿಮಗಿಂತ ಕೃಷಿಯಲ್ಲಿ ರೈತರು ಅನುಭವಿಗಳಾಗಿರುತ್ತಾರೆ. ಆದ್ದರಿಂದ ಅವರು ಹೇಳುವುದನ್ನು ತಾಳ್ಮೆಯಿಂದ ಕೇಳಬೇಕು. ಅದನ್ನೆಲ್ಲಾ ಡೈರಿಯಲ್ಲಿ ಬರೆದಿಡಬೇಕು" ಎಂದು ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಕರು ಪಾಠ ಮಾಡುವಂತೆ ಹೇಳುತ್ತಿದ್ದಾಗ ಅಧಿಕಾರಿಗಳು ಮಾತ್ರವಲ್ಲ ಜನಪ್ರತಿನಿಧಿಗಳೂ ಕೂಡ ತದೇಕಚಿತ್ತದಿಂದ ಆಲಿಸುತ್ತಿದ್ದರು. ಆಗ ಶಿಕ್ಷಕರು ವಿದ್ಯಾರ್ಥಿಯನ್ನು ಪ್ರಶ್ನೆ ಕೇಳುವ ರೀತಿ, ಜಂಟಿ ಕೃಷಿ ನಿರ್ದೇಶಕ ಚಂದ್ರಶೇಖರ್ ಅವರನ್ನುದ್ದೇಶಿಸಿ "ನೀವು ಡೈರಿ ಬರೆದಿದ್ದೀರೇನ್ರಿ" ಎಂದು ಪ್ರಶ್ನಿಸಿದಾಗ, ಚಂದ್ರಶೇಖರ್ ಉತ್ತರಿಸಲಾಗದೇ ತಲೆ ತಗ್ಗಿಸಿ ನಿಂತರು. ಆಗ ಸಿದ್ದರಾಮಯ್ಯ "ತಮ್ಮದೇ ಆದ ಧಾಟಿಯಲ್ಲಿ ಯಾರ್ಯಾರ್ ಡೈರಿ ಬರೆಯುತ್ತಿದ್ದೀರಿ ಕೈ ಎತ್ತಿ" ಎಂದಾಗ ಕೆಲವು ಅಧಿಕಾರಿಗಳು ಮುಖ್ಯಮಂತ್ರಿಗಳಿಂದ ಭೇಷ್ ಎನಿಸಿಕೊಳ್ಳಲು ಕೈ ಎತ್ತಿಬಿಟ್ಟರು. ತಕ್ಷಣವೇ ಸಿದ್ದರಾಮಯ್ಯ, "ಕೈ ಎತ್ತಿದವರು ನಿಮ್ಮ ಡೈರಿ ತಗೋಂಡ್ ಬನ್ನಿ" ಎಂದಾಗ ಯಾರೊಬ್ಬರೂ ಡೈರಿ ಕೊಡಲಿಲ್ಲ. ಆಗ ಇಡೀ ಸಭಾಂಗಣ ನಗೆಗಡಲಲ್ಲಿ ತೇಲಾಡಿತು. ಸಿದ್ದರಾಮಯ್ಯ ಅವರು ನಗುತ್ತಾ, ನೀವ್ಯಾರೂ ಡೈರಿ ಬರೆದಿರಲ್ಲ ಬಿಡಿ ಎಂದು ಹಾಸ್ಯಚಟಾಕಿ ಹಾರಿಸಿದ ಮರುಕ್ಷಣವೇ "ಇನ್ನು ಮುಂದೆ ಎಲ್ಲಾ ಅಧಿಕಾರಿಗಳೂ ಡೈರಿ ಬರೆಯಬೇಕು ಗೊತ್ತಾ" ಎಂದು ಗತ್ತಿನಿಂದಲೇ ಹೇಳಿದರು.

ಏಳು ಗಂಟೆಗಳ ಕಾಲ ಸಿದ್ದರಾಮಯ್ಯ ನಡೆಸಿದ ಸುದೀರ್ಘ ಕೆಡಿಪಿ ಸಭೆಯಲ್ಲಿ ಇಂತಹ ಅನೇಕ ಪ್ರಸಂಗಗಳು ನಡೆದವು. ತಪ್ಪು ಮಾಡಿದ ಅಧಿಕಾರಿಗಳನ್ನು ಗತ್ತಿನಿಂದ ತರಾಟೆಗೆ ತೆಗೆದುಕೊಳ್ಳುತ್ತಿದ್ದ ಸಿದ್ದರಾಮಯ್ಯ, ಅದೇ ವೇಳೆ ಅಧಿಕಾರಿಗಳಿಗೆ ಹೇಗೆ ಕೆಲಸ ನಿರ್ವಹಿಸಬೇಕು ಎಂದು ಪಾಠ ಮಾಡುತ್ತಿದ್ದರು. ಈ ಮಧ್ಯೆ ಅವರು ಹಾರಿಸಿದ ಚಟಾಕಿಗಳಿಂದ ಸಭಾಂಗಣ ನಗೆಗಡಲಲ್ಲಿ ತೇಲಿದ್ದೂ ಉಂಟು.

ಕೆಲ ಹಿರಿಯ ಅಧಿಕಾರಿಗಳು ಸಿದ್ದರಾಮಯ್ಯ ಅವರು, ಆಗಿನ ಗತ್ತನ್ನು ಈಗಲೂ ಉಳಿಸಿಕೊಂಡಿದ್ದಾರೆ ಎಂದು ಉದ್ಧರಿಸುತ್ತಿದ್ದದ್ದು ಕೇಳಿ ಬಂತು. ಅದೇ ವೇಳೆ ಕೆಲ ಅಧಿಕಾರಿಗಳು ಸಿದ್ದರಾಮಯ್ಯನವರ ಮೀಟಿಂಗ್‌ಗೆ ಹೋಂ ವರ್ಕ್ ಮಾಡಿಕೊಂಡು ಬರಬೇಕು ಎನ್ನುತ್ತಿದ್ದರು. ಕಿರಿಯ ಶಾಸಕರಂತೂ ಸಿದ್ದರಾಮಯ್ಯ ನಡೆಸಿದ ಕೆಡಿಪಿ ಸಭೆಯನ್ನು ತದೇಕಚಿತ್ತದಿಂದ ಗಮನಿಸುತ್ತಿದ್ದದ್ದು ಕಂಡುಬಂತು. ಕೆಲ ಹಿರಿಯ ಪತ್ರಕರ್ತರು ಸಿದ್ದರಾಮಯ್ಯನವರ ಹಿಂದಿನ ಕೆಡಿಪಿ ಸಭೆಗಳ ಬಗ್ಗೆ ಸ್ವಾರಸ್ಯಕರವಾಗಿ ಕಿರಿಯ ಪತ್ರಕರ್ತರಿಗೆ ಹೇಳುತ್ತಾ, ಸಿದ್ದರಾಮಯ್ಯನವರ ಖದರ್ ಈಗಲು ಆಗಿನಂತೆಯೇ ಇದೆ ಎಂದು ಹೇಳುತ್ತಿದ್ದದ್ದು ಕೇಳಿಬಂತು.

ಸಾಮಾಜಿಕ ವ್ಯವಸ್ಥೆ ಗೊಂದಲಕ್ಕೆ ವಚನ ಸಾಹಿತ್ಯವೇ ಪರಿಹಾರ



ಮೈಸೂರು, ಆ.28(ಎಸ್‌ಪಿಎನ್)– ಜಗತ್ತಿನಲ್ಲಿ ಸಾಮರಸ್ಯ, ಸೌಹಾರ್ದತೆ, ಸಮಾನತೆಯ ಕೊರತೆಯಿಂದ ಗೊಂದಲಮಯ ವಾತಾವರಣ ಸೃಷ್ಟಿಯಾಗುತ್ತಿದೆ. ಇದಕ್ಕೆಲ್ಲ ವಚನ ಸಾಹಿತ್ಯವೇ ಮದ್ದು ಎಂದು ನಿವೃತ್ತ ಪ್ರಾಧ್ಯಾಪಕ ಡಾ.ಎಸ್.ಶಿವರಾಜಪ್ಪ ಅಭಿಪ್ರಾಯಪಟ್ಟರು.

ಮೈಸೂರು ಕುದೇರು ಮಠದ ಆವರಣದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ನಗರ ಘಟಕದ ವತಿಯಿಂದ ಆಯೋಜಿಸಿದ್ದ ಮನೆಮನೆ ಶ್ರಾವಣ ಮಾಸದ ಶರಣರ ಸಂದೇಶ ಕಾರ್ಯಕ್ರಮದಲ್ಲಿ ಮಾತನಾಡಿದರು. ಪ್ರಸ್ತುತ ಜಗತ್ತಿನ ಕೆಲವೇ ಕೆಲವು ಮಂದಿಯಲ್ಲಿ ಸಂಪತ್ತು ಕ್ರೂಡೀಕರಣವಾಗುತ್ತಿದೆ. ಆ ಸಂಪತ್ತು ಇಲ್ಲದವರಿಗೂ ದೊರಕುವಂತಾಗಬೇಕು. ಈ ಮಾತನ್ನು 12ನೇ ಶತಮಾನದಲ್ಲೇ ಶರಣರು ಬಯಸಿದ್ದರು ಎಂದರು. ಕಾಯಕ ಮತ್ತು ದಾಸೋಹದಲ್ಲಿ ಸತ್ಯ ಶುದ್ಧತೆ ಇದ್ದಲ್ಲಿ ವಿಶ್ವ ಸಮುದಾಯ ಪರಸ್ಪರ ಹಿತಕರ ಬದುಕು ಸಾಗಿಸಲು ಸಾಧ್ಯ, ಸ್ವಾರ್ಥ ಚಿಂತನೆ ಮೇಲುಗೈ ಸಾಧಿಸುತ್ತಿರುವಾಗ ಗೊಂದಲಮಯ ಸಮಾಜದಲ್ಲಿ ಬದುಕು ರೂಪಿಸಲು ಸಾಧ್ಯವೇ ಎಂದು ಪ್ರಶ್ನಿಸಿದರು.

ದೇವರ ಮುಂದಿನ ಒಂದು 'ಹಣತೆ' ಬೆಳಗಲು ಎಷ್ಟು ಜನರ ಶ್ರಮವಿರುತ್ತದೆ. ಕುಂಬಾರ ಮಾಡಿದ ಮಣ್ಣಿನ ಹಣತೆ, ಗಾಣಿಗ ಮಾಡಿದ ಎಣ್ಣೆ ಒಕ್ಕಲಿಗ ಮಾಡಿದ ಬತ್ತಿ ಸೇರಿ ಬೆಳಗುವ ಜ್ಯೋತಿಯಾಗುತ್ತದೆ. ಅಂತೆಯೇ ನಾವು ತಿನ್ನುವ ಆಹಾರವೂ ಹಲವಾರು ವ್ಯಕ್ತಿಗಳ ಶ್ರಮವಿದೆ. ಇವಾರವ ಎಂಬುದು ವ್ಯಕ್ತಿ ಸಂಬಂಧಕ್ಕೆ ಕುರಿತದ್ದಲ್ಲ ಸಮಷ್ಟಿ ಕ್ರಿಯೆ ಮತ್ತು ಸಮಾಜಕ್ಕೆ ನಮಗೆ ಹೇಳಿದ್ದು ಎಂದು ಹೇಳಿದರು. ಈ ವೇಳೆ ಕುದೇರು ಮಠದ ಕುದೇರು ಮಠದ ಶ್ರೀ ಇಮ್ಮಡಿ ಗುರುಲಿಂಗಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಟಿ.ಎಸ್.ಕುಮಾರಸ್ವಾಮಿ, ನಂದೀಶ್ ಲೋಹಿತ್, ಗೀತಾ, ಮಂಜುಳಾ, ಡಾ.ಮುದ್ದು ಮಲ್ಲೇಶ್ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಮೈಸೂರಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಬಿಡುವಿಲ್ಲದ ಕಾರ್ಯಕ್ರಮ



ಕಾವೇರಿ ಎಂಪೋರಿಯಂನಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್

ಮೈಸೂರು, ಆ.28– ಮೈಸೂರಿನಲ್ಲಿ ಆಯೋಜಿಸಿರುವ ಗೃಹಲಕ್ಷ್ಮಿ ಕಾರ್ಯಕ್ರಮ ಸೇರಿದಂತೆ ಇನ್ನಿತರೆ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಕೆಪಿಸಿಸಿ ಅಧ್ಯಕ್ಷರೂ ಆದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಂಗಳವಾರ ಮೈಸೂರಿಗೆ ಆಗಮಿಸಿದ್ದಾರೆ.

ಮೈಸೂರು ಚಾಮುಂಡಿಬೆಟ್ಟಕ್ಕೆ ಆ.29ರಂದು ಬೆಳಗ್ಗೆ 9 ಗಂಟೆಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಭೇಟಿ ನೀಡಿ, ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸಲಿದ್ದಾರೆ. ನಂತರ ಬೆಳಗ್ಗೆ 10.30ಕ್ಕೆ ಗೃಹಲಕ್ಷ್ಮಿ ಯೋಜನೆಯ ಸೌಲಭ್ಯ ವಿತರಣೆ ಕಾರ್ಯಕ್ರಮದ ಪೂರ್ವ ತಯಾರಿ, ವೀಕ್ಷಣೆ ಮಾಡಲು ಮೈಸೂರಿನ ನಾನಾ ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ. ಮಧ್ಯಾಹ್ನ 1ಕ್ಕೆ ಮೈಸೂರು ತಾಲೂಕಿನ ಕಡಕೊಳ ಕೈಗಾರಿಕಾ ಪ್ರದೇಶದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಅಡಿಕೆ ಹಾಳೆ ತಯಾರಿಕಾ ಘಟಕದ ಉದ್ಘಾಟನಾ ಸಮಾರಂಭ, ಮಧ್ಯಾಹ್ನ 3ಕ್ಕೆ ಗೃಹಲಕ್ಷ್ಮಿ ಯೋಜನೆ ಕುರಿತು ಜೂಮ್ ಮೀಟಿಂಗ್ ಮೂಲಕ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು, ಜಿಪಂ ಸಿಇಓಗಳೊಂದಿಗೆ ಚರ್ಚೆ ನಡೆಸಲಿದ್ದಾರೆ.

ಸಂಜೆ 5 ಗಂಟೆಗೆ ಮೈಸೂರು ಸಚ್ಚಿದಾನಂದ ಆಶ್ರಮದಲ್ಲಿನ ಶುಕವನದಲ್ಲಿ ಗಿಳಿಗಳಿಗಾಗಿ ಹೊಸದಾಗಿ ಕಟ್ಟಿರುವ 'ಭುವಿವನ' ಹೊಸ ವಿಭಾಗದ ಉದ್ಘಾಟನೆ, ಸಂಜೆ 6ಕ್ಕೆ ಮೈಸೂರು ಕೆ.ಆರ್.ಪುರಂನಲ್ಲಿರುವ ನಂಜರಾಜ ಬಹದ್ದೂರ್ ಎಜುಕೇಷನ್ ಛಾರಿಟಿ ಫಂಡ್ ಬೋರ್ಡಿಂಗ್ ಹೋಂ ಶ್ರೀರಾಮ ಅರಸು ಮಂಡಳಿಯ ಶತಮಾನೋತ್ಸವ ಅಂಗವಾಗಿ ನೂತನ ಪ್ರಾರ್ಥನಾ ಮತ್ತು ಬೋಧನ ಕೊಠಡಿಗಳ ಉದ್ಘಾಟನೆ ಮಾಡಲಿದ್ದಾರೆ ಎಂದು ಡಿಸಿಎಂ ಆಪ್ತ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಡಿಸಿಎಂ ಶಿವಕುಮಾರ್ ಅವರು, ಮಹಾರಾಜ ಕಾಲೇಜು ಮೈದಾನಕ್ಕೆ ಸೋಮವಾರ ಸಂಜೆ ಭೇಟಿ ನೀಡಿ, ಕಾರ್ಯಕ್ರಮ ಸಿದ್ಧತೆ ಕುರಿತು ಪರಿಶೀಲಿಸಿದ ನಂತರ ಆ.30ರಂದು ಕಾರ್ಯಕ್ರಮ ಆಗಮಿಸುವ ಗಣ್ಯರಿಗೆ ನೀಡುವ ಸಲುವಾಗಿ ಉಡುಗೊರೆಗಳ ಖರೀದಿಸಲು ಕಾವೇರಿ ಎಂಪೋರಿಯಂಗೆ ಭೇಟಿ ನೀಡಿದ್ದರು.

ತಮಿಳುನಾಡಿಗೆ ನಿತ್ಯ 5000 ಕ್ಯುಸೆಕ್ ನೀರು ಹರಿಸುವ ಸಂಬಂಧ ಕಾನೂನು ತಜ್ಞರೊಂದಿಗೆ ಚರ್ಚಿಸಿ ನಿರ್ಧಾರ

ಮೈಸೂರು, ಆ.28– ತಮಿಳುನಾಡಿಗೆ ನಿತ್ಯ ಐದು ಸಾವಿರ ಕ್ಯುಸೆಕ್ ನೀರು ಹರಿಸುವಂತೆ ಕಾವೇರಿ ನದಿ ನೀರು ನಿಯಂತ್ರಣ ಸಮಿತಿ ಸೂಚಿಸಿದ್ದು, ಈ ಸಂಬಂಧ ಕಾನೂನು ಸಲಹೆಗಾರರೊಂದಿಗೆ ಚರ್ಚಿಸಿ ಮುಂದಿನ ಕ್ರಮ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರು ಜಿಲ್ಲಾ ಪಂಚಾಯ್ತಿ ಬಳಿ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, 15 ದಿನಗಳವರೆಗೆ ಹತ್ತು ಸಾವಿರ ಕ್ಯೂಸೆಕ್ ನೀರು ಬಿಡುವಂತೆ ಹಿಂದಿನ ಸಭೆಯಲ್ಲಿ ತಿಳಿಸಿದ್ದರು. ಆ ಪ್ರಕಾರ ಆ.31ರವರೆಗೆ 86 ಟಿಎಂಸಿ ನೀರು ನೀಡಬೇಕಿತ್ತು. ಆದರೆ ಈವರೆಗೆ 30 ಟಿಎಂಸಿ ಮಾತ್ರ ನೀಡಿದ್ದೇವೆ. ಪ್ರತಿದಿನ 24 ಸಾವಿರ ಕ್ಯೂಸೆಕ್ ನೀರು ನೀಡುವಂತೆ ತಮಿಳುನಾಡು ವಾದಿಸಿದೆ. ನಾವು ಕೊಡಲು ಸಾಧ್ಯವಿಲ್ಲ ಎಂದಿದ್ದೇವೆ ಎಂದರು.

ಸಮಿತಿ ತೀರ್ಪು ಸಂಬಂಧ ನಾವು ನ್ಯಾಯಾಲಯಕ್ಕೆ ಅರ್ಜಿ ಹಾಕುವ ಸಂಬಂಧ ಪರಿಶೀಲಿಸಲಾಗುವುದು. ಕಾನೂನು ಘಟಕದೊಂದಿಗೆ ಚರ್ಚಿಸಿ ಮುಂದಿನ ಕ್ರಮ ಕೈಗೊಳ್ಳುತ್ತೇವೆ. ಜಲಸಂಪನ್ಮೂಲ ಇಲಾಖೆ ಜೊತೆ ಮಾತನಾಡಿ ಸಂಕಷ್ಟ ಸೂತ್ರ ಅನುಸರಿಸಲು ಪ್ರಯತ್ನಿಸುತ್ತಿದ್ದೇವೆ. ನಮ್ಮ ಬಳಿಯೇ ಅಗತ್ಯ ಪ್ರಮಾಣದ ನೀರಿಲ್ಲ. ನಮ್ಮ ಜನರಿಗೆ ಕುಡಿಯುವ ನೀರು ಹಾಗೂ ಬೆಳೆ ರಕ್ಷಣೆಗೆ ಆದ್ಯತೆ ನೀಡಬೇಕಿದೆ ಎಂದರು.

ರಾಜ್ಯದ ಹಿತ ಕಾಯುವುದು ನಮ್ಮ ಮೊದಲ ಆದ್ಯತೆ. ಇದೇ ಅಂತಿಮವಲ್ಲ. ಈ ಸಂಬಂಧ ಸುಪ್ರೀಂ ಕೋರ್ಟ್ ಕೂಡ ಮಧ್ಯ ಪ್ರವೇಶಿಸುವುದಿಲ್ಲ ಎಂದಿದೆ. ಕಾವೇರಿ ನೀರು ನಿರ್ವಹಣೆ ಪ್ರಾಧಿಕಾರ ಆ.29ರಂದು ಮತ್ತೊಂದು ಸುತ್ತಿನ ಸಭೆ ನಡೆಸಲಿದೆ. ಅಂತಿಮ ತೀರ್ಪು ಬರುವವರೆಗೂ ಕಾದು ನೋಡುತ್ತೇವೆ.

–ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ

ಛದ್ಮವೇಷದ ಫೋಟೋ ಸ್ಪರ್ಧೆ

ಮೈಸೂರು, ಆ.28–ಶ್ರೀ ಕೃಷ್ಣ ಜನ್ಮಾಷ್ಟಮಿ ಅಂಗವಾಗಿ ಮಕ್ಕಳ ಕೃಷ್ಣಧಾರಿ ಛದ್ಮವೇಷದ ಫೋಟೋ ಸ್ಪರ್ಧೆಯನ್ನು ಭೀಮಾ ಜ್ಯುವೆಲ್ಸ್ ವತಿಯಿಂದ ಆಯೋಜಿಸಲಾಗಿದೆ. ಆಸಕ್ತ ಪೋಷಕರು 3 ವರ್ಷದಿಂದ 5 ವರ್ಷದೊಳಗಿನ ಕೃಷ್ಣಧಾರಿ ಛದ್ಮವೇಷದ ಇತ್ತೀಚಿನ ಫೋಟೋಗಳನ್ನು ಬಿ.ಎನ್.ರಸ್ತೆಯಲ್ಲಿ ಭೀಮಾ ಜ್ಯುವೆಲ್ಸ್ ಮಳಿಗೆಗೆ ಸೆ.5ರೊಳಗೆ ತಲುಪಿಸತಕ್ಕದ್ದು, ವಿಜೇತ ಮಕ್ಕಳಿಗೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನ ನೀಡಲಾಗುವುದು. ಹೆಚ್ಚಿನ ವಿವರಗಳಿಗೆ ಮೊ.ನಂ:94487–38811 ಅನ್ನು ಸಂಪರ್ಕಿಸುವಂತೆ ಭೀಮಾ ಜ್ಯುವೆಲ್ಸ್ ಪ್ರಕಟಣೆ ತಿಳಿಸಿದೆ.

ಅತಿಥಿ ಶಿಕ್ಷಕರ, ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

ಮೈಸೂರು, ಆ.28– ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಶಾಲೆ ಹಾಗೂ ಕಾಲೇಜುಗಳಲ್ಲಿ ಅತಿಥಿ ಶಿಕ್ಷಕರು, ಉಪನ್ಯಾಸಕರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಲ್ಪಸಂಖ್ಯಾತರ ಡಾ. ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆ ದೊಡ್ಡಕಾನ್ಯದಲ್ಲಿ ಗಣಿತ ಶಿಕ್ಷಕರ ಹುದ್ದೆಗೆ ಬಿಎಸ್ಸಿ, (ಪಿಸಿಎಂ) ಬಿ.ಎಡ್, ಸಮಾಜ ವಿಜ್ಞಾನ (ಸಂಭವನೀಯ ಹುದ್ದೆ) ವಿಷಯಕ್ಕೆ ಬಿಎ, ಬಿ.ಇಡಿ ಹಾಗೂ ಇಂಗ್ಲಿಷ್ ಭಾಷಾ ಶಿಕ್ಷಕರಿಗೆ (ಸಂಭವನೀಯ ಹುದ್ದೆ) ಬಿಎ, ಬಿ.ಇಡಿ (ಇಂಗ್ಲಿಷ್) ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಅಲ್ಪಸಂಖ್ಯಾತರ ಮುರಾರ್ಜಿ ದೇಸಾಯಿ ವಸತಿ ಶಾಲೆ ಬೆಟ್ಟದಪುರ, ಕಂಪ್ಯೂಟರ್ ಶಿಕ್ಷಕರ ಹುದ್ದೆಗೆ ಬಿಸಿಎ ಅಥವಾ ಬಿಎಸ್‌ಸಿ (ಕಂಪ್ಯೂಟರ್ ಸೈನ್ಸ್) ಅಥವಾ ಎಂಸಿಎ ವಿದ್ಯಾರ್ಹತೆಯುಳ್ಳ, ಅಲ್ಪಸಂಖ್ಯಾತರ ಮೌಲಾನ ಆಜಾದ್ ಮಾದರಿ ಶಾಲೆ ಹುಣಸೂರು, ದೈಹಿಕ ಶಿಕ್ಷಕರ ಹುದ್ದೆಗೆ ಬಿ.ಪಿ.ಇಡ್ ವಿದ್ಯಾರ್ಹತೆಯುಳ್ಳ, ಅಲ್ಪ ಸಂಖ್ಯಾತರ ಮೌಲನ ಆಜಾದ್ ಮಾದರಿ ಶಾಲೆ, ಕೆಸರೆ ಮೈಸೂರು ತಾಲೂಕಿನಲ್ಲಿ ಹಿಂದಿ ಶಿಕ್ಷಕರ ಹುದ್ದೆಗೆ ಬಿಎ, ಬಿ.ಇಡಿ(ಹಿಂದಿ) ಹಾಗೂ ದೈಹಿಕ ಶಿಕ್ಷಕರ ಹುದ್ದೆಗೆ ಬಿ.ಪಿ.ಇಡ್ ವಿದ್ಯಾರ್ಹತೆಯುಳ್ಳ, ಅಲ್ಪಸಂಖ್ಯಾತರ ಮುರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜು ದೊಡ್ಡ ಕಾನ್ಯದಲ್ಲಿ ಜೀವಶಾಸ್ತ್ರ ವಿಷಯಕ್ಕೆ ಎಂಎಸ್‌ಸಿ, ಬಿ.ಇಡಿ (ಜೀವಶಾಸ್ತ್ರ ಅಥವಾ ಪ್ರಾಣಿಶಾಸ್ತ್ರ) ಹಾಗೂ ಲೆಕ್ಕಶಾಸ್ತ್ರದ ವಿಷಯಕ್ಕೆ ಎಂಕಾಂ, ಬಿ.ಇಡಿ ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 30 ಕೊನೆಯ ದಿನಾಂಕವಾಗಿದ್ದು, ಅಭ್ಯರ್ಥಿಗಳು ಜಿಲ್ಲಾ ಕಛೇರಿಗೆ ಅಥವಾ ಸಂಬಂಧಪಟ್ಟ ಶಾಲೆಗಳಿಗೆ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0821–2422088, 9845210242, 7892251938 ಅನ್ನು ಅಥವಾ ಇಲಾಖೆಯ ವೆಬ್‌ಸೈಟ್ ವಿಳಾಸ https://dom.karnataka.gov.in https://dom.karnataka.gov.in/mysuru/public ಅನ್ನು ಸಂಪರ್ಕಿಸಬಹುದು ಎಂದು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೆ.19ರಂದು ಜಿಯೋ ಏರ್ ಫೈಬರ್ ಬಿಡುಗಡೆ

ನವದೆಹಲಿ: ರಿಲಯನ್ಸ್ ಇಂಡಸ್ಟ್ರೀಸ್‌ನ 46ನೇ ವಾರ್ಷಿಕ ಸಭೆಯಲ್ಲಿ ರಿಲಯನ್ಸ್ ಇಂಡಸ್ಟ್ರೀಸ್ ಅಧ್ಯಕ್ಷ ಮುಖೇಶ್ ಅಂಬಾನಿ ಜಿಯೋ ಏರ್ ಫೈಬರ್ ಬಿಡುಗಡೆ ದಿನಾಂಕವನ್ನು ಘೋಷಿಸಿದ್ದಾರೆ. ಸೆಪ್ಟೆಂಬರ್ 19ರಂದು ಲಾಂಚ್ ಮಾಡಲಾಗುತ್ತದೆ. ಜಿಯೋ ಏರ್ ಫೈಬರ್‌ನಲ್ಲಿ, ಗ್ರಾಹಕರು ಕೇಬಲ್‌ಗಳಿಲ್ಲದೆ ಹೆಚ್ಚಿನ ವೇಗದ **5ಜಿ** ಇಂಟರ್ನೆಟ್ ಸೌಲಭ್ಯವನ್ನು ಪಡೆಯಲು ಸಾಧ್ಯವಾಗುತ್ತದೆ. ಇಂದು ರಿಲಯನ್ಸ್ ಜಿಯೋ ಏರ್ ಫೈಬರ್‌ನಲ್ಲಿ ಅನೇಕ ಉತ್ತಮ ವೈಶಿಷ್ಟ್ಯಗಳನ್ನು ಒದಗಿಸಿದೆ. ಹೆಸರೇ ಸೂಚಿಸುವಂತೆ, ಇದರ ಸಹಾಯದಿಂದ ನೀವು ಯಾವುದೇ ವೈರ್ ಇಲ್ಲದೆ ಇಂಟರ್ನೆಟ್ ಸೌಲಭ್ಯವನ್ನು ಪಡೆಯಲು ಸಾಧ್ಯವಾಗುತ್ತದೆ. ಎಜಿಎಂ ಸಭೆಯಲ್ಲಿ ಅಧ್ಯಕ್ಷ ಮುಖೇಶ್ ಅಂಬಾನಿ ಹಲವು ದೊಡ್ಡ ವಿಷಯಗಳನ್ನು ಹೇಳಿದ್ದಾರೆ.

ಚಲಿಸುತ್ತಿದ್ದ ಬಸ್‌ನಿಂದ ಬಿದ್ದು ಗೃಹಿಣಿ ಸಾವು

ಮಹದೇಶ್ವರಬೆಟ್ಟದ ತಿರುವಿನಲ್ಲಿ ದುರಂತ

ಮಲೆಮಹದೇಶ್ವರಬೆಟ್ಟ, ಆ. 28– ಮಹದೇಶ್ವರಬೆಟ್ಟದ ತಿರುವಿನಲ್ಲಿ ಚಲಿಸುತ್ತಿದ್ದ ಬಸ್‌ನಿಂದ ಬಿದ್ದು ಗೃಹಿಣಿ ಸಾವನ್ನಪ್ಪಿದ ಘಟನೆ ಮಹದೇಶ್ವರ ಬೆಟ್ಟ ಮತ್ತು ತಾಳುಬೆಟ್ಟದ ಮಧ್ಯೆ 25ನೇ ತಿರುವಿನಲ್ಲಿ ಸಂಭವಿಸಿದೆ.

ಮದ್ದೂರು ತಾಲೂಕು ಕರಡಕೆರೆ ಗ್ರಾಮದ ರಾಜು ಎಂಬುವರ ಪತ್ನಿ ವಿನೋದ(45) ಬಸ್‌ನಿಂದ ಬಿದ್ದು ಸಾವನ್ನಪ್ಪಿದವರಾಗಿದ್ದು, ಇವರು ಪತಿಯೊಂದಿಗೆ ಮಹದೇಶ್ವರಬೆಟ್ಟಕ್ಕೆ ಆಗಮಿಸಿದ್ದರು. ದೇವರ ದರ್ಶನ ಮುಗಿದ ನಂತರ ಕೆಎಸ್‌ಆರ್‌ಟಿಸಿ ಬಸ್ (ಕೆಎ 57– 3968) ನಲ್ಲಿ ಸ್ವಗ್ರಾಮಕ್ಕೆ ಪ್ರಯಾಣಿಸಿದ್ದಾರೆ. ಬಸ್‌ನ ಬಾಗಿಲಿನ ಎದುರಿಗಿರುವ ಸೀಟ್‌ನಲ್ಲಿ ಅವರು ಕುಳಿತಿದ್ದರು. ಬಸ್ ವೇಗವಾಗಿ 25ನೇ ತಿರುವಿನಲ್ಲಿ ಚಲಿಸುತ್ತಿದ್ದಂತೆಯೇ ಸೀಟ್‌ನಿಂದ ಬಿದ್ದ ಇವರು ಬಸ್‌ನ ಮೆಟ್ಟಿಲಿನ ಮೂಲಕ ಬಾಗಿಲಿಗೆ ಅಪ್ಪಳಿಸಿದ್ದಾರೆ. ದುರದೃಷ್ಟವಶಾತ್ ಬಸ್‌ನ ಬಾಗಿಲು ಸರಿಯಾಗಿ ಲಾಕ್ ಆಗದ ಕಾರಣ ತೆರೆದುಕೊಂಡ ಪರಿಣಾಮ ಅವರು ಬಸ್‌ನಿಂದ ರಸ್ತೆಗೆ ಬಿದ್ದು ಸಾವನ್ನಪ್ಪಿದ್ದಾರೆ.

ಕೆಎಸ್‌ಆರ್‌ಟಿಸಿ ಬಸ್‌ನ ಬಾಗಿಲು ಸರಿಯಾಗಿ ಲಾಕ್ ಆಗದೇ ಇರುವುದು ಹಾಗೂ ಸೀಟ್‌ನ ಕೊನೆಯಲ್ಲಿ ಕುಳಿತಿರುವವರು ಬೀಳದಂತೆ ಯಾವುದೇ ರೀತಿಯ ಸಪೋರ್ಟ್ ಇಲ್ಲದೇ ಇರುವುದು ಈ ದುರಂತಕ್ಕೆ ಕಾರಣ ಎಂದು ಪ್ರಯಾಣಿಕರು ದೂರಿದ್ದಾರೆ. ಈ ಸಂಬಂಧ ಮಹದೇಶ್ವರಬೆಟ್ಟ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಿಧನ

ಸುನಂದಮ್ಮ



ಮೈಸೂರು, ಆ.28–ಮೈಸೂರಿನ ಬಿಳಿಕೆರೆ ಹೋಬಳಿ ಮನುಗನಹಳ್ಳಿ ಗ್ರಾಮದ ನಿವಾಸಿ ಸುನಂದಮ್ಮ(58) ಅವರು ಅನಾರೋಗ್ಯದಿಂದ ಸೋಮವಾರ ಸಂಜೆ ವಿಧಿವಶರಾಗಿದ್ದಾರೆ. ಮೃತರು ನಾಲ್ವರು ಪುತ್ರಿಯರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಮಂಗಳವಾರ ಬೆಳಗ್ಗೆ ಮನುಗನಹಳ್ಳಿ ಅವರ ಜಮೀನಿನಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರೈತರ ಹಿತಕಾಯಲು ರಾಜ್ಯ ಸರ್ಕಾರ ಬದ್ಧ

ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಭರವಸೆ



ಮಂಡ್ಯ,ಆ.28– ಕಾವೇರಿ ನದಿ ನೀರಿನ ಹಂಚಿಕೆ ಸಂಕಷ್ಟ ಸೇರಿದಂತೆ ಎಲ್ಲಾ ವಿಚಾರ ಗಳಲ್ಲೂ ರಾಜ್ಯದ ರೈತರ ಹಿತಕಾಯಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವ ರಾಯಸ್ವಾಮಿ ತಿಳಿಸಿದರು.

ಭಾರತ ಸರ್ಕಾರದ ಆಹಾರ ಸಂಸ್ಕರಣಾ ಮಂತ್ರಾಲಯ, ರಾಜ್ಯ ಕೃಷಿ ಇಲಾಖೆ, ಜಲಾನಯನ ಅಭಿವೃದ್ಧಿ ಇಲಾಖೆ, ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ, ಕರ್ನಾಟಕ ಕೃಷಿ ವಾಣಿಜ್ಯ ಅಭಿ ವೃದ್ಧಿ ನಿಗಮ, ಮಂಡ್ಯ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಸಹಭಾಗಿತ್ವದಲ್ಲಿ ಸೋಮ ವಾರ ನಗರದ ಡಾ.ರಾಜ್‌ಕುಮಾರ್ ಬಡಾ ವಣೆಯ ಮೈದಾನದಲ್ಲಿ ಏರ್ಪಡಿಸಿದ್ದ ಸಿರಿಧಾನ್ಯ ಮೇಳ, ವಸ್ತು ಪ್ರದರ್ಶನ ಹಾಗೂ ಬೆಲ್ಲದ ಪರಿಷೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಈಗಿನ ರೈತರು ಕಡಿಮೆ ನೀರಿನ ಬಳಕೆ ಮೂಲಕ ಕೃಷಿ ಮಾಡುವ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕು. ಅಂತರ್ಜಲ ಹೆಚ್ಚಿಸುವ ಪ್ರಯತ್ನಗಳನ್ನೂ ನಾವು ಮಾಡ ಬೇಕಿದೆ. ಕೃಷಿ ಹೊಂಡ ಯೋಜನೆಗೆ ಮರು ಚಾಲನೆ ನೀಡಲು ತಯಾರಿ ನಡೆಸಿಕೊಳ್ಳ ಲಾಗುತ್ತಿದ್ದು, ರೈತರ ಬದುಕು ಹಸನಾಗ ಬೇಕೆಂಬುದು ನಮ್ಮ ಆಶಯವಾಗಿದೆ. ಅದಕ್ಕೆ ಪೂರಕವಾದ ಎಲ್ಲಾ ಪ್ರಯತ್ನ ಮಾಡಲಾಗುತ್ತಿದೆ ಎಂದು ಹೇಳಿದರು.

ಇಂದು ಸಿರಿಧಾನ್ಯದ ಬಗ್ಗೆ ವಿಶ್ವದಲ್ಲೇ ವ್ಯಾಪಕ ಚರ್ಚೆ ನಡೆಯುತ್ತಿದೆ. ಹಿಂದೊಮ್ಮೆ ಬಡವರ ಆಹಾರವಾಗಿದ್ದ ಸಿರಿಧಾನ್ಯ ಇಂದು ಸಿರಿವಂತರ ಆಯ್ಕೆಯಾಗುತ್ತಿದೆ. ಪ್ರಪಂಚದ ಅತ್ಯಂತ ಅವಶ್ಯಕ ಧಾನ್ಯವಾಗಿ ಸಿರಿಧಾನ್ಯ ಗುರುತಿಸಿಕೊಳ್ಳುತ್ತಿದೆ. ಈ ವರ್ಷ ಅಂತಾರಾಷ್ಟ್ರೀಯ ಸಿರಿಧಾನ್ಯ ವರ್ಷವಾಗಿದ್ದು, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸಿರಿ ಧಾನ್ಯ ಬೆಳೆಗೆ ವಿವಿಧ ರೀತಿಯಲ್ಲಿ ಪ್ರೋತ್ಸಾಹ ನೀಡುತ್ತಿವೆ. ಕೃಷಿಕರು ಈ ಯೋಜನೆಗಳ ಲಾಭ ಪಡೆಯಬೇಕು. ಸಿರಿಧಾನ್ಯಗಳ ಉತ್ಪನ್ನಗಳ ಮೌಲ್ಯವರ್ಧನೆ, ಬ್ರಾಂಡಿಂಗ್ ಮಾಡಬೇಕು. ಆ ಮೂಲಕ ಆರ್ಥಿಕ ಪ್ರಗತಿ ಸಾಧಿಸಬೇಕೆಂದು ಕರೆ ನೀಡಿದರು.

ಶಾಸಕ ಗಣಿಗ ರವಿಕುಮಾರ್ ಮಾತನಾಡಿ, ಆರೋಗ್ಯದ ದೃಷ್ಟಿಯಿಂದ ಸಿರಿಧಾನ್ಯ ಮೇಳ ರೈತರಿಗೆ ಉಪಯುಕ್ತವಾದ ಕಾರ್ಯಕ್ರಮ ವಾಗಿದ್ದು, ಆರೋಗ್ಯವನ್ನು ಲೆಕ್ಕಿಸದೇ ದುಡಿಮೆ ಮಾಡಿ ಆರೋಗ್ಯ ಕೆಟ್ಟ ನಂತರ ದುಡಿದ ಎಲ್ಲಾ ಹಣವನ್ನು ವ್ಯಯ ಮಾಡಲಾಗುವುದು. ಇದರ ಬದಲು ಆರೋಗ್ಯ ವೃದ್ಧಿಸುವ ಸಿರಿಧಾನ್ಯ ವನ್ನು ಜನರು ಹೆಚ್ಚು ಬಳಸಬೇಕು ಎಂದರು.

ಶಾಸಕ ಪಿ.ಎಂ.ನರೇಂದ್ರಸ್ವಾಮಿ ಮಾತ ನಾಡಿ, ಕೃಷಿಯಲ್ಲಿ ರಾಸಾಯನಿಕ ವಸ್ತುಗಳ ಹೆಚ್ಚು ಬಳಕೆ ಮಾಡುತ್ತಿರುವುದರಿಂದ ಮಣ್ಣು ಸತ್ವವನ್ನು ಕಳೆದುಕೊಳ್ಳುತ್ತಿದೆ. ಈ ಹಿನ್ನೆಲೆಯಲ್ಲಿ ಸಾವಯವ ಕೃಷಿಗೆ ಹೆಚ್ಚಿನ ಒತ್ತು ನೀಡಬೇಕು. ಬೆಳೆ, ನೀರಾವರಿ ಪದ್ಧತಿ ಗಳು ಬದಲಾಗಬೇಕು, ವಿದೇಶಕ್ಕೆ ರಫ್ತು ಮಾಡುವ ರೀತಿ ಸಾವಯವ ಬೆಳೆಗಳನ್ನು ಬೆಳೆಯಬೇಕು. ಇದಕ್ಕೆ ಮಾದರಿಯಾಗಿ ಮಳ ವಳ್ಳಿ ತಾಲೂಕಿನಲ್ಲಿ ಹನಿ ನೀರಾವರಿ ಬಳಸಿ ಕೊಂಡು ಉತ್ತಮ ಬೆಳೆ ಬೆಳೆಯ ಲಾಗುವುದು ಎಂದು ಹೇಳಿದರು.

ವೇದಿಕೆಯಲ್ಲಿ ಆದಿಚುಂಚನಗಿರಿ ಮಠದ ಪೀಠಾಧಿಪತಿ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಶಾಸಕರಾದ ಎ.ಬಿ.ರಮೇಶ್ ಬಾಬು ಬಂಡಿಸಿದ್ದೇಗೌಡ, ಕೆ.ಎಂ.ಉದಯ್ ಗೌಡ, ಮಧು ಜಿ.ಮಾದೇಗೌಡ, ದಿನೇಶ್ ಗೂಳಿಗೌಡ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಕೆ.ಬಿ.ಈಶ್ವರ್ ಪ್ರಸಾದ್, ಆಹಾರ ಸಂಸ್ಕರಣೆ ವಿಭಾಗದ ಸರ್ಕಾರದ ವಿಶೇಷ ಕಾರ್ಯದರ್ಶಿ ಮನೋಜ್ ರಂಜನ್, ಕೃಷಿ ಆಯುಕ್ತ ವೈ.ಎಸ್.ಪಾಟೀಲ್, ಜಲಾನಯನ ಅಭಿವೃದ್ಧಿ ಇಲಾಖೆ ಆಯುಕ್ತ ಡಾ.ಹೆಚ್. ಸಿ.ಗಿರೀಶ್, ಕೃಷಿ ವಿಶ್ವವಿದ್ಯಾನಿಲಯ ಕುಲ ಪತಿ ಡಾ.ಎಸ್.ವಿ.ಸುರೇಶ್, ಜಲಾನಯನ ಅಭಿವೃದ್ಧಿ ಇಲಾಖೆ ನಿರ್ದೇಶಕ ಬಿ.ವೈ. ಶ್ರೀನಿವಾಸ್, ಕೃಷಿ ನಿರ್ದೇಶಕ ಡಾ.ಜಿ.ಟಿ. ಪುತ್ರ, ಕೆಪೆಕ್ ವ್ಯವಸ್ಥಾಪಕ ನಿರ್ದೇಶಕ ಎಂ.ಹೆಚ್.ಬಂಥನಾಳ, ಜಿಲ್ಲಾಧಿಕಾರಿ ಡಾ. ಕುಮಾರ್, ಎಸ್ಪಿ ಎನ್.ಯತೀಶ್, ಜಿಪಂ ಸಿಇಓ ಶೇಖ್ ತನ್ವೀರ್ ಆಸೀಫ್, ಕೆಪೆಕ್ ಸಂಸ್ಥೆ ಪ್ರತಿನಿಧಿ ಆಕಾಂಕ್ಷಾ ಶರ್ಮಾ, ಜಂಟಿ ಕೃಷಿ ನಿರ್ದೇಶಕ ಅಶೋಕ್ ಇತರರಿದ್ದರು.

ಕೃಷಿ ಸಂಸ್ಕೃತಿಗೆ ಹೆಸರುವಾಸಿಯಾಗಿರುವ ಮಂಡ್ಯದಲ್ಲಿ ಏರ್ಪಡಿಸಿರುವ ಸಿರಿಧಾನ್ಯ ಮೇಳ ಹಲವು ವಿಭಿನ್ನತೆಯಿಂದ ಗಮನ ಸೆಳೆಯಿತು. ಶ್ರೀಗಳು, ಸಚಿವರು ಹಾಗೂ ಗಣ್ಯರಿಗೆ ಪೂರ್ಣಕುಂಭ ಸ್ವಾಗತದ ಜೊತೆಗೆ ಎತ್ತಿನಬಂಡಿಯಲ್ಲಿ ಕೂರಿಸಿ ಮೆರವಣಿಗೆಯಲ್ಲಿ ಕರೆತರಲಾಯಿತು. ಸಚಿವ ಚಲುವರಾಯಸ್ವಾಮಿ ಅವರೇ ಎತ್ತಿನ ಗಾಡಿ ಚಲಾಯಿಸಿದ್ದು ವಿಶೇಷವಾಗಿತ್ತು.

ಮುಂದಿನ ಐದು ವರ್ಷ ಯಾವ ಚುನಾವಣೆಯಲ್ಲೂ ನಿಖಿಲ್ ಸ್ಪರ್ಧಿಸಲ್ಲ

ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಸ್ಪಷ್ಟನೆ




ಕುಮಾರಸ್ವಾಮಿ   ನಿಖಿಲ್ ಕುಮಾರಸ್ವಾಮಿ

ಮಂಡ್ಯ, ಆ.28– ನಿಖಿಲ್ ಕುಮಾರಸ್ವಾಮಿ ಸತತ ಎರಡು ಚುನಾವಣೆಯಲ್ಲಿ ಸೋಲು ಕಂಡಿದ್ದು, ಸದ್ಯಕ್ಕೆ ರಾಜಕೀಯದ ಸಹವಾಸಕ್ಕೆ ಹೋಗಬೇಡ ಎಂದು ಸಲಹೆ ನೀಡಿದ್ದೇನೆ. ಈ ನಿಟ್ಟಿನಲ್ಲಿ ಮುಂದಿನ ಐದು ವರ್ಷ ನಿಖಿಲ್ ಯಾವುದೇ ಚುನಾವಣೆಗೆ ಸ್ಪರ್ಧೆ ಮಾಡಲ್ಲ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಸ್ಪಷ್ಟಪಡಿಸಿದರು.

ಸೋಮವಾರ ನಗರದ ಕಲ್ಲಹಳ್ಳಿಯ ಜೆಡಿಎಸ್ ಕಾರ್ಯಕರ್ತರೊಬ್ಬರ ನಿವಾಸ ದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿನಗೆ ಭಗವಂತ ಕಲೆ ಕೊಟ್ಟಿದ್ದಾನೆ. ಸಿನಿಮಾ ಮಾಡು ಎಂದು ನಿಖಿಲ್‌ಗೆ ಸಲಹೆ ಕೊಟ್ಟಿದ್ದೇನೆ ದಯವಿಟ್ಟು ರಾಜಕೀಯ ಜಂಗುಳಿ ಬಿಟ್ಟು ಕಲಾವಿದನಾಗಿ ಬದುಕು ರೂಪಿಸಿ ಕೊಳ್ಳಲು ಹೇಳಿದ್ದೇನೆ. ನಿಖಿಲ್ ಚುನಾವಣೆಗೆ ನಿಲ್ಲುವ ಪ್ರಶ್ನೆ ಇಲ್ಲ ಎಂದು ಪುತ್ರನ ರಾಜಕೀಯ ಭವಿಷ್ಯದ ಬಗ್ಗೆ ತಿಳಿಸಿದರು.

ಈಗಾಗಲೇ ನಿಖಿಲ್‌ಗಾಗಿ ಮೂರು ಚಿತ್ರಗಳನ್ನು ನಿರ್ಮಾಣ ಮಾಡಲು ಕೆಲವು ಸಂಸ್ಥೆಗಳು ಮುಂದೆ ಬಂದಿವೆ ಸಿನಿಮಾ ಮಾಡಲು ನಿಖಿಲ್ ಮುಖ ಮಾಡಿದ್ದಾರೆ. ಹೀಗಾಗಲೇ ಎರಡು ಬಾರಿ ಚುನಾವಣೆಯಲ್ಲಿ ನಿಖಿಲ್ ಸೋತಿದ್ದಾನೆ. ಮಂಡ್ಯ ಎಂಪಿಗೆ ನಿಲ್ಲುವಾಗಲೂ ಬೇಡವೆಂದಿದ್ದೆ. ಮಂಡ್ಯದಲ್ಲಿ ನಿಲ್ಲಲು ಆತ ತಯಾರಿ ಸಹ ಮಾಡಿರಲಿಲ್ಲ. ಶಾಸಕರು ಹಾಗೂ ಕಾರ್ಯಕರ್ತರ ಒತ್ತಡದಿಂದ ಚುನಾವಣೆಗೆ ತಲೆ ಕೊಟ್ಟ ಎಂದು ಮಂಡ್ಯ ಸೋಲಿನ ಬಗ್ಗೆ ಬೇಸರ ವ್ಯಕ್ತಪಡಿಸಿದರು.

ಮಂಡ್ಯದಲ್ಲಿ ನನ್ನ ಕುಟುಂಬದ ವಿರುದ್ಧ ನಡೆದ ಪಿತೂರಿಯಿಂದ ನನ್ನ ಪುತ್ರ ನಿಖಿಲ್ ಕಳೆದ ಲೋಕಸಭಾ ಚುನಾವಣೆಯಲ್ಲಿ ಬಲಿಯಾದ. ಇದೀಗ ಅದೇ ಜನ ಪಶ್ಚಾತ್ತಾಪ ಪಡುವಂತೆ ಆಗಿದೆ. ಇದೇ ರಾಮನಗರದ ಜನರು ಎಲ್ಲಾ ನೋಡುತ್ತಾ ಇದ್ದಾರೆ. ರಾಮನಗರದಲ್ಲಿ ಸದ್ಯ ಗೆದ್ದಿರುವ ಶಾಸಕರು ಹೇಗೆ ಕ್ಷೇತ್ರವನ್ನು ಉದ್ಧಾರ ಮಾಡಲಿದ್ದಾರೆ ಎಂಬುದನ್ನು ಕ್ಷೇತ್ರದ ಜನರೇ ಕಾದು ನೋಡಲಿ ಎಂದು ಹೇಳಿದರು.

ನನ್ನ ಮೇಲೆ ಶ್ರೀರಂಗಪಟ್ಟಣದ ಶಾಸಕ ಆಪಾದನೆ ಮಾಡುತ್ತಾರೆ. ಅವರ ಮಾತು ಕೇಳಿ ನನಗೆ ಆಶ್ಚರ್ಯವಾಗಿದೆ. ಆ ಕುಟುಂಬಕ್ಕೆ ದೇವೇಗೌಡರ ಕುಟುಂಬ ಬೆಂಬಲವಾಗಿ ನಿಂತಿತ್ತು ಈ ಗಿರಾಕಿ ಎಂಎಲ್‌ಎಗೆ ನಿಂತಾಗ ಬೆಳಗಿನ ಜಾವ 4:30ಕ್ಕೆ ಹಳ್ಳಿ ಹಳ್ಳಿ ಸುತ್ತಿ ಪ್ರಚಾರ ಮಾಡಿದ್ದೇನೆ. ಅಂಬರೀಶ್ ವಿರುದ್ಧ ಈತನನ್ನು ಗೆಲ್ಲಿಸಿಕೊಂಡು ಬಂದಿದ್ದೇನೆ. ಈಗ ಅವರು ನನಗೆ ಉಪದೇಶ ಮಾಡುತ್ತಾರೆ. ಇವರ ಪಾಪದ ಕೊಡ ತುಂಬಿದೆ, ಇದೆಲ್ಲಾ ಶಾಶ್ವತ ಅಲ್ಲ ಎಂದು ರಮೇಶ್ ಬಂಡಿಸಿದ್ದೇಗೌಡ ವಿರುದ್ಧ ಏಕವಚನದಲ್ಲಿ ವಾಗ್ದಾಳಿ ನಡೆಸಿದರು.

ಪುಟ್ಟರಾಜು ಪಕ್ಷಾಂತರದ ಬಗ್ಗೆ ಅವರನ್ನೇ ಕೇಳಿ: ದೇಶದಲ್ಲಿ ಪಕ್ಷನಿಷ್ಠೆ ಯಾರಲ್ಲೂ ಉಳಿದಿಲ್ಲ. ವೈಯಕ್ತಿಕ ಸ್ಥಾನಮಾನಕ್ಕಾಗಿ ಪಕ್ಷಾಂತರ ಮಾಡುತ್ತಾರೆ. ಹಾಗಾಗಿ ಆ ವಿಚಾರಗಳಿಗೆ ನಾನು ಮಹತ್ವ ಕೊಡಲ್ಲ, ತಲೆಕೆಡಿಸಿಕೊಳ್ಳಲ್ಲ. ಮಂಡ್ಯದಲ್ಲಿ ಕೆಲವರು ಕಾಂಗ್ರೆಸ್‌ಗೆ ಹೋಗಲಿದ್ದಾರೆ ಎನ್ನುತ್ತಾರೆ. ಈ ಬಗ್ಗೆ ಹೋಗುವವರನ್ನೇ ಕೇಳಬೇಕು, ನಾನು ಯಾರ ಮೇಲೂ ಅನುಮಾನ ಪಡಲ್ಲ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಸದ್ಯ ನಮ್ಮ ಪಕ್ಷದಲ್ಲಿದ್ದಾರೆ. ಪಕ್ಷಾಂತರ ಮಾಡುವ ಬಗ್ಗೆ ಅವರನ್ನೇ ಕೇಳಬೇಕು. ಈ ಸುದ್ದಿ ಹೇಳಿದವರು, ಸುದ್ದಿಯಲ್ಲಿರುವವರು ಸ್ಪಷ್ಟನೆ ನೀಡಬೇಕು. ನಾನು ಈ ಬಗ್ಗೆ ಉತ್ತರ ಕೊಡಲು ಸಾಧ್ಯವಿಲ್ಲ ಎಂದರು.

ಕಾವೇರಿ ವಿಚಾರದಲ್ಲಿ ನಾನೆಂದೂ ರಾಜಕೀಯ ಮಾಡಿಲ್ಲ ವಾಟರ್ ಮ್ಯಾನೇಜ್‌ಮೆಂಟ್ ಬೋರ್ಡ್‌ನವರು ಬಿಡಿ ಅಂದ ತಕ್ಷಣ ಸರ್ಕಾರ ನೀರು ಬಿಡುಗಡೆ ಮಾಡಿದೆ. ಪ್ರತಿಭಟನೆ ಮಾಡಬೇಕಿತ್ತು, ನೀರು ಬಿಡಬಾರದಿತ್ತು. ತಮಿಳುನಾಡಿನವರು ಸುಪ್ರೀಂ ಕೋರ್ಟ್‌ಗೆ ಅರ್ಜಿ ಹಾಕಿದ್ದಾರೆ. ಅರ್ಜಿ ವಿರುದ್ಧ ನಾವು ಸುಪ್ರೀಂಕೋರ್ಟ್ ಮುಂದೆ ಹೋಗಬೇಕಿತ್ತು. ನಂತರ ಸುಪ್ರೀಂಕೋರ್ಟ್ ತೀರ್ಮಾನಕ್ಕೆ ನಾವು ಬದ್ಧರಾಗಬೇಕಿತ್ತು. ಅಥವಾ ಸರ್ವಪಕ್ಷಗಳ ಸಭೆ ಕರೆದು ಚರ್ಚೆ ಯಾಗಬೇಕಿತ್ತು. ಜನ ಹಿತರಕ್ಷಣೆಗೆ ಒಳ್ಳೆಯ ಕೆಲಸ ಮಾಡಿದರೆ ನಾವು ಬೆಂಬಲ ಕೊಡುತ್ತೇವೆ. ಆದರೆ ಹುಡುಗಾಟದ ರಾಜಕಾರಣ ಮಾಡಿದರೆ ತಕ್ಕ ಪಾಠ ಕಲಿಸುತ್ತೇವೆ ಎಂದರು.

ಮಂಡ್ಯ ಜಿಲ್ಲೆಯ ರೈತರು ಪ್ರತಿಭಟನೆ ಮಾಡಿ ನೀರು ಬಿಡಬೇಡಿ ಎಂದರೆ, ರೈತರನ್ನು ಸುಪ್ರೀಂಕೋರ್ಟ್‌ಗೆ ಹೋಗಿ ಅಂತಾರೆ. ಇವರಿಗೆ ಅಧಿಕಾರ ಕೊಟ್ಟಿರೋದು ರಕ್ಷಣೆ ಮಾಡಿ ಅಂತ. ನೀರಾವರಿ ಮಂತ್ರಿ ಹೇಳಿಕೆಯನ್ನು ಕೊಡುವುದು ಬಿಟ್ಟು ಸರಿಯಾದ ಕೆಲಸ ಮಾಡಲಿ. ಕಾನೂನು ತತ್ವಗಳ ಪಾಲನೆ ಮಾಡಿ, ಸಂಕಷ್ಟದ ಸೂತ್ರವನ್ನು ಕಾವೇರಿ ವಿಚಾರದಲ್ಲಿ ಪಾಲಿಸಬೇಕು. ನೀರನ್ನು ಬಿಟ್ಟಾಗಿದೆ. ರೈತರಿಗೆ ಬೆಳೆ ಪರಿಹಾರ ಕೊಟ್ಟರೆ ರೈತರ ಆತ್ಮಹತ್ಯೆಯಾದರೂ ತಪ್ಪಲಿದೆ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಮನ್‌ಮುಲ್ ಮಾಜಿ ಅಧ್ಯಕ್ಷ ಬಿ.ಆರ್.ರಾಮಚಂದ್ರ ಸೇರಿದಂತೆ ಜೆಡಿಎಸ್ ಮುಖಂಡರು ಉಪಸ್ಥಿತರಿದ್ದರು.

ಎನ್.ನಟರಾಜ್ ಕೆ.ಆರ್.ಪೇಟೆ ಪುರಸಭಾಧ್ಯಕ್ಷ



ಕೆ.ಆರ್.ಪೇಟೆ, ಆ.28– ಪುರಸಭೆಯ ನೂತನ ಅಧ್ಯಕ್ಷರಾಗಿ ಬಿಜೆಪಿ ಯುವ ಮುಖಂಡ ಎನ್.ನಟರಾಜ್ ಸೋಮವಾರ ನಿಗದಿಯಾಗಿದ್ದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಪುರಸಭೆಯ ಈ ಹಿಂದಿನ ಅಧ್ಯಕ್ಷೆ ಮಹಾದೇವಿ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಎನ್.ನಟರಾಜು ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆ ನಡೆಯಿತು. ಚುನಾವಣಾಧಿಕಾರಿಯಾಗಿ ತಹಸೀಲ್ದಾರ್ ನಿಸರ್ಗ ಪ್ರಿಯ ಕಾರ್ಯ ನಿರ್ವಹಿಸಿದರು.

ನೂತನ ಅಧ್ಯಕ್ಷರ ಆಯ್ಕೆಯ ಘೋಷಣೆ ಯಾಗುತ್ತಿದ್ದಂತೆ ಬಿಜೆಪಿ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಪುರಸಭಾ ಕಚೇರಿಯ ಆವರಣದಲ್ಲಿ ಪಟಾಕಿ ಸಿಡಿಸಿ, ಸಿಹಿ ವಿತರಿಸಿ ವಿಜಯೋತ್ಸವ ಆಚರಿಸಿದರು. ನೂತನ ಅಧ್ಯಕ್ಷರನ್ನು ಪುರಸಭೆಯ ಸದಸ್ಯರು ಹಾಗೂ ಮುಖಂಡರು ಅಭಿನಂದಿಸಿದರು. ಅಧ್ಯಕ್ಷ ಎನ್.ನಟರಾಜು ಮಾತನಾಡಿ, ಕೆ.ಆರ್. ಪೇಟೆ ಪಟ್ಟಣವನ್ನು ಜಿಲ್ಲೆಯಲ್ಲಿಯೇ ಮಾದರಿ ಪಟ್ಟಣವನ್ನಾಗಿ ಅಭಿವೃದ್ಧಿಪಡಿಸಲು ಪ್ರಾಮಾಣಿಕವಾಗಿ ಕೆಲಸ ಮಾಡುವುದಾಗಿ ಹೇಳಿದರು.

ಮಾಜಿ ಸಚಿವ ನಾರಾಯಣಗೌಡ ಮಾತನಾಡಿ, ಕೆ.ಆರ್.ಪೇಟೆ– ಹೊಸಹೊಳಲು ಅವಳಿ ಪಟ್ಟಣಗಳ ಎಲ್ಲಾ 23ವಾರ್ಡುಗಳ ಸಮಗ್ರ ಅಭಿವೃದ್ಧಿಗಾಗಿ ನೂರಾರು ಕೋಟಿ ರೂ. ವಿಶೇಷ ಅನುದಾನವನ್ನು ಸಚಿವನಾಗಿದ್ದಾಗ ಬಿಡುಗಡೆ ಮಾಡಿಸಿ ತಂದಿದ್ದೇನೆ. ಪಟ್ಟಣದ ಅಭಿವೃದ್ಧಿಗೆ ಸದಸ್ಯರು ಪಕ್ಷಾತೀತವಾಗಿ ಕೆಲಸ ಮಾಡಬೇಕು ಎಂದರು.

ಪುರಸಭೆಯ ನೂತನ ಮುಖ್ಯಾಧಿಕಾರಿ ಜಗದೀಶ್, ಅಧ್ಯಕ್ಷ ನಟರಾಜ್ ಅವರನ್ನು ಅಭಿನಂದಿಸಿ, ಮಾತನಾಡಿದರು.

ಈ ಸಂದರ್ಭದಲ್ಲಿ ಪುರಸಭೆಯ ಸದಸ್ಯರು ಹಾಗೂ ಮುಖಂಡರು ಉಪಸ್ಥಿತರಿದ್ದರು.

ಆಲೆಮನೆಗೆ ಬೆಂಕಿ; ಹಸು, ಕರು, ಮೇಕೆ ಸಜೀವ ದಹನ



ಪಾಂಡವಪುರ, ಆ.28– ಆಕಸ್ಮಿಕ ಬೆಂಕಿ ತಗುಲಿದ ಪರಿಣಾಮ ಆಲೆಮನೆಯೊಂದು ಹೊತ್ತಿ ಉರಿದು ಬೆಲೆ ಬಾಳುವ ನಾಟಿ ಹಸು, ಕರು, ಮೇಕೆ ಸಾವನ್ನಪ್ಪಿ, ಟ್ರಾಕ್ಟರ್ ಸುಟ್ಟು ಕರಕಲಾಗಿ ಸುಮಾರು 10 ಲಕ್ಷ ರೂ. ನಷ್ಟ ಸಂಭವಿಸಿರುವ ಘಟನೆ ತಾಲೂಕಿನ ದೇವೇಗೌಡನಕೊಪ್ಪಲು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ಡಿ.ಧನಂಜಯ (ಬಾಲು) ಹಾಗೂ ಡಿ. ಉಮೇಶ್ ಎಂಬುವರಿಗೆ ಸೇರಿದ ದೇವೇಗೌಡನಕೊಪ್ಪಲು ಹೊರವಲಯದಲ್ಲಿರುವ ಆಲೆಮನೆಗೆ ಸೋಮವಾರ ಬೆಳಗಿನ ಜಾವ ಸುಮಾರು 3.30ರ ಸಮಯದಲ್ಲಿ ಬೆಂಕಿ ಆವರಿಸಿ, ಒಂದು ನಾಟಿ ಹಸು, ಎರಡು ನಾಟಿ ಕರುಗಳು ಹಾಗೂ ಮೇಕೆಯೊಂದು ಸಾವನ್ನಪ್ಪಿವೆ. ಆಲೆಮನೆ ಬಳಿ ನಿಲ್ಲಿಸಿದ ಟ್ರಾಕ್ಟರ್ ಸುಟ್ಟು ಕರಕಲಾಗಿದೆ. ಮನೆ ಕಟ್ಟುವ ಸಲುವಾಗಿ ಆಲೆಮನೆಯೊಳಗೆ ಜೋಡಿಸಿಟ್ಟಿದ್ದ 3ಲಕ್ಷ ರೂ. ಬೆಲೆ ಬಾಳುವ ತೇಗದ ಮರಗಳು ಕೂಡ ಬೆಂಕಿ ಗಾಹುತಿಯಾಗಿವೆ. ಮೊದಲಿಗೆ ಕಬ್ಬಿನ ರಚ್ಚಿಗೆ ಬೆಂಕಿ ಬಿದ್ದಿದೆ. ನಂತರ ಬೆಂಕಿ ಆಲೆಮನೆಗೆ ವ್ಯಾಪಿಸಿ ಧಗಧಗನೆ ಹೊತ್ತಿ ಉರಿದಿದೆ. ತಕ್ಷಣವೇ ಕಾರ್ಮಿಕರು ಬೆಂಕಿ ನಂದಿಸುವ ಪ್ರಯತ್ನ ನಡೆಸಿದರು. ಅಲ್ಲದೇ ಅಗ್ನಿಶಾಮಕ ದಳದ ಸಿಬ್ಬಂದಿ ವರ್ಗದವರು ಬೆಂಕಿ ನಂದಿಸಲು ಪ್ರಯತ್ನಿಸಿದರಾದರೂ ಅಷ್ಟರಲ್ಲಿ ಸಂಪೂರ್ಣ ಬೆಂಕಿ ಆಲೆಮನೆಗೆ ವ್ಯಾಪಿಸಿದ್ದರಿಂದ 10 ಲಕ್ಷ ರೂ. ನಷ್ಟವಾಗಿದೆ.

ಶಾಸಕ ಭೇಟಿ : ಘಟನಾ ಸ್ಥಳಕ್ಕೆ ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಜಿಲ್ಲಾಧಿಕಾರಿಗಳು ಹಾಗೂ ಮುಖ್ಯಮಂತ್ರಿ ಪರಿಹಾರ ನಿಧಿಯಿಂದ ಸೂಕ್ತ ಪರಿಹಾರ ಕೊಡಿಸುವುದಾಗಿ ಆಲೆಮನೆಯ ಮಾಲೀಕರಾದ ಧನಂಜಯ ಹಾಗೂ ಉಮೇಶ್ ಅವರಿಗೆ ಭರವಸೆ ನೀಡಿದರು.

ಅಧಿಕಾರಿಗಳ ಭೇಟಿ : ಘಟನಾ ಸ್ಥಳಕ್ಕೆ ತಹಸೀಲ್ದಾರ್ ಎಸ್. ಸಂತೋಷ್, ಪೊಲೀಸ್ ಇನ್ಸ್‌ಪೆಕ್ಟರ್ ಎಚ್.ಆರ್.ತ್ಯಾಗರಾಜು, ಪಶು ಇಲಾಖೆ ಸಹಾಯಕ ನಿರ್ದೇಶಕ ಡಾ.ಹಿಮಾಚಲ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಘಟನೆ ಸಂಬಂಧ ಪಾಂಡವಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕಾರಲ್ಲಿ ಗಾಂಜಾ ಸಾಗಿಸುತ್ತಿದ್ದವನ ಬಂಧನ

ಹಲಗೂರು,ಆ.28– ರಾಷ್ಟ್ರೀಯ ಹೆದ್ದಾರಿ ಬೆಂಗಳೂರು– ಡಿಂಡಿಗಲ್ ರಸ್ತೆಯ ಹಲಗೂರು ನಾಡಕಚೇರಿ ಬಳಿ 1 ಕೆಜಿ 355 ಗ್ರಾಂ ಗಾಂಜಾವನ್ನು ಕಾರಿನಲ್ಲಿ ಸಾಗಿಸುತ್ತಿದ್ದ ವೇಳೆ ಬೆಂಗಳೂರು ನಿವಾಸಿ ನಿಶಾಂತ್ ಎಂಬಾತನನ್ನು ಹಲಗೂರು ಪೊಲೀಸರು ಬಂಧಿಸಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಪುಷ್ಪಾಪುರ ಗ್ರಾಮದ ಕುಮಾರ್ ಎಂಬುವರಿಂದ 1 ಕೆಜಿ 355 ಗ್ರಾಂ ಒಣಗಿದ ಗಾಂಜಾ ಸೊಪ್ಪನ್ನು ಪಡೆದುಕೊಂಡು ಬೆಂಗಳೂರಿಗೆ ಸಾಗಿಸುವ ಮಾರ್ಗ ಮಧ್ಯೆ ಇಲ್ಲಿನ ಬೆಂಗಳೂರು–ಡಿಂಡಿಗಲ್ ರಾಷ್ಟ್ರೀಯ ಹೆದ್ದಾರಿಯ ನಾಡಕಚೇರಿ ವೃತ್ತದ ಬಳಿ ಬೆಂಗಳೂರಿನ ನಿವಾಸಿ ನಿಶಾಂತ್ ಎಂಬುವವರನ್ನು ಹಲಗೂರು ಪೊಲೀಸರು ಬಂಧಿಸಿ ಗಾಂಜಾ ಸೊಪ್ಪನ್ನು ವಶ ಪಡಿಸಿಕೊಂಡಿದ್ದಾರೆ. ಡಿವೈಎಸ್ಪಿ ನವೀನ್‌ಕುಮಾರ್ ಮಾರ್ಗದರ್ಶನದಲ್ಲಿ, ಪಿಎಸ್‌ಐ ಮಹೇಂದ್ರ ಆರೋಪಿಯನ್ನು ಕಾರ್ಯಾಚರಣೆ ನಡೆಸಿ ಸೆರೆ ಹಿಡಿದಿದ್ದಾರೆ. ಈ ಸಂಬಂಧ ಹಲಗೂರು ಪೊಲೀಸ್ ಠಾಣೆಯಲ್ಲಿ ಇಬ್ಬರ ಮೇಲೂ ಪ್ರಕರಣ ದಾಖಲಾಗಿದೆ.

ಒಂದನೇ ಪುಟದಿಂದ

‘ಗೃಹಲಕ್ಷ್ಮಿ’ ಯಶಸ್ಸಿಗೆ ಅವಿರತ ಪರಿಶ್ರಮ

ಮಾತನಾಡಿದ ಸೋಮಶೇಖರ್, ಪಕ್ಷ ಬಿಡುವ ಕುರಿತು ನಾನು ಯಾರೊಂದಿಗೂ ಮಾತುಕತೆ ಮಾಡಿಲ್ಲ. ತಾಲೂಕು, ಜಿಲ್ಲಾ ಪಂಚಾಯತ್ ಮತ್ತು ಬಿಬಿಎಂಪಿ ಚುನಾವಣೆಗೆ ಸ್ಪರ್ಧೆ ಬಯಸಿರುವವರು ಮಾತ್ರ ಕಾಂಗ್ರೆಸ್ ಸೇರಿದ್ದಾರೆ. ನನ್ನೊಂದಿಗೆ ಇರಲು ಬಯಸಿರುವ ಬೆಂಬಲಿಗರು ಬಿಜೆಪಿಯಲ್ಲೇ ಇದ್ದಾರೆ ಎಂದು ಸ್ಪಷ್ಟೀಕರಣ ನೀಡಿದ್ದಾರೆ. ಕಾಂಗ್ರೆಸ್ ನಾಯಕರ ಜತೆಗೂ ಬಿಜೆಪಿ ಬಿಡುವ ಬಗ್ಗೆ ಮಾತನಾಡಿಲ್ಲ. ಮುಖ್ಯಮಂತ್ರಿ ಜತೆಗೂ ರಾಜಕೀಯ ವಿಚಾರವಾಗಿ ಮಾತನಾಡಿಲ್ಲ. ಕಾಂಗ್ರೆಸ್‌ಗೆ ನನ್ನ ಬೆಂಬಲಿಗರು ಅಷ್ಟೇ ಅಲ್ಲ, ಎಲ್ಲ ಕ್ಷೇತ್ರಗಳಿಂದಲೂ ಹೋಗಿದ್ದಾರೆ.

ನನ್ನ ಜತೆ 85 ಮುಖಂಡರು ಉಳಿದುಕೊಂಡಿದ್ದಾರೆ, ಯಡಿಯೂರಪ್ಪ ಜತೆಗೂ ಮಾತುಕತೆ ನಡೆಸಿದ್ದೇನೆ. ದುಡುಕಬೇಡ ಎಂದು ಯಡಿಯೂರಪ್ಪ ಅವರು ಹೇಳಿದ್ದಾರೆ, ನಾನು ದುಡುಕುತ್ತಿಲ್ಲ ಎಂದರು. ಪ್ರಧಾನಿ ನರೇಂದ್ರ ಮೋದಿ ಭೇಟಿ ವೇಳೆ ಗೈರು ವಿಚಾರದ ಕುರಿತು ಪ್ರತಿಕ್ರಿಯೆ ನೀಡಿದ ಸೋಮಶೇಖರ್, ನನಗೆ ಎರಡು ಬಸ್‌ನಲ್ಲಿ ಜನ ಕಳಿಸಿ ಅಂತಾ ಅಷ್ಟೇ ಇಲ್ಲಿನ ಯಶವಂತಪುರ ಅಧ್ಯಕ್ಷರು ಹೇಳಿದ್ದರು.

ಹಿಂದಿನ ದಿನ ರಾಜ್ಯ ಬಿಜೆಪಿ ಕಚೇರಿಯಲ್ಲಿ ಸಭೆ ಮಾಡಿದ್ದಾರೆ. ಆ ಸಭೆ ಬಗೆಗೂ ನನಗೆ ಮಾಹಿತಿ ಇರಲಿಲ್ಲ. ಪ್ರಧಾನಿ ಅವರು ಯಾವಾಗ? ಹೇಗೆ ಬರುತ್ತಾರೆ ಎಂಬ ಮಾಹಿತಿ ಇರಲಿಲ್ಲ. ಸುಮಾರು ಮೂರೂವರೆ ವರ್ಷದ ಅವಧಿಯಲ್ಲಿ ಬಿಜೆಪಿಯ ಎಲ್ಲಾ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದೇನೆ. ಭಾಗಿಯಾಗದ ಕಪ್ಪುಚುಕ್ಕೆ ಒಂದೇ ಒಂದು ಇಲ್ಲ. ಇತ್ತೀಚೆಗೆ ಎರಡು ಮೂರು ಕಾರ್ಯಕ್ರಮಕ್ಕೆ ಹೋಗಿಲ್ಲ ಎಂಬ ಮಾಹಿತಿ ಇರಬಹುದು. 100ಕ್ಕೆ ಶೇ. 99ರಷ್ಟು ಪಕ್ಷ ಹಾಗೂ ಸರ್ಕಾರದ ಕೆಲಸವನ್ನು ಪ್ರಾಮಾಣಿಕವಾಗಿ ಮಾಡಿದ್ದೇನೆ. ನನಗೆ ಅಧಿಕಾರಿಗಳು ವಾರದ ಹಿಂದೆ ಗೃಹಲಕ್ಷ್ಮಿ ಯೋಜನೆಯ ಸಮಾರಂಭಕ್ಕೆ ಬರಬೇಕು ಅಂತ ಕರೆದರು. ನಾನು ಯೋಜನೆಯ ಬಗ್ಗೆ ಮಾಹಿತಿ ಪಡೆದುಕೊಂಡೆ. ನಮ್ಮ ಕ್ಷೇತ್ರದ 62 ಸಾವಿರ ಬಿಪಿಎಲ್ ಕಾರ್ಡ್‌ದಾರರ ಯೋಜನೆಯ ಲಾಭ ಕೊಡಿಸಲು ಸಭೆ ಮಾಡುತ್ತಿದ್ದೇವೆ. ಗೃಹಜ್ಯೋತಿ ಯೋಜನೆಯಲ್ಲಿ ನಮ್ಮ ಕ್ಷೇತ್ರದಲ್ಲಿ 1.97 ಲಕ್ಷ ಫಲಾನುಭವಿಗಳಿದ್ದಾರೆ.

ಪಂಚಾಯತಿ ಎಲ್ಲ ಸದಸ್ಯರನ್ನೂ ಕರೆದು ಮಾಹಿತಿ ಕೊಟ್ಟಿದ್ದೇನೆ. ಯಾವುದೇ ಕಾರಣಕ್ಕೂ ಸರ್ಕಾರದ ಫಲ ಜನಸಾಮಾನ್ಯರಿಗೆ ಸಿಗದಂತಾಗಬಾರದು. ಈ ಕಾರಣಕ್ಕೆ ಸಭೆ ನಡೆಸಿರುವುದಾಗಿ ಸಮರ್ಥಿಸಿಕೊಂಡರು. ನಾನೊಬ್ಬ ಜವಾಬ್ದಾರಿಯುತ ಶಾಸಕನಾಗಿ ಸರ್ಕಾರದ ಯೋಜನೆ ಅರ್ಹರಿಗೆ ತಲುಪಿಸುವ ಕೆಲಸ ಮಾಡುತ್ತಿದ್ದೇನೆ. ಇದರಲ್ಲಿ ಬೇರೇನೂ ವಿಶೇಷ ಇಲ್ಲ. ಈ ಸಭೆಯಿಂದ ಬಿಜೆಪಿಗೆ ಮುಜುಗರ ತರಲ್ಲ. ನನಗೆ ಸಾರ್ವಜನಿಕರು ಸರ್ಕಾರದ ಯೋಜನೆ ಯಾಕೆ ಕೊಡುತ್ತಿಲ್ಲ ಅಂತ ಕೇಳಬಹುದು.

ಜವಾಬ್ದಾರಿಯುತ ಶಾಸಕನಾಗಿ ನಾನು ಸರ್ಕಾರದ ಯೋಜನೆ ಜನರಿಗೆ ತಲುಪಿಸಲೇಬೇಕು ಯಾರೇನೇ ಕಾಮೆಂಟ್ಸ್ ಮಾಡಿದರೂ ನಾನು ಅದರ ಬಗ್ಗೆ ತಲೆಕೆಡಿಸಿಕೊಳ್ಳಲ್ಲ. ಶಾಸಕನಾಗಿ ನಾನು ನನ್ನ ಕೆಲಸ ಮಾಡುತ್ತಿದ್ದೇನೆ. ಅವರ್ಯಾರೋ ಅಂತಾರೆ, ಇವರ್ಯಾರೋ ಅಂತಾರೆ ಅಂತ ನಾನು ನೋಡಲ್ಲ. ಕ್ಷೇತ್ರದ ಜನರ ಸೇವೆ ನನಗೆ ಮುಖ್ಯ ಎಂದು ಅವರು ಹೇಳಿದರು.

ನಮ್ಮವರು ಯಾರೂ ಜೆಡಿಎಸ್ ತೊರೆಯಲ್ಲ

ಹೋರಾಟ ಮಾಡುತ್ತೇವೆ. ನೆರೆಯ ರಾಜ್ಯಗಳಲ್ಲಿ ಪ್ರಾದೇಶಿಕ ಪಕ್ಷಗಳು ಹೇಗಿವೆ ಎಂಬುದನ್ನು ಗಮನ ಹರಿಸಬೇಕು.ಕಾವೇರಿ, ಮಹದಾಯಿ ನದಿ ನೀರು ಸೇರಿದಂತೆ, ರಾಜ್ಯ– ರಾಷ್ಟ್ರದ ಹಲವು ವಿವಾದಗಳ ಬಗ್ಗೆ ಗೊತ್ತಿದೆ. ಆದರೆ ಈ ಸಂದರ್ಭದಲ್ಲಿ ಮಾತನಾ ಡುವುದಿಲ್ಲ ಎಂದರು. ಲೋಕಸಭಾ ಚುನಾವಣೆಯಲ್ಲಿ ನಾವು ಯಾರ ಸಹವಾಸಕ್ಕೂ ಹೋಗುವುದಿಲ್ಲ ಎಂದು ಹೇಳುವ ಮೂಲಕ ಚುನಾವಣಾ ಪೂರ್ವ ಮೈತ್ರಿ ವಿಚಾರಕ್ಕೆ ತೆರೆ ಎಳೆದರು. ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರು ಪ್ರಸ್ತಾಪಿಸಿರುವ ಪೆನ್‌ಡ್ರೈವ್ ಬಗ್ಗೆ ಯಾರೂ ಲಘುವಾಗಿ ಮಾತನಾಡಬೇಡಿ, ಪೆನ್‌ಡ್ರೈವ್ ವಾದ–ವಿವಾದ ಗಮನಿಸಿದ್ದೇನೆ. ಕುಮಾರಸ್ವಾಮಿ ಅವರು ಅಷ್ಟು ಸುಲಭವಾಗಿ ಮಾತನಾಡುವುದಿಲ್ಲ.

ರಾಮನಗರ ಜಿಲ್ಲೆಯನ್ನು ಮಾಡಿದ್ದು, ಯಾರು ಎಂಬುದನ್ನು ಎದೆ ತಟ್ಟಿ ಹೇಳಿ, ಕುಮಾರಸ್ವಾಮಿ ಮುಖ್ಯಮಂತ್ರಿ ಆಗಿದ್ದಾಗ ರಾಮನಗರಕ್ಕೆ ಮೆಡಿಕಲ್ ಕಾಲೇಜು ಮಂಜೂರಾಗಿತ್ತು. ರಾಮನಗರ, ಮಾಗಡಿ, ಕನಕಪುರ, ಚನ್ನಪಟ್ಟಣ ಜಿಲ್ಲೆಯಲ್ಲಿಯೇ ಇದೆ.

ರಾಮನಗರಕ್ಕೆ ಮಂಜೂರಾಗಿದ್ದ ಮೆಡಿಕಲ್ ಕಾಲೇಜನ್ನು ಮೈತ್ರಿ ಸರ್ಕಾರ ಇದ್ದಾಗ ಕನಕಪುರಕ್ಕೆ ಸ್ಥಳಾಂತರ ಪ್ರಸ್ತಾಪಿಸಿದ್ದರು. ರಾಮನಗರ ಕೇಂದ್ರ ವಾಗಿದ್ದು, ಈ ವಿಚಾರದಲ್ಲಿ ರಾಜಕೀಯ ಬೆರೆಸಬೇಡಿ ಎಂದರು. ಈಗ ಅವರದ್ದೇ ಸರ್ಕಾರವಿದೆ. ಕನಕಪುರಕ್ಕೆ ಮತ್ತೊಂದು ಕಾಲೇಜು ಮಂಜೂರು ಮಾಡಲಿ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ದ್ವೇಷದ ರಾಜಕಾರಣ ಮಾಡುತ್ತಿದ್ದಾರೆಂದು ಹೇಳುವುದೂ ಇಲ್ಲ. ಅದರ ಅವಶ್ಯಕತೆಯೂ ಇಲ್ಲ ಎಂದು ಅವರು ಹೇಳಿದರು. ಚಂದ್ರಯಾನ–3 ಯಶಸ್ಸಿಗೆ ಕಾರಣಕರ್ತ ರಾದ ಇಸ್ರೋ ಅಧ್ಯಕ್ಷ ಸೋಮನಾಥನ್ ಹಾಗೂ ಅವರ ತಂಡವನ್ನು ಅಭಿನಂದಿಸುತ್ತೇನೆ. ಚಂದ್ರಯಾನ ಯಶಸ್ವಿಯಾದ ನಾಲ್ಕನೇ ರಾಷ್ಟ್ರವಾಗಿ ಭಾರತ ಹೊರ ಹೊಮ್ಮಿದೆ. ಇದರಿಂದ ದೇಶದ ಘನತೆ– ಗೌರವ ಹೆಚ್ಚಿದೆ. ಎಲ್ಲಾ ವಿಜ್ಞಾನಿಗಳನ್ನು ಅಭಿನಂದಿಸುತ್ತೇನೆ ಎಂದರು. ರಾಜ್ಯಾಧ್ಯಕ್ಷ ಇಬ್ರಾಹಿಂ ಮಾತನಾಡಿ, ಈಗಾಗಲೇ ಎರಡು ರಾಷ್ಟ್ರೀಯ ಪಕ್ಷಗಳು ಆಪರೇಷನ್ ಮಾಡಿಸಿಕೊಂಡಿವೆ. ನಮ್ಮ ಪಕ್ಷದ 19 ಶಾಸಕರು, ನಿಷ್ಠೆಯುಳ್ಳವರಾಗಿದ್ದು, ಯಾರೂ ಕೂಡ ಆಪರೇಷನ್‌ಗೆ ಒಳಗಾಗುವುದಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಆಪರೇಷನ್‌ಗೆ ಒಳಗಾದರೂ ಸಹ ಜೆಡಿಎಸ್‌ಗೆ ಜನ್ಮ ಕೊಡುವ ಶಕ್ತಿ ಇದೆ. ರಾಜ್ಯದಲ್ಲಿ ಭೀಕರ ಬರ ಪರಿಸ್ಥಿತಿ ತಲೆ ದೋರಿದ್ದು, ಸರ್ಕಾರ ಗ್ಯಾರಂಟಿ ಯೋಜನೆ ಮೂಲಕ ಖಜಾನೆಗೆ ದರಿದ್ರ ತಂದಿದ್ದಾರೆ ಎಂದರು.

ಆದಿತ್ಯಾ ಎಲ್1 ಉಡಾವಣೆ: ಇಸ್ರೋ

ಆ ಬಳಿಕ ಸೂರ್ಯನ ಕುರಿತು ಅಭೂತಪೂರ್ವ ಒಳ ನೋಟಗಳನ್ನು ಒದಗಿಸುವ ಗುರಿ ಹೊಂದಿದೆ

ಉಪಗ್ರಹದಲ್ಲಿನ ಪೆಲೋಡ್‌ಗಳನ್ನು ಸೂರ್ಯನಿಂದ ಹೊರಸೂಸುವ ಅತ್ಯಂತ ಶಕ್ತಿಶಾಲಿ ಕಿರಣಗಳನ್ನು ಅಧ್ಯಯನ ಮಾಡುವಂತೆ ವಿನ್ಯಾಸಗೊಳಿಸಲಾಗಿದೆ. ಇವುಗಳು ದ್ಯುತಿಗೋಳ, ವರ್ಣಗೋಳ, ಸೂರ್ಯನ ಹೊರ ಪದರಗಳು, ಸೌರ ಶಕ್ತಿ ಕೋಶಗಳು ಮತ್ತು ಸೂರ್ಯನ ಕಾಂತಕ್ಷೇತ್ರವನ್ನು ಅಧ್ಯಯನ ನಡೆಸಲಿವೆ. ಬಾಹ್ಯಾಕಾಶ ನೌಕೆಯು ಸೂರ್ಯನ ವಿವಿಧ ಪದರಗಳಾದ ದ್ಯುತಿಗೋಳ ಮತ್ತು ಕ್ರೋಮೋಸ್ಪಿಯರ್‌ನಿಂದ ಹೊರಗಿನ ಪದರವಾದ ಕರೋನಲ್‌ವರೆಗೆ ಸೂಕ್ಷ್ಮವಾಗಿ ಪರಿಶೀಲಿಸಲು ವಿನ್ಯಾಸಗೊಳಿಸಲಾದ ಏಳು ಸುಧಾರಿತ ಪೇಲೋಡ್‌ಗಳನ್ನು ಹೊಂದಿದೆ. ಕರೋನಲ್ ಹೀಟಿಂಗ್, ಕರೋನಲ್ ಮಾಸ್ ಇಜೆಕ್ಷನ್‌ಗಳು, ಸೌರ ಜ್ವಾಲೆಗಳು ಮತ್ತು ಹೆಚ್ಚಿನ ವಿದ್ಯಮಾನಗಳನ್ನು ಅರ್ಥಮಾಡಿಕೊಳ್ಳಲು ಹಾಗೂ ಪ್ರಮುಖವಾದ ದತ್ತಾಂಶ ಸಂಗ್ರಹಿಸಲು ಈ ಪೇಲೋಡ್‌ಗಳು ವಿದ್ಯುತ್ಕಾಂತೀಯ, ಕಣ ಮತ್ತು ಮ್ಯಾಗ್ನೆಟಿಕ್ ಫೀಲ್ಡ್ ಡಿಟೆಕ್ಟರ್‌ಗಳನ್ನು ಬಳಸಿಕೊಳ್ಳುತ್ತವೆ.

ಮೈಸೂರು ಭಾಗದಲ್ಲಿ ಕಲೆಗಳ ಬೆಳವಣಿಗೆಗೆ ರಾಜಾಶ್ರಯವೇ ಕಾರಣ

ಸಂಸ್ಕೃತಿ ಚಿಂತಕ ನರಸಿಂಹ ಆಚಾರ್ಯ ಅಭಿಮತ




ಮೈಸೂರು,ಆ.28(ಎಸ್‌ಪಿಎನ್)–ಎಲ್ಲಾ ಪ್ರಕಾರಗಳ ಕಲೆಗಳ ಬೆಳವಣಿಗೆಗೆ ಈ ಹಿಂದೆ ಮೈಸೂರು ಸಂಸ್ಥಾನದ ರಾಜಾಶ್ರಯವೇ ಕಾರಣ. ಇದರಿಂದಾಗಿಯೆ ಮೈಸೂರು, ಬೆಂಗಳೂರು ಸೇರಿದಂತೆ ಸೇರಿದಂತೆ ಹಳೆ ಮೈಸೂರು ಪ್ರಾಂತ್ಯದ ಜಿಲ್ಲೆಗಳಲ್ಲಿ ಕಲೆಗಳ ಶ್ರೀಮಂತಿಕೆ ಹಾಗೆಯೇ ಜನಮಾನಸದಲ್ಲಿ ಉಳಿದಿದೆ ಎಂದು ಸಂಸ್ಕೃತಿ ಚಿಂತಕ ವಿದ್ವಾನ್ ವೆಂಕಟೇಶ ನರಸಿಂಹಚಾರ್ಯ ಅಭಿಪ್ರಾಯಪಟ್ಟರು.

ಮೈಸೂರು ಸಾಹುಕಾರ್ ಚನ್ನಯ್ಯ ರಸ್ತೆಯಲ್ಲಿನ ಟಿ.ಕೆ. ಬಡಾವಣೆಯ ಶ್ರೀ ಕೃಷ್ಣಧಾಮದಲ್ಲಿ ಚಾತುರ್ಮಾಸ್ಯ ಸಮಿತಿ ವತಿಯಿಂದ ಉಡುಪಿಯ ಪೇಜಾವರ ಮಠದ ಪೀಠಾಧ್ಯಕ್ಷರಾದ ಶ್ರೀ ವಿಶ್ವ ಪ್ರಸನ್ನ ತೀರ್ಥ ಸ್ವಾಮೀಜಿ ಅವರ 36ನೇ ಚಾತುರ್ಮಾಸ್ಯ ವ್ರತ ಸಂಕಲ್ಪ ಅಂಗವಾಗಿ ನಡೆದ ಭಕ್ತ ಪ್ರಹ್ಲಾದ ಪ್ರಚನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಇಂದಿಗೂ ಮುಂಬೈ ಕರ್ನಾಟಕ, ಕಲ್ಯಾಣ ಕರ್ನಾಟಕ ಸೇರಿದಂತೆ ಬಹುತೇಕ ಜಿಲ್ಲೆಗಳಲ್ಲಿ ಸಂಗೀತ, ಸಾಹಿತ್ಯ, ನೃತ್ಯ ಸೇರಿದಂತೆ ಇತರೆ ಕಲೆಗಳ ಕಾರ್ಯಕ್ರಮಗಳ ನಡೆಯುತ್ತಿಲ್ಲ. ಏಕೆಂದರೆ, ಆ ಭಾಗದಲ್ಲಿ ಹಿಂದಿನಿಂದಲೂ ಶಾಸ್ತ್ರೀಯ ಸಂಗೀತ ಕಾರ್ಯಕ್ರಮಗಳಿಗೆ ಹೆಚ್ಚಿನ ಆದ್ಯತೆ ನೀಡಿಲ್ಲ ಎಂದ ಅವರು, ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಇಂದಿಗೂ ಮೇಲಾಟ ಕಲೆಗಳಲ್ಲಿ ಶ್ರೀ ರಾಘವೇಂದ್ರ ಸ್ವಾಮೀಜಿ ಕುರಿತಾದ ಕಥೆಗಳನ್ನು ಬಳಸುತ್ತಿದ್ದುದ್ದನ್ನು ಕಾಣಬಹುದು. ಅದರಲ್ಲಿ ಭಕ್ತಪ್ರಹ್ಲಾದರ ನಂತರ ವ್ಯಾಸರಾಯರು, ಇವರ ನಂತರ ಶ್ರೀರಾಘವೇಂದ್ರ ಸ್ವಾಮೀಜಿ ರೂಪದಲ್ಲಿ ಶ್ರೀ ವಿಷ್ಣುವಿನ ಅವತಾರವಾಗಿದೆ ಎಂಬ ನಂಬಿಕೆಯಿದೆ ಎಂದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಹಿಂದೂಸ್ತಾನಿ ಗಾಯನದಲ್ಲಿ ಶ್ರೀ ಕೃಷ್ಣ ಮೇಲಿನ ಹಾಡುಗಳ ಮಧ್ಯೆ ಇಸ್ಲಾಂ ದೇವರುಗಳ ಉಚ್ಚಾರಣೆ ಇದೆ. ನಂತರ ಹಿಂದೂ ದೇವರ ಹೆಸರುಗಳು ಕೇಳಿ ಬರುತ್ತವೆ. ಆದರೆ, ಕರ್ನಾಟಕ ಸಂಗೀತದಲ್ಲಿ ಬರೀ ದೇವರ ಕೀರ್ತನೆಗಳೇ ಉಲ್ಲೇಖವಾಗಿರುವುದು ಮೆಚ್ಚುಗೆಯ ವಿಷಯ. ಕರ್ನಾಟಕ ಸಂಗೀತದ ವಿಚಾರಲ್ಲಿ ಪುರಂದರದಾಸರ ಪದ್ಯಗಳು ಶಾಸ್ತ್ರೀಯ ಸಂಗೀತಕ್ಕೆ ಸಂವಿಧಾನವಿದ್ದಂತೆ ಎಂದರು.

ಸಂಗೀತ, ಸಾಹಿತ್ಯ, ನೃತ್ಯಗಳ ಕಲಿಕೆಗೆ ಗುರುಗಳ ಅವಶ್ಯಕವಿದೆ. ಆದರೆ, ಇತ್ತೀಚಿನ ದಿನಗಳಲ್ಲಿ ಎಲ್ಲ ವನ್ನು ಪುಸ್ತಕಗಳನ್ನು ಕೊಂಡು ಸ್ವಯಂ ಕಲಿಕೆಗೆ ಜನರು ಮುಂದಾಗುತ್ತಿದ್ದಾರೆ. ಇದರಿಂದ ಉಪಯೋಗಕ್ಕಿಂತ ಅಪಾಯವೇ ಹೆಚ್ಚು. ಯಾವುದೇ ಗುರಿ ಮುಟ್ಟಲು ಗುರುವಿನ ಅವಶ್ಯಕತೆ ಇದೆ. ಇಲ್ಲದಿದ್ದರೆ ಗುರು ವಿಲ್ಲದ ಭಜನಾ ಮಂಡಳಿಗಳು, ಅಷ್ಟೋತ್ತರ ಗುಂಪುಗಳ ಹಾಡುಗಾರಿಕೆಯಂತಾಗುತ್ತದೆ. ಹಾಗಾಗಿ ಗುರುಗಳ ಉಪಸ್ಥಿತಿ ಅವಶ್ಯಕ ಎಂದರು.

ಕೆಲವರು ದಿನಗಳ ಹಿಂದೆ ನಾನೊಂದು ಭರತ ನಾಟ್ಯ ಕಾರ್ಯಕ್ರಮಕ್ಕೆ ಹೋಗಿದ್ದೆ. ಆ ಕಾರ್ಯಕ್ರಮದಲ್ಲಿ ಒಂದು ಸಾಲಿನ ಗಣಪತಿ ಹಾಡಿಗೆ 10ನೇ ತರಗತಿ ವಿದ್ಯಾರ್ಥಿನಿ ಸುಮಾರು 21 ಬಗೆಯ ನಾಟ್ಯ ಭಂಗಿಗಳನ್ನು ಪ್ರದರ್ಶಿಸಿ, ಗಣೇಶನ 21 ಬಗೆಯ ರೂಪಕಗಳನ್ನು ಪ್ರದರ್ಶಿಸಿ, ಪ್ರೇಕ್ಷಕರ ಮೆಚ್ಚುಗೆ ಗಳಿಸಿದರು. ಇತ್ತೀಚಿನ ದಿನಗಳಲ್ಲಿ ‘ಕೃಷ್ಣ ಬೇಗನೇ ಬಾರೋ’ ದಾಸರ ಪದ ಸಾಕಷ್ಟು ಪ್ರಚಾರವಾಗುತ್ತಿದೆ. ಈ ಒಂದು ಗೀತೆ ಯಶೋಧೆ ಬಾಲಕೃಷ್ಣನಿಗೆ ಊಟ ಮಾಡಿ ಸಲು ಸಂದರ್ಭದಲ್ಲಿ ಹಾಡುವ ಪದ್ಯ. ಈ ಪದ್ಯವನ್ನೇ ಹಲವರು ಶ್ರೀಕೃಷ್ಣನೊಂದಿಗೆ ಅನುಸಂಧಾನ ಮಾಡಲು ಆ ಸಂದರ್ಭಕ್ಕೆ ಅನುಸಾರ ಹೇಳಿಕೆಗಳು ಹಾಡಿನ ರೂಪದಲ್ಲಿ ಬರುತ್ತಿವೆ ಎಂದು ವಿವರಿಸಿದರು.

ನಂತರ ಉಡುಪಿ ಪೇಜಾವರ ಮಠದ ಶ್ರೀ ವಿಶ್ವ ಪ್ರಸನ್ನ ತೀರ್ಥ ಶ್ರೀಪಾದಂಗಳವರು ಶ್ರೀರಾಮಚಂದ್ರ ಕಾಡಿಗೆ ತನ್ನ ಪರಿವಾರದೊಂದಿಗೆ ಹೋಗುವ ಸಂದರ್ಭವನ್ನು ವಿವರಿಸಿದರು. ನಂತರ ಮೆಟ್ಟೂರು ಬ್ರದರ್ಸ್ ಅವರಿಂದ ಭಕ್ತಿಗೀತೆ ಗಾಯನ ನೆರವೇರಿತು.

ಮದರಸಾಗಳಲ್ಲಿ ಕನ್ನಡ, ಇಂಗ್ಲಿಷ್ ಕಲಿಸಲು ಸೂಚನೆ

ಬೆಂಗಳೂರು: ಮದರಸಾಗಳಲ್ಲಿ ಕನ್ನಡ ಮತ್ತು ಇಂಗ್ಲಿಷ್ ಸೇರಿದಂತೆ ವಿಜ್ಞಾನ, ಗಣಿತ ಕಲಿಸಲು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹಮದ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಇಲಾಖೆಯ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿದ ಅವರು, ಮದರಸಾಗಳಲ್ಲಿ ಪ್ರಮುಖವಾಗಿ ಕನ್ನಡ ಕಡ್ಡಾಯವಾಗಿ ಕಲಿಸಲೇಬೇಕು. ಉಳಿದಂತೆ ಇಂಗ್ಲಿಷ್ ಸೇರಿ ಇತರೆ ಭಾಷೆ ಕಲಿಸಲು ಕ್ರಮ ಕೈಗೊಳ್ಳಿ, ಇದರಿಂದ ಅಲ್ಲಿನ ಮಕ್ಕಳಿಗೆ ಭವಿಷ್ಯದಲ್ಲಿ ಉತ್ತಮ ಅವಕಾಶ ಸಿಗಲಿದೆ ಎಂದರು.

ರಾಜ್ಯದಲ್ಲಿ 1265 ವಕ್ಫ್ ಮಂಡಳಿಯಲ್ಲಿ ನೋಂದಣಿಯಾದ ಮದರಸಾಗಳಿದ್ದು, ಆ ಪೈಕಿ 100 ಮದರಸಾಗಳ ಐದು ಸಾವಿರ ಮಕ್ಕಳಿಗೆ ಈ ವರ್ಷದಿಂದಲೇ ಪ್ರಾಯೋಗಿಕವಾಗಿ ಕಲಿಕೆ ಆರಂಭಿಸಿ. ಮುಂದಿನ ವರ್ಷದಿಂದ ಎಲ್ಲಾ ಮದರಸಾಗಳಲ್ಲಿ ಆರಂಭಿಸಲು ಪ್ರಸ್ತಾವನೆ ಸಿದ್ಧಪಡಿಸಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಅಲ್ಪಸಂಖ್ಯಾತರ ನಿರ್ದೇಶನಾಲಯ ವ್ಯಾಪ್ತಿಯಡಿ ವಿದೇಶದಲ್ಲಿ ವ್ಯಾಸಂಗ ಮಾಡಲು ನೀಡುವ ಪ್ರೋತ್ಸಾಹ ಧನ ಮೊತ್ತ 20 ಲಕ್ಷ ರೂ.ನಿಂದ 30 ಲಕ್ಷ ರೂ.ಗಳಿಗೆ ಹೆಚ್ಚಿಸಲು ಹಾಗೂ ಐಐಟಿ, ಎನ್‌ಐಟಿ ಸೇರಿದಂತೆ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಲ್ಲಿ ಪ್ರವೇಶ ಪಡೆಯುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಹಾಲಿ ನೀಡುತ್ತಿರುವ ಎರಡು ಲಕ್ಷ ರೂ. ಪ್ರೋತ್ಸಾಹ ಧನ ಮೊತ್ತ ನಾಲ್ಕು ಲಕ್ಷ ರೂ. ಗಳಿಗೆ ಹೆಚ್ಚಿಸಲು ಕ್ರಮಕೈಗೊಳ್ಳುವಂತೆ ಇದೇ ಸಂದರ್ಭದಲ್ಲಿ ಸೂಚಿಸಿದರು.

ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ವ್ಯಾಪ್ತಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಕಾಲೇಜು ಹಾಗೂ ಮೌಲಾನಾ ಅಜಾದ್ ಮಾದರಿ ಶಾಲೆಗಳ 9,10 ಹಾಗೂ 12ನೇ ತರಗತಿಯ ಒಂದು ಲಕ್ಷ ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟ ಸುಧಾರಿಸಲು ಸಿದ್ಧಪಡಿಸಿರುವ ವಿಜ್ಞಾನ ಮತ್ತು ಗಣಿತ ಸೇರಿದಂತೆ ವಿವಿಧ ವಿಷಯಗಳ ಕೈಪಿಡಿ ಹಾಗೂ ನಿರ್ದೇಶನಾಲಯದ ಯೋಜನೆಗಳ ಕೈಪಿಡಿಯನ್ನು ಸಚಿವರು ಇದೇ ವೇಳೆ ಬಿಡುಗಡೆಗೊಳಿಸಿದರು.

ವರದಿಗೆ ಸೂಚನೆ: ಕಳೆದ ಎರಡು ವರ್ಷಗಳಲ್ಲಿ ಅಲ್ಪಸಂಖ್ಯಾತ ನಿರ್ದೇಶನಾಲಯದ ವತಿಯಿಂದ ರಾಜ್ಯದ ಎಲ್ಲಾ ಮಹಾನಗರ ಪಾಲಿಕೆ ಹಾಗೂ ಸ್ಥಳೀಯ ಸಂಸ್ಥೆ ವ್ಯಾಪ್ತಿಯಲ್ಲಿ ಕೈಗೊಂಡಿರುವ ಅಲ್ಪಸಂಖ್ಯಾತರ ಕಾಲೋನಿಗಳ ಅಭಿವೃದ್ಧಿ ಕುರಿತು ಪರಿಶೀಲನೆ ನಡೆಸಿ ವರದಿ ನೀಡುವಂತೆ ಸೂಚನೆ ನೀಡಿದರು. ಎಷ್ಟು ಮೊತ್ತದ ಕಾಮಗಾರಿ ಕೈಗೊಳ್ಳಲಾಗಿದೆ, ಎಷ್ಟು ಮೊತ್ತ ಪಾವತಿಗೆ ಬಾಕಿ ಇದೆ, ಕಾಮಗಾರಿ ಪ್ರಮಾಣ, ಗುತ್ತಿಗೆ ದಾರರಿಗೆ ಪಾವತಿಸಿರುವ ಮೊತ್ತ ಕುರಿತು ಸಮಗ್ರ ವರದಿ ನೀಡುವಂತೆ ಸಚಿವರು ಸೂಚಿಸಿದರು.

ಇಲಾಖೆ ಕಾರ್ಯದರ್ಶಿ ಮನೋಜ್ ಜೈನ್, ನಿರ್ದೇಶನಾಲಯ ನಿರ್ದೇಶಕ ಜಿಲಾನಿ ಮೊಕಾಶಿ, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮೊಹಮ್ಮದ್ ನಜೀರ್, ವಕ್ಫ್ ಮಂಡಳಿ ಕಾರ್ಯನಿರ್ವಾಹಕ ಖಾನ್ ಫರ್ವಜ್ ಉಪಸ್ಥಿತರಿದ್ದರು.

ನಾಳೆ ಹೊಸಹುಂಡಿ ಕೃಷಿಪತ್ತಿನ ಸಹಕಾರ ಸಂಘದ ಸರ್ವ ಸದಸ್ಯರ ಸಭೆ

ಮೈಸೂರು, ಆ.28– ತಾಲೂಕಿನ ಹೊಸಹುಂಡಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 2022–23ನೇ ಸಾಲಿನ ಸರ್ವ ಸದಸ್ಯರ ಸಭೆಯನ್ನು ಆ.30ರಂದು ಬೆಳಗ್ಗೆ 10.30ಕ್ಕೆ ಸಂಘ ಕಚೇರಿಯಲ್ಲಿ ಕರೆಯಲಾಗಿದೆ ಎಂದು ಸಂಘದ ಅಧ್ಯಕ್ಷ ಮತ್ತು ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಮಿತ್ರ ಮಂಗಳವಾರ 29 ಆಗಸ್ಟ್ 2023

ಈ ವರ್ಷವೇ ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ–ಯುಕೆಜಿ ಆರಂಭ



ಬೆಂಗಳೂರು: ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಸುಮಾರು 262 ಪೂರ್ವ ಪ್ರಾಥಮಿಕ ಶಾಲೆಗಳಲ್ಲಿ ಎಲ್‌ಕೆಜಿ ಮತ್ತು ಯುಕೆಜಿ ಆರಂಭಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. 4–5 ನೇ ವರ್ಷದ ಮಕ್ಕಳಿಗಾಗಿ ಎಲ್‌ಕೆಜಿ ಮತ್ತು ಯುಕೆಜಿ ಆರಂಭಿಸುವಂತೆ ಪೋಷಕರಿಂದ ಬೇಡಿಕೆ ಬಂದಿರುವ ಹಿನ್ನೆಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಈ ಮಹತ್ವದ ನಿರ್ಧಾರ ಕೈಗೊಂಡಿದೆ.

ವಿಶೇಷವಾಗಿ ಗ್ರಾಮೀಣ ಪ್ರದೇಶದ ಪೋಷಕರಿಂದಲೂ ಬೇಡಿಕೆ ಹೆಚ್ಚಾಗಿದೆ. ಅಂಗನವಾಡಿಗಳು ಎಲ್ಲ ಗ್ರಾಮಗಳಲ್ಲಿದ್ದರೂ ಅವು ಶಿಕ್ಷಣ ನೀಡುತ್ತಿಲ್ಲ. ಬದಲಾಗಿ ಮಕ್ಕಳನ್ನು ನೋಡಿಕೊಳ್ಳುವ ಕೇಂದ್ರಗಳಾಗಿವೆ ಎಂದು ಪೋಷಕರು ವಾದಿಸುತ್ತಿದ್ದಾರೆ. ಈ ಕಾರಣಗಳಿಂದ 262 ಪ್ರಾಥಮಿಕ ಶಾಲೆಗಳಲ್ಲಿ ಎಲ್‌ಕೆಜಿ ಮತ್ತು ಯುಕೆಜಿ ಆರಂಭಿಸಲು ಶಿಕ್ಷಣ ಇಲಾಖೆ ಸಿದ್ಧತೆ ನಡೆಸಿದೆ. ಇದರಲ್ಲಿ ಬೆಂಗಳೂರು ದಕ್ಷಿಣದಲ್ಲಿ 10, ಬೆಂಗಳೂರು ಉತ್ತರದಲ್ಲಿ 4 ಶಾಲೆಗಳು ಆರಂಭವಾಗಲಿವೆ.

ಪ್ರಸ್ತುತ 900 ಶಾಲೆಗಳಲ್ಲಿ ಎಲ್‌ಕೆಜಿ ಮತ್ತು ಯುಕೆಜಿ ಶಿಕ್ಷಣ ನೀಡಲಾಗುತ್ತಿದೆ. ಇದರಲ್ಲಿ 276 ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳಾಗಿವೆ. ಶಾಲಾ ಅಭಿವೃದ್ಧಿ ನಿರ್ವಹಣಾ ಸಮಿತಿಗಳು (ಎಸ್‌ಡಿಎಂಸಿ) 664 ಶಾಲೆಗಳಲ್ಲಿ ಎಲ್‌ಕೆಜಿ–ಯುಕೆಜಿ ಆರಂಭಿಸಿವೆ. ಪ್ರತಿ ತರಗತಿಯಲ್ಲೂ ಕನಿಷ್ಠ 20 ಮತ್ತು ಗರಿಷ್ಠ 30 ವಿದ್ಯಾರ್ಥಿಗಳಿದ್ದಾರೆ. ಎಸ್‌ಡಿಎಂಸಿಗಳು ಶಿಕ್ಷಕರು ಮತ್ತು ಆಯಾರನ್ನು ನೇಮಕ ಮಾಡಿಕೊಳ್ಳುತ್ತದೆ. ಶಿಕ್ಷಕರಿಗೆ 10 ತಿಂಗಳ ಕಾಲ ಮಾಸಿಕ 10,000 ರೂ. ಮತ್ತು ಆಯಾಗೆ ಮಾಸಿಕ 7000 ರೂ. ವೇತನ ನೀಡಲಾಗುತ್ತದೆ.

ಅಂಗನವಾಡಿಗಳು ಎಲ್ಲ ಗ್ರಾಮಗಳಲ್ಲಿಯೂ ಇದ್ದರೂ ಶಿಕ್ಷಣ ನೀಡುವಲ್ಲಿ ವಿಫಲವಾಗಿವೆ ಎಂಬ ಕೂಗು ಕೇಳಿ ಬರುತ್ತಿದೆ. ಅಂಗನವಾಡಿಗಳಲ್ಲಿ ಅರ್ಹ ಶಿಕ್ಷಕರು ಇರುವುದಿಲ್ಲ. ಇದ್ದರೂ ಅವರಿಗೆ ತರಬೇತಿ ಇರುವುದಿಲ್ಲ. ಆದರೆ ಶಾಲೆಗಳಲ್ಲಿ ವಿಜ್ಞಾನ ಕಲಿಕೆಗೆ ಬೇಕಾದ ಸೌಕರ್ಯಗಳು ಮತ್ತು ಮೂಲ ಸೌಕರ್ಯಗಳಿರುತ್ತವೆ. ತರಬೇತಿ ಪಡೆದ ಶಿಕ್ಷಕರು ಇರುತ್ತಾರೆ. ಈ ನಿರ್ಧಾರವನ್ನು ಶಿಕ್ಷಣ ತಜ್ಞರು, ಪೋಷಕರು ಮುಕ್ತಕಂಠದಿಂದ ಸ್ವಾಗತಿಸಿದ್ದಾರೆ.

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ನಾಳೆ ಗೃಹಲಕ್ಷ್ಮಿ ಯೋಜನೆಗೆ ಚಾಲನೆ

ಸಾರಿಗೆ ಬಸ್, ಇತರ ವಾಹನಗಳ ಸಂಚಾರ ಮಾರ್ಗ ಬದಲಾವಣೆ; ನಿಲುಗಡೆ ನಿರ್ಬಂಧ



ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ವಾಟರ್‌ಪ್ರೂಫ್ ವೇದಿಕೆ ಸಿದ್ಧಗೊಳ್ಳುತ್ತಿರುವುದು.

ಮೈಸೂರು,ಆ.28(ಆರ್‌ಕೆ)–ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಆಗಸ್ಟ್ 30ರಂದು 'ಗೃಹಲಕ್ಷ್ಮಿ' ಯೋಜನೆಗೆ ಚಾಲನೆ ನೀಡುವ ಕಾರ್ಯಕ್ರಮ ಆಯೋಜಿಸಿರುವುದರಿಂದ ಕೆಎಸ್‌ಆರ್‌ಟಿಸಿ ಬಸ್ ಹಾಗೂ ಇನ್ನಿತರ ವಾಹನಗಳ ಸಂಚಾರ ಮತ್ತು ನಿಲುಗಡೆ ನಿರ್ಬಂಧಿಸಲಾಗಿದ್ದು, ಮಾರ್ಗ ಬದಲಾಯಿಸಲಾಗಿದೆ.

ಮೈಸೂರು ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಈ ಸಂಬಂಧ ಆದೇಶ ಹೊರಡಿಸಿದ್ದಾರೆ. ಆ.30ರಂದು ಬುಧವಾರ ಬೆಳಗ್ಗೆ 8ರಿಂದ ಸಂಜೆ 6 ಗಂಟೆವರೆಗೆ ಹುಣಸೂರು ಕಡೆಯಿಂದ ಮೈಸೂರಿಗೆ ಬರುವ ಕೆಎಸ್‌ಆರ್‌ಟಿಸಿ ಬಸ್‌ಗಳು, ಹಿನಕಲ್ ಜಂಕ್ಷನ್‌ನಲ್ಲಿ ಎಡಕ್ಕೆ ತಿರುಗಿ ರಿಂಗ್ ರಸ್ತೆ ಮೂಲಕ ರಾಯಲ್ ಇನ್ ಜಂಕ್ಷನ್‌ನಲ್ಲಿ ಬಲಕ್ಕೆ ತಿರುಗಿ ಕೆಆರ್‌ಎಸ್ ರಸ್ತೆಯಲ್ಲಿ ಸಾಗಿ ದಾಸಪ್ಪ ಸರ್ಕಲ್, ಮೆಟ್ರೊಪೋಲ್ ಸರ್ಕಲ್ ಮೂಲಕ ಸಾಗಿ ಮುಡಾ ಸರ್ಕಲ್‌ನಲ್ಲಿ ಎಡಕ್ಕೆ ತಿರುಗಿ ರಮಾವಿಲಾಸ ರಸ್ತೆ, ಸಯ್ಯಾಜಿರಾವ್ ರಸ್ತೆಯಲ್ಲಿ ಸಂಚರಿಸಿ ಕುಸ್ತಿ ಅಖಾಡ, ಹಾರ್ಡಿಂಜ್ ವೃತ್ತದ ಮೂಲಕ ಕೆಎಸ್‌ಆರ್‌ಟಿಸಿ ಗ್ರಾಮಾಂತರ ಬಸ್ ನಿಲ್ದಾಣಕ್ಕೆ ತಲುಪಬೇಕು.

ಸಬರ್ಬನ್ ಬಸ್ ನಿಲ್ದಾಣದಿಂದ ಹುಣಸೂರು ಮಾರ್ಗ ಸಂಚರಿಸುವ ಬಸ್ಸುಗಳು, ಇರ್ವಿನ್ ರಸ್ತೆ, ರೈಲ್ವೇ ಸ್ಟೇಷನ್ ಸರ್ಕಲ್, ದಾಸಪ್ಪ ಸರ್ಕಲ್, ಕೆಆರ್‌ಎಸ್ ರಸ್ತೆ, ರಾಯಲ್ ಇನ್ ಜಂಕ್ಷನ್, ರಿಂಗ್ ರಸ್ತೆ ಮೂಲಕ ಸಾಗಿ ಹಿನಕಲ್ ಜಂಕ್ಷನ್‌ನಲ್ಲಿ ಬಲಕ್ಕೆ ತಿರುಗಿ ಹುಣಸೂರು ರಸ್ತೆಯಲ್ಲಿ ಮುಂದೆ ಸಾಗಬೇಕು ಬೆಂಗಳೂರು ಕಡೆಗೆ ಹೋಗುವ ಬಸ್ಸುಗಳು ಎಂದಿನಂತೆ ಫೈವ್‌ಲೈಟ್ ಸರ್ಕಲ್, ಫೌಂಟೇನ್ ಸರ್ಕಲ್ ಮೂಲಕ ಮುಂದೆ ಸಾಗುವುದು.

ವಾಹನ ಸಂಚಾರ ನಿರ್ಬಂಧ: ಅಂದು ಬೆಳಗ್ಗೆ 8ರಿಂದ ಸಂಜೆ 6ರವರೆಗೆ ಕಾರ್ಯಕ್ರಮಕ್ಕೆ ಜನರನ್ನು ಕರೆ ತರುವ ಕೆಎಸ್‌ಆರ್‌ಟಿಸಿ ಬಸ್ಸುಗಳನ್ನು ಹೊರತುಪಡಿಸಿ ಡಿಸಿ ಕಚೇರಿಯಿಂದ ಕೋರ್ಟ್‌ವರೆಗೆ ಕೃಷ್ಣರಾಜ ಬುಲೇವಾರ್ಡ್ ರಸ್ತೆಯ ಎರಡೂ ಕಡೆ ಎಲ್ಲಾ ಬಗೆಯ ವಾಹನಗಳ ಸಂಚಾರ ಮತ್ತು ನಿಲುಗಡೆ ನಿರ್ಬಂಧಿಸಲಾಗಿದೆ. ಅದೇ ರೀತಿ ಸೆಂಟ್ ಜೋಸೆಫ್ ಜಂಕ್ಷನ್‌ನಿಂದ ಮೆಟ್ರೋಪೋಲ್ ಸರ್ಕಲ್‌ವರೆಗೆ ಹುಣಸೂರು ರಸ್ತೆಗಳಲ್ಲಿ ಕೆಎಸ್‌ಆರ್‌ಟಿಸಿ ಬಸ್ ಹೊರತುಪಡಿಸಿ ಎಲ್ಲಾ ಬಗೆಯ ವಾಹನಗಳ ಸಂಚಾರ ನಿರ್ಬಂಧಿಸಲಾಗಿದೆ. ಅಂದು ಮುಡಾ ಜಂಕ್ಷನ್‌ನಿಂದ ವಿಎಂಡಿ ಜಂಕ್ಷನ್, ರೋಟರಿ ಜಂಕ್ಷನ್‌ನಿಂದ ಕೆಆರ್‌ಬಿ ಜಂಕ್ಷನ್, ಜೆಎಲ್‌ಬಿ ಜಂಕ್ಷನ್‌ನಿಂದ ಕೆಆರ್‌ಬಿ ಜಂಕ್ಷನ್, ರಾಮಸ್ವಾಮಿ ಸರ್ಕಲ್‌ನಿಂದ ಅಗ್ನಿಶಾಮಕ ಠಾಣೆ ಜಂಕ್ಷನ್‌ವರೆಗೆ, ಕಲಾಮಂದಿರ ಜಂಕ್ಷನ್‌ನಿಂದ ಕುಕ್ಕರಹಳ್ಳಿ ಕೆರೆವರೆಗೆ ಡಾ.ಪದ್ಮ ವೃತ್ತದಿಂದ ಕೆಜಿ ಕೊಪ್ಪಲಿನ ಶ್ರೀ ಚಂದ್ರಮೌಳೇಶ್ವರ ದೇವಸ್ಥಾನದವರೆಗೆ ಟಿಟಿಎಲ್ ಕಾಲೇಜು ಜಂಕ್ಷನ್‌ನಿಂದ ಬೇಕ್ ಪಾಯಿಂಟ್‌ವರೆಗೆ, ರಮ್ಯ ಹೋಟೆಲ್ ಜಂಕ್ಷನ್‌ನಿಂದ ಕುಕ್ಕರಹಳ್ಳಿವರೆಗೆ ಸ್ವಿಮ್ಮಿಂಗ್ ಪೂಲ್ ರಸ್ತೆಯಲ್ಲಿ ಕಾರ್ಯಕ್ರಮಕ್ಕೆ ಆಗಮಿಸುವ ಕೆಎಸ್‌ಆರ್‌ಟಿಸಿ ಬಸ್ಸುಗಳನ್ನು ಹೊರತುಪಡಿಸಿ ಎಲ್ಲಾ ಬಗೆಯ ವಾಹನಗಳ ಸಂಚಾರ ಮತ್ತು ನಿಲುಗಡೆಯನ್ನು ನಿರ್ಬಂಧಿಸಲಾಗಿದೆ.

ಬದಲಿ ಮಾರ್ಗ: ಹುಣಸೂರು, ಹಾಸನ ಕಡೆಯಿಂದ ಮೈಸೂರಿಗೆ ಬರುವ ವಾಹನಗಳು ಸೆಂಟ್ ಜೋಸೆಫ್ ಜಂಕ್ಷನ್‌ನಲ್ಲಿ ಎಡಕ್ಕೆ ತಿರುಗಿ ಟೆಂಪಲ್ ರಸ್ತೆ ಮೂಲಕ ಕೆಆರ್‌ಎಸ್ ರಸ್ತೆ ತಲುಪಿ ಮುಂದೆ ಸಾಗಬೇಕು. ಎಂಜಿ ರಸ್ತೆಯಿಂದ ಬರುವ ವಾಹನಗಳು, ಆರ್‌ಟಿಓ ಸರ್ಕಲ್ ಮೂಲಕ ಮುಂದೆ ಸಾಗುವುದು. ಜೆಎಲ್‌ಬಿ ರಸ್ತೆಯಿಂದ ಹುಣಸೂರು ರಸ್ತೆಗೆ ಹೋಗುವ ವಾಹನಗಳು ದಾಸಪ್ಪ ಸರ್ಕಲ್‌ನಲ್ಲಿ ಎಡಕ್ಕೆ ತಿರುಗಿ ಸಾಗಬೇಕು ಹಾಗೂ ಬೋಗಾದಿ ಕಡೆಯಿಂದ ಬರುವ ವಾಹನಗಳು ವಿಎಂಡಿ ಜಂಕ್ಷನ್‌ನಲ್ಲಿ ಬಲಕ್ಕೆ ತಿರುಗಿ ಮುಂದೆ ಸಾಗಬೇಕೆಂದು ನಗರ ಪೊಲೀಸ್ ಆಯುಕ್ತರ ಆದೇಶದಲ್ಲಿ ತಿಳಿಸಲಾಗಿದೆ.

ಮೈಸೂರಲ್ಲಿ ಇಬ್ಬರ ನಾಪತ್ತೆ



ಎನ್.ಪರಮೇಶ್ವರ



ಕೆ.ಪರಮೇಶ್ವರ

ಮೈಸೂರು,ಆ.28–ಮೈಸೂರಿನ ಸರಸ್ವತಿಪುರಂ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಇಬ್ಬರು ನಾಪತ್ತೆಯಾಗಿರುವ ಬಗ್ಗೆ ಪ್ರಕರಣ ದಾಖಲಾಗಿದೆ. ಜನತಾನಗರದ ನಿವಾಸಿ ಎನ್.ಪರಮೇಶ್ವರ(63) ಅವರು ಆ.15ರಂದು ಬಟ್ಟೆ ಹೊಲಿಸಲು ಹೋಗುತ್ತಿರುವುದಾಗಿ ತಿಳಿಸಿ ಮನೆಯಿಂದ ತೆರಳಿದವರು ಮತ್ತೆ ವಾಪಸ್ಸಾಗಿಲ್ಲ ಎಂದು ಅವರ ಪುತ್ರ ಪಿ.ಅವೋಘ್ ಪೊಲೀಸರಿಗೆ ನೀಡಿದ ದೂರಿನಲ್ಲಿ ತಿಳಿಸಿದ್ದಾರೆ.

ಮತ್ತೊಂದು ಪ್ರಕರಣದಲ್ಲಿ ದೊಡ್ಡಮ್ಮ ತಾಯಿ ದೇವಸ್ಥಾನ ರಸ್ತೆ ನಿವಾಸಿ, ಮಾನಸಿಕ ಅಸ್ವಸ್ಥನಾದ ಕೆ.ಪರಮೇಶ್ವರ(45) ಕಳೆದ ಜುಲೈ 20ರಂದು ರಾತ್ರಿ ಮೊಸರು ತರಲೆಂದು ಮನೆಯಿಂದ ಹೋದವರು ಈವರೆಗೆ ಹಿಂತಿರುಗಿಲ್ಲ ಎಂದು ಅವರ ತಂದೆ ಕಾಳೇಗೌಡ ಪೊಲೀಸರಿಗೆ ದೂರು ಸಲ್ಲಿಸಿದ್ದಾರೆ. ಇವರ ಬಗ್ಗೆ ಮಾಹಿತಿ ಇರುವವರು ನಗರ ಪೊಲೀಸ್ ಕಂಟ್ರೋಲ್ ರೂಂ ದೂ.ಸಂಖ್ಯೆ 0821–2418339 ಸಂಪರ್ಕಿಸುವಂತೆ ಪೊಲೀಸ್ ಪ್ರಕಟಣೆ ಕೋರಿದೆ.

ಸಾಮಾನ್ಯ ಕೌನ್ಸಿಲ್ ಸಭೆ

ಮೈಸೂರು,ಆ.28–ಆ.31ರಂದು ಬೆಳಗ್ಗೆ 11 ಗಂಟೆಗೆ ಮೈಸೂರು ಮಹಾ ನಗರ ಪಾಲಿಕೆ ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣದಲ್ಲಿ 2023ನೇ ಆಗಸ್ಟ್ ತಿಂಗಳ ಸಾಮಾನ್ಯ ಕೌನ್ಸಿಲ್ ಸಭೆಯನ್ನು ಏರ್ಪಡಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಪೌರಕಾರ್ಮಿಕನಿಗೆ ಕಾರು ಡಿಕ್ಕಿ ಪ್ರಕರಣ ರಾತ್ರಿಯಿಡೀ ಹರಿಕಥೆ ಕೇಳಿ ವಾಪಸ್ಸಾಗುವಾಗ ಅಪಘಾತ!



ಮೈಸೂರು,ಆ.28(ಆರ್‌ಕೆ)– ರಾತ್ರಿಯಿಡೀ ಶನಿಮಹಾತ್ಮೆ ಕಥೆ ಕೇಳಿ, ಮರುದಿನ ಬೆಳಗ್ಗೆ ಮನೆಗೆ ಹಿಂದಿರುಗುತ್ತಿದ್ದಾಗ ನಿದ್ರೆ ಮಂಪರಿನಲ್ಲಿ ಕಾರು ನಿಯಂತ್ರಣ ಕಳೆದುಕೊಂಡು ಪೌರಕಾರ್ಮಿಕನಿಗೆ ಡಿಕ್ಕಿ ಹೊಡೆದಿದೆ ಎಂದು ಹೇಳಲಾಗಿದೆ.

ಕಾರು ಚಾಲಕ ಕುಶಾಲ್, ಮೈಸೂರಿನ ಕ್ಯಾತಮಾರನಹಳ್ಳಿಯಲ್ಲಿ ಶನಿವಾರ ರಾತ್ರಿಯಿಡೀ ಶನಿಮಹಾತ್ಮೆ ಕಥೆ ಕೇಳಿದ್ದರು. ಭಾನುವಾರ ಬೆಳಗ್ಗೆ ತನ್ನ ರೆನಾಲ್ಟ್ ಕ್ವಿಡ್ ಕಾರಿನಲ್ಲಿ ಅರ್ಚಕರನ್ನು ಕರೆತಂದು ಕೆಎಸ್‌ಆರ್‌ಟಿಸಿ ನಗರ ಬಸ್ ನಿಲ್ದಾಣಕ್ಕೆ ಬಿಟ್ಟು ಜಯಲಕ್ಷ್ಮಿಪುರಂನಲ್ಲಿರುವ ಮನೆಗೆ ಹಿಂದಿರುಗುತ್ತಿದ್ದಾಗ ನಿದ್ರೆ ಮಂಪರಿನಲ್ಲಿ ದೇವರಾಜ ಅರಸು ರಸ್ತೆಯ ನಾರಾಯಣ ಶಾಸ್ತ್ರಿ ರಸ್ತೆ ಜಂಕ್ಷನ್ ಬಳಿ ಬಲಬದಿಯಲ್ಲಿ ಸ್ವಚ್ಛತಾ ಕೆಲಸದಲ್ಲಿ ನಿರತರಾಗಿದ್ದ ಮಹದೇವ ಎಂಬ ಪೌರಕಾರ್ಮಿಕರಿಗೆ ಡಿಕ್ಕಿ ಹೊಡೆದಿದ್ದರು.

ಪರಿಣಾಮ ಮಹದೇವ ಅವರ ಬಲಗಾಲು ತುಂಡರಿಸಿ ಬಿದ್ದಿತಲ್ಲದೇ, ಎಡಗಾಲಿನ ಮೂಳೆಯೂ ಮುರಿದಿದೆ. ಅವರನ್ನು ಬಿಜಿಎಸ್ ಅಪೊಲೋ ಆಸ್ಪತ್ರೆಗೆ ದಾಖಲಿಸಲಾಗಿದ್ದು, ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಅತ್ತ ಅಪಘಾತ ಮಾಡಿದ ಕಾರು ಚಾಲಕ ಕುಶಾಲ್ ಸಹ ಗಾಯಗೊಂಡಿದ್ದು, ಆತನ್ನು ಕಾಮಾಕ್ಷಿ ಆಸ್ಪತ್ರೆಗೆ ದಾಖಲು ಮಾಡಲಾಗಿದೆ ಎಂದು ಪ್ರಕರಣ ದಾಖಲಿಸಿಕೊಂಡಿರುವ ದೇವರಾಜ ಸಂಚಾರ ಠಾಣೆ ಇನ್ಸ್‌ಪೆಕ್ಟರ್ ಮುನಿಯಪ್ಪ ತಿಳಿಸಿದ್ದಾರೆ.

ಕಾಂಗ್ರೆಸ್ ಸರ್ಕಾರ–ನೂರು ದಿನ ಅಭಿವೃದ್ಧಿ ಕಾರ್ಯ ಸ್ಥಗಿತ; ವರ್ಗಾವಣೆ ಒಂದು ದಂಧೆಯಾಯ್ತು

●ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಟೀಕೆ ●ಗ್ಯಾರಂಟಿ ಜಾರಿಯೂ ಈಡೇರಿಲ್ಲ; ಗೃಹಲಕ್ಷ್ಮಿಯರ ಹುಡುಕಾಟ ನಡೆಯುತ್ತಿದೆ

ಬೆಂಗಳೂರು, ಆ.28(ಕೆಎಂಶಿ)– ಸಂಪೂರ್ಣ ಬಹುಮತದೊಂದಿಗೆ ಬಂದ ಸರ್ಕಾರ ನೂರು ದಿನಗಳಲ್ಲಿ ಎಡವಿದ್ದೇ ಹೆಚ್ಚು. ಗ್ಯಾರಂಟಿ ನೆಪದಲ್ಲಿ ಒಂದು ವರ್ಷದ ಅಭಿವೃದ್ಧಿ ಕಾಮಗಾರಿಗಳು ಸಂಪೂರ್ಣ ನಿಂತು ಹೋಗಿವೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಟೀಕಿಸಿದ್ದಾರೆ.

ಕಾಂಗ್ರೆಸ್ ಸರ್ಕಾರ ವರ್ಗಾವಣೆಯನ್ನು ಒಂದು ಕಮಿಷನ್ ದಂಧೆಯಾಗಿ ಮಾಡಿದ್ದು, ವಿಧಾನಸೌಧದ ಮೂಲೆ ಮೂಲೆಯಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ. ಗುತ್ತಿಗೆದಾರರ ಬಿಲ್ ಬಾಕಿ ಇಟ್ಟುಕೊಂಡು ಕಮಿಷನ್ ದಂಧೆಗೆ ಮುಂದಾಗಿದೆ ಎಂದು ಆರೋಪಿಸಿದ್ದಾರೆ. ರೈತರು ಬರಗಾಲದ ಬವಣೆಯಲ್ಲಿ ಸಿಕ್ಕರೂ ಕೂಡ ಸರ್ಕಾರ ಆ ಕಡೆ ತಿರುಗಿ ನೋಡಿಲ್ಲ. ರೈತರ ಆತ್ಮಹತ್ಯೆ ಮತ್ತೆ ಪ್ರಾರಂಭವಾಗಿದೆ. ಕೃಷಿ ಉತ್ಪಾದನೆಗೆ ಪೆಟ್ಟು ಬೀಳುವ ಎಲ್ಲ ಲಕ್ಷಣ ಕಾಣುತ್ತಿದೆ. ಪೂರ್ಣ ಪ್ರಮಾಣದ ಗ್ಯಾರಂಟಿ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ದೂರಿದ್ದಾರೆ. ಒಂದು ಕಡೆ ವಿದ್ಯುತ್ ದರ ಹೆಚ್ಚಿಸಿ ಗ್ರಾಹಕರಿಗೆ ಶಾಕ್ ಕೊಟ್ಟಿದೆ. ಸಾರಿಗೆ ಸಿಬ್ಬಂದಿಗೆ ಸಮರ್ಪಕವಾದ ಸಂಬಳ ನೀಡಿಲ್ಲ 10 ಕೆಜಿ ಅಕ್ಕಿ ಗ್ಯಾರಂಟಿಯನ್ನು ಈಡೇರಿಸಲಾಗಿಲ್ಲ. ಕೇಂದ್ರದ 5 ಕೆಜಿ ಅಕ್ಕಿಯೇ ಜನರ ಸಹಾಯಕ್ಕೆ ಬಂದಿದೆ.



ರಾಜ್ಯದಲ್ಲಿ ಗೃಹಲಕ್ಷ್ಮಿಯರ ಹುಡುಕಾಟ ಪೂರ್ಣಗೊಂಡಿಲ್ಲ ಎಂದು ವ್ಯಂಗ್ಯವಾಡಿದ್ದಾರೆ. ಈ ಮಧ್ಯ ಗ್ಯಾರಂಟಿಗಾಗಿ ಎಸ್ಸಿ–ಎಸ್ಟಿ ಅಭಿವೃದ್ಧಿ ಹಣ 11 ಸಾವಿರ ಕೋಟಿ ಬಳಕೆ ಮಾಡಿ ಎಸ್ಸಿ ಎಸ್ಟಿ ಮತ್ತು ಒಬಿಸಿ ಜನರಿಗೆ ಸರ್ಕಾರ ಮೋಸ ಮಾಡಿದೆ. ಕಾವೇರಿ ಜಲಾನಯನ ಪ್ರದೇಶದ ರೈತರ ಮತ್ತು ಸಾರ್ವಜನಿಕರ ಹಿತ ಕಾಯಲು ವಿಫಲವಾಗಿದೆ. ನಮ್ಮ ಡ್ಯಾಮುಗಳ ಕೀಲಿಕೈಯನ್ನು ತಮಿಳುನಾಡಿಗೆ ಒಪ್ಪಿಸಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಪೈಪೋಟಿ ಆಡಳಿತದ ವ್ಯವಸ್ಥೆ ಮೇಲೆ ದುಷ್ಪರಿಣಾಮ ಬೀರಿದೆ. ಇದರಿಂದ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ ಕೊಲೆ, ಸುಲಿಗೆ ಸಾಮಾನ್ಯವಾಗಿದೆ.

ಕಾಂಗ್ರೆಸ್ ಸರ್ಕಾರ ನೂರು ದಿನಗಳಲ್ಲಿ ಜನರ ವಿಶ್ವಾಸ ಗಳಿಸುವುದು ದೂರದ ಮಾತು. ಅವರ ಶಾಸಕರ ವಿಶ್ವಾಸವನ್ನೇ ಕಳೆದುಕೊಂಡಿದೆ. ಎಲ್ಲ ರಂಗದಲ್ಲಿನ ವೈಫಲ್ಯವೇ ಇವರ ಸಾಧನೆ. ಸರ್ಕಾರದ ವಿರುದ್ಧ ಜನ ಸಾಮಾನ್ಯರು, ಮಾಧ್ಯಮದವರು, ಸಂಘ ಸಂಸ್ಥೆಗಳು ಧ್ವನಿ ಎತ್ತುವುದನ್ನು ಪೊಲೀಸ್ ಇಲಾಖೆ ಮೂಲಕ ಹತ್ತಿಕ್ಕುವ ಪ್ರಯತ್ನ, ಇದು ಪ್ರಜಾಪ್ರಭುತ್ವ ವಿರೋಧಿ, ಸಂವಿಧಾನ ವಿರೋಧಿ ಹಾಗೂ ಸರ್ವಾಧಿಕಾರಿ ಆಡಳಿತವೆಂದು ನೂರು ದಿನಗಳಲ್ಲಿ ತೋರಿಸಿಕೊಟ್ಟಿದೆ ಎಂದು ವಾಗ್ದಾಳಿ ನಡೆಸಿದ್ದಾರೆ

ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಹಿಸ್ಟಿರೋಸ್ಕೋಪಿ ಕಾರ್ಯಾಗಾರ



ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಭಾನುವಾರ ಕಾರ್ಯಾಗಾರವನ್ನು ಲ್ಯಾಪ್ರೋಸ್ಕೋಪಿಕ್ ಸರ್ಜನ್ ಡಾ.ವಿದ್ಯಾ ವಿ.ಭಟ್ (ಎಡದಿಂದ 4ನೇಯವರು) ಉದ್ಘಾಟಿಸಿದರು.

ಮೈಸೂರು,ಆ.28(ಪಿಎಂ)– ಮೈಸೂರಿನ ಎಂಜಿ ರಸ್ತೆಯ ಜೆಎಸ್‌ಎಸ್ ಆಸ್ಪತ್ರೆಯ ಪ್ರಸೂತಿ ಮತ್ತು ಸ್ತ್ರೀರೋಗ ಶಾಸ್ತ್ರ ವಿಭಾಗದ (ಓಬಿಜಿ) ವತಿಯಿಂದ ಭಾನುವಾರ ವಿಭಾಗದಲ್ಲಿ ಹಿಸ್ಟಿರೋಸ್ಕೋಪಿ ಶಸ್ತ್ರಚಿಕಿತ್ಸೆ ಕುರಿತ ಲೈವ್ ಕಾರ್ಯಾಗಾರ ನಡೆಯಿತು.

ಬೆಂಗಳೂರು ರಾಧಾಕೃಷ್ಣ ಆಸ್ಪತ್ರೆಯ ನಿರ್ದೇಶಕರೂ ಆದ ಖ್ಯಾತ ಲ್ಯಾಪ್ರೋಸ್ಕೋಪಿಕ್ ಸರ್ಜನ್ ಡಾ.ವಿದ್ಯಾ ವಿ.ಭಟ್ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದರಲ್ಲದೆ, ಕಾರ್ಯಾಗಾರವನ್ನೂ ಉದ್ಘಾಟಿಸಿದರು. ಮೈಸೂರು ಜಿಲ್ಲೆ ಮತ್ತು ಸುತ್ತಮುತ್ತಲಿನ ಸುಮಾರು 147 ಸ್ತ್ರೀರೋಗ ತಜ್ಞರು ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ಕಾರ್ಯಾಗಾರದ ಪ್ರಯೋಜನ ಪಡೆದರು. ವೈಜ್ಞಾನಿಕ ಉಪನ್ಯಾಸಗಳ ಬಳಿಕ ಕೆಲ ವಿಶೇಷ ಪ್ರಕರಣಗಳ ಮೇಲೆ ಬೆಳಕು ಚೆಲ್ಲಲಾಯಿತು.

ಇದೇ ಸಂದರ್ಭ ಮಾತನಾಡಿದ ಜೆಎಸ್‌ಎಸ್ ಆಸ್ಪತ್ರೆಯ ಪ್ರಸೂತಿ ಮತ್ತು ಸ್ತ್ರೀರೋಗಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ.ಎಸ್.ಮಮತಾ, ಜೆಎಸ್‌ಎಸ್ ಆಸ್ಪತ್ರೆಯು ಅತ್ಯಾಧುನಿಕ ಲ್ಯಾಪ್ರೋಸ್ಕೋಪಿಕ್ ಮತ್ತು ಹಿಸ್ಟಿರೋಸ್ಕೋಪಿಕ್ ಘಟಕ ಹೊಂದಿದೆ. ಇಲ್ಲಿ ಎಲ್ಲಾ ಶಸ್ತ್ರಚಿಕಿತ್ಸೆಗಳನ್ನು ಪರಿಣತ ಸ್ತ್ರೀರೋಗ ತಜ್ಞರು ನಡೆಸುತ್ತಿದ್ದಾರೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸಿದ ಹಿರಿಯ ಶಿಕ್ಷಕರನ್ನು ಸನ್ಮಾನಿಸಲಾಯಿತು. ಕಾರ್ಯಾಗಾರದ ಉದ್ಘಾಟನಾ ಸಮಾರಂಭದಲ್ಲಿ ಜೆಎಸ್‌ಎಸ್–ಎಹೆಚ್‌ಇಆರ್‌ನ ಕುಲಸಚಿವ ಡಾ.ಬಿ.ಮಂಜುನಾಥ್, ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲ ಡಾ.ಹೆಚ್.ಬಸವನಗೌಡಪ್ಪ, ಜೆಎಸ್‌ಎಸ್ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ಸಿ.ಪಿ. ಮಧು ಮತ್ತಿತರರು ಹಾಜರಿದ್ದರು.

ಆನ್‌ಲೈನ್ ಬೆಟ್ಟಿಂಗ್; 5.87 ಕೋಟಿ ಮೌಲ್ಯದ ಆಸ್ತಿ ಜಪ್ತಿ ಮಾಡಿದ ಇಡಿ

ಬೆಂಗಳೂರು: ಅಕ್ರಮ ಆನ್‌ಲೈನ್ ಬೆಟ್ಟಿಂಗ್ ಮತ್ತು ಜೂಜಾಟಕ್ಕೆ ಕಡಿವಾಣ ಹಾಕಲು ಜಾರಿ ನಿರ್ದೇಶನಾಲಯ(ಇಡಿ) ನಿರ್ಣಾಯಕ ಕ್ರಮ ಕೈಗೊಂಡಿದ್ದು, 5.87 ಕೋಟಿ ಮೌಲ್ಯದ ಚಿರಾಸ್ತಿಯನ್ನು ತಾತ್ಕಾಲಿಕವಾಗಿ ಜಪ್ತಿ ಮಾಡಲಾಗಿದೆ.

ಈ ಕಾನೂನುಬಾಹಿರ ಚಟುವಟಿಕೆಯಲ್ಲಿ ತೊಡಗಿರುವ ವ್ಯಕ್ತಿಗಳು ಮತ್ತು ಘಟಕಗಳ ವಿವಿಧ ಬ್ಯಾಂಕ್ ಖಾತೆಗಳಲ್ಲಿ ಈ ಆಸ್ತಿಗಳನ್ನು 2002ರ ಮನಿ ಲಾಂಡರಿಂಗ್ ತಡೆ ಕಾಯ್ದೆಯ ನಿಬಂಧನೆಗಳ ಅಡಿಯಲ್ಲಿ ಬ್ಯಾಲೆನ್ಸ್ ಎಂದು ಗುರುತಿಸಲಾಗುತ್ತದೆ.

ವಿವೇಕನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾದ ಬಳಿಕ ಇಡಿ ತನಿಖೆ ಆರಂಭಿಸಿತ್ತು. ಅಕ್ರಮ ಆನ್‌ಲೈನ್ ಜೂಜಾಟ, ಬೆಟ್ಟಿಂಗ್ ಮತ್ತು ಸಂಶಯಾಸ್ಪದ ಚಟುವಟಿಕೆಗಳಲ್ಲಿ ಹಲವಾರು ಕಂಪನಿಗಳು ಆಳವಾಗಿ ತೊಡಗಿಸಿಕೊಂಡಿವೆ ಎಂದು ಆರೋಪಿಸಿ ಡೈರೆಕ್ಟೊರೇಟ್ ಜನರಲ್ ಆಫ್ ಸರಕು ಮತ್ತು ಸೇವಾ ತೆರಿಗೆ ಗುಪ್ತಚರ (ಡಿಜಿಜಿಐ) ಕಚೇರಿಯು ದೂರು ದಾಖಲಿಸಿದೆ.

ಆರೋಪಿಗಳನ್ನು ಉಮರ್ ಫಾರೂಕ್ ಮತ್ತು ಶ್ಯಾಮಲಾ ಎನ್ ಎಂದು ಗುರುತಿಸಲಾಗಿದ್ದು, ಹಲವು ಕಂಪನಿಗಳನ್ನು ಸ್ಥಾಪಿಸಲು ಸುಳ್ಳು ದಾಖಲೆಗಳನ್ನು ಬಳಸಿದ್ದಾರೆ ಎನ್ನಲಾಗಿದೆ. ಈ ಕಂಪನಿಗಳ ಮಾನವ ಸಂಪನ್ಮೂಲ ವ್ಯವಸ್ಥಾಪಕರು ಅಕ್ರಮವಾಗಿ ಅನೇಕ ಸಿಮ್ ಕಾರ್ಡ್‌ಗಳನ್ನು ಪಡೆದುಕೊಂಡು ಆನ್‌ಲೈನ್ ಮೊವಾಟಿಗೆ ಅನುಕೂಲವಾಗುವಂತೆ ವಿವಿಧ ಬ್ಯಾಂಕ್ ಖಾತೆಗಳಿಗೆ ಲಿಂಕ್ ಮಾಡಿದ್ದಾರೆ. ರಾಕ್‌ಸ್ಟಾರ್ ಇಂಟರಾಕ್ಟಿವ್, ಇಂಡಿವರ್ಲ್ಡ್ ಸ್ಟುಡಿಯೋಸ್, ಫಾಲ್ಕನ್ ಎಂಟರ್‌ಟೈನ್‌ಮೆಂಟ್ ಏಜೆನ್ಸಿಗಳು, ದಿ ನೆಕ್ಸ್ಟ್ ಲೆವೆಲ್ ಟೆಕ್ನಾಲಜಿ, ರಿಫ್ಟ್‌ಗೇಮರ್ ಟೆಕ್ನಾಲಜೀಸ್, ರಿಯಾಲಿಟಿ ಕೋಡ್ ಟೆಕ್ನಾಲಜಿ, ಟೆನೆಸ್ ಸೊಲ್ಯೂಷನ್ಸ್, ಎಲೆಕ್ಟ್ರಾನಿಕ್ ವರ್ಚುವಲ್ ಸೊಲ್ಯೂಷನ್ಸ್, ಝುಝುಗೊ ಸಿಸ್ಟಮ್ಸ್, ಝಿಂಗಾ ಇಂಟರಾಕ್ಟಿವ್, ವೇಲ್ ಬೈಟ್ಸ್, ಆಕ್ಯುಲಸ್ ವಾಲ್ಟ್ ಎಂಟರ್‌ಟೈನ್‌ಮೆಂಟ್ ಮತ್ತು ನೆಸ್ಟ್ರಾ ವೆಬ್ ಸೊಲ್ಯೂಷನ್‌ಗಳನ್ನು ಸಾರ್ವಜನಿಕರನ್ನು ಮೂರ್ಖರನ್ನಾಗಿಸುವ ಉದ್ದೇಶದಿಂದ ವ್ಯವಸ್ಥಿತವಾಗಿ ಸ್ಥಾಪಿಸಲಾಗಿದೆ. ಈ ಗುಂಪುಗಳು ಬೆಟ್ಟಿಂಗ್, ಜೂಜಾಟದ ನೆಪದಲ್ಲಿ ಹಣ ವಸೂಲಿ ಮಾಡಿ ವಂಚಿಸುತ್ತಿದ್ದರು. ಅವರು Bestar tek, Khelo24bet ಮತ್ತು Betinex changeನಂತಹ ವೆಬ್‌ಸೈಟ್‌ಗಳ ಮೂಲಕ ಕಾರ್ಯನಿರ್ವಹಿಸುತ್ತಿದ್ದರು.

ಕೊಚ್ಚಿಯಿಂದ ಬೆಂಗಳೂರಿಗೆ ತೆರಳುತ್ತಿದ್ದ ಇಂಡಿಗೋ ವಿಮಾನಕ್ಕೆ ಬಾಂಬ್ ಬೆದರಿಕೆ!

ಕೊಚ್ಚಿ: ಕೇರಳದ ಕೊಚ್ಚಿಯಿಂದ ಬೆಂಗಳೂರಿಗೆ ತೆರಳುತ್ತಿದ್ದ ಇಂಡಿಗೋ ವಿಮಾನದಲ್ಲಿ ಬಾಂಬ್ ಇಟ್ಟಿರುವುದಾಗಿ ಸೋಮವಾರ ಬೆದರಿಕೆ ಬಂದಿದೆ. ಇಂಡಿಗೋ ವಿಮಾನ ಬೆಳಗ್ಗೆ 10.30ಕ್ಕೆ ಕೊಚ್ಚಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಟೇಕಾಫ್ ಆಗಬೇಕಿತ್ತು. ಆದರೆ, ಬಾಂಬ್ ಬೆದರಿಕೆ ಕರೆ ಬಂದ ಹಿನ್ನೆಲೆಯಲ್ಲಿ ಪ್ರಯಾಣಿಕರನ್ನು ಕೆಳಗಿಳಿಸಿ ತಪಾಸಣೆ ನಡೆಸಲಾಯಿತು. ಅಲ್ಲದೇ, ಹೆಚ್ಚಿನ ತಪಾಸಣೆಗಾಗಿ ವಿಮಾನವನ್ನು ಪ್ರತ್ಯೇಕ ಸ್ಥಳಕ್ಕೆ ಕೊಂಡೊಯ್ಯಲಾಯಿತು ಎಂದು ವಿಮಾನ ನಿಲ್ದಾಣದ ಮೂಲಗಳು ಹೇಳಿವೆ.



ನಂತರ ಬಾಂಬ್ ನಿಷ್ಕ್ರಿಯ ದಳ, ರಾಜ್ಯ ಪೊಲೀಸ್ ಮತ್ತು ಭದ್ರತಾ ಇಲಾಖೆ ತಂಡ ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದೆ. ಘಟನೆ ವೇಳೆ ವಿಮಾನದಲ್ಲಿ 138 ಪ್ರಯಾಣಿಕರು ಮತ್ತು ಒಂದು ಮಗು ಇತ್ತು ಎನ್ನಲಾಗಿದೆ. ಎಲ್ಲರನ್ನು ಭದ್ರತಾ ಪ್ರದೇಶಕ್ಕೆ ಸ್ಥಳಾಂತರಿಸಿ, ಅವರ ಸಾಮಾನು ಸರಂಜಾಮುಗಳ ಮರು–ಪರಿಶೀಲನೆ ಮಾಡಲಾಯಿತು. ಅನುಮಾನಾಸ್ಪದವಾಗಿ ಏನೂ ಪತ್ತೆಯಾಗಿಲ್ಲ ಎಂದು ತಿಳಿದುಬಂದಿದೆ. ಈ ಸಂಬಂಧ ಪ್ರಕರಣ ದಾಖಲಿಸಲಾಗಿದ್ದು, ಇಂಟರ್ನೆಟ್ ಕರೆ ಮೂಲವನ್ನು ಪತ್ತೆಹಚ್ಚಲು ತನಿಖೆ ಆರಂಭಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆ.18ರಂದು ದೆಹಲಿ ವಿಮಾನ ನಿಲ್ದಾಣದಲ್ಲಿ ದೆಹಲಿ–ಪುಣೆ ವಿಸ್ತಾರಾ ಏರ್‌ಲೈನ್ಸ್ ವಿಮಾನದಲ್ಲಿ ಬಾಂಬ್ ಇರಿಸಲಾಗಿದೆ ಎಂಬ ಹುಸಿ ಕರೆ ಬಂದ ನಂತರ ಸುಮಾರು ಎಂಟು ಗಂಟೆಗಳ ಕಾಲ ವಿಮಾನ ಹಾರಾಟದಲ್ಲಿ ವಿಳಂಬವಾಗಿತ್ತು.

ಕೆಆರ್‌ಎಸ್‌ನಿಂದ ನೀರು ಬಿಟ್ಟರೆ ತೀವ್ರ ಸಮಸ್ಯೆ



ಮೈಸೂರು,ಆ.28(ಆರ್‌ಕೆ)– ಕೆಆರ್‌ಎಸ್ ಜಲಾಶಯದಿಂದ ತಮಿಳುನಾಡಿಗೆ 15 ದಿನ 5,000 ಕ್ಯೂಸೆಕ್ ನೀರು ಬಿಟ್ಟರೆ 6 ಟಿಎಂಸಿ ನೀರು ಖಾಲಿಯಾಗಲಿದೆ ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಆತಂಕ ವ್ಯಕ್ತಪಡಿಸಿದ್ದಾರೆ.

ನೀರು ಹರಿಸಿದಲ್ಲಿ ಕಾವೇರಿ ಅಚ್ಚುಕಟ್ಟು ಪ್ರದೇಶದ ರೈತರ ಪಾಲಿಗೆ ಮರಣ ಶಾಸನವಾಗಲಿದ್ದು, ಮೈಸೂರು, ಮಂಡ್ಯ ಭಾಗದಲ್ಲಿ ಕುಡಿಯುವ ನೀರಿಗೂ ಹಾಹಾಕಾರ ಉಂಟಾಗಲಿದೆ. ಈ ಬಾರಿ ಶೇ.64ರಷ್ಟು ಮಳೆ ಪ್ರಮಾಣ ಕಡಿಮೆಯಾಗಿರುವುದರಿಂದ ಜಲಾಶಯಗಳೂ ಭರ್ತಿಯಾಗದಿರುವಾಗ ತಮಿಳುನಾಡಿಗೆ ನೀರು ಬಿಡುವುದು ಸರಿಯಲ್ಲ ಎಂದು ಅವರು ತಿಳಿಸಿದ್ದಾರೆ.

ಕೆಆರ್‌ಎಸ್ 100 ಅಡಿ, ಕಬಿನಿ ಜಲಾಶಯ ನೀರಿನ ಮಟ್ಟ 72 ಅಡಿಗಿಳಿದಿದ್ದು, ಕುಡಿಯುವ ನೀರಿಗೂ ಸಂಕಷ್ಟ ಪರಿಸ್ಥಿತಿ ಉಂಟಾಗುವುದು ನಿಶ್ಚಿತ. ಆದ್ದರಿಂದ ರಾಜ್ಯ ಸರ್ಕಾರವು ಸರ್ವೋಚ್ಚ ನ್ಯಾಯಾಲಯಕ್ಕೆ ಪುನರ್ ಪರಿಶೀಲನಾ ಮನವಿ ಸಲ್ಲಿಸಿ ವಸ್ತುಸ್ಥಿತಿ ಮನವರಿಕೆ ಮಾಡಿಕೊಡಬೇಕು ಎಂದು ಕುರುಬೂರು ಶಾಂತಕುಮಾರ್ ಒತ್ತಾಯಿಸಿದ್ದಾರೆ.

ಜೈಲಿನ 40 ಅಡಿ ಗೋಡೆ ಹಾರಿ ತಪ್ಪಿಸಿಕೊಂಡಿದ್ದ ಅತ್ಯಾಚಾರ ಆರೋಪಿ 24 ಗಂಟೆಯಲ್ಲಿ ಬಂಧನ!

ದಾವಣಗೆರೆ: ಜೈಲಿನ 40 ಅಡಿ ಬೃಹತ್ ಗೋಡೆ ಹಾರಿ ಪರಾರಿಯಾಗಿದ್ದ ಪೋಕ್ಸೊ ಪ್ರಕರಣದ ಆರೋಪಿಯೊಬ್ಬನನ್ನು ಕೇವಲ 24 ಗಂಟೆಗಳ ಅಂತರದಲ್ಲೇ ಪೊಲೀಸರು ಬಂಧಿಸಿದ್ದಾರೆ. ಕಳೆದ ವಾರ ದಾವಣಗೆರೆ ಜೈಲಿನಿಂದ 40 ಅಡಿ ಗೋಡೆ ಹಾರಿ ಪರಾರಿಯಾಗಿದ್ದ. ಈ ಘಟನೆ ಸಿಸಿಟಿವಿಯಲ್ಲಿ ಸೆರೆಯಾಗಿತ್ತು ಅತ್ಯಾಚಾರದ ಆರೋಪ ಎದುರಿಸುತ್ತಿರುವ 23 ವರ್ಷದ ವಸಂತ್ –ಉಪ ಕಾರಾಗೃಹದ ಗೋಡೆ ಜಿಗಿದಾಗ ಆರೋಪಿ ಕಾಲಿಗೆ ಪೆಟ್ಟುಬಿದ್ದರೂ, ಅಲ್ಲಿಂದ ಪರಾರಿಯಾಗಿದ್ದ. ಬಳಿಕ ದುಗ್ಗಾವತಿಯ ಸಂಬಂಧಿಕರ ಮನೆಯೊಂದರಲ್ಲಿ ಅಡಗಿದ್ದ. ಬೆಳಗ್ಗೆಯೇ ಕಾರ್ಯಾಚರಣೆ ನಡೆಸಿ ಬಂಧಿಸಿ, ಮತ್ತೆ ಜೈಲಿಗೆ ಕಳುಹಿಸಲಾಗಿದೆ ಎಂದು ಇನ್ಸ್‌ಪೆಕ್ಟರ್ ಗುರುಬಸವರಾಜ್ ತಿಳಿಸಿದರು.

ಗಾಣಿಗರ ಸಮುದಾಯ ಸೇರಿದಂತೆ ಹಿಂದುಳಿದ ವರ್ಗಗಳು ರಾಜಕೀಯವಾಗಿ ಶಕ್ತಿಯುತ ಬೆಳವಣಿಗೆಗೆ ಒಗ್ಗಟ್ಟು ಅಗತ್ಯ

ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ; ಗಾಣಿಗರ ಸಂಘದ ಪ್ರತಿಭಾ ಪುರಸ್ಕಾರ, ಅಭಿನಂದನಾ ಸಮಾರಂಭ

ಮೈಸೂರು, ಆ.28(ಪಿಎಂ)– ಗಾಣಿಗರ ಸಮುದಾಯ ಸೇರಿದಂತೆ ಹಿಂದುಳಿದ ವರ್ಗಗಳು ರಾಜಕೀಯವಾಗಿ ಶಕ್ತಿಯುತ ಬೆಳವಣಿಗೆ ಕಾಣಬೇಕಿದ್ದು, ಅದಕ್ಕಾಗಿ ಹಿಂದುಳಿದ ವರ್ಗಗಳು ಒಗ್ಗಟ್ಟಾಗಬೇಕು ಎಂದು ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ಮೈಸೂರಿನ ಸರಸ್ವತಿಪುರಂನ ಗಾಣಿಗರ ವಿದ್ಯಾರ್ಥಿನಿಲಯದ ಆವರಣದಲ್ಲಿ ಮೈಸೂರು ಜಿಲ್ಲಾ ಗಾಣಿಗರ ಸಂಘದ ವತಿಯಿಂದ ಭಾನುವಾರ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಹಾಗೂ ಸಮುದಾಯದ ಗಣ್ಯರಿಗೆ ಅಭಿನಂದನೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗಾಣಿಗರ ಸಮಾಜ ಸೇರಿದಂತೆ ಹಿಂದುಳಿದ ಸಣ್ಣ ಸಮುದಾಯಗಳು ಮುಖ್ಯವಾಹಿನಿಗೆ ಬರಲು ಅವುಗಳಿಗೆ ರಾಜಕೀಯ ಪ್ರಾತಿನಿಧ್ಯ ಅಗತ್ಯವಿದೆ. ಇಂದಿಗೂ ಹಿಂದುಳಿದ ವರ್ಗದವರು ಸಾಮಾಜಿಕವಾಗಿ ಮಾತ್ರವಲ್ಲದೆ, ರಾಜಕೀಯವಾಗಿ ಬೆಳೆಯಲು ಸಾಧ್ಯವಾಗಿಲ್ಲ. ಇದಕ್ಕೆ ಪ್ರಮುಖ ಕಾರಣ ಒಗ್ಗಟ್ಟಿನ ಕೊರತೆ. ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳಲ್ಲಿ ಸುಮಾರು 300 ಜಾತಿಗಳಿವೆ. ಈ ಎಲ್ಲಾ ಜಾತಿಗಳು ರಾಜಕೀಯವಾಗಿ ಬೆಳೆಯಲು ಪರಸ್ಪರ ಒಗ್ಗಟ್ಟು ಮುಖ್ಯ ಎಂದು ತಿಳಿಸಿದರು.



ಮೈಸೂರಿನ ಸರಸ್ವತಿಪುರಂನ ಗಾಣಿಗರ ವಿದ್ಯಾರ್ಥಿನಿಲಯದಲ್ಲಿ ಮೈಸೂರು ಜಿಲ್ಲಾ ಗಾಣಿಗರ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಹಾಗೂ ಅಭಿನಂದನಾ ಸಮಾರಂಭವನ್ನು ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ಉದ್ಘಾಟಿಸಿದರು. ಶಾಸಕ ಜಿ.ಡಿ.ಹರೀಶ್‌ಗೌಡ, ಮೈಲ್ಯಾಕ್ ಮಾಜಿ ಅಧ್ಯಕ್ಷ ರಘು ಕೌಟಿಲ್ಯ, ಮಾಜಿ ಮೇಯರ್ ಅನಂತು ಇನ್ನಿತರರಿದ್ದಾರೆ.

ಕಡಿಮೆ ಜನಸಂಖ್ಯೆಯ ಸಣ್ಣ ಸಮುದಾಯಗಳಿಗೆ ಮೀಸಲಾತಿ ಸೌಲಭ್ಯ ಸಮರ್ಪಕವಾಗಿ ದೊರೆಯದೆ ಅವರ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಯಲ್ಲಿ ಬೆಳವಣಿಗೆ ಕಾಣದಾಗಿದೆ. ಹಾಗೆಂದು ಒಟ್ಟು ಮೀಸಲಾತಿ ಪ್ರಮಾಣ ಹೆಚ್ಚಿಸಲು ಸದ್ಯ ಅವಕಾಶವಿಲ್ಲ. ಜೊತೆಗೆ ಅದಕ್ಕೆ ಸಂವಿಧಾನದ ಮಿತಿಯೂ ಇದೆ. ಇದನ್ನೆಲ್ಲವನ್ನೂ ಅವಲೋಕಿಸಿ ಜನಸಂಖ್ಯೆ ಆಧಾರಿತ ಮೀಸಲಾತಿ ಹೆಚ್ಚಳದ ಬಗ್ಗೆ ಗಮನಹರಿಸಬೇಕಿದೆ ಎಂದು ಹೇಳಿದರು.

ಶೇ.4ರಷ್ಟು ಜನಸಂಖ್ಯೆ ಹೊಂದಿರುವ ಮೇಲ್ವರ್ಗಕ್ಕೆ ಶೇ.10ರಷ್ಟು ಮೀಸಲಾತಿ (ಇಡಬ್ಲ್ಯೂಎಸ್) ಸುಲಭದಲ್ಲಿ ದೊರೆಯಿತು. ಆದರೆ ಶೇ.54ರಷ್ಟು ಜನಸಂಖ್ಯೆ ಇರುವ ಹಿಂದುಳಿದ ವರ್ಗಗಳಿಗೆ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಲಭ್ಯವಾಗುತ್ತಿಲ್ಲ. ಹೋರಾಟವೇ ಇಲ್ಲದೇ ಮೇಲ್ವರ್ಗದವರಿಗೆ ಆರ್ಥಿಕ ಮೀಸಲಾತಿ ಸಿಕ್ಕಿತು. ಆದರೆ ದಶಕಗಳ ಕಾಲ ಹೋರಾಟ ನಡೆಸಿ ಹಿಂದುಳಿದ ವರ್ಗಗಳು ಮೀಸಲಾತಿ ಪಡೆಯುವಂತಾಯಿತು. ಇದರಿಂದಲೇ ಮೀಸಲಾತಿ ಅನುಷ್ಠಾನದೊಳಗಿನ ಪ್ರಭಾವ ಅರಿಯಬಹುದು ಎಂದು ಮಾರ್ಮಿಕವಾಗಿ ನುಡಿದರು.

ಇದೇ ಸಂದರ್ಭದಲ್ಲಿ ಸಮುದಾಯದ 10 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶಾಸಕ ಜಿ.ಡಿ.ಹರೀಶ್‌ಗೌಡ ಪ್ರತಿಭಾ ಪುರಸ್ಕಾರ ನೀಡಿದರು. ಜೊತೆಗೆ ಹಲವು ಗಣ್ಯರನ್ನು ಸನ್ಮಾನಿಸಲಾಯಿತಲ್ಲದೆ, ಗಾಣಿಗರ ವಿದ್ಯಾರ್ಥಿನಿಲಯದ ಅಭಿವೃದ್ಧಿಗೆ ಶ್ರಮಿಸಿದ ಎನ್.ಸಿ.ಉಮೇಶ್, ಯದುಕುಮಾರ್, ದ್ವಾರಕಾನಾಥ್ ಅವರನ್ನೂ ಸನ್ಮಾನಿಸಲಾಯಿತು. ಮೈಲ್ಯಾಕ್ ಮಾಜಿ ಅಧ್ಯಕ್ಷ ಆರ್.ರಘು ಕೌಟಿಲ್ಯ, ಮಾಜಿ ಮೇಯರ್ ಅನಂತು, ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಹೆಚ್.ಕೆ.ರಾಮು, ಕೋಲಾರದ ಮುಖಂಡರಾದ ಅಶೋಕ್ ಕುಮಾರ್, ರಾಮಸ್ವಾಮಿ, ಅಧಿಕಾರಿ ಕುಮಾರ್, ವಾಕ್ ಮತ್ತು ಶ್ರವಣ ಸಂಸ್ಥೆ ತಜ್ಞೆ ಗೀತಾ, ವಕೀಲ ಎಂ.ಎಲ್.ವರದರಾಜು, ಮುಖಂಡರಾದ ಚೇತನ್, ಎಂ.ಕೆ.ಚನ್ನಕೇಶವ, ಅರವಿಂದ, ಪಾರ್ಥಸಾರಥಿ, ಶರವಣ, ಕೃಷ್ಣಸ್ವಾಮಿ, ಸ್ವಾಮಿನಾಯಕ್, ಎನ್.ಮಹದೇವಯ್ಯ, ಮಂಜುಳಾ ಮಂಜುನಾಥ್, ಪುಷ್ಪಾ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಗೋವಿಂದರಾಜು, ಅಖಿಲ ಕರ್ನಾಟಕ ಗಾಣಿಗರ ಸಂಘದ ರಾಜ್ಯಾಧ್ಯಕ್ಷ ಎಂ.ಆರ್.ರಾಜಶೇಖರ್, ಜಿಲ್ಲಾ ಪದಾಧಿಕಾರಿಗಳಾದ ಎನ್.ಸಿ.ಉಮೇಶ್, ವಿ.ಕೃಷ್ಣಶೆಟ್ಟಿ, ಎನ್.ಟಿ.ಶ್ರೀನಿವಾಸ, ಕೆ.ಹೇಮಂತ್‌ಕುಮಾರ್, ಎಂ.ಮಹದೇವ, ಚಾಮರಾಜನಗರ ಜಿಲ್ಲಾ ಘಟಕದ ಪದಾಧಿಕಾರಿಗಳಾದ ಶಿವಣ್ಣ, ಸ್ವಾಮಿ ಸೇರಿದಂತೆ ಮಂಡ್ಯ, ಹಾಸನ ಜಿಲ್ಲಾ ಘಟಕಗಳ ಪದಾಧಿಕಾರಿಗಳು ಹಾಜರಿದ್ದರು.

ದೈವಾರಾಧನೆಯಲ್ಲಿ ಲೋಪವಾಗದಂತೆ ಎಚ್ಚರ ಅಗತ್ಯ

ದೈವ ನರ್ತಕ ಜಯರಾಮ್



ಮಡಿಕೇರಿ,ಆ.28– ದೈವಾರಾಧನೆಯಲ್ಲಿ ಲೋಪವಾಗದಂತೆ ಎಲ್ಲರೂ ಎಚ್ಚರ ವಹಿಸಬೇಕು ಮತ್ತು ದೈವಗಳ ಭಾವಚಿತ್ರಗಳನ್ನು ಬಳಸಿ ಸಾಮಾಜಿಕ ಜಾಲತಾಣಗಳಲ್ಲಿ ತಪ್ಪು ಅಭಿಪ್ರಾಯಗಳನ್ನು ಹರಿಯ ಬಿಡಬಾರದು ಎಂದು ಪ್ರಸಿದ್ಧ ದೈವ ನರ್ತಕ ಸುಳ್ಯದ ಬೊಳಿವಾಜಲಿನ ಜಯರಾಮ್ ತಿಳಿಸಿದ್ದಾರೆ.

ಮಡಿಕೇರಿಯ ಬಾಲಭವನ ಸಭಾಂಗಣದಲ್ಲಿ ಕೊಡಗು ಜಿಲ್ಲಾ ದೈವ ಆರಾಧಕರು ಹಾಗೂ ದೈವ ನರ್ತಕರ ಸಂಘದ ಸಭೆಯಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು. ಮೊಬೈಲ್‌ನಲ್ಲಿ ದೈವದ ಫೋಟೋ ತೆಗೆದು ಕಮೆಂಟ್ ಮಾಡುವುದರಿಂದ ದೈವಕ್ಕೆ ಅಪಚಾರ ಮಾಡಿದಂತಾಗುತ್ತದೆ. ಇದರಿಂದ ತಲೆಮಾರಿನವರೆಗೂ ದೋಷ ಕಾಡಬಹುದು ಎಂದು ಎಚ್ಚರಿಕೆ ನೀಡಿದರು.

ದೈವಾರಾಧನೆಯು ಆಯಾ ಪ್ರದೇಶಕ್ಕೆ ತಕ್ಕಂತೆ ವಿಭಿನ್ನ ರೀತಿಯಲ್ಲಿ ನಡೆಯುತ್ತದೆ. ತುಳುನಾಡಿನಲ್ಲಿ ದೈವ ನರ್ತನ ಎರಡೂವರೆ ಗಂಟೆ ನಡೆದರೆ, ಕೊಡಗಿನಲ್ಲಿ ಪ್ರಶ್ನೆ ಚಿಂತನೆಯ ಕ್ರಮ ಸೇರಿ ರಾತ್ರಿ ಪೂರ್ತಿ ನಡೆಯುತ್ತದೆ. ಸಂಪ್ರದಾಯಕ್ಕೆ ಲೋಪವಾಗದಂತೆ ಪ್ರತಿಯೊಬ್ಬರೂ ಎಚ್ಚರ ವಹಿಸಬೇಕು. ದೈವದ ಆರಾಧನೆ ನಿರ್ಧರಿಸುವ ಬಡ ವರ್ಗದವರಿಗೆ ಆರ್ಥಿಕ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳಬೇಕು. ಸಂಘಟನೆ ಮೂಲಕ ದರ ನಿಗದಿ ಮಾಡುವ ಕಾರ್ಯ ಆಗಬೇಕು. ಹಿರಿಯರು ಹೇಳಿಕೊಟ್ಟ ನಿಯಮಗಳನ್ನೇ ಆದಷ್ಟು ಅನುಸರಿಸಬೇಕು ಎಂದು ಸಲಹೆ ನೀಡಿದರು.

ಸಂಘದ ಹಿರಿಯ ಸಲಹೆಗಾರ ಕೆ.ಕೆ. ದೇವಪ್ಪ ಮಾತನಾಡಿ, ತುಳುನಾಡು, ಕೊಡಗು ಸೇರಿದಂತೆ ಅನೇಕ ಭಾಗದಲ್ಲಿ ದೈವರಾಧನೆ ನಡೆಯುತ್ತಿದ್ದು, ಧಾರ್ಮಿಕ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಪ್ರತಿವರ್ಷ ನಡೆಯುವ ದೈವಾರಾಧನೆ ಯಾವುದೇ ಕಾರಣಕ್ಕೂ ನಿಲ್ಲಬಾರದು. ನೇಮೋತ್ಸವ ನಡೆಯದೇ ಇರುವ ಕಡೆ ಮತ್ತೆ ಮುಂದುವರಿಸುವ ಕುರಿತು ಅರಿವು ಮೂಡಿಸಬೇಕು ಮತ್ತು ಸಂಘದಿಂದ ಸಹಕಾರ ನೀಡಬೇಕು ಎಂದು ತಿಳಿಸಿದರು.

ದೈವ ಆರಾಧಕರ ಹಾಗೂ ದೈವ ನರ್ತಕರ ಸಂಘದ ಸ್ಥಾಪಕ ಅಧ್ಯಕ್ಷ ಪಿ.ಎಂ.ರವಿ ಮಾತನಾಡಿ, ಜಿಲ್ಲೆಯಲ್ಲಿ 60ಕ್ಕೂ ಹೆಚ್ಚು ದೇವಸ್ಥಾನಗಳಿದ್ದು, ಕೊಡಗು ಜಿಲ್ಲೆಗೂ ತುಳುನಾಡಿಗೂ ಅವಿನಾಭಾವ ಸಂಬಂಧವಿದೆ. ದೈವದ ಬಗ್ಗೆ ಅಪಪ್ರಚಾರ, ಅಪಹಾಸ್ಯ ಮಾಡುವುದನ್ನು ಸಂಘಟನೆ ಸಹಿಸುವುದಿಲ್ಲ. ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ಶಾಲಾ–ಕಾಲೇಜು ಸೇರಿದಂತೆ ಸಾರ್ವಜನಿಕ ಸಮಾರಂಭಗಳಲ್ಲಿ ದೈವದ ವೇಷಭೂಷಣ ತೊಟ್ಟು ಕಾರ್ಯಕ್ರಮ ನೀಡಿದರೆ ಕಾನೂನು ಕ್ರಮಕ್ಕೆ ಮುಂದಾಗುವುದಾಗಿ ಹೇಳಿದರು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಘದ ಅಧ್ಯಕ್ಷ ಸದಾಶಿವ ರೈ, ಸಂಘವು ನೋಂದಾವಣೆಗೊಂಡಿದ್ದು, ಜಿಲ್ಲೆಯ ಎಲ್ಲಾ ದೈವ ಆರಾಧಕರು ಹಾಗೂ ದೈವ ನರ್ತಕರು ಸದಸ್ಯತ್ವ ಪಡೆದುಕೊಳ್ಳಬೇಕು. ಸಂಘದ ಬೆಳವಣಿಗೆಗೆ ಎಲ್ಲರೂ ಕೈಜೋಡಿಸಬೇಕೆಂದು ಮನವಿ ಮಾಡಿದರು.

ಸಂಘಟನಾ ಕಾರ್ಯದರ್ಶಿ ರಮೇಶ್, ಜಿಲ್ಲಾ ಖಜಾಂಚಿ ಜನಾರ್ಧನ್, ಪದಾಧಿಕಾರಿಗಳು ಹಾಗೂ ಜಿಲ್ಲೆಯ ವಿವಿಧ ಭಾಗದ ಸದಸ್ಯರು ಉಪಸ್ಥಿತರಿದ್ದರು.

ಆಪರೇಷನ್ ಹಸ್ತ ಇಲ್ಲ, ಅವರಾಗಿಯೇ ಬರುವ ನಾಯಕರಿಗೆ ಸ್ವಾಗತ

ಮಡಿಕೇರಿ ಜಿಲ್ಲಾ ಉಸ್ತುವಾರಿ ಸಚಿವ ಬೋಸರಾಜು



ಮಡಿಕೇರಿ,ಆ.28– ಲೋಕಸಭಾ ಚುನಾವಣೆಗೆ ತಯಾರಿ ನಡೆಸಲಾಗುತ್ತಿದ್ದು, ರಾಷ್ಟ್ರೀಯ ನಾಯಕರು ಈಗಾಗಲೇ ಕರೆದು ಸಭೆ ಮಾಡಿದ್ದಾರೆ. ಜಿಲ್ಲಾ ಮಟ್ಟದಲ್ಲಿ ಉಸ್ತುವಾರಿ ಸಚಿವರಿಗೆ ಜವಾಬ್ದಾರಿ ನೀಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿಕೆಶಿ ಕೊಟ್ಟ ಮಾತಿನಂತೆ ನಡೆಯುತ್ತಿದ್ದಾರೆ ಎಂದು ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಬೋಸರಾಜು ಹೇಳಿದ್ದಾರೆ.

ನಗರದ ಸುದರ್ಶನ ವೃತ್ತದ ಬಳಿ ಇರುವ ನಿರೀಕ್ಷಣಾ ಮಂದಿರದಲ್ಲಿ ಪಕ್ಷದ ಪ್ರಮುಖರ ಸಭೆ ನಡೆಸಿದ ಅವರು, ಚುನಾವಣೆ ಸಿದ್ಧತೆಗಳ ಬಗ್ಗೆ ಚರ್ಚಿಸಿ ಸೂಕ್ತ ಸಲಹೆ–ಸೂಚನೆಗಳನ್ನು ನೀಡಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, 'ಆಪರೇಷನ್ ಹಸ್ತ' ಪದ ಬಳಕೆ ನಾವು ಮಾಡಲ್ಲ, ಆಪರೇಷನ್ ಎಂಬ ಕೆಟ್ಟ ಶಬ್ದ ತಂದಿದ್ದು ಬಿಜೆಪಿ. ಹಲವು ರಾಜ್ಯಗಳಲ್ಲಿ ಬಿಜೆಪಿ ಆಪರೇಷನ್ ಕಮಲ ಮಾಡಿದೆ. ಪಕ್ಷ ಸೇರ್ಪಡೆಗೆ ಹಲವು ಹೊಸ ಹೊಸ ಮುಖಗಳ ಹೆಸರುಗಳು ಬರುತ್ತಿವೆ. ಕಲ್ಯಾಣ ಕರ್ನಾಟಕದಲ್ಲೂ ಹಲವರು ನನ್ನ ಸಂಪರ್ಕದಲ್ಲಿದ್ದಾರೆ. ಇಂತಿಷ್ಟೇ ಜನ ಬರುತ್ತಾರೆಂದು ಹೇಳಲಾಗದು ಎಂದ ಅವರು, ರಾಜ್ಯದ ಇತಿಹಾಸದಲ್ಲಿ ಮೊದಲ ಬಾರಿಗೆ ವಿರೋಧ ಪಕ್ಷದ ನಾಯಕನಿಲ್ಲದೆ ಅಧಿವೇಶನ ನಡೆದಿದೆ. ಇಂದಿಗೂ ಬಿಜೆಪಿ ಪರಿಸ್ಥಿತಿ ಬದಲಾಗಿಲ್ಲ ಎಂದು ವ್ಯಂಗ್ಯವಾಡಿದರು.

ಅನೇಕ ಜಿಲ್ಲೆಗಳಿಂದ ಶಾಸಕರು, ಮಾಜಿ ಶಾಸಕರು, ಪಕ್ಷದ ಪ್ರಮುಖರು ಕಾಂಗ್ರೆಸ್ ಸೇರ್ಪಡೆಯಾಗಲಿದ್ದಾರೆ. ಅನೇಕ ನಾಯಕರು ಈಗಾಗಲೇ ಕಾಂಗ್ರೆಸ್ ಪಕ್ಷದ ಸಂಪರ್ಕದಲ್ಲಿದ್ದಾರೆ. ನಮ್ಮಲ್ಲಿ ಯಾವುದೇ ಆಪರೇಷನ್ ಹಸ್ತ ಇಲ್ಲ. ಪಕ್ಷದ ತತ್ವ ಸಿದ್ಧಾಂತವನ್ನು ಒಪ್ಪಿ ಅವರಾಗಿಯೇ ಬರುತ್ತಾರೆ. ಅಂತವರನ್ನು ಪಕ್ಷ ಬರಮಾಡಿಕೊಳ್ಳಲಿದೆ ಎಂದು ಹೇಳಿದರು. ಈ ಸಂದರ್ಭ ಮಡಿಕೇರಿ ಶಾಸಕ ಡಾ.ಮಂತರ್‌ಗೌಡ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಧರ್ಮಜ ಉತ್ತಪ್ಪ, ಪ್ರಮುಖರಾದ ವಿ.ಪಿ.ಶಶಿಧರ್ ಹಾಜರಿದ್ದರು.

ಕೈಕೊಟ್ಟ ಮಳೆ: ಒಣಗುತ್ತಿರುವ ಮುಸುಕಿನ ಜೋಳ



ಗುಡ್ಡೆಹೊಸೂರು, ಆ.28– ಗುಡ್ಡೆಹೊಸೂರು ಸುತ್ತಮುತ್ತಲಿನ ಹಲವಾರು ಗ್ರಾಮಗಳಲ್ಲಿ ರೈತರು ಬೆಳೆದ ಮುಸುಕಿನ ಜೋಳ ಒಣಗುವ ಹಂತ ತಲುಪಿದೆ. ಹಲವು ರೈತರ ಬೆಳೆ ಒಣಗಿ ತರಗೆಲೆಯಾಗಿದೆ ಜೋಳದ ಮೋತೆ ಬಂದು ಹಾಲು ಕಟ್ಟುವ ಸಮಯದಲ್ಲಿ ಜೋಳಕ್ಕೆ ಮಳೆ ಅತ್ಯವಶ್ಯಕ. ಆದರೆ ಒಂದು ತಿಂಗಳಿನಿಂದ ಸರಿಯಾಗಿ ಮಳೆ ಬಾರದ ಹಿನ್ನೆಲೆಯಲ್ಲಿ ಜೋಳದ ಬೆಳೆ ಸಂಪೂರ್ಣ ನೆಲಕಚ್ಚುವ ಹಂತದಲ್ಲಿದೆ, ಅಲ್ಲದೆ ಈ ಭಾಗದಲ್ಲಿ ಕಾಫಿ, ಕರಿಮೆಣಸು ಉದುರುತ್ತಿದೆ. ಕೆಲವು ಭಾಗಗಳಲ್ಲಿ ಶುಂಠಿ ಬೆಳೆಯು ರೋಗಕ್ಕೆ ತುತ್ತಾಗುತ್ತಿದೆ ಇನ್ನು ಮಳೆ ಬಂದರು ರೈತರ ಕೈಗೆ ಜೋಳದ ಬೆಳೆ ಸಿಗಲ್ಲ.

ಮುಖ್ಯವಾಗಿ ಬಸವನಹಳ್ಳಿ, ಗುಡ್ಡೆ ಹೊಸೂರು, ಬಾಳುಗೋಡು, ಅತ್ತೂರು, ಗೊಂದಿಬಸವನಹಳ್ಳಿ, ಬೆಟ್ಟಗೇರಿ, ಹೊಸಕಾಡು ಸುಂದರ ನಗರ ಮುಂತಾದ ಪ್ರದೇಶಗಳಲ್ಲಿ ಬೆಳೆದಿರುವ ಮುಸುಕಿನ ಜೋಳ ಸಂಪೂರ್ಣ ನಾಶವಾಗುತ್ತಿವೆ, ಕೆಲವೇ ಕೆಲವು ರೈತರು ಕೊಳವೆ ಬಾವಿಯ ನೀರನ್ನು ಬಳಸಿ ತಮ್ಮ ಬೆಳೆಗಳನ್ನು ಕಾಪಾಡುವ ದೃಶ್ಯ ಕಂಡು ಬರುತ್ತಿದೆ. ಕುಶಾಲನಗರ ತಾಲೂಕು ಸೇರಿದಂತೆ ಕೊಡಗು ಜಿಲ್ಲೆ ಸಂಪೂರ್ಣ ಬರಗಾಲ ಪ್ರದೇಶವಾದಂತಿದೆ, ಚಿಕ್ಲಿಹೊಳೆ ಜಲಾಶಯದ ನೀರು ಕಾಲುವೆ ಮೂಲಕ ಕೊನೆಯ ಹಂತ ತಲುಪುತ್ತಿದೆ. ಮುಂದೆ ಮಳೆ ಬಾರದಿದ್ದಲ್ಲಿ ಅಣೆಕಟ್ಟೆಯ ನೀರು ಸದ್ಯದಲ್ಲಿ ಸಂಪೂರ್ಣ ಬರಿದಾಗಲಿದೆ. ಬತ್ತದ ಗದ್ದೆಗಳು ಒಣಗಲಿದೆ ಕಾವೇರಿ ನದಿಯ ನೀರು ದಿನದಿ ನಕ್ಕೂ ಭಾರಿ ಪ್ರಮಾಣದಲ್ಲಿ ಕಡಿಮೆಯಾಗುತ್ತಿದೆ.

ಮಡಿಕೇರಿ ಜಿಲ್ಲೆಯಲ್ಲಿ ಕುಡಿಯುವ ನೀರು ಪೂರೈಕೆಗೆ ವ್ಯತ್ಯಯವಾಗದಂತೆ ಗಮನಹರಿಸಲು ಸೂಚನೆ


ಮಡಿಕೇರಿ, ಆ.28– ಜಿಲ್ಲೆಯಲ್ಲಿ ಯಾವ ಗ್ರಾಮಗಳಲ್ಲಿಯೂ ಸಹ ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಗಮನಹರಿಸುವಂತೆ ತಾ.ಪಂ ಇಒಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಭೋಸರಾಜು ಸೂಚಿಸಿದ್ದಾರೆ.

ಕುಡಿಯುವ ನೀರನ್ನು ಸಮರ್ಪಕವಾಗಿ ಪೂರೈಸಬೇಕು. ಯಾವುದೇ ಕಾರಣಕ್ಕೂ ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಬಾರದು ಎಂದರು.

ತಾ.ಪಂ. ಇಒಗಳಾದ ಶೇಖರ್, ಜಯಣ್ಣ, ಅಪ್ಪಣ್ಣ ಅವರು ಕುಡಿಯುವ ನೀರು ಸಂಬಂಧಿಸಿದಂತೆ ಮಾಹಿತಿ ನೀಡಿದರು. ಗ್ರಾಮೀಣ ಜನರಿಗೆ ಆರೋಗ್ಯ ಸೇವೆಗಳು ಸಮರ್ಪಕವಾಗಿ ತಲುಪಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹೇಳಿದರು.

ಇತ್ತೀಚೆಗೆ ಕಂದಾಯ ಸಚಿವರು ಕೊಡಗು ಜಿಲ್ಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ 94ಸಿ ಮತ್ತು 94ಸಿಸಿ ಅರ್ಜಿಗಳನ್ನು ತ್ವರಿತ ವಿಲೇವಾರಿ ಮಾಡಲು ಸೂಚಿಸಿದ್ದರು. ಅದರಂತೆ ವಿಲೇವಾರಿ ಮಾಡಲಾಗಿದೆಯೇ ಎಂದು ಸಚಿವರು ಕೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಉಪ ವಿಭಾಗಾಧಿಕಾರಿ ಡಾ.ಯತೀಶ್ ಉಳ್ಳಾಲ್ ಅವರು, 94ಸಿ ಮತ್ತು 94 ಸಿಸಿ ಅರ್ಜಿಗಳ ವಿಲೇವಾರಿ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಮಾಹಿತಿ ನೀಡಿದರು.



ಭೂ ದಾಖಲೆಗಳ ಉಪ ನಿರ್ದೇಶಕರಾದ ಪಿ.ಶ್ರೀನಿವಾಸ್ ಅವರು ಪೊನ್ನಂಪೇಟೆಯಲ್ಲಿ ಶೇ.60ರಷ್ಟು ಅರ್ಜಿಗಳ ವಿಲೇವಾರಿಯಾಗಿದೆ. ಮಡಿಕೇರಿಯಲ್ಲಿ 50 ಅರ್ಜಿಗಳು ಬಾಕಿ ಇದ್ದು, ಪ್ರಗತಿಯಲ್ಲಿದೆ ಎಂದು ತಿಳಿಸಿದರು.

ಶಾಸಕ ಡಾ.ಮಂತರ್ ಗೌಡ ಅವರು, ಮರಗೋಡು ಗ್ರಾಮದಲ್ಲಿ 66 ಕೆ.ವಿ. ವಿದ್ಯುತ್ ಘಟಕ ನಿರ್ಮಾಣ ಸಂಬಂಧ ಜಾಗವನ್ನು ತ್ವರಿತವಾಗಿ ಒದಗಿಸುವಂತೆ ತಹಸೀಲ್ದಾರರಿಗೆ ಸೂಚಿಸಿದರು.

ಈ ಬಗ್ಗೆ ಮಾಹಿತಿ ನೀಡಿದ ತಹಶೀಲ್ದಾರ್ ಪ್ರವೀಣ್ ಕುಮಾರ್ ಅವರು ಜಾಗ ಸಂಬಂಧಿಸಿದಂತೆ ಸ್ಥಳೀಯರ ಜೊತೆ ಚರ್ಚಿಸಲಾಗಿದೆ ಎಂದು ಮಾಹಿತಿ ನೀಡಿದರು.

ಅಸ್ಸಾಂ ಕಾರ್ಮಿಕನ ಮಗ ನಾಪತ್ತೆ

ಸಿದ್ದಾಪುರ, ಆ.28– ಹೊರರಾಜ್ಯದ ಕಾರ್ಮಿಕನ ಮಗ ನಾಪತ್ತೆಯಾಗಿರುವ ಬಗ್ಗೆ ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಸಿದ್ದಾಪುರ ಸಮೀಪದ ಅಮ್ಮತ್ತಿಯ ಕಾಫಿತೋಟವೊಂದರಲ್ಲಿ ಕೆಲಸ ಮಾಡುತ್ತಿರುವ ಅಸ್ಸಾಂನ ಕಾರ್ಮಿಕ ಜಮೀರ್ ಅಲಿ ಎಂಬವರ ಮಗ ರಂಜಾನ್ ಅಲಿ(14) ಆ.13 ರಂದು ಬೆಳಗ್ಗೆ ಅಮ್ಮತ್ತಿಯಿಂದ ಬಸ್ಸಿನಲ್ಲಿ ಸಿದ್ದಾಪುರ ಸಂತೆಗೆ ಬಂದಿದ್ದು, ನಂತರ ಅಮ್ಮತ್ತಿಗೆ ಮರಳದೆ ನಾಪತ್ತೆಯಾಗಿದ್ದಾನೆ.

ಈತನ ಬಗ್ಗೆ ಮಾಹಿತಿ ಸಿಕ್ಕಿದ್ದಲ್ಲಿ ಸಿದ್ದಾಪುರ ಪೊಲೀಸರನ್ನು ಸಂಪರ್ಕಿಸುವಂತೆ ಪೊಲೀಸ್ ಪ್ರಕಟಣೆ ಕೋರಿದೆ.

ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪರಿಂದ ಡಾ. ಸುಬ್ರಮಣಿಯನ್ ಸ್ವಾಮಿ ಭೇಟಿ

ಕೊಡವ ಲ್ಯಾಂಡ್ ಭೂ ರಾಜಕೀಯ ಸ್ವಾಯತ್ತತೆ ಬಗ್ಗೆ ಚರ್ಚೆ

ಮಡಿಕೇರಿ, ಆ.28– ಕೊಡವ ಲ್ಯಾಂಡ್ ಭೂ ರಾಜಕೀಯ ಸ್ವಾಯತ್ತತೆಯ ಪರವಾಗಿ ನಡೆಯುತ್ತಿರುವ ಕಾನೂನು ಹೋರಾಟದ ಕುರಿತು ಖ್ಯಾತ ಅರ್ಥಶಾಸ್ತ್ರಜ್ಞರೂ ಆದ ರಾಜ್ಯಸಭಾ ಸದಸ್ಯ ಡಾ.ಸುಬ್ರಮಣಿಯನ್ ಸ್ವಾಮಿ ಅವರು ಕೊಡವ ನ್ಯಾಷನಲ್ ಕೌನ್ಸಿಲ್‌ನ ಅಧ್ಯಕ್ಷ ಎನ್.ಯು.ನಾಚಪ್ಪ ಅವರೊಂದಿಗೆ ಸಮಾಲೋಚನೆ ನಡೆಸಿದರು.



ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಇತ್ತೀಚೆಗೆ ತಮ್ಮನ್ನು ಭೇಟಿಯಾದ ನಾಚಪ್ಪ ಅವರು, ಸಿಎನ್‌ಸಿ ಬೇಡಿಕೆಗೆ ಪೂರಕವಾಗಿ ಆಯೋಗವನ್ನು ರಚಿಸಬೇಕೆಂದು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ಹೈಕೋರ್ಟ್‌ನಲ್ಲಿ ನಡೆಯುತ್ತಿರುವ ಬಗ್ಗೆ ಚರ್ಚಿಸಿದರು. ಕೊಡವ ಲ್ಯಾಂಡ್ ಭೂ ರಾಜಕೀಯ ಸ್ವಾಯತ್ತತೆಯ ಬೇಡಿಕೆ ನ್ಯಾಯಾಂಗದ ಮೂಲಕ ಈಡೇರಲಿದೆ ಎಂದು ಸಿಎನ್‌ಸಿ ಪರವಾಗಿ ಕಾನೂನು ಹೋರಾಟ ನಡೆಸುತ್ತಿರುವ ಡಾ.ಸುಬ್ರಮಣಿಯನ್ ಸ್ವಾಮಿ ಅವರು ವಿಶ್ವಾಸ ವ್ಯಕ್ತಪಡಿಸಿದರು ಎಂದು ನಾಚಪ್ಪ ಹೇಳಿದ್ದಾರೆ. ಇತ್ತೀಚೆಗೆ ಹೈಕೋರ್ಟ್ ಅರ್ಜಿಯ ವಿಚಾರಣೆಯನ್ನು ಸೆ.5ಕ್ಕೆ ಮುಂದೂಡಿತ್ತು.

ಬೈಕ್‌ಗೆ ಆಟೋ ಡಿಕ್ಕಿ; ಸವಾರ ಸಾವು

ಹಿಂಬದಿ ಸವಾರನಿಗೆ ಗಂಭೀರ ಗಾಯ



ಚಾಮರಾಜನಗರ ಬಳಿ ರಸ್ತೆ ಅಪಘಾತದಲ್ಲಿ ಗಾಯಗೊಂಡವರನ್ನು ಆಸ್ಪತ್ರೆಗೆ ಸಾಗಿಸಲು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ನೆರವಾದರು.

ಚಾಮರಾಜನಗರ, ಆ.28– ನಗರದ ಹೊರವಲಯದ ದೊಡ್ಡರಾಯಪೇಟೆ ಬಳಿ ಬೈಕ್‌ಗೆ ಆಟೋ ಡಿಕ್ಕಿ ಹೊಡೆದು ಯುವಕ ಸಾವನ್ನಪ್ಪಿದ್ದಾನೆ.

ಟಿ.ನರಸೀಪುರದ ಗರ್ಗೇಶ್ವರಿ ನಿವಾಸಿ ಸುಹೇಲ್(19) ಅಪಘಾತದಲ್ಲಿ ಮೃತಪಟ್ಟವನಾಗಿದ್ದು, ಹಿಂಬದಿಯ ಸವಾರ ಅದೇ ಗ್ರಾಮದ ಅಬ್ದುಲ್ ವಾಯಿದ್(22) ಗಂಭೀರವಾಗಿ ಗಾಯಗೊಂಡು ಮೈಸೂರಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಸುಹೇಲ್ ಹಾಗೂ ಅಬ್ದುಲ್ ವಾಯಿದ್ ಅವರು ಸಂತೇಮರಹಳ್ಳಿ ಕಡೆಯಿಂದ ಚಾಮರಾಜನಗರದತ್ತ ಬರುತ್ತಿದ್ದಾಗ ದೊಡ್ಡರಾಯಪೇಟೆ ಕ್ರಾಸ್ ಬಳಿ ಎದುರಿನಿಂದ ಬಂದ ಆಟೋ ಇವರ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಇಬ್ಬರು ಸವಾರರು ಗಂಭೀರವಾಗಿ ಗಾಯಗೊಂಡಿದ್ದಾರೆ. ಈ ವೇಳೆ ಮಂಡ್ಯದತ್ತ ತೆರಳುತ್ತಿದ್ದ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲು ನೆರವಾದರು. ಸ್ಥಳಕ್ಕೆ ಸಂಚಾರ ಠಾಣೆಯ ಪಿಎಸ್‌ಐ ರವಿಕುಮಾರ್ ಭೇಟಿ ನೀಡಿ ಪರಿಶೀಲಿಸಿದರು. ದೊಡ್ಡರಾಯಪೇಟೆ ಕ್ರಾಸ್ ಬಳಿ ಆಗಾಗ್ಗೆ ಅಪಘಾತಗಳು ನಡೆಯುತ್ತಿದ್ದು, ಇಲ್ಲಿ ರಸ್ತೆ ಹಂಪ್ಸ್ ಹಾಕಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಸಂಸದ ಶ್ರೀನಿವಾಸಪ್ರಸಾದ್ ಹುಟ್ಟುಹಬ್ಬ: ಆರೋಗ್ಯ ತಪಾಸಣಾ ಶಿಬಿರ

183 ಮಂದಿ ತಪಾಸಣೆ, 57 ಮಂದಿ ಶಸ್ತ್ರಚಿಕಿತ್ಸೆಗೆ ಆಯ್ಕೆ, 48 ಮಂದಿಗೆ ಕನ್ನಡಕ ವಿತರಣೆ

ಚಾಮರಾಜನಗರ, ಆ.28– ಸಂಸದ ವಿ.ಶ್ರೀನಿವಾಸಪ್ರಸಾದ್ ಅವರು ರಾಜ್ಯ, ದೇಶ ಕಂಡಂತಹ ಒಬ್ಬ ಉತ್ತಮ ರಾಜಕೀಯ ಪಟುವಾಗಿದ್ದು, ನೇರನುಡಿ, ಸ್ವಾಭಿಮಾನಿ ರಾಜಕಾರಣಿಯಾಗಿದ್ದಾರೆ ಎಂದು ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಹೇಳಿದರು.



ಚಾಮರಾಜನಗರದ ರಾಮಸಮುದ್ರ ಸಿ.ಆರ್.ಬಾಲರಪಟ್ಟಣ ಶಾಲಾವರಣದಲ್ಲಿ ಸಂಸದ ವಿ.ಶ್ರೀನಿವಾಸ ಪ್ರಸಾದ್ ಅವರ 77ನೇ ಹುಟ್ಟುಹಬ್ಬದ ಅಂಗವಾಗಿ ಅವರ ಅಭಿಮಾನಿ ಬಳಗದ ವತಿಯಿಂದ ಉಚಿತ ಕಣ್ಣಿನ ಮತ್ತು ಆರೋಗ್ಯ ತಪಾಸಣಾ ಶಿಬಿರ ನಡೆಯಿತು.

ನಗರದ ರಾಮಸಮುದ್ರ ಸಿ.ಆರ್. ಬಾಲರಪಟ್ಟಣ ಶಾಲಾವರಣದಲ್ಲಿ ಸಂಸದ ವಿ.ಶ್ರೀನಿವಾಸ ಪ್ರಸಾದ್ ಅವರ 77ನೇ ಹುಟ್ಟುಹಬ್ಬದ ಅಂಗವಾಗಿ ಅವರ ಅಭಿಮಾನಿ ಬಳಗ, ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಅರವಿಂದ ಕಣ್ಣಿನ ಆಸ್ಪತ್ರೆ ಕೊಯಮತ್ತೂರು ಇವರ ಸಂಯುಕ್ತಾಶ್ರಯದಲ್ಲಿ ನಡೆದ ಉಚಿತ ಕಣ್ಣಿನ ಮತ್ತು ಆರೋಗ್ಯ ತಪಾಸಣಾ ಶಿಬಿರದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವಿ.ಶ್ರೀನಿವಾಸಪ್ರಸಾದ್ ಅವರ ಹುಟ್ಟುಹಬ್ಬದ ಅಂಗವಾಗಿ ಅವರ ಅಭಿಮಾನಿ ಬಳಗ ಉಚಿತ ಕಣ್ಣಿನ ಮತ್ತು ಆರೋಗ್ಯ ತಪಾಸಣಾ ಶಿಬಿರ ಆಯೋಜಿಸುವ ಮೂಲಕ ಬಡಜನರಸೇವೆ ಮಾಡುತ್ತಿರುವುದು ಬಹಳ ಅರ್ಥಪೂರ್ಣವಾಗಿದೆ ಎಂದರು.

ಪ್ರಸ್ತುತ ರಾಜಕಾರಣಿಗಳಲ್ಲಿ ಅನೇಕ ಜನರನ್ನು ನೋಡಿದ್ದೇನೆ. ಅದರಲ್ಲಿ ಶ್ರೀನಿವಾಸಪ್ರಸಾದ್ ಅವರು ನೇರ ನುಡಿಯಲ್ಲಿ ನಿಷ್ಠುರವಾದರೂ ಕೂಡ ಸತ್ಯವಾಗಿ ನೇರವಾಗಿ ಹೇಳುವಂತಹ ಎದೆಗಾರಿಕೆಯುಳ್ಳವರಾಗಿದ್ದಾರೆ. ಭ್ರಷ್ಟಾಚಾರ ರಹಿತವಾಗಿ, ಯಾವುದೇ ಕಪ್ಪುಚುಕ್ಕಿ ಇಲ್ಲದೆ ಸುದೀರ್ಘ ಕಾಲ ರಾಜಕೀಯದಲ್ಲಿ ಆಡಳಿತ ಮಾಡಿಕೊಂಡು ಬಂದಿದ್ದಾರೆ. ಅವರು ನಮಗೆಲ್ಲ ಮಾದರಿಯಾಗಿದ್ದಾರೆ. ಅವರಿಗೆ ಭಗವಂತ ಇನ್ನೂ ಹೆಚ್ಚಿನ ಆರೋಗ್ಯ, ಆಯಸ್ಸು, ಅಧಿಕಾರ ನೀಡಲಿ ಎಂದು ಆಶಿಸಿದರು.

ಜಿ.ಪಂ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ ಮಾತನಾಡಿ, ಸಂಸದ ಶ್ರೀನಿವಾಸ ಪ್ರಸಾದ್ ಅವರು ಸುದೀರ್ಘ ರಾಜಕಾರಣ ಮಾಡಿರುವ ಏಕೈಕ ವ್ಯಕ್ತಿಯಾಗಿದ್ದಾರೆ. ಎಲ್ಲ ವರ್ಗದ ಜನರ ಪ್ರೀತಿ ಪಡೆಯುವ ರಾಜಕಾರಣಿಯಾಗಿದ್ದಾರೆ. ಅವರ ಹುಟ್ಟುಹಬ್ಬದ ಅಂಗವಾಗಿ ಅವರ ಅಭಿಮಾನಿ ಬಳಗ ಬಡವರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಉಚಿತ ಕಣ್ಣಿನ ಹಾಗೂ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಿರುವುದು ತುಂಬಾ ಸಂತಸವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಉಚಿತ ಕಣ್ಣಿನ ಮತ್ತು ಆರೋಗ್ಯ ತಪಾಸಣಾ ಶಿಬಿರ ಯಶಸ್ವಿಯಾಗಿ ನಡೆದು 183 ಮಂದಿ ತಪಾಸಣೆ, 57 ಮಂದಿ ಶಸ್ತ್ರಚಿಕಿತ್ಸೆಗೆ ಆಯ್ಕೆ, 48 ಮಂದಿ ಕನ್ನಡಕ ವಿತರಣೆ ಮಾಡಲಾಯಿತು.

ಮಾಜಿ ಶಾಸಕ ಎನ್.ಮಹೇಶ್ ಕಾರ್ಯಕ್ರಮ ಉದ್ಘಾಟಿಸಿದರು. ಜಿ.ಪಂ. ಮಾಜಿ ಅಧ್ಯಕ್ಷ ನಾಗಶ್ರೀ ಪ್ರತಾಪ್, ಮುಖಂಡರಾದ ಕೂಡ್ಲೂರು ಹನುಮಂತಶೆಟ್ಟಿ, ಬ್ರದರ್ ಆಗ್ನೇಲ್ ಆಲ್ಮೇಡ್, ಮುಖಂಡರಾದ ಆರ್.ಪುಟ್ಟಮಲ್ಲಪ್ಪ, ಡಾ.ಪರಮೇಶ್ವರಪ್ಪ ಬಸವನಪುರ ರಾಜಶೇಖರ, ಆಯೋಜಕ ಶ್ರೀ ವಿ.ಶ್ರೀನಿವಾಸಪ್ರಸಾದ್ ಅಭಿಮಾನಿ ಬಳಗದ ಎಲ್.ಪ್ರಸನ್ನ, ನಗರಸಭಾ ಮಾಜಿ ಸದಸ್ಯ ಶಿವಣ್ಣ, ಎಂ. ಚಿಗುರು ಬಂಗಾರು ಇನ್ನಿತರರಿದ್ದರು.

ಚಾ.ನಗರದಲ್ಲಿ ನಾಳೆ ಪರಿಶಿಷ್ಟ ಜಾತಿ ಮೀಸಲಾತಿ ವಿಸ್ತರಣೆ ಸಂವಾದ

ಚಾಮರಾಜನಗರ, ಆ.28– ಪರಿಶಿಷ್ಟ ಜಾತಿ ಮೀಸಲಾತಿ ವಿಸ್ತರಣೆ ಕುರಿತು ಮುಕ್ತ ಸಂವಾದವನ್ನು ನಗರದಲ್ಲಿ ಆ.30ರಂದು ಆಯೋಜಿಸಲಾಗಿದೆ.

ಅಂದು ಬೆಳಗ್ಗೆ 10.30ಕ್ಕೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಸಂವಾದ ನಡೆಯಲಿದೆ ಎಂದು ಪ್ರಗತಿಪರ ಮತ್ತು ದಲಿತ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಸಿ.ಎಂ. ಕೃಷ್ಣಮೂರ್ತಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಸುಮಾರು 5 ಶತಮಾನಗಳಿಂದ ಭಾರತದಲ್ಲಿ ಕ್ರೈಸ್ತ ಹಾಗೂ ಮುಸ್ಲಿಂ ಧರ್ಮಗಳಿಗೆ ಮತಾಂತರವಾಗುವ ಪ್ರಕ್ರಿಯೆ ನಡೆಯುತ್ತಿದೆ. ಕೋಟ್ಯಾಂತರ ಜನರು ಮತಾಂತರ ಆಗಿದ್ದಾರೆ. ಅದರಲ್ಲೂ ಪರಿಶಿಷ್ಟ ಜಾತಿ ಹಾಗೂ ಪಂಗಡದ ಕೋಟಾದಡಿ ಮೀಸಲಾತಿ ನೀಡಬೇಕೆಂದು ಹಕ್ಕು ಮಂಡಿಸಿದ್ದಾರೆ. ಮತಾಂತರಗೊಂಡವರು ದಾಖಲೆಗಳಲ್ಲಿ ಹಿಂದೂ ಧರ್ಮದ ಪರಿಶಿಷ್ಟ ಜಾತಿ ಹಾಗೂ ಪಂಗಡದವರಾಗಿಯೇ ಉಳಿದಿದ್ದು ಸರ್ಕಾರದ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ ಎಂದರು. ಈ ಕಾರಣಕ್ಕಾಗಿ ಮತಾಂತರಗೊಂಡಿರುವ ಪರಿಶಿಷ್ಟ ಜಾತಿಯವರಿಗೆ ಎಸ್‌ಸಿ ಕೋಟಾದಡಿ ಮೀಸಲಾತಿ ನೀಡಬೇಕೇ? ಅಥವಾ ಬೇಡವೇ? ಎಂಬ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಕೇಂದ್ರ ಸರ್ಕಾರ ನ್ಯಾಯಮೂರ್ತಿಗಳಾದ ಕೆಜಿ.ಬಾಲಕೃಷ್ಣರವರ ನೇತೃತ್ವದಲ್ಲಿ ಮೂವರು ಸದಸ್ಯರ ಆಯೋಗ ರಚಿಸಿದೆ. ಈ ಆಯೋಗವು ಸೆಪ್ಟೆಂಬರ್‌ನಲ್ಲಿ ಬೆಂಗಳೂರಿಗೆ ಭೇಟಿ ನೀಡಿ ಸಭೆ ನಡೆಸಲಿದೆ ಎಂದರು.

ಈ ಬಗ್ಗೆ ಜಿಲ್ಲೆಯ ಪರಿಶಿಷ್ಟ ಜಾತಿಗಳ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಹೋರಾಟಗಾರರ ಜೊತೆ ಚರ್ಚಿಸಲು ಸಂವಾದ ಆಯೋಜಿಸಲಾಗಿದೆ. ಜಿಲ್ಲೆಯ ಪರಿಶಿಷ್ಟ ಜಾತಿಯ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರು ಆಗಮಿಸುವಂತೆ ಅವರು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ರಾಜಣ್ಣ, ರವಿಮೌರ್ಯ, ನಲ್ಲೂರು ಪರಶಿವ, ದಡದಹಳ್ಳಿ ಶಂಕರ್, ಶ್ರೀನಿವಾಸ್, ಕೃಷ್ಣಮೂರ್ತಿ ಹಾಜರಿದ್ದರು.

ಬೇಗೂರಲ್ಲಿ ಪ್ರತಿಭಾ ಕಾರಂಜಿಗೆ ಚಾಲನೆ



ಬೇಗೂರು(ಗುಂಡ್ಲುಪೇಟೆ), ಆ.28– ಗ್ರಾಮದ ಲಿಟಲ್ ಫ್ಲವರ್ ಶಾಲೆಯಲ್ಲಿ ಬೇಗೂರು ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮವನ್ನು ಜಿಲ್ಲಾ ಉಪ ನಿರ್ದೇಶಕ ರಾಮಚಂದ್ರ ರಾಜ್ ಅರಸ್ ಗಿಡಕ್ಕೆ ನೀರು ಹಾಕುವ ಮೂಲಕ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಈ ಕಾರ್ಯಕ್ರಮ ಗ್ರಾಮೀಣ ಪ್ರದೇಶ ಸೇರಿದಂತೆ ಎಲ್ಲರಿಗೂ ತಿಳಿದಿರುತ್ತದೆ. ರೈತರು ಸೇರಿದಂತೆ ಎಲ್ಲರೂ ಈ ಕಾರ್ಯಕ್ರಮಕ್ಕೆ ಸಹಕಾರ ನೀಡುತ್ತಾರೆ. ಮಕ್ಕಳ ಪ್ರತಿಭೆಗೆ ಸೂಕ್ತವಾದ ವೇದಿಕೆಯನ್ನು ಕಲ್ಪಿಸಿದಂತಾಗಿದೆ. ಮಕ್ಕಳು, ಶಿಕ್ಷಕರು, ಸಮುದಾಯ ಒಗ್ಗಟ್ಟಾಗಿ ಪ್ರೋತ್ಸಾಹ ನೀಡುತ್ತ ಬಂದಿದ್ದು ಇಲಾಖೆ ಆಶಯವನ್ನು ಈಡೇರಿಸಲು ಈ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಪ್ರಾಮಾಣಿಕತೆ, ಬದ್ಧತೆಯಿಂದ ಅನುಷ್ಠಾನಗೊಳಿಸ ಬೇಕಾಗಿದೆ ಎಂದ ಅವರು, ಮಕ್ಕಳ ಸ್ವಯಂ ಪ್ರತಿಭೆಯನ್ನು ಹೊರತರಲು ಈ ಕಾರ್ಯಕ್ರಮ ಸಹಕಾರಿಯಾಗಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ರಾಜಶೇಖರ್ ಮಾತನಾಡಿ, ಮಕ್ಕಳ ಪ್ರತಿಭೆಗಳನ್ನು ಹೊರತರಲು ಮತ್ತು ಗುರುತಿಸಲು ಪ್ರತಿಭಾ ಕಾರಂಜಿ ಕಾರ್ಯಕ್ರಮ ಸಹಕಾರಿಯಾಗಿದೆ. ಆದ್ದರಿಂದ ಸರಿಯಾದ ರೀತಿಯಲ್ಲಿ ಈ ವೇದಿಕೆಯನ್ನು ಎಲ್ಲರೂ ಸದುಪಯೋಗಪಡಿಸಿಕೊಳ್ಳಬೇಕು. ಸರ್ಕಾರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಹಲವು ಯೋಜನೆಗಳನ್ನು ರೂಪಿಸಿದೆ. ಇವುಗಳನ್ನ ಬಳಸಿಕೊಂಡು ಶಾಲೆಗೆ ಮತ್ತು ಪೋಷಕರಿಗೆ ಕೀರ್ತಿ ತನ್ನಿ ಎಂದರು.

ಕಾರ್ಯಕ್ರಮದಲ್ಲಿ ಗ್ರಾಮ ಅಧ್ಯಕ್ಷೆ ಜಯಮ್ಮ, ಉಪಾಧ್ಯಕ್ಷ ಮಹದೇವಸ್ವಾಮಿ, ಸದಸ್ಯರಾದ ಗುರುಸ್ವಾಮಿ ಸೋಮಶೇಖರ್, ಹೇಮಾವತಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಉಪಾಧ್ಯಕ್ಷೆ ಅನ್ನಪೂರ್ಣಮ್ಮ, ಕಿತ್ತೂರು ರಾಣಿ ವಸತಿ ಶಾಲೆಯ ಪ್ರಭಾರ ಮುಖ್ಯ ಶಿಕ್ಷಕ ಮಹೇಂದ್ರ, ಲಿಟಲ್ ಫ್ಲವರ್ ಶಾಲೆ ಮಾಥ್ಯುವ್, ಎಸ್‌ಡಿಎಂಸಿ ಅಧ್ಯಕ್ಷ ಪುಟ್ಟರಾಜು. ಮುಖ್ಯ ಶಿಕ್ಷಕಿ ಕಮಲಮ್ಮ, ಶಿಕ್ಷಕ ರವೀಂದ್ರ ಕುಮಾರ್, ರಾಘವಪುರ ಶಾಲೆಯ ಮುಖ್ಯ ಶಿಕ್ಷಕ ನಟರಾಜು, ಕಬ್ಬಹಳ್ಳಿ ಸಿ.ಆರ್.ಪಿ. ಮಹದೇವಸ್ವಾಮಿ. ಸೇರಿದಂತೆ ಬೇಗೂರು ಕ್ಲಸ್ಟರ್‌ನ ಎಲ್ಲಾ ಶಾಲೆಯ ಮುಖ್ಯ ಶಿಕ್ಷಕರು, ಸಹಶಿಕ್ಷಕರು ಮತ್ತಿತರರು ಹಾಜರಿದ್ದರು.

ಬೇಗೂರು ಹೋಬಳಿ ಮಟ್ಟದ ಕ್ಲಸ್ಟರ್ ಹಂತದ ಪ್ರತಿಭಾ ಕಾರಂಜಿಯಲ್ಲಿ ಬೇಗೂರಿನ ನ್ಯಾಷನಲ್ ಎಜುಕೇಷನಲ್ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ವಿವಿಧ ಸ್ಪರ್ಧೆಯಲ್ಲಿ ಭಾಗವಹಿಸಿ ಬಹುಮಾನ, ಪ್ರಶಸ್ತಿ ಪಡೆದು ಕ್ಲಸ್ಟರ್ ಚಾಂಪಿಯನ್ ಶಿಪ್ ಪಡೆದಿದ್ದಾರೆ. ಈ ವಿದ್ಯಾರ್ಥಿಗಳನ್ನು ಶಾಲೆಯ ದೈಹಿಕ ಶಿಕ್ಷಕಿ ಶಾಂತ, ಶಿಕ್ಷಕಿಯರಾದ ರಾಣಿ, ಶ್ವೇತಾ, ಆಶಾ, ಸವಿತಾ, ಮೇಘಶ್ರೀ, ಪವಿತ್ರ, ಮಂಜುಳ, ಹೇಮಾವತಿ ಮತ್ತು ಮುತ್ತುಲಕ್ಷ್ಮೀ, ಮಹೇಶ್ವರಿ, ಶಿಕ್ಷಕ ಸುರೇಶ್ ಅಭಿನಂದಿಸಿದರು.

ಕೋಟೆ ಎಂ.ಶಿವಣ್ಣಗೆ ಬಿಜೆಪಿ ಟಿಕೆಟ್ ನೀಡಲು ಆಗ್ರಹ

ಚಾಮರಾಜನಗರ, ಆ.28– ಮುಂಬರುವ ಲೋಕಸಭಾ ಕ್ಷೇತ್ರದಿಂದ ಮಾಜಿ ಸಚಿವ ಕೋಟೆ ಎಂ.ಶಿವಣ್ಣ ಅವರಿಗೆ ಬಿಜೆಪಿ ಟಿಕೆಟ್ ನೀಡುವಂತೆ ಅವರ ಅಭಿಮಾನಿ ಬಳಗ ಬಿಜೆಪಿ ವರಿಷ್ಠರನ್ನು ಆಗ್ರಹಿಸಿದೆ.



ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಕೋಟೆ ಎಂ.ಶಿವಣ್ಣ ಅಭಿಮಾನಿ ಬಳಗ ಹಾಗೂ ಜಿಲ್ಲಾ ಮಾದಿಗ ಮೀಸಲಾತಿ ಹೋರಾಟ ಸಮಿತಿ ಅಧ್ಯಕ್ಷ ಬಸವನಪುರ ರಾಜಶೇಖರ್ ಮಾತನಾಡಿ, ಮಾದಿಗ ಸಮುದಾಯ ರಾಜ್ಯದಲ್ಲಿ 50 ಲಕ್ಷಕ್ಕೂ ಹೆಚ್ಚಿನ ಜನಸಂಖ್ಯೆಯಲ್ಲಿದ್ದೇವೆ. ಆದರೂ ರಾಜಕೀಯ ಪ್ರಾಧಾನ್ಯತೆ ಸಿಕ್ಕುತ್ತಿಲ್ಲ. ಇದು ದುರದುಷ್ಟಕರ ಸಂಗತಿಯಾಗಿದೆ. ಹಳೆಯ ಮೈಸೂರು ಪ್ರಾಂತ್ಯದಲ್ಲಿ ಸಮುದಾಯದ ಶಾಸಕರು, ಸಂಸದರು ಇಲ್ಲ. ನಮ್ಮ ಸಮುದಾಯವನ್ನು ರಾಜಕೀಯವಾಗಿ ಹೇಳುವವರು, ಕೇಳುವವರು ಇಲ್ಲ. ಹಿಂದೆ ಈ ಭಾಗದಲ್ಲಿ ಟಿ.ಎನ್. ನರಸಿಂಹಮೂರ್ತಿ, ಎನ್.ರಾಚಯ್ಯನವರಂತಹ ಧೀಮಂತ ನಾಯಕರಿದ್ದರು. ನಂತರ ದಿನಗಳಲ್ಲಿ ಯಾರೂ ಇಲ್ಲ ಎಂದರು.

ಯಾವುದೇ ಸಮುದಾಯ ಆರ್ಥಿಕ, ಸಾಮಾಜಿಕವಾಗಿ ಮೇಲೆ ಬರಬೇಕಾದರೆ ರಾಜಕೀಯ ಶಕ್ತಿಯಿಂದ ಮಾತ್ರ ಸಾಧ್ಯವಾಗಿದೆ. ಆದ್ದರಿಂದ ಎಲ್ಲ ರಾಜಕೀಯ ಪಕ್ಷಗಳು ಸಮುದಾಯಕ್ಕೆ ಶಕ್ತಿ ತುಂಬುವ ಕೆಲಸ ಮಾಡಬೇಕು. ಯಾವುದೇ ಪಕ್ಷಗಳು ಸಮುದಾಯಕ್ಕೆ ಸೂಕ್ತ ಸ್ಥಾನಮಾನ ನೀಡುತ್ತಿಲ್ಲ. ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಗೆಲುವಿಗೆ ಪೂರಕ ವಾತಾವರಣವಿದೆ. ಹೀಗಾಗಿ ಸಮುದಾಯದ ಸರಳ, ಸಜ್ಜನಿಕೆ ರಾಜಕಾರಣಿಯಾದ ಮಾಜಿ ಸಚಿವರಾಗಿ, ಕಳೆದ ವಿಧಾನಸಭಾ ಚುನಾವಣೆಯಲ್ಲಿ ಚಾಮರಾಜನಗರ ವಿಧಾನಸಭಾ ಚುನಾವಣೆಯಲ್ಲಿ ಉಸ್ತುವಾರಿಯಾಗಿ, ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುವ ಕೋಟೆ ಎಂ.ಶಿವಣ್ಣ ಅವರು, ರಾಜ್ಯದ ಪೌರಕಾರ್ಮಿಕರ ಸ್ಥಿತಿಗತಿ ಅಧ್ಯಯನ ಮಾಡಿ ಸರ್ಕಾರಕ್ಕೆ ವರದಿ ಸಲ್ಲಿಸಿ ಕಳೆದ ಸರ್ಕಾರದಲ್ಲಿ 25 ಸಾವಿರ ಪೌರಕಾರ್ಮಿಕರನ್ನು ಖಾಯಂ ಮಾಡಿಸಿದ್ದಾರೆ. ಅವರಿಗೆ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ವರಿಷ್ಠರು ಟಿಕೆಟ್ ನೀಡಿ ಸ್ಪರ್ಧೆಗೆ ಅವಕಾಶ ಮಾಡಿಕೊಡಬೇಕು ಎಂದು ಬಸವನಪುರ ರಾಜಶೇಖರ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಎಸ್ಸಿ, ಎಸ್ಟಿ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯ ಕಲ್ಲಿಗೌಡನಹಳ್ಳಿ ಸಿದ್ದರಾಜು, ಕಾನೂನು ಸಲಹೆಗಾರ ಹಂಗಳ ಸಿದ್ದೇಶ್, ಸಂತೇಮರಹಳ್ಳಿ ಬಿಜೆಪಿ ಮಹಾ ಶಕ್ತಿಕೇಂದ್ರದ ಅಧ್ಯಕ್ಷ ರಾಜು, ಬಜೆಪಿ ಮುಖಂಡರಾದ ಮರಿಸ್ವಾಮಿ ಬದನಗುಪ್ಪೆ, ಸುರೇಶ್ ಉಗನೇದಹುಂಡಿ ಹಾಜರಿದ್ದರು.

ಒಂದನೇ ಪುಟದಿಂದ

ನಮ್ಮ ರೈತರ ಬೆಳೆಗೆ ನೀರು ಬಿಡಿ

ರೈತರ ಬೆಳೆಗೆ ಕಟ್ಟು ಪದ್ಧತಿಯಲ್ಲಿ ನೀರು ಬಿಡುವುದು ಅನಿವಾರ್ಯ ಎಂದು ಅಧಿಕಾರಿಗಳು ಸ್ಪಷ್ಟನೆ ನೀಡಿದ ಕಾರಣ ನಾವು ಒಪ್ಪಿದ್ದೆವು ಅಷ್ಟೆ ಎಂದು ಸಿದ್ದರಾಮಯ್ಯಗೆ ಸಮಜಾಯಿಷಿ ನೀಡಿದರು.

ಸಂಕಷ್ಟ ಸೂತ್ರ ಇದ್ದಾಗ ಮಾತ್ರ ಕಟ್ಟು ಪದ್ಧತಿಯಲ್ಲಿ ನೀರು ಬಿಡಬೇಕು ಎಂಬ ನಿಯಮ ಇದೆ. ಆದರೆ ನಮ್ಮ ಜಲಾಶಯ ತುಂಬಿದ್ದರೂ ಕಟ್ಟು ಪದ್ಧತಿಯಲ್ಲಿ ನೀರು ಬಿಡಬೇಕು ಅಂತ ಯಾವ ಐಸಿಸಿ ನಿಯಮ ಇದೆ ಎಂದು ಸಿದ್ದರಾಮಯ್ಯ ಚೀಫ್ ಇಂಜಿನಿಯರ್ ವೆಂಕಟೇಶ್ ಗೆ ಪ್ರಶ್ನೆ ಮೇಲೆ ಪ್ರಶ್ನೆ ಕೇಳಿ ಬೆವರಿಳಿಸಿದರು.

ಕೆಆರ್‌ಎಸ್, ಕಬಿನಿ, ಹಾರಂಗಿ ಹಾಗೂ ಹೇಮಾವತಿ ಜಲಾಶಯದಿಂದ ಒಟ್ಟು 114 ಟಿಎಂಸಿ ನೀರು ಶೇಖರಣೆಯ ಸಾಮರ್ಥ್ಯವಿದೆ. ಈ ಬಾರಿ ನಮ್ಮಲ್ಲಿ 110 ಟಿಎಂಸಿ ನೀರು ಶೇಖರಣೆಯಾಗಿತ್ತು. ಹೀಗಿರುವಾಗ ಪೂರ್ಣ ಪ್ರಮಾಣದಲ್ಲಿ ನೀರು ಬಿಡದೆ ಕಟ್ಟು ಪದ್ಧತಿಯಲ್ಲಿ ನೀರು ಬಿಡಲು ನಿಮಗೆ ಆದೇಶ ನೀಡಿದವರು ಯಾರು? ಎಂದು ಸಿದ್ದರಾಮಯ್ಯ ಮತ್ತೆ ಮತ್ತೆ ಪ್ರಶ್ನಿಸಿದರು. ಕರ್ನಾಟಕದ ರೈತರಿಗೆ ಪೂರ್ಣ ಪ್ರಮಾಣದಲ್ಲಿ ನೀರು ಬಿಡದೆ ಅನ್ಯಾಯ ಮಾಡುತ್ತಿರುವುದಕ್ಕೆ ಸಿದ್ದರಾಮಯ್ಯ ಅವರು ಒಂದಾದ ಮೇಲೆ ಒಂದರಂತೆ ಪ್ರಶ್ನೆ ಕೇಳುತ್ತಿದ್ದರೆ ವೆಂಕಟೇಶ್ ತಬ್ಬಿಬ್ಬಾದರು.

ಮೇಕೆದಾಟು ಯೋಜನೆ ಅನುಷ್ಠಾನ ಮಾಡಿದರೆ ನೀರಿನ ಕೊರತೆ ಇರುವ ವೇಳೆ ಕರ್ನಾಟಕಕ್ಕೆ ಬಹಳ ಅನುಕೂಲವಾಗುತ್ತದೆ. ಇದರಿಂದ 67 ಟಿಎಂಸಿ ನೀರು ನಮಗೆ ಸಿಗುತ್ತದೆ. ಆದರೆ ಅಲ್ಲಿವರೆಗೆ ರಾಜ್ಯದ ರೈತರಿಗೆ ಅನ್ಯಾಯವಾಗದಂತೆ ನೀವು ಕರ್ತವ್ಯ ನಿರ್ವಹಿಸಬೇಕು. ತಮಿಳುನಾಡು ಕೇಳಿದಂತೆ 86 ಟಿಎಂಸಿ ನೀರು ಬಿಟ್ಟರೆ ನಮ್ಮ ಜಲಾಶಯ ಪೂರ್ಣವಾಗಿ ಬರಿದಾಗುತ್ತದೆ. ಈಗ ಸಂಕಷ್ಟ ಸೂತ್ರದ ಬಗ್ಗೆ ಚರ್ಚೆ ಮಾಡಲು ಕಾವೇರಿ ನಿರ್ವಹಣಾ ಪ್ರಾಧಿಕಾರ ಎರಡು ಸಭೆ ನಡೆಸಿದೆ. ಮತ್ತೆ ಸಭೆ ನಡೆಸಲಿದ್ದು, ವಾಸ್ತವ ಸ್ಥಿತಿ ಮನವರಿಕೆ ಮಾಡಿಕೊಡುವಂತೆ ನಮ್ಮ ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದು ಸಿದ್ದರಾಮಯ್ಯ ಹೇಳಿದರು.

ಸಂಕಷ್ಟ ಸಮಯದಲ್ಲಿ ಮಾತ್ರ ಕಟ್ಟು ಪದ್ಧತಿಯಲ್ಲಿ ನೀರು ಬಿಡಬೇಕೆಂಬ ನಿಯಮವಿದೆ. ನಮ್ಮ ಜಲಾಶಯ ತುಂಬಿದ್ದ ವೇಳೆ ಕಟ್ಟು ಪದ್ಧತಿಯಲ್ಲಿ ನೀರು ಬಿಡದೆ ಪೂರ್ಣ ಪ್ರಮಾಣದಲ್ಲಿ ನೀರು ಬಿಡಬೇಕು. ಈ ಕೂಡಲೆ ಮೊದಲು ನಮ್ಮ ರೈತರಿಗೆ ಪೂರ್ಣ ಪ್ರಮಾಣದಲ್ಲಿ ನೀರು ಬಿಡಿ ಎಂದು ಸಿದ್ದರಾಮಯ್ಯ ನೀರಾವರಿ ಇಲಾಖೆಗೆ ಆದೇಶ ನೀಡಿದರು.

ತಮಿಳುನಾಡಿಗೆ ನೀರು ಹರಿಸುವುದನ್ನು ಈಗ ನಿಲ್ಲಿಸಿದ್ದೇವೆ. 113 ಅಡಿ ಇದ್ದ ಕೆಆರ್‌ಎಸ್ ಜಲಾಶಯದಲ್ಲಿ ಈಗ 101 ಅಡಿ ನೀರಿದೆ. ನೀವು ಹೇಳಿದಂತೆ ಕೂಡಲೇ ಕಾವೇರಿ ಜಲಾಯನ ಪ್ರದೇಶದ ರೈತರಿಗೆ ಪೂರ್ಣ ಪ್ರಮಾಣದಲ್ಲಿ ನೀರು ಬಿಡುತ್ತೇವೆ ಎಂದು ತಿಳಿಸಿದರು.

ಒಂದು ತಿಂಗಳಲ್ಲಿ ಬೆಳೆಗಳಿಗೆ 18 ದಿನ ನಾಲೆಗಳಿಂದ ನೀರು ಬಿಟ್ಟು, ಉಳಿದ 12 ದಿನ ನಾಲೆಗಳಿಂದ ನೀರು ಬಿಡುವುದನ್ನು ಸ್ಥಗಿತಗೊಳಿಸುವುದಕ್ಕೆ ಕಟ್ಟು ಪದ್ಧತಿ ಎನ್ನಲಾಗುತ್ತದೆ. ಈಗ ಕಾವೇರಿ ಜಲಾಯನ ಪ್ರದೇಶದಲ್ಲಿ ಕಟ್ಟು ಪದ್ಧತಿಯಲ್ಲಿ ನೀರು ಬಿಡಲಾಗುತ್ತದೆ. ಆದರೆ ಈಗಾಗಲೇ ಬೆಳೆದಿರುವ ಬೆಳೆಗಳಿಗೆ ಈ ನೀರು ಸಾಕಾಗುವುದಿಲ್ಲ. ಈಗ ಸಿದ್ದರಾಮಯ್ಯ ಅವರು ಆದೇಶ ನೀಡಿರುವುದರಿಂದ ಕಾವೇರಿ ಜಲಾಯನ ಪ್ರದೇಶದ ಬೆಳೆಗಳಿಗೆ ಪೂರ್ಣ ಪ್ರಮಾಣದಲ್ಲಿ ನೀರು ದೊರೆಯಲಿದೆ.

ಒಂದು ಗಂಟೆ ತಡವಾಗಿ ಸಭೆ ಆರಂಭವಾಯಿತು. ಅಧಿಕಾರಿಗಳು ಹಾಗೂ ಶಾಸಕರನ್ನು ಹೊರತುಪಡಿಸಿ ಉಳಿದವರಿಗೆ ಸಭೆಗೆ ನಿರ್ಬಂಧವಿತ್ತು. ಸಭೆ ನಡೆಯುತ್ತಿದ್ದ ಜಿಲ್ಲಾ ಪಂಚಾಯಿತಿ ಬಳಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು.

ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ, ಶಾಸಕರಾದ ತನ್ವೀರ್ ಸೇಠ್, ಹೆಚ್.ವಿಶ್ವನಾಥ್, ಅನಿಲ್ ಚಿಕ್ಕಮಾಧು, ಕೆ. ಹರೀಶ್‌ಗೌಡ, ದರ್ಶನ್ ಧ್ರುವನಾರಾಯಣ್, ಶ್ರೀವತ್ಸ, ಸಿ.ಎನ್.ಮಂಜೇಗೌಡ, ಜಿ.ಡಿ.ಹರೀಶ್‌ಗೌಡ, ರವಿಶಂಕರ್, ಡಾ.ತಿಮ್ಮಯ್ಯ, ಸಂಸದ ಪ್ರತಾಪ್ ಸಿಂಹ, ವರುಣ ಕ್ಷೇತ್ರದ ಆಶ್ರಯ ಸಮಿತಿ ಅಧ್ಯಕ್ಷ ಡಾ.ಯತೀಂದ್ರ ಸಿದ್ದರಾಮಯ್ಯ, ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ನಗರ ಪೊಲೀಸ್ ಆಯುಕ್ತ ರಮೇಶ್ ಸೇರಿದಂತೆ ವಿವಿಧ ಇಲಾಖಾ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ನಾವೇ ಬುದ್ಧಿವಂತರು ಎಂಬ ಭ್ರಮೆ ಬಿಡಿ

ಭೂಮಿಯಲ್ಲಿ ಬಿತ್ತನೆ ಮಾಡುವ ಗುರಿ ಇಟ್ಟುಕೊಳ್ಳಲಾಗಿತ್ತು. ಇದರಲ್ಲಿ ರೈತರು 2.33 ಲಕ್ಷ ಎಕರೆಯಲ್ಲಿ ಬೆಳೆ ಬೆಳೆದಿದ್ದಾರೆ. ಕಳೆದ ವರ್ಷ ಶೇ.75 ರಷ್ಟು ಬಿತ್ತನೆಯಾಗಿತ್ತು. ಆದರೆ ಈ ವರ್ಷ ಶೇ.58ರಷ್ಟು ಬಿತ್ತನೆಯಾಗಿದೆ. ಶೇಕಡ 18 ರಷ್ಟು ಮಳೆ ಕೊರತೆಯಾಗಿದೆ ಎಂದು ತಿಳಿಸಿದರು.

ರೈತರಲ್ಲಿ ಅರಿವು ಮೂಡಿಸಿ ಪರ್ಯಾಯ ಬೆಳೆ ಬೆಳೆಯಲು ಅಧಿಕಾರಿಗಳು ಹಳ್ಳಿಗಳಿಗೆ ಭೇಟಿ ನೀಡಿದ್ದಾರೆಯೇ ಎಂದು ಪ್ರಶ್ನಿಸಿದಾಗ, ಚಂದ್ರಶೇಖರ್ ಅವರು ಸ್ಲೈಡ್ ಶೋನಲ್ಲಿ ಫೋಟೋ ಮೂಲಕ ಮಾಹಿತಿ ನೀಡಿದರು. ನಮ್ಮನ್ನು ಸಮಾಧಾನ ಮಾಡಲು ಸುಳ್ಳು ಮಾಹಿತಿ ನೀಡಬೇಡಿ. ಫೋಟೋದಲ್ಲಿ ನೀವೇ ಇಲ್ಲ. ರೈತರು ಇರುವ ಫೋಟೋ ಮಾತ್ರ ತೋರಿಸುತ್ತಿದ್ದೀರಾ. ಬರೀ ಫೋಟೋ ತೋರಿಸಲು ಮೀಟಿಂಗ್‌ಗೆ ಬಂದಿದ್ದೀರಾ ಎಂದು ಸಿದ್ದರಾಮಯ್ಯ ಖಡಕ್ ಆಗಿ ಪ್ರಶ್ನಿಸಿದರು.

ರೈತರು ಹಲವು ವರ್ಷಗಳಿಂದ ಬೆಳೆ ಬೆಳೆಯುತ್ತಿದ್ದಾರೆ. ಕೃಷಿ ನಮ್ಮ ಬದುಕು ಅಂತ ತಿಳಿದಿರುವ ರೈತರು ನಿಮಗಿಂತ ತುಂಬಾ ಬುದ್ಧಿವಂತರಿದ್ದಾರೆ. ನಾವೇ ಬುದ್ಧಿವಂತರು ಎಂಬ ಭ್ರಮೆ ಬಿಟ್ಟು ಮೊದಲು ರೈತರಿಗೆ ಗೌರವ ಕೊಡುವುದನ್ನು ಕಲಿಯಿರಿ. ಕೃಷಿ ಬಗ್ಗೆ ಅನುಭವವಿರುವ ರೈತರಿಂದ ಸಲಹೆ ಪಡೆಯಿರಿ. ರೈತರಿಂದ ದೂರು ಬರದಂತೆ ಕರ್ತವ್ಯ ನಿರ್ವಹಿಸಿ, ಹಳ್ಳಿಗಳಿಗೆ ಭೇಟಿ ನೀಡಿ ಹಾಗೂ ವಾಸ್ತವತೆಯನ್ನು ಅರಿಯಿರಿ ಎಂದು ಸಿದ್ದರಾಮಯ್ಯ ಈ ವೇಳೆ ಅಧಿಕಾರಿಗಳಿಗೆ ಆದೇಶ ನೀಡಿದರು.

ಸೆಪ್ಟೆಂಬರ್ ಅಂತ್ಯಕ್ಕೆ ಮುಂಗಾರು ಕೊನೆಯಾಗಲಿದ್ದು, ನಂತರ ಹಿಂಗಾರು ಮಳೆ ಆರಂಭವಾಗುತ್ತದೆ. ಆಗ ಬಿತ್ತನೆ ಬೀಜ, ರಸಗೊಬ್ಬರ, ಔಷಧಿ ಸೇರಿದಂತೆ ಎಲ್ಲಾ ಸಿದ್ಧತೆ ಮಾಡಿಕೊಳ್ಳಬೇಕು. ಯಾವುದೇ ಕಾರಣಕ್ಕೂ ರೈತರಿಗೆ ತೊಂದರೆ ಆಗಬಾರದು ಎಂದು ಸೂಚನೆ ನೀಡಿದರು.

ಮೈಸೂರು ಜಿಲ್ಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ 14 ಕುಟುಂಬದಲ್ಲಿ 6 ಕುಟುಂಬಕ್ಕೆ ಪರಿಹಾರ ನೀಡಿದ್ದೀರಾ. ಉಳಿದ ಕುಟುಂಬಗಳಿಗೆ ಏಕೆ ಪರಿಹಾರ ನೀಡಿಲ್ಲ ಎಂದು ತರಾಟೆಗೆ ತೆಗೆದುಕೊಂಡರು.

ದಸರಾ ಕೆಲಸ ಕಾರ್ಯದ ಒತ್ತಡವಿದೆ ಎಂದು ಅಧಿಕಾರಿಗಳು ನಿಮ್ಮ ಇಲಾಖೆಯ ಕೆಲಸಗಳಿಂದ ವಿಮುಖರಾಗಬೇಡಿ. ನಿಮ್ಮ ಇಲಾಖೆಯ ಜವಾಬ್ದಾರಿ ಜೊತೆಗೆ ಹೆಚ್ಚುವರಿಯಾಗಿ ದಸರಾ ಕೆಲಸಗಳನ್ನು ಜೊತೆ ಜೊತೆಯಾಗಿ ಮಾಡಬೇಕು ಎಂದು ಸಿದ್ದರಾಮಯ್ಯ ಅಧಿಕಾರಿಗಳಿಗೆ ಕಟ್ಟಾಜ್ಞೆ ಮಾಡಿದರು. ಜಾನುವಾರುಗಳು, ಕುರಿ ಮೇಕೆಗಳ ಸಾವಿಗೆ ತಕ್ಷಣ ಪರಿಹಾರ ನೀಡಬೇಕು. 400 ಪಶು ವೈದ್ಯರು ಹಾಗೂ 250 ಸಹಾಯಕರನ್ನು ಶೀಘ್ರವೇ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ. ಇದರಿಂದ ಪಶು ಸಂಗೋಪನಾ ಇಲಾಖೆಯಲ್ಲಿ ವೈದ್ಯರು ಹಾಗೂ ಸಿಬ್ಬಂದಿಗಳ ಕೊರತೆ ದೂರವಾಗಲಿದೆ ಎಂದು ಸಿದ್ದರಾಮಯ್ಯ ಭರವಸೆ ನೀಡಿದರು. ಕೆಲವು ತೋಟಗಳಲ್ಲಿ ತೆಂಗಿನ ಮರದ ಗರಿಗಳು ಒಣಗುತ್ತಿವೆ. ತೆಂಗಿನ ಮರ ಒಣಗದಂತೆ ಔಷಧಿ ನೀಡಲು ವೈಜ್ಞಾನಿಕವಾದ ತಂತ್ರ ಅನುಸರಿಸಬೇಕು. ಈ ಸಂಬಂಧ ತಜ್ಞರಿಂದ ಮಾಹಿತಿ ಪಡೆಯಬೇಕು ಎಂದು ಸಿದ್ದರಾಮಯ್ಯ ಸಲಹೆ ನೀಡಿದರು.

ಸಂಪುಟ ಸಭೆಯಲ್ಲಿ ಬರದ ನಿರ್ಧಾರ

ತರುವಾಯ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಬರದ ಬಗ್ಗೆ ಕುರಿತಂತೆ ತೀರ್ಮಾನ ಮಾಡಲಾಗುವುದು ಎಂದು ಸಿದ್ದರಾಮಯ್ಯ ತಿಳಿಸಿದರು. ರಾಜ್ಯ ಸರ್ಕಾರ ಬರ ಘೋಷಣೆ ಮಾಡಿದ ನಂತರ ಎನ್‌ಡಿಆರ್‌ಎಫ್ ಮಾರ್ಗಸೂಚಿ ಪ್ರಕಾರ ಕೇಂದ್ರ ಸರ್ಕಾರ ನೆರವು ನೀಡಲಿದೆ. ತರುವಾಯ ಆ ಹಣದಲ್ಲಿ ಬರಗಾಲ ಘೋಷಣೆ ಆಗಿರುವ ತಾಲೂಕುಗಳಲ್ಲಿ ಪರಿಹಾರ ಕಾರ್ಯ ಕೈಗೊಳ್ಳಲಾಗುವುದು ಎಂದು ಹೇಳಿದರು.

ಕಾಂಗ್ರೆಸ್‌ಗೆ ಯಾರೇ ಬಂದರೂ ಸ್ವಾಗತ: ನಮ್ಮ ಪಕ್ಷದಿಂದ ಹೊರ ಹೋದವರು ಸೇರಿದಂತೆ ಯಾರೇ ಆದರೂ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡರೆ ನಮ್ಮ ಸ್ವಾಗತವಿದೆ. ನಮ್ಮ ಪಕ್ಷದ ತತ್ವ ಸಿದ್ಧಾಂತ ಒಪ್ಪಿ ಯಾರೆ ಪಕ್ಷಕ್ಕೆ ಬಂದರೂ ಸೇರಿಸಿಕೊಳ್ಳುತ್ತೇವೆ ಎಂದು ಸಿದ್ದರಾಮಯ್ಯ ಆಹ್ವಾನ ನೀಡಿದರು.

ರಾಜ್ಯದಲ್ಲಿ ಬಿಜೆಪಿ ಎಲ್ಲಿದೆ ರೀ, ದಿವಾಳಿಯಾಗಿದೆ. ನೂತನ ಸರ್ಕಾರ ಅಸ್ತಿತ್ವಕ್ಕೆ ಬಂದು ನೂರು ದಿನವಾದರೂ ಈ ತನಕ ವಿರೋಧ ಪಕ್ಷದ ನಾಯಕನನ್ನು ಆಯ್ಕೆ ಮಾಡಲು ಬಿಜೆಪಿಗೆ ಸಾಧ್ಯವಾಗಿಲ್ಲ ಎಂದು ಸಿದ್ದರಾಮಯ್ಯ ಕೇಸರಿ ನಾಯಕರನ್ನು ತಿವಿದರು. ಮೊನ್ನೆ ಬೆಂಗಳೂರಿಗೆ ಆಗಮಿಸಿದ್ದ ಪ್ರಧಾನಮಂತ್ರಿ ನರೇಂದ್ರ ಮೋದಿ ಸ್ವಾಗತಿಸಲು ಬಿಜೆಪಿ ನಾಯಕರು ರಸ್ತೆ ಬದಿಯಲ್ಲಿ ನಿಂತಿದ್ದ ಬಗ್ಗೆ ಪ್ರತಿಕ್ರಿಯೆ ನೀಡಿದ ಸಿದ್ದರಾಮಯ್ಯ, ನನ್ನ ಭೇಟಿ ಮಾಡಲು ಬರಬೇಡಿ ಅಂತ ಮೋದಿನೇ ಹೇಳಿದರಂತೆ ಎಂದು ವ್ಯಂಗ್ಯವಾಡಿದರು.

ಈಗಾಗಲೇ 3 ಗ್ಯಾರಂಟಿಯನ್ನು ಅನುಷ್ಠಾನ ಮಾಡಿದ ನಂತರ 4 ನೇ ಗ್ಯಾರಂಟಿ ಗೃಹಲಕ್ಷ್ಮಿ ಯೋಜನೆಯನ್ನು ಆಗಸ್ಟ್ 30 ರಂದು ಮೈಸೂರಿನಲ್ಲಿ ಉದ್ಘಾಟನೆ ಮಾಡಲಾಗುವುದು. ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು ಸೇರಿದಂತೆ ಹಲವು ಜಿಲ್ಲೆಗಳಿಂದ ಲಕ್ಷಕ್ಕೂ ಅಧಿಕ ಜನರು ಅಂದಿನ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಎಂದರು.

ಗೃಹಲಕ್ಷ್ಮಿ ಯೋಜನೆ ಉದ್ಘಾಟನೆ ಇಡೀ ದೇಶದಲ್ಲಿ ದೊಡ್ಡದಾದ ಕಾರ್ಯಕ್ರಮವಾಗಿದ್ದು, ಇದಕ್ಕಾಗಿ ಸರ್ಕಾರ 32 ಸಾವಿರ ಕೋಟಿ ವೆಚ್ಚ ಮಾಡುತ್ತಿದೆ. ಇದರಿಂದ ರಾಜ್ಯದ 1.33 ಲಕ್ಷ ಕೋಟಿ ಕುಟುಂಬದ ಯಜಮಾನಿಗೆ 2 ಸಾವಿರ ರೂಪಾಯಿ ದೊರೆಯಲಿದೆ. ಗ್ಯಾರಂಟಿ ಸ್ಕೀಂಗಳಿಂದ ಪ್ರತಿ ಕುಟುಂಬಕ್ಕೆ ಕನಿಷ್ಠ 4 ರಿಂದ 5 ಸಾವಿರ ರೂಪಾಯಿ ನೆರವು ದೊರೆಯಲಿದೆ. ಇದರಿಂದ ರಾಜ್ಯದ ಆರ್ಥಿಕ ಬೆಳವಣಿಗೆ ವೃದ್ಧಿಗೊಂಡು ದೇಶದ ಜಿಡಿಪಿ ಬೆಳವಣಿಗೆ ಕೂಡ ಏರು ಗತಿಯಲ್ಲಿ ಸಾಗುತ್ತದೆ ಎಂದು ಸಿದ್ದರಾಮಯ್ಯ ಅಭಿಪ್ರಾಯಪಟ್ಟರು.

ಬೆಂಗಳೂರಿನಿಂದ ರಸ್ತೆ ಮೂಲಕ ಮೈಸೂರಿಗೆ ಆಗಮಿಸಿದ ಸಿದ್ದರಾಮಯ್ಯ ಅವರಿಗೆ ಸರ್ಕಾರಿ ಅತಿಥಿ ಗೃಹದಲ್ಲಿ ಪೊಲೀಸರು ಗೌರವ ವಂದನೆ ಸಲ್ಲಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ, ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ, ನಗರ ಪೊಲೀಸ್ ಆಯುಕ್ತ ರಮೇಶ್ ಸೇರಿದಂತೆ ಹಲವು ಅಧಿಕಾರಿಗಳು ಸಿದ್ದರಾಮಯ್ಯ ಅವರನ್ನು ಸ್ವಾಗತಿಸಿದರು.

ವನವಾಸಿ ಕಲ್ಯಾಣ ಕರ್ನಾಟಕದ 'ವನಶ್ರೀ' ಪ್ರಾಂತ ಕಾರ್ಯಾಲಯ ಉದ್ಘಾಟನೆ

ಕಡಿಮೆ ಜನಸಂಖ್ಯೆ ಇದ್ದರೂ ವನವಾಸಿ ಸಮುದಾಯದ್ದು ಶ್ರೇಷ್ಠ ಸಂಸ್ಕೃತಿ: ಆರ್‌ಎಸ್‌ಎಸ್ ಪ್ರಮುಖ ಮುಕುಂದ





ಮೈಸೂರು,ಆ.28(ಎಂಟಿವೈ)– ರಾಜ್ಯದ ಜನಸಂಖ್ಯೆಯಲ್ಲಿ ಶೇ.7ರಷ್ಟು ಇದ್ದರೂ, ಶ್ರೇಷ್ಠ ಸಂಸ್ಕೃತಿಯನ್ನು ಹೊಂದಿರುವ ವನವಾಸಿ ಸಮುದಾಯಗಳ ಪರಂಪರೆ, ಸಂಸ್ಕೃತಿಯನ್ನು ಉಳಿಸುವ ನಿಟ್ಟಿನಲ್ಲಿ ಅಧ್ಯಯನ ಮಾಡುವ ಅವಶ್ಯಕತೆ ಇದೆ ಎಂದು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಸಹ ಸರಕಾರ್ಯವಾಹಕ ಮುಕುಂದ ಅಭಿಪ್ರಾಯಪಟ್ಟಿದ್ದಾರೆ.

> ದೇಶದಲ್ಲಿ ವನವಾಸಿಗಳ ಬಗ್ಗೆ ಅನೇಕರು ಅಧ್ಯಯನ ಮಾಡುತ್ತಿದ್ದಾರೆ. ಅವರಲ್ಲಿ ಕೆಲವರು ಲಾಭಕ್ಕಾಗಿ ಅಧ್ಯಯನ ಮಾಡುತ್ತಿದ್ದಾರೆ. ಆದರೆ, ರಾಷ್ಟ್ರೀಯ ಸ್ವಯಂ ಸೇವಕ ಸಂಘ ಸೇರಿದಂತೆ ಸಾಮಾಜಿಕ ಕಳಕಳಿವುಳ್ಳ ಸಂಘಟನೆಗಳು ವನವಾಸಿ ಪರಂಪರೆ, ಸಂಸ್ಕೃತಿ ಉಳಿಸುವ ಉದ್ದೇಶದಿಂದ ನಾವು ಪ್ರಯತ್ನ ಮಾಡುತ್ತಿದ್ದೇವೆ. ಈ ನಡುವೆ ಕೆಲವು ವಿಘಟಕ ಶಕ್ತಿಗಳು ವನವಾಸಿಗಳು ಪ್ರತ್ಯೇಕಿಸುವ ಸಂಚು ನಡೆಸುತ್ತಲೇ ಬಂದಿದ್ದಾರೆ. ಜನಗಣತಿಯಲ್ಲಿ ಓಆರ್ ಅಥವಾ ಇತರರು ಎಂದು ಬರೆಸಲಾಗುತ್ತಿದೆ. ಇದನ್ನು ತೊಡೆದು ಹಾಕಿ ನಾವೆಲ್ಲಾ ಒಂದು ಎಂಬ ಭಾವ ಮೂಡಿಸಬೇಕು ಎಂದು ಸಲಹೆ ನೀಡಿದರು.
> - ಮುಕುಂದ, ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಸಹ ಸರಕಾರ್ಯವಾಹಕ

ಮೈಸೂರಿನ ಚಾಮುಂಡಿಪುರಂನ ಬಸವೇಶ್ವರ ರಸ್ತೆಯಲ್ಲಿ ನಿರ್ಮಿಸಿರುವ ವನವಾಸಿ ಕಲ್ಯಾಣ ಕರ್ನಾಟಕದ 'ವನಶ್ರೀ' ಪ್ರಾಂತ ಕಾರ್ಯಾಲಯದ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ದೇಶದಲ್ಲಿರುವ ವನವಾಸಿಗಳ ಮೇಲೆ 200–300 ವರ್ಷಗಳಿಂದಲೂ ಪರಕೀಯರು ದಾಳಿ ನಡೆಸುತ್ತಲೇ ಬಂದಿದ್ದಾರೆ. ಇದರಿಂದ ಅವರಲ್ಲಿನ ಸಂಸ್ಕೃತಿ ನಾಶವಾಗುವ ಆತಂಕ ಎದುರಾಗಿದೆ. ಆದರೂ ವನವಾಸಿಗಳು ಎಷ್ಟೇ ಸವಾಲುಗಳು ಎದುರಾದರೂ ತಮ್ಮ ಸಂಸ್ಕೃತಿಯನ್ನು ಕಾಪಾಡಿಕೊಂಡು ಬಂದಿರುವುದು ಶ್ಲಾಘನೀಯ. ದೇಶ ಹಾಗೂ ರಾಜ್ಯದ ಜನಸಂಖ್ಯೆಯಲ್ಲಿ ವನವಾಸಿಗಳು ಕಡಿಮೆ ಸಂಖ್ಯೆಯಲ್ಲಿದ್ದರೂ, ಕೆಲವು ವಿಚಾರದಲ್ಲಿ ಅಗಾಧವಾದ ಜ್ಞಾನ ಹೊಂದಿದ್ದಾರೆ ಎಂದರು.

ವನವಾಸಿಗಳಿಗೆ ಸಂಬಂಧಪಟ್ಟಂತೆ ಪರಿಣಾಮಕಾರಿಯಾಗಿ ಅಧ್ಯಯನ ನಡೆಸುವ ಅಗತ್ಯವಿದೆ. ದೇಶದಲ್ಲಿ 20–25 ವನವಾಸಿ ಸಮುದಾಯದ ಅಧ್ಯಯನ ಕೇಂದ್ರಗಳಿವೆ. ಕೆಲ ತಿಂಗಳ ಹಿಂದೆ ಹೊಸದಿಲ್ಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ವನವಾಸಿ ಕೇಂದ್ರದ ಕಚೇರಿ ಉದ್ಘಾಟಿಸಿದ್ದು, ಆ ಮೂಲಕ ದೇಶದ ವನವಾಸಿ ಸಮುದಾಯದಲ್ಲಿರುವ ಕೊರತೆಗಳು, ಸಂಸ್ಕೃತಿ, ಪರಂಪರೆ ಅಧ್ಯಯನದ ಮೂಲಕ ಬೇರೆ ಸಮಾಜಗಳಿಗೂ ವನವಾಸಿಗಳಲ್ಲಿ ಅಡಗಿರುವ ಮಹತ್ತರವಾದ ಜ್ಞಾನವನ್ನು ಪಸರಿಸುವ ಅವಕಾಶ ಒದಗಿ ಬಂದಿದೆ. ಈ ನಿಟ್ಟಿನಲ್ಲಿ ಅಧ್ಯಯನಗಳು ಇನ್ನಷ್ಟು ನಡೆಯಬೇಕು ಎಂದರು.

ಅರಣ್ಯದಲ್ಲೇ ನೆಲೆಸಿರುವ ವನವಾಸಿಗಳಲ್ಲಿ ಕೆಲವು ಮಹತ್ತರ ಸಂಗತಿಗಳು ಅಡಗಿವೆ. ಅದರಲ್ಲೂ ಔಷಧ ಪದ್ಧತಿಯಲ್ಲಿ ಪರಿಣತಿ ಹೊಂದಿದ್ದಾರೆ. ಜಗತ್ತಿಗೆ ಬೇಕಾದ ಔಷಧಿ, ತಜ್ಞತೆ, ಜ್ಞಾನ ವನವಾಸಿಗಳಲ್ಲಿ ಉಳಿದುಕೊಂಡಿದೆ. ವನವಾಸಿಗಳಲ್ಲಿ ಯತ್ನೋ ಮೆಡಿಸಿನ್ ಹಾಗೂ ಯತ್ನೋ ಬಟಾನಿಕಲ್ ಎಂಬ ಎರಡು ವಿಚಾರ ಅಡಗಿದೆ. ಯತ್ನೋ ಮೆಡಿಸಿನ್ ಎಂದರೆ ತಲೆ ತಲಾಂತರದಿಂದ ವನವಾಸಿಗಳು ಅರಣ್ಯದಲ್ಲಿ ಸಿಗುವ ಔಷಧಿಗಳನ್ನು ಬಳಸಿ ಆರೋಗ್ಯ ಕಾಪಾಡಿಕೊಂಡಿರುವುದೇ ಆಗಿದೆ. ಯತ್ನೋ ಬಟಾನಿಕಲ್ ಎಂದರೆ ವನವಾಸಿಗಳು ಪರಿಸರಕ್ಕೆ ಪೂರಕವಾದ ವಾತಾವರಣ ಮನೆ ನಿರ್ಮಿಸಿಕೊಳ್ಳುವುದು ಅವರು ಧರಿಸುವ ಉಡುಪು, ಸೇವಿಸುವ ಆಹಾರ, ಗಿಡ–ಮರ, ಉಪಯೋಗಿಸುವ ವಸ್ತು, ಗಾಳಿ, ನೀರು ಸೇರಿದಂತೆ ಇನ್ನಿತರ ವಿಷಯಗಳಿವೆ. ಈ ಎಲ್ಲವೂ ಹೊರಗಿನ ಜನರಿಗೆ ತಿಳಿಸುವಂತೆ ಮಾಡುವ ಅವಶ್ಯಕತೆ ಇದೆ ಎಂದು ತಿಳಿಸಿದರು.

ರಾಷ್ಟ್ರೀಯ ಸ್ವಯಂ ಸೇವಾ ಸಂಘದ ವನವಾಸಿ ಕಲ್ಯಾಣದ ಮೂಲಕ ಸಾಂಸ್ಕೃತಿಕ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದೆ. 1952ರಿಂದ ಈ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ. ನಮ್ಮತನ ಕಳೆದುಕೊಂಡರೆ, ನಮ್ಮ ಸಂಸ್ಕೃತಿ ಕಳೆದುಕೊಳ್ಳುವಂತಾಗುತ್ತದೆ. ವನವಾಸಿಗಳನ್ನು ಮತಾಂತರ ಮಾಡಲು ಕ್ರಿಶ್ಚಿಯನ್ ಮಿಷನರಿಗಳು ಪ್ರಯತ್ನಿಸುತ್ತಲೇ ಇದ್ದಾರೆ. ಪ್ರಕೃತಿ ಪೂಜಕರನ್ನು ಪಾಶ್ಚಾತ್ಯರು ವ್ಯಂಗ್ಯವಾಡುವ ಮೂಲಕ ಮತಾಂತರಕ್ಕೆ ಇಂಬು ನೀಡುತ್ತಿದ್ದಾರೆ. ಆದರೆ, ನಿಜವಾದ ವನವಾಸಿಗಳು ಪ್ರಕೃತಿ ಆರಾಧಿಸುವ ಮೂಲಕ ನಮ್ಮ ಪರಂಪರೆಯನ್ನು ಮುಂದುವರೆಸುತ್ತಿದ್ದಾರೆ ಎಂದರು.

ವಿಶ್ವದಲ್ಲೇ ಅತಿ ಹೆಚ್ಚು ವನವಾಸಿಗಳಿರುವ ದೇಶ ಭಾರತ. ದೇಶದ ಜನಸಂಖ್ಯೆಯಲ್ಲಿ ವನವಾಸಿಗಳು ಶೇ.8.5ರಷ್ಟಿದ್ದಾರೆ. ರಾಜ್ಯದ ಜನಸಂಖ್ಯೆಯಲ್ಲಿ ಶೇ.7ರಷ್ಟು ವನವಾಸಿಗಳಿದ್ದಾರೆ. ಸಂಸ್ಕೃತಿ, ಜಾಗೃತಿ, ಸ್ವಾಸ್ಥ್ಯ ಆಹಾರ ದೃಷ್ಟಿಯಿಂದ ಸೇವೆ ಹಾಗೂ ಜಾಗೃತಿ ಅವಶ್ಯ. ದೇಶದ ಇತಿಹಾಸದಲ್ಲಿ ನಮ್ಮ ಸಂಸ್ಕೃತಿ ಮೌಲ್ಯಗಳನ್ನು ನಿರ್ಮಾಣ ಮಾಡುವುದರಲ್ಲಿ ವನವಾಸಿಗಳ ಕೊಡುಗೆ ಬಹಳ ದೊಡ್ಡದಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವನವಾಸಿ ಕಲ್ಯಾಣ ಕರ್ನಾಟಕದ ಅಧ್ಯಕ್ಷ ಕಾವೇರಪ್ಪ ಚಕ್ಕೇರ ವಹಿಸಿದ್ದರು. ಅಖಿಲ ಭಾರತೀಯ ವನವಾಸಿ ಕಲ್ಯಾಣಾಶ್ರಮದ ರಾಷ್ಟ್ರೀಯ ಸಹ ಸಂಘಟನಾ ಕಾರ್ಯದರ್ಶಿ ರಮೇಶ್ ಬಾಬು, ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಕ್ಷೇತ್ರೀಯ ಕಾರ್ಯವಾಹಕ ತಿಪ್ಪೇಸ್ವಾಮಿ, ಕಟ್ಟಡ ನಿರ್ಮಾಣ ಸಮಿತಿ ಅಧ್ಯಕ್ಷ ಡಾ.ಮುರಳಿ, ರಾಧಕೃಷ್ಣ ಮಳವಳ್ಳಿ, ಸಂಘದ ಹಿರಿಯ ಪ್ರಚಾರಕ ಸೂ.ರಾಮಣ್ಣ, ವನವಾಸಿ ಮುಖಂಡರಾದ ಮಹದೇವಯ್ಯ, ಕಾಳಯ್ಯ ಬಂಡೀಪುರ, ಗಣೇಶ್, ಮಾಜಿ ಶಾಸಕ ಎಸ್.ಎ.ರಾಮದಾಸ್ ಸೇರಿದಂತೆ ಇತರರು ಪಾಲ್ಗೊಂಡಿದ್ದರು.

ನಾಲ್ವರ ನಿಗೂಢ ಸಾವು; ಸಾಮೂಹಿಕ ಅಂತ್ಯಕ್ರಿಯೆ



ಮೈಸೂರು, ಆ. 28 (ಆರ್‌ಕೆ)– ಮೈಸೂರಿನ ಚಾಮುಂಡಿಪುರಂ ಮನೆಯೊಂದರಲ್ಲಿ ನಿಗೂಢ ರೀತಿ ಸಾವನ್ನಪ್ಪಿದ ಇಬ್ಬರು ಮಕ್ಕಳು ಸೇರಿ ಒಂದೇ ಕುಟುಂಬದ ನಾಲ್ವರ ಅಂತ್ಯಕ್ರಿಯೆಯನ್ನು ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನ ಹರಿಶ್ಚಂದ್ರ ಘಾಟ್‌ನಲ್ಲಿ ಇಂದು ಮಧ್ಯಾಹ್ನ ನೆರವೇರಿಸಲಾಯಿತು.


ಮೈಸೂರಿನ ಚಾಮುಂಡಿಪುರಂ 1ನೇ ಮೇನ್, 3ನೇ ಕ್ರಾಸ್ ಮನೆಯೊಂದರಲ್ಲಿ ಸಾವನ್ನಪ್ಪಿದ್ದ, ಮಹದೇವಸ್ವಾಮಿ, ಪತ್ನಿ ಅನಿತಾ, ಪುತ್ರಿಯರಾದ ಚಂದ್ರಕಲಾ ಮತ್ತು ಧನಲಕ್ಷ್ಮಿ ಮೃತದೇಹಗಳು ಭಾನುವಾರ ಮಧ್ಯಾಹ್ನ ಕೊಳೆತ ಸ್ಥಿತಿಯಲ್ಲಿ ಬೆಳಕಿಗೆ ಬಂದಿತ್ತು. ಸ್ಥಳಕ್ಕೆ ತೆರಳಿದ ಕೆ.ಆರ್. ಠಾಣೆ ಇನ್ಸ್‌ಪೆಕ್ಟರ್ ನಾಗೇಗೌಡ ಮತ್ತು ಸಿಬ್ಬಂದಿ ಮಹಜರು ನಡೆಸಿ ದೇಹಗಳನ್ನು ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಶವಾಗಾರಕ್ಕೆ ಸ್ಥಳಾಂತರಿಸಿದ್ದರು.

ಸಂಬಂಧಿಕರ ಸಮಕ್ಷಮ ಪಂಚನಾಮೆ ಪ್ರಕ್ರಿಯೆ ಪೂರ್ಣಗೊಳಿಸಿ ಮರಣೋತ್ತರ ಪರೀಕ್ಷೆ ನಡೆಸಿದ ನಂತರ ಎಲ್ಲಾ ನಾಲ್ಕೂ ದೇಹಗಳನ್ನು ಇಂದು ವಾರಸುದಾರರಿಗೆ ಒಪ್ಪಿಸಲಾಯಿತು. ಮಧ್ಯಾಹ್ನದ ನಂತರ ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನ ಹರಿಶ್ಚಂದ್ರ ಘಾಟ್‌ನಲ್ಲಿ ಸಾಮೂಹಿಕ ಅಂತ್ಯಕ್ರಿಯೆ ನಡೆಸಲಾಯಿತು ಎಂದು ಇನ್ಸ್‌ಪೆಕ್ಟರ್ ನಾಗೇಗೌಡ ತಿಳಿಸಿದರು.

ಮಹದೇವಸ್ವಾಮಿ ಮತ್ತು ಅನಿತಾ ಅವರ ಸಂಬಂಧಿಕರು ಮೃತದೇಹಗಳನ್ನು ಊರಿಗೆ ಕೊಂಡೊಯ್ಯದೇ ಮೈಸೂರಲ್ಲೇ ಅಂತ್ಯಕ್ರಿಯೆ ನಡೆಸಲು ಬಯಸಿದ್ದರಿಂದ ನಾವೂ ಸಿಬ್ಬಂದಿಗಳ ಕಳುಹಿಸಿ ಬಂದೋಬಸ್ತ್ ಮಾಡಿದ್ದೆವು. ಸಾವಿಗೆ ನಿಖರ ಕಾರಣ ತಿಳಿದುಬಂದಿಲ್ಲ ಎಂದು ಅವರು ನುಡಿದರು.

ಮರಣೋತ್ತರ ಪರೀಕ್ಷೆ ಮತ್ತು ಎಫ್‌ಎಸ್‌ಎಲ್ ಲ್ಯಾಬೋರೇಟರಿ ಯಿಂದ ವರದಿ ಬರುವವರೆಗೆ ಸಾವಿನ ಕಾರಣ ಹೇಳಲು ಸಾಧ್ಯವಿಲ್ಲ. ಹಣಕಾಸಿನ ಪರಿಸ್ಥಿತಿ ಅಥವಾ ಕೌಟುಂಬಿಕ ಸಮಸ್ಯೆಗಳಿಂದ ಬೇಸತ್ತು, ಮಕ್ಕಳನ್ನು ನೇಣಿಗೇರಿಸಿ ತಂದೆ–ತಾಯಿ ಆತ್ಮಹತ್ಯೆ ಮಾಡಿಕೊಂಡಿರಬಹುದೆಂಬುದು ಮೇಲ್ನೋಟಕ್ಕೆ ತಿಳಿದುಬಂದಿದೆ. ವೈಜ್ಞಾನಿಕ ಪರೀಕ್ಷಾ ವರದಿಗಳು ಬಂದರೆ ಸಾವಿನ ನಿಖರ ಕಾರಣ ತಿಳಿಯಲಿದೆ. ತಾವೂ ಸಹ ತನಿಖೆ ತೀವ್ರಗೊಳಿಸಿದ್ದು, ಶೀಘ್ರ ಸಾವಿನ ಕಾರಣ, ಹೇಗೆ ಮೃತಪಟ್ಟಿದ್ದಾರೆ ಎಂಬುದು ತಿಳಿಯುತ್ತದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೃತದೇಹಗಳ ಮರಣೋತ್ತರ ಪರೀಕ್ಷೆ ವೇಳೆ ಶವಾಗಾರದ ಬಳಿ ಹಾಗೂ ಅಂತ್ಯಕ್ರಿಯೆ ಸಂದರ್ಭ ಹರಿಶ್ಚಂದ್ರ ಘಾಟ್‌ನಲ್ಲಿ ನೆರೆದಿದ್ದ ಸಂಬಂಧಿಕರ ಆಕ್ರಂದನ ಮುಗಿಲು ಮುಟ್ಟಿತ್ತು. ತರಕಾರಿ ವ್ಯಾಪಾರ ಮಾಡುತ್ತಿದ್ದ ಮಹದೇವಸ್ವಾಮಿ, ಉತ್ತಮ ರೀತಿಯಲ್ಲಿ ಜೀವನ ನಡೆಸುತ್ತಿದ್ದರಾದರೂ ವ್ಯಾಪಾರದಲ್ಲಿ ನಷ್ಟ ಉಂಟಾಗಿ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದರು ಎಂದು ಸಂಬಂಧಿಕರು ಕೆಲವರ ಬಳಿ ಹೇಳಿಕೊಂಡಿದ್ದರು ಎಂದು ತಿಳಿದುಬಂದಿದೆ. ಮರಣೋತ್ತರ ಪರೀಕ್ಷೆ ವೇಳೆ ಮತ್ತು ಅಂತ್ಯಕ್ರಿಯೆ ವೇಳೆ ಅವರ ಸಂಬಂಧಿಕರ ಆಕ್ರಂದನ ಮುಗಿಲು ಮುಟ್ಟಿತ್ತು. ತಾವೂ ಎಲ್ಲರಂತೆ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಸಮಾಜದಲ್ಲಿ ಗೌರವಯುತವಾಗಿ ಸ್ವಾಭಿಮಾನದಿಂದ ಬದುಕಬೇಕೆಂದು ಮೈಸೂರಿಗೆ ಬಂದು ಬಾಡಿಗೆ ಮನೆ ಮಾಡಿಕೊಂಡು ವಾಸಿಸುತ್ತಿದ್ದರು ಎಂದು ಸಂಬಂಧಿಕರು ತಿಳಿಸಿದ್ದಾರೆ.



ಮೈಸೂರು ಜಿಲ್ಲಾ ಪಂಚಾಯತಿಯ ಪ್ರಗತಿ ಪರಿಶೀಲನಾ ಸಭೆಗೆ ಆಗಮಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಆತ್ಮೀಯವಾಗಿ ಸ್ವಾಗತಿಸಿದರು. ಈ ವೇಳೆ ದಿನೇಶ್‌ಗೌಡ ಹಾಜರಿದ್ದರು.

ಗ್ಯಾರಂಟಿಗೆ ಎಸ್‌ಸಿಎಸ್‌ಪಿ–ಟಿಎಸ್‌ಪಿ ಅನುದಾನ ಬಳಸದಂತೆ ಆಗ್ರಹಿಸಿ ಇಂದು ದಸಂಸ ಪ್ರತಿಭಟನೆ

ಮೈಸೂರು,ಆ.28(ಪಿಎಂ)– ಪರಿಶಿಷ್ಟ ಜಾತಿ ಉಪಯೋಜನೆ/ಪರಿಶಿಷ್ಟ ಪಂಗಡ ಉಪಯೋಜನೆ ಕಾಯ್ದೆಯ (ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಕಾಯ್ದೆ) 'ಸೆಕ್ಷನ್ 7ಡಿ' ರದ್ದುಪಡಿಸಬೇಕು ಹಾಗೂ ಗ್ಯಾರಂಟಿ ಯೋಜನೆಗಳಿಗೆ ಈ ಕಾಯ್ದೆಯಡಿಯ ಮೀಸಲು ಅನುದಾನ ಬಳಕೆ ಮಾಡಬಾರದು ಎಂದು ಒತ್ತಾಯಿಸಿ ಆ.29ರಂದು ದಲಿತ ಸಂಘರ್ಷ ಸಮಿತಿ (ದಸಂಸ) ವತಿಯಿಂದ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ ಎಂದು ದಸಂಸ ಮುಖಂಡ ಚೋರನಹಳ್ಳಿ ಶಿವಣ್ಣ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 11ಕ್ಕೆ ಮೈಸೂರಿನ ಪುರಭವನದಿಂದ ಸಿದ್ಧಾರ್ಥನಗರದಲ್ಲಿರುವ ನೂತನ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಲಾಗುವುದು. 2013ರಲ್ಲಿ ಈ ಕಾಯ್ದೆ ಜಾರಿ ಮಾಡಿದ ರಾಜ್ಯ ಕಾಂಗ್ರೆಸ್ ಸರ್ಕಾರವೇ ಅನಗತ್ಯವಾಗಿ ಸೆಕ್ಷನ್ 7ಡಿ ಅಳವಡಿಸಿ ಅನ್ಯ ಕಾರ್ಯಗಳಿಗೆ ಮೀಸಲು ಹಣ ಬಳಸಿಕೊಳ್ಳಲು ಅವಕಾಶ ಕಲ್ಪಿಸಿತು. ಇದರಿಂದ ಕಾಯ್ದೆಯ ಉದ್ದೇಶ ಈಡೇರದೇ ಪರಿಶಿಷ್ಟರ ಪ್ರಗತಿ ಕುಂಠಿತಗೊಂಡಿತು ಎಂದು ದೂರಿದರು.



ನಂತರ ಬಂದ ಬಿಜೆಪಿ ಸರ್ಕಾರವು ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಅನುದಾನ ಕಡಿತ ಮಾಡಿದ್ದಲ್ಲದೆ, ಸೆಕ್ಷನ್ 7ಡಿ ಅನ್ನು ಹೆಚ್ಚು ದುರ್ಬಳಕೆ ಮಾಡಿಕೊಂಡಿತು. ಇದರ ವಿರುದ್ಧದ ಹೋರಾಟದ ಫಲವಾಗಿ ಈಗಿರುವ ಕಾಂಗ್ರೆಸ್ ಸರ್ಕಾರವು ತನ್ನ ಬಜೆಟ್ ಭಾಷಣದಲ್ಲಿ ಸೆಕ್ಷನ್ 7ಡಿ ಅನ್ನು ರದ್ದುಗೊಳಿಸುವುದಾಗಿ ಹೇಳಿತ್ತು. ಆದರೆ ತದನಂತರದಲ್ಲಿ ಗ್ಯಾರಂಟಿ ಯೋಜನೆಗಳಿಗೆ ಮೀಸಲು ಹಣ ಬಳಸಿಕೊಳ್ಳಲು ಸೆಕ್ಷನ್ 7ಡಿ ಅನ್ನು ರದ್ದುಗೊಳಿಸದೇ ದಲಿತ ಸಮುದಾಯಕ್ಕೆ ದ್ರೋಹವೆಸಗಿದೆ ಎಂದು ಆಪಾದಿಸಿದರು.

ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಿಸಿದ್ದ ಸಾರ್ವತ್ರಿಕ ಯೋಜನೆಗಳಾದ 5 ಗ್ಯಾರಂಟಿಗಳಿಗೆ ಹಣ ಪೂರೈಸುವ ಸಲುವಾಗಿ ಎಸ್‌ಸಿಎಸ್‌ಪಿ–ಟಿಎಸ್‌ಪಿ ಮೀಸಲು ನಿಧಿಯಿಂದ 11,114 ಕೋಟಿ ರೂ. ಅನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ತೆಗೆದುಕೊಂಡಿದೆ. ಇದನ್ನು ಪರಿಶಿಷ್ಟರಿಗೆ ಮಾತ್ರ ಬಳಸುತ್ತೇವೆಂದು ಸುಳ್ಳು ಹೇಳುತ್ತಿದೆ. ಇದು ನಿಜವೇ ಆಗಿದ್ದರೆ ಅಂಕಿ ಅಂಶಗಳ ಪ್ರಕಾರ ಅಂದಾಜು 8,150 ಕೋಟಿ ಹಣ ಸಾಕಾಗುತ್ತಿತ್ತು. ಆದರೆ 3 ಸಾವಿರ ಕೋಟಿ ಹೆಚ್ಚುವರಿಯಾಗಿ ಪಡೆದಿರುವ ಉದ್ದೇಶವೇನು? ಎಂದು ಪ್ರಶ್ನಿಸಿದರು. ದಸಂಸ ಮುಖಂಡರಾದ ಕೆ.ವಿ.ದೇವೇಂದ್ರ, ಅರಸನಕೆರೆ ಶಿವರಾಜ್, ಸೋಮನಾಯಕ, ಕೆಂಪಯ್ಯನಹುಂಡಿ ರಾಜು ಗೋಷ್ಠಿಯಲ್ಲಿದ್ದರು.

ಕುವೆಂಪುನಗರದ 'ಉದಯರವಿ' ರಸ್ತೆಯ ಹೆಸರು ಬದಲಾವಣೆ ಸೂಕ್ತವಲ್ಲ

ಮೈಸೂರು ನಾಗರಿಕರ ಸಾಂಸ್ಕೃತಿಕ ವೇದಿಕೆಯ ಸುದ್ದಿಗೋಷ್ಠಿಯಲ್ಲಿ ಹಿರಿಯ ಸಾಹಿತಿ ಡಾ.ಸಿಪಿಕೆ ಸ್ಪಷ್ಟನುಡಿ

ಮೈಸೂರು,ಆ.28(ಪಿಎಂ)– ಮೈಸೂರು ಮಹಾನಗರ ಪಾಲಿಕೆಯ ಕಳೆದ ಕೌನ್ಸಿಲ್ ಸಭೆಯಲ್ಲಿ ಪ್ರಸ್ತಾಪಿಸಿದ ಕುವೆಂಪುನಗರದ 'ಉದಯರವಿ' ರಸ್ತೆಯ ಹೆಸರು ಬದಲಾವಣೆ ಸೂಕ್ತವಲ್ಲವೆಂದು ತಿಳಿಸಿದ ಹಿರಿಯ ಸಾಹಿತಿ ಡಾ.ಸಿ.ಪಿ.ಕೃಷ್ಣಕುಮಾರ್ (ಸಿಪಿಕೆ), ಅಂಬೇಡ್ಕರ್ ಅವರ ತಂದೆ ಹೆಸರನ್ನು ನೂತನ ಬಡಾವಣೆ ಇಲ್ಲವೇ ಬೇರೆ ರಸ್ತೆಗೆ ನಾಮಕರಣ ಮಾಡಲು ಅವಕಾಶವಿದೆ ಎಂದು ಹೇಳಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಮೈಸೂರು ನಾಗರಿಕರ ಸಾಂಸ್ಕೃತಿಕ ವೇದಿಕೆ ವತಿಯಿಂದ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮಲ್ಲಿ ಇತ್ತೀಚೆಗೆ ಅನಗತ್ಯವಾಗಿ ಸಮಸ್ಯೆ ಸೃಷ್ಟಿಸುವ ಪ್ರವೃತ್ತಿ ಹೆಚ್ಚಾಗುತ್ತಿದೆ. ಕುವೆಂಪುನಗರದಲ್ಲಿರುವ 'ಉದಯರವಿ' ರಸ್ತೆ ಹೆಸರನ್ನು ಬದಲಾಯಿಸಿ ಅಂಬೇಡ್ಕರ್ ಅವರ ತಂದೆ ರಾಮ್‌ಜಿ ಸಕ್ಪಾಲ್ ಹೆಸರು ನಾಮಕರಣ ಮಾಡಬೇಕೆಂದು ಮೈಸೂರು ಮಹಾನಗರ ಪಾಲಿಕೆ ಕೆಲ ಸದಸ್ಯರು ಪ್ರಸ್ತಾಪಿಸಿದ್ದು, ಇದು ಸೂಕ್ತವಲ್ಲ ಎಂದು ತಿಳಿಸಿದರು.

ಕುವೆಂಪುನಗರದ ಎಲ್ಲಾ ರಸ್ತೆಗಳು ಕುವೆಂಪುಮಯವಾಗಿವೆ. ಡಾ.ಅಂಬೇಡ್ಕರ್ ಹೇಗೆ ಒಬ್ಬ ರಾಷ್ಟ್ರ ನಾಯಕರೋ ಅದೇ ರೀತಿಯಲ್ಲಿ ಕುವೆಂಪು ಕೂಡ ಒಬ್ಬ ರಾಷ್ಟ್ರಕವಿ ಎಂಬುದನ್ನು ನೆನಪಿಡಬೇಕು. ಆದ್ದರಿಂದ ಬಹಳ ಕಾಲದಿಂದ ಇರುವ 'ಉದಯರವಿ' ಹೆಸರನ್ನು ಬದಲಿಸುವ ಪ್ರಮೇಯ ಇಲ್ಲ ಎಂಬುದನ್ನು ಅರಿಯಬೇಕು. ಡಾ.ಅಂಬೇಡ್ಕರ್ ಅವರ ಬಗ್ಗೆ ನಮಗೆ ಗೌರವವಿದೆ. ಅವರ ತಂದೆ ಹೆಸರು ನಾಮಕರಣಕ್ಕೆ ನಮ್ಮದೇನೂ ಆಕ್ಷೇಪವಿಲ್ಲ. ಅವರ ಹೆಸರನ್ನು ಬೇರೆ ನೂತನ ರಸ್ತೆಗೆ ನಾಮಕರಣ ಮಾಡಲು ಅವಕಾಶವಿದೆ. ಅಷ್ಟೇ ಅಲ್ಲದೆ, ಒಂದು ಬಡಾವಣೆಗೂ ಅವರ ಹೆಸರು ನಾಮಕರಣ ಮಾಡಬಹುದು. ಹೀಗಾಗಿ ಉದಯರವಿ ಹೆಸರಿನ ಬದಲಾವಣೆ ಸರಿಯಲ್ಲ ಎಂದರು.



ಮೈಸೂರು ನಾಗರಿಕರ ಸಾಂಸ್ಕೃತಿಕ ವೇದಿಕೆ ಅಧ್ಯಕ್ಷ ಕೆ.ಎಸ್.ನಾಗರಾಜು ಮಾತನಾಡಿ, ರಾಷ್ಟ್ರಕವಿ ಕುವೆಂಪು ಅವರ ಜನ್ಮಸ್ಥಳ ಕುಪ್ಪಳಿ. ಆದರೆ ಅವರ ಕರ್ಮಭೂಮಿ ಮೈಸೂರು. ಇದರ ನೆನಪಿನಾರ್ಥ ಮೈಸೂರಿನ ಪ್ರತಿಷ್ಠಿತ ಬಡಾವಣೆಗೆ 'ಕುವೆಂಪುನಗರ' ಎಂದು ನಾಮಕರಣ ಮಾಡಲಾಗಿದೆ. ಸುಮಾರು 40 ವರ್ಷಗಳ ಹಿಂದೆ ಅಂದಿನ ಸಿಟಿ ಇಂಪ್ರೂವ್‌ಮೆಂಟ್ ಟ್ರಸ್ಟ್ ಬೋರ್ಡ್‌ನ (ಸಿಐಟಿಬಿ) ಅಧ್ಯಕ್ಷರಾಗಿದ್ದ ಡಿ.ಮಾದೇಗೌಡ ಅವರ ಅವಧಿಯಲ್ಲಿ ಕುವೆಂಪುನಗರ ಹೆಸರು ನಾಮಕರಣ ಮಾಡಲಾಗಿದೆ ಎಂದು ತಿಳಿಸಿದರು.

ಅಲ್ಲದೆ, ಕುವೆಂಪು ಅವರ ಕೃತಿ ಮತ್ತು ಸಂದೇಶಗಳಿಗೆ ಸಂಬಂಧಿಸಿದ ಹೆಸರುಗಳನ್ನು ಕುವೆಂಪುನಗರದ ರಸ್ತೆಗಳಿಗೆ ನಾಮಕರಣ ಮಾಡಲಾಗಿದೆ. ಈ ಸಂಬಂಧ ಗೆಜೆಟ್ ನೋಟಿಫಿಕೇಷನ್ ಸಹ ಹೊರಡಿಸಲಾಗಿದೆ. ಅಲ್ಲದೆ, ಕಂದಾಯ ಇಲಾಖೆಯೂ 'ಕುವೆಂಪುನಗರ ಬಡಾವಣೆ ಉದಯರವಿ ರಸ್ತೆ ಎಂದು ಉಲ್ಲೇಖಿಸಿದ್ದು, ಅದೇ ಚಾಲ್ತಿಯಲ್ಲಿದೆ. 'ಉದಯರವಿ' ಎಂಬುದು ಕುವೆಂಪು ಅವರ ಮೈಸೂರು ನಿವಾಸದ ಹೆಸರು. ಇದೀಗ ಕೆಲ ಪಾಲಿಕೆ ಸದಸ್ಯರು ಬದಲಾವಣೆಗೆ ಆಗ್ರಹಿಸಿರುವುದು ಸರಿಯಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಮಾಜಿ ಅಧ್ಯಕ್ಷ ನೀ.ಗಿರಿಗೌಡ, ಸಂಸ್ಕೃತ ವಿದ್ವಾಂಸರಾದ ಲೀಲಾ ಪ್ರಕಾಶ್, ಸಂಸ್ಕೃತಿ ಚಿಂತಕ ಕೆ.ರಘುರಾಮ್ ವಾಜಪೇಯಿ ಗೋಷ್ಠಿಯಲ್ಲಿದ್ದರು.

ಕುವೆಂಪು ಮೇಲೆ ಅಂಬೇಡ್ಕರ್ ಪ್ರಭಾವ ಅಗಾಧ

ಬಹುಶಃ ಮಾಹಿತಿ ಕೊರತೆಯಿಂದ ಹೆಸರು ಬದಲಾವಣೆ ಪ್ರಸ್ತಾಪ ಉದ್ಭವಿಸಿರಬಹುದು. ಇದನ್ನು ಪರಿಹರಿಸಲು ಪ್ರಯತ್ನಿಸುತ್ತೇವೆ. ಜೊತೆಗೆ ಪಾಲಿಕೆಗೂ ಹೆಸರು ಬದಲಾವಣೆ ಮಾಡದಂತೆ ಮನವಿ ಸಲ್ಲಿಸಲಾಗುವುದು. ಅಂಬೇಡ್ಕರ್ ಅವರ ಸಿದ್ಧಾಂತವನ್ನೇ ರಾಷ್ಟ್ರಕವಿ ಕುವೆಂಪು ತಮ್ಮ ಸಾಹಿತ್ಯದಲ್ಲಿ ಪ್ರತಿಪಾದಿಸಿದ್ದಾರೆ. ಅಂಬೇಡ್ಕರ್ ಅವರ ಸಮಾನತೆ ಸಮಾಜದ ಪರಿಕಲ್ಪನೆಗೆ ಕುವೆಂಪು ಸಾಹಿತ್ಯ ಪೂರಕವಾಗಿ ಮೂಡಿಬಂದಿದೆ. ಕುವೆಂಪು ಅವರ ಮೇಲೆ ಅಂಬೇಡ್ಕರ್ ಅವರ ಪ್ರಭಾವ ಅಗಾಧವಾಗಿದೆ.

-ಮಡ್ಡಿಕೆರೆ ಗೋಪಾಲ್, ಅಧ್ಯಕ್ಷರು, ಜಿಲ್ಲಾ ಕಸಾಪ, ಮೈಸೂರು.

ಮೈಸೂರು ಮಿತ್ರ



ಶ್ರೀಸನ್ನಿಧಿ ಇವರಿಂದ ಇಂದು ಭರತನಾಟ್ಯ

ಮೈಸೂರು, ಆ. 28– ಶ್ರೀ ವಿಶ್ವ ಪ್ರಸನ್ನ ತೀರ್ಥ ಶ್ರೀ ಪಾದಂಗಳರವರ 36ನೇ ಚಾತುರ್ಮಾಸ್ಯದ ಪ್ರಯುಕ್ತ ಸರಸ್ವತಿ ಪುರಂನಲ್ಲಿರುವ ಶ್ರೀ ಕೃಷ್ಣಧಾಮದಲ್ಲಿ ನಾಳೆ (ಆ.29) ಸಂಜೆ 7 ಗಂಟೆಗೆ ಶ್ರೀಸನ್ನಿಧಿ ಇವರಿಂದ ಭರತ ನಾಟ್ಯ ಕಾರ್ಯಕ್ರಮವನ್ನು ಆಯೋಜಿ ಸಲಾಗಿದೆ ಎಂದು ಚಾತುರ್ಮಾಸ್ಯ ಸಮಿತಿಯ ಕಾರ್ಯಾಧ್ಯಕ್ಷ ರವಿಶಾಸ್ತ್ರಿ ತಿಳಿಸಿದ್ದಾರೆ.

ಮೈಸೂರು ಶ್ರೀ ಸುತ್ತೂರು ಮಠದಲ್ಲಿ ಬೆಳದಿಂಗಳ ಸಂಗೀತ




ಮೈಸೂರು, ಆ. 28– ಮೈಸೂರಿನ ಶ್ರೀ ಸುತ್ತೂರು ಮಠದಲ್ಲಿ ಆ.31 ರಂದು ಗುರುವಾರ ಸಂಜೆ 6 ಗಂಟೆಗೆ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಬೆಳದಿಂಗಳ ಸಂಗೀತ–258ರ ಅಂಗವಾಗಿ ವಿದುಷಿ ಸ್ಫೂರ್ತಿ ರಾವ್ ಅವರಿಂದ ಗಾಯನ ಏರ್ಪಡಿಸಲಾಗಿದೆ. ಪಕ್ಕವಾದ್ಯದಲ್ಲಿ ವಿದುಷಿ ಸಿ.ವಿ. ಶ್ರುತಿ–ವಯೋಲಿನ್, ವಿದ್ವಾನ್ ಕೆ.ವಿ. ಪ್ರಸಾದ್ –ಮೃದಂಗ ಮತ್ತು ವಿದ್ವಾನ್ ಶರತ್ ಕೌಶಿಕ್ –ಘಟಂನಲ್ಲಿ ಸಹಕಾರ ನೀಡಲಿದ್ದಾರೆ.

ವಾರ್ಷಿಕ ಸರ್ವ ಸದಸ್ಯರ ಸಭೆ

ಮೈಸೂರು, ಆ. 28– ಡಾಕ್ಟರ್ಸ್ ಹೌಸಿಂಗ್ ಕೋ ಆಪರೇಟಿವ್ ಸೊಸೈಟಿಯ ವಾರ್ಷಿಕ ಸರ್ವ ಸದಸ್ಯರ ಸಭೆಯನ್ನು ಸೆ. 3ರಂದು ಬೆಳಗ್ಗೆ 11 ಗಂಟೆಗೆ ಆಲನಹಳ್ಳಿಯ ಡಾಕ್ಟರ್ಸ್ ಬಡಾವಣೆಯಲ್ಲಿರುವ ಡಾಕ್ಟರ್ಸ್ ಕಮ್ಯುನಿಟಿ ಹಾಲ್‌ನಲ್ಲಿ ಏರ್ಪಡಿಸಲಾಗಿದೆ. ಸೊಸೈಟಿ ಅಧ್ಯಕ್ಷ ಡಾ. ಎನ್.ಪಿ. ಶಿವಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ.

ಇಂದು ಮೈಸೂರಿಗೆ ಚಂಪತ್ ರಾಯ್, ಗೋವಿಂದ ಗಿರಿ ಮಹಾರಾಜ್





ಮೈಸೂರು, ಆ. 28– ಅಯೋಧ್ಯೆ ರಾಮಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಕಾರ್ಯದರ್ಶಿ ಚಂಪತ್ ರಾಯ್ ಮತ್ತು ಕೋಶಾಧಿಕಾರಿ ಗೋವಿಂದ ಗಿರಿ ಮಹಾರಾಜ್ ಅವರು ಮಂಗಳವಾರದಂದು ಟ್ರಸ್ಟ್ ವಿಶ್ವಸ್ಥರಾದ ಶ್ರೀ ಪೇಜಾವರ ಶ್ರೀಪಾದರನ್ನು ಭೇಟಿಯಾಗಿ ಸಮಾಲೋಚನೆ ನಡೆಸಲಿರುವರು. ಸರಸ್ವತಿಪುರಂ ಕೃಷ್ಣಧಾಮದ ಸಭಾಂಗಣದಲ್ಲಿ ಅಂದು ಸಂಜೆ 5.30ಕ್ಕೆ ನಡೆಯುವ ಸಭಾ ಕಾರ್ಯಕ್ರಮದಲ್ಲಿ ಅವರನ್ನು ಸನ್ಮಾನಿಸಲಾಗುವುದು ಎಂದು ಶ್ರೀಗಳ ಚಾತುರ್ಮಾಸ್ಯ ಸಮಿತಿಯ ಕಾರ್ಯಾಧ್ಯಕ್ಷ ರವಿಶಾಸ್ತ್ರಿ ಪ್ರಕಟಣೆ ತಿಳಿಸಿದ್ದಾರೆ.



ಮೈಸೂರು ಪದವಿಪೂರ್ವ ಕಾಲೇಜಿನ ಸಮಾಜಶಾಸ್ತ್ರ ವೇದಿಕೆಯ ವತಿಯಿಂದ ಉಪ ನಿರ್ದೇಶಕರಾಗಿ ಬಡ್ತಿ ಪಡೆದ ಒಂಟಿಕೊಪ್ಪಲು ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಸಿ.ಚಲುವಯ್ಯ ಹಾಗೂ ನಂಜನಗೂಡು ಪದವಿಪೂರ್ವ ಕಾಲೇಜಿನ ನೂತನ ಪ್ರಾಂಶುಪಾಲರಾಗಿ ಅಧಿಕಾರ ವಹಿಸಿಕೊಂಡ ಲಯನ್ ಸಿ.ಆರ್ .ದಿನೇಶ್ ಅವರನ್ನು ಸನ್ಮಾನಿಸಲಾಯಿತು. ಚಿತ್ರದಲ್ಲಿ ಪ್ರಾಂಶುಪಾಲರಾದ ಸೀಮಾ, ವೇದಿಕೆಯ ಅಧ್ಯಕ್ಷ ಹೆಚ್.ಎಸ್.ರವಿಶಂಕರ್, ಕಾರ್ಯದರ್ಶಿ ಮಹದೇವಸ್ವಾಮಿ, ಖಜಾಂಚಿ ರೇವಣ್ಣ ಮತ್ತು ಉಪನ್ಯಾಸಕರಾದ ಭಾರತಿ, ವಿನೋದ್, ಸುವರ್ಣ ಶೆಟ್ಟಿ, ದಿವ್ಯ, ಆಶಾ ಮತ್ತಿತರರು ಉಪಸ್ಥಿತರಿದ್ದರು.




ನಿಖಿಲ್ ಕುಮಾರಸ್ವಾಮಿ ಅಭಿಮಾನಿ ಬಳಗದ ಅಧ್ಯಕ್ಷರಾದ ಪ್ರದೀಪ್ ಕೃಷ್ಣೇಗೌಡ ಅವರ ಹುಟ್ಟುಹಬ್ಬವನ್ನು ಶ್ರೀ ಬಸವೇಶ್ವರ ನವಚೇತನ ವಿಶೇಷಮಕ್ಕಳ ಟ್ರಸ್ಟ್‌ನಲ್ಲಿ ಮಕ್ಕಳಿಗೆ ಉಪಾಹಾರ ಹಣ್ಣುಗಳು ಹಾಗೂ ನೋಟ್‌ಬುಕ್ ವಿತರಿಸುವ ಮೂಲಕ ಆಚರಿಸಲಾಯಿತು. ಈ ವೇಳೆ ನಿಖಿಲ್‌ಕುಮಾರಸ್ವಾಮಿ ಅಭಿಮಾನಿ ಬಳಗದ ಸದಸ್ಯರಾದ ಧರ್ಮ ಪಾಲಗೌಡ, ಶ್ರೀನಿವಾಸ್ ಗೌಡ, ಸಂದೀಪ್, ಪಡುವಾರಳ್ಳಿ ಕೃಷ್ಣ, ಹೇಮಂತ್, ನಾಗರಾಜಮೂರ್ತಿ, ಮನೋಜ್ ಹಾಗೂ ಶ್ರೀ ಬಸವೇಶ್ವರ ನವಚೇತನ ಟ್ರಸ್ಟಿ ಮರಿಗೌಡ ಮತ್ತಿತರರು ಉಪಸ್ಥಿತರಿದ್ದರು.

ರಾಜ್ಯ ಕೆಎಎಸ್ ಅಧಿಕಾರಿಗಳ ಸಂಘದ ಅಧ್ಯಕ್ಷರಾಗಿ ಬಿ.ಶಿವಸ್ವಾಮಿ



ಮೈಸೂರು, ಆ. 28– ರಾಜ್ಯ ಕೆ.ಎ.ಎಸ್.ಅಧಿಕಾರಿಗಳ ಸಂಘದ ಅಧ್ಯಕ್ಷರಾಗಿ ಮುಖ್ಯಮಂತ್ರಿಗಳ ಜಂಟಿ ಕಾರ್ಯದರ್ಶಿ ಬಿ.ಶಿವಸ್ವಾಮಿ ಆಯ್ಕೆಯಾಗಿದ್ದಾರೆ. ಶಿವಸ್ವಾಮಿ ಅವರು ಮೈಸೂರು ತಾಲೂಕು ಗೋಪಾಲಪುರ ಗ್ರಾಮದವರಾಗಿದ್ದು, ಇವರನ್ನು ಡಾ॥ ಯತೀಂದ್ರ ಸಿದ್ದರಾಮಯ್ಯ, ಜಿ.ಪಂ.ಮಾಜಿ ಅಧ್ಯಕ್ಷ ಕೆ. ಮರೀಗೌಡ, ಶಾಸಕ ಡಿ.ರವಿಶಂಕರ್ ಅಭಿನಂದಿಸಿದ್ದಾರೆ.

ಆ.31ರಿಂದ ಶ್ರೀ ರಾಘವೇಂದ್ರ ಗುರುಸಾರ್ವಭೌಮರ 352ನೇ ಆರಾಧನಾ ಮಹೋತ್ಸವ



ಮೈಸೂರು, ಆ.28–ನಗರದ ವಿ.ವಿ.ಮೊಹಲ್ಲಾ 12ನೇ ಕ್ರಾಸ್‌ನಲ್ಲಿರುವ ಶ್ರೀ ಸಾಗರಕಟ್ಟೆ ಟ್ರಸ್ಟ್ ವತಿಯಿಂದ ಆ.31 ರಿಂದ ಸೆ.1ರವರೆಗೆ ಶ್ರೀ ರಾಘವೇಂದ್ರ ಗುರುಸಾರ್ವಭೌಮರ 352ನೇ ಆರಾಧನಾ ಮಹೋತ್ಸವವನ್ನು ಆಯೋಜಿಸಲಾಗಿದೆ.

ಪ್ರತಿದಿನ ಬೆಳಗ್ಗೆ 7ಕ್ಕೆ ಪಾದಪೂಜೆ, 9ಕ್ಕೆ ಪಂಚಾಮೃತ, ಮಧ್ಯಾಹ್ನ 12.30ಕ್ಕೆ ಅಲಂಕಾರ ಬ್ರಾಹ್ಮಣ ಪೂಜೆಯನ್ನು ಏರ್ಪಡಿಸಲಾಗಿದೆ. ಸಂಜೆ ನಡೆಯುವ ಸಂಗೀತ ಕಾರ್ಯಕ್ರಮದಲ್ಲಿ ಆ.31ರಂದು ಸಂಜೆ 5.30ರಿಂದ 7ರವರೆಗೆ ಭಜನಾ ಮಂಡಲಿಯವರಿಂದ ಭಜನಾ ಕಾರ್ಯಕ್ರಮ, ಸಂಜೆ 7ರಿಂದ 8.30ರವರೆಗೆ ವಿದ್ವಾನ್ ಹರೀಶ್ ಪಾಂಡವ್ ಮತ್ತು ತಂಡದವರಿಂದ ಸ್ಯಾಕ್ಸೋಫೋನ್ ವಾದನ ಇದಾದ ನಂತರ ಪಲ್ಲಕ್ಕಿ ಉತ್ಸವ, ರಥೋತ್ಸವ, ಮಹಾಮಂಗಳಾರತಿ ಹಾಗೂ ಪ್ರಸಾದ ವಿನಿಯೋಗವಿರುತ್ತದೆ.

ಸೆ.1ರಂದು ಸಂಜೆ 5.30ರಿಂದ 7ರವರೆಗೆ ವಿದ್ವಾನ್ ಸಮರ್ಥ್ ರಘುನಂದನ್, ಬೆಂಗಳೂರು ಮತ್ತು ತಂಡದವರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ, ಸಂಜೆ 7ರಿಂದ 8.30ರವರೆಗೆ ವಿದ್ವಾನ್ ಬಳ್ಳಾರಿ ಎಂ.ರಾಘವೇಂದ್ರ ಮತ್ತು ತಂಡದವರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ ಇದಾದ ನಂತರ ಪಲ್ಲಕ್ಕಿ ಉತ್ಸವ, ರಥೋತ್ಸವ, ಮಹಾಮಂಗಳಾರತಿ ಹಾಗೂ ಪ್ರಸಾದ ವಿನಿಯೋಗವಿರುತ್ತದೆ.

ಸೆ.3ರಂದು ಸಂಜೆ 5.30ರಿಂದ 7ರವರೆಗೆ ಭಜನಾ ಮಂಡಳಿಯವರಿಂದ ಭಜನಾ ಕಾರ್ಯಕ್ರಮ, ಸಂಜೆ 7ರಿಂದ 8.30ರವರೆಗೆ ವಿದುಷಿ ಸಹನಾ ಎಸ್.ವಿ. ಮತ್ತು ತಂಡದವರಿಂದ ವೀಣಾವಾದನವನ್ನು ಏರ್ಪಡಿಸಲಾಗಿದೆ. ಇದಾದ ನಂತರ ಮಹಾಮಂಗಳಾರತಿ ಪ್ರಸಾದ ವಿನಿಯೋಗವಿರುತ್ತದೆ. ಸೆ.2ರಂದು ಬೆಳಗ್ಗೆ 10.30ಕ್ಕೆ ರಥೋತ್ಸವ ನಡೆಯಲಿದೆ. ಭಗವದ್ಭಕ್ತರು ಈ ಎಲ್ಲಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಶ್ರೀ ಗುರುರಾಜರ ಮತ್ತು ಶ್ರೀ ವಾಯುದೇವರ ಸೇವೆ ಮಾಡಿ ಶ್ರೀ ಗುರುರಾಜರ ಸಂಪೂರ್ಣ ಪರಮಾನುಗ್ರಹಕ್ಕೆ ಪಾತ್ರರಾಗಬೇಕೆಂದು ವಿ.ವಿ.ಮೊಹಲ್ಲಾ ಸಾಗರಕಟ್ಟೆ ಮಠ ಟ್ರಸ್ಟಿಗಳು ಕೋರಿದ್ದಾರೆ.

ಮೈಸೂರು ಅರಮನೆ ದರ್ಬಾರ್ ಹಾಲ್, ಕಲ್ಯಾಣ ಮಂಟಪದ ಗಾಜಿನ ಗೋಪುರದಲ್ಲಿ ಭಾರಿ ಬಿರುಕು




ಟಾರ್ಪಾಲ್ ಹೊಂದಿಸಿ, ಹಗ್ಗ ಬಿಗಿದು ಪ್ರವಾಸಿಗರಿಗೆ ಕಾಣದಂತೆ ಮರೆ ಮಾಡುವ ಯತ್ನ; ಅರಮನೆ ಘನತೆ, ಪ್ರತಿಷ್ಠೆಗೆ ಧಕ್ಕೆ

- ನವಿಲು ಆಕೃತಿಯ ಗಾಜುಗಳಲ್ಲಿ ಒಡಕು
- ಗೋಪುರ ನವೀಕರಣಕ್ಕೆ ಎಳ್ಳು ನೀರು
- ಹಿಂದಿನ ಅಧಿಕಾರಿಗಳ ಅಸಡ್ಡೆಯಿಂದ ಅವಾಂತರ
- ಕೂಡಲೇ ನವೀಕರಿಸದಿದ್ದರೆ ಗೋಪುರ ಕುಸಿಯುವ ಆತಂಕ

ಬಾಪುಲಿಂಗರಾಜ್ ಅರಸ್

ಮೈಸೂರು, ಆ.27– ವಿಶ್ವ ವಿಖ್ಯಾತ ಮೈಸೂರು ಅರಮನೆಯ ದರ್ಬಾರ್ ಹಾಲ್ ಹಾಗೂ ಕಲ್ಯಾಣ ಮಂಟಪದ ಗಾಜಿನ ಗೋಪುರದಲ್ಲಿ ನವಿಲು ಆಕೃತಿಯ ಗಾಜುಗಳು ಬಿರುಕು ಬಿಟ್ಟಿವೆ. ಮಳೆ ನೀರು ಸುರಿಯುವುದನ್ನು ತಡೆಯಲು ದರ್ಬಾರ್ ಹಾಲ್ ಹಾಗೂ ಕಲ್ಯಾಣ ಮಂಟಪದ ಮೇಲೆ ಜರ್ಮನ್ ಟಾರ್ಪಾಲ್ ಹೊದಿಸಿ ಹಗ್ಗ ಬಿಗಿಯಲಾಗಿದೆ. ಪಾರಂಪರಿಕ ಶೈಲಿಯಲ್ಲಿ ಕಂಗೊಳಿಸುವ ಗಾಜಿನ ಗೋಪುರದ ಮೇಲೆ ಟಾರ್ಪಾಲ್ ಹೊದಿಸಿ, ಅಂದವನ್ನು ಹದಗೆಡಿಸಿರುವುದಕ್ಕೆ ಪ್ರವಾಸಿಗರು ತೀವ್ರ ವಿಷಾದ ವ್ಯಕ್ತಪಡಿಸಿದ್ದಾರೆ.



ರಾಜರ ಕಾಲದ ಗತವೈಭವ ಸಾರುವ ವಿಶ್ವ ಪ್ರಸಿದ್ಧ ಮೈಸೂರು ಅರಮನೆಯ ಸೌಂದರ್ಯಕ್ಕೆ ಸರಿಸಾಟಿಯೇ ಇಲ್ಲ. ಶತಮಾನ ಪೂರೈಸಿರುವ ಇಂಡೋ ಸಾರ್ಸನಿಕ್ ಶೈಲಿಯ ಮೈಸೂರು ಅರಮನೆ ಹಿಂದೂ ಗ್ರೀಕ್ ಕಲೆಯ ರೂಪರೇಷೆಗಳಿಂದ ಮಿಳಿತವಾಗಿದೆ. ಅರಮನೆಯ ಹೊರಗೆ ಹಾಗೂ ಒಳಗೆ ಇರುವ ಕುಸುರಿ ಕೆತ್ತನೆಯ ಸ್ತಂಭಗಳು, ಕಮಾನು, ಮಂಟಪ ಹಾಗೂ ಗೋಪುರಗಳ ಅಂದ ಕಣ್ಮನ ಸೆಳೆಯುತ್ತದೆ. ಇಂತಹ ಸುಂದರ ಅರಮನೆಯ ಗಾಜಿನ ಗೋಪುರದ ಮೇಲೆ ಟಾರ್ಪಾಲ್



ಹೊದಿಸಿರುವುದು ಅಸಹ್ಯ ಹಾಗೂ ನಾಚಿಕೆಗೇಡಿನ ಸಂಗತಿ ಎಂದು ಸಂದರ್ಶಕರು ಬೇಸರ ವ್ಯಕ್ತಪಡಿಸಿದ್ದಾರೆ.

ಮೈಸೂರು ಅರಮನೆ ನಿರ್ಮಾಣದ ಹಿನ್ನೆಲೆ ಕುತೂಹಲಕಾರಿಯಾಗಿದೆ. ಅದು 1897, ಫೆಬ್ರವರಿ 28. ಚಾಮರಾಜೇಂದ್ರ ಒಡೆಯರ್ ಹಾಗೂ ವಾಣಿವಿಲಾಸ ಅವರ ಪುತ್ರಿ ಜಯಲಕ್ಷಮ್ಮಣ್ಣಿ ಹಾಗೂ ಸರ್ದಾರ್ ಕಾಂತರಾಜೇ ಅರಸ್ ಅವರ ಮದುವೆ ದಿನ. ಧಾರೆ ಸೇರಿದಂತೆ ಎಲ್ಲಾ ಕಾರ್ಯಗಳು ಮಧ್ಯಾಹ್ನದ ವೇಳೆಗೆ ಮುಗಿಯಿತು. ತರುವಾಯ ಸಂಜೆ ಜಯಲಕ್ಷಮ್ಮಣ್ಣಿ ಅವರ ಕೂದಲಿಗೆ ಸಾಂಬ್ರಾಣಿ ಹೊಗೆ ಕೊಡುವಾಗ ಕೆಂಡವೊಂದು ತೇಗದ ಮರಕ್ಕೆ ತಾಗಿ ಬೆಂಕಿ ಹೊತ್ತಿಕೊಂಡಿತು. ಸಾವಿರಾರು ಜನರು ಬೆಂಕಿ ನಂದಿಸುವ ಕಾರ್ಯದಲ್ಲಿ ತೊಡಗಿದರೂ ಸಾಧ್ಯವಾಗದೆ ಮರದ ಅರಮನೆ, ಸತತ ಮೂರು ದಿನ ದಹಿಸಿ, ಸಂಪೂರ್ಣವಾಗಿ ಭಸ್ಮವಾಯಿತು. ಆದರೆ ಯಾರಿಗೂ ಪ್ರಾಣಾಪಾಯವಾಗಲಿಲ್ಲ. ತರುವಾಯ ರಾಜ ಪರಿವಾರದವರು ಮೈಸೂರಿನ ಜಗನ್ಮೋಹನ ಅರಮನೆಯಲ್ಲಿ ವಾಸ್ತವ್ಯ ಹೂಡಿದರು.

ಮರದ ಅರಮನೆಯಂತೆ ಅದೇ ಸ್ಥಳದಲ್ಲಿ ಮತ್ತೊಂದು ಅರಮನೆ ನಿರ್ಮಾಣ ಮಾಡಲು ರಾಜ ಪರಿವಾರ ತೀರ್ಮಾನಿಸಿತು. ಮದ್ರಾಸ್ ಸರ್ಕಾರದಲ್ಲಿ ಖ್ಯಾತ ವಾಸ್ತುಶಿಲ್ಪಿಯಾಗಿದ್ದ ಹೆನ್ರಿ ಇರ್ವಿನ್ ಅವರಿಗೆ ಅರಮನೆ ನಿರ್ಮಾಣದ ಜವಾಬ್ದಾರಿ ವಹಿಸಲಾಯಿತು. ಆದರೆ ಮರದ ಅರಮನೆಯ ಕಲ್ಪನೆ ಹೆನ್ರಿ ಇರ್ವಿನ್‌ಗೆ ಇರಲಿಲ್ಲ. ಈ ವೇಳೆ ಬ್ರಿಟಿಷ್ ಸೈನಿಕನೊಬ್ಬ ಕ್ಯಾಮರಾದಲ್ಲಿ ಸೆರೆ ಹಿಡಿದಿದ್ದ ಮರದ ಅರಮನೆಯ ಫೋಟೋ ಆಧರಿಸಿ ಹೆನ್ರಿ ಇರ್ವಿನ್ ಉದ್ದೇಶಿತ ಅರಮನೆ ನಕ್ಷೆ ತಯಾರಿಸಿದರು. ಇಂಡೋ ಸಾರ್ಸನಿಕ್ ಶೈಲಿಯಲ್ಲಿ ಅರಮನೆ ನಿರ್ಮಿಸಲು ರಾಜ ಪರಿವಾರದವರು ನಾಗರಾಜು ಎಂಬ ಕಲಾವಿದನನ್ನು ಯೂರೋಪ್ ದೇಶಕ್ಕೆ ಅಧ್ಯಯನಕ್ಕೆ ಕಳುಹಿಸಿದರು. ಅಲ್ಲಿ ಅಧ್ಯಯನ ನಡೆಸಿ, ನಾಗರಾಜು ವರದಿ ತಯಾರಿಸಿದರು. ತರುವಾಯ ಅರಮನೆ ಇಂಜಿನಿಯರ್ ಬಿ.ಪಿ.ರಾಘವಲು ನಾಯ್ಡು, ನಾಗರಾಜು ಹಾಗೂ ಹೆನ್ರಿ ಇರ್ವಿನ್ ಸೇರಿ ಮೈಸೂರು ಅರಮನೆಗೆ ಹೊಸ ರೂಪ ನೀಡಿದರು.

ಮರದ ಅರಮನೆಗೆ ಬೆಂಕಿ ಬಿದ್ದ ವರ್ಷದಲ್ಲೆ ನವಂಬರ್ ತಿಂಗಳಲ್ಲೇ ನೂತನ ಮೈಸೂರು ಅರಮನೆ ನಿರ್ಮಾಣ ಕಾಮಗಾರಿ ಆರಂಭಿಸಲಾಯಿತು. ರಾಜಪರಿವಾರದವರು, ಹೆನ್ರಿ ಇರ್ವಿನ್‌ಗೆ ಆಗಿನ ಕಾಲಕ್ಕೆ 12 ಸಾವಿರ ರೂಪಾಯಿ ನೀಡಿದ್ದರು. ದರ್ಬಾರ್ ಹಾಲ್ ಹಾಗೂ ಕಲ್ಯಾಣ ಮಂಟಪದ ಗಾಜಿನ ಗೋಪುರ ನಿರ್ಮಾಣಕ್ಕೆ ಜರ್ಮನಿ ಹಾಗೂ ಇಟಲಿಯಿಂದ ಕಲಾವಿದರನ್ನು ಕರೆಸಲಾಯಿತು. ನುರಿತ ಕಲಾವಿದರು ಗಾಜಿನ ಮೇಲೆ ಅಷ್ಟ ಭುಜಾಕೃತಿಯ ನವಿಲಿನ ಚಿತ್ರ ಬಿಡಿಸಿದರು. ಆ ಚಿತ್ರ ಗಾಜಿನ ಮಧ್ಯೆ ಇಳಿಸಲು ಫೈರ್ ಟೆಕ್ನಾಲಜಿ ಬಳಸಿದರು. ಅಂದರೆ ನವಿಲು ಚಿತ್ರ ಬಿಡಿಸಿರುವ ಗಾಜಿಗೆ ಬೆಂಕಿ ಶಾಖ ನೀಡಿದರು. ಆಗ ಆ ಚಿತ್ರ ಗಾಜಿನ ಮಧ್ಯೆ ಇಳಿಯಿತು. ಇದರಿಂದ ಗಾಜಿನ ಚಿತ್ರಕ್ಕೆ ಮಳೆ, ಬಿಸಿಲಿನಿಂದ ರಕ್ಷಣೆಯಾಯಿತು. ಇಲ್ಲಿಯವರೆಗೆ ಗಾಜು ಒಡೆಯದಂತೆ ಹಾಗೂ ನವಿಲಿನ ಚಿತ್ರ ಮಾಸದಂತೆ ಗೋಪುರ ಸಂರಕ್ಷಿಸಲಾಗಿತ್ತು.

ಗೋಪುರದಿಂದ ಅಗತ್ಯ ಬಿದ್ದಾಗ ಗಾಳಿ ಹಾಗೂ ಬೆಳಕು ಬೀಳುವಂತೆ ಓಪನ್ ಟು ಸ್ಕೈ ಟೆಕ್ನಾಲಜಿ ಬಳಸಿದ್ದರು. ಇದರಿಂದ ದರ್ಬಾರ್ ಹಾಲ್ ಅಥವಾ ಕಲ್ಯಾಣ ಮಂಟಪದಲ್ಲಿ ಯಾವುದೇ ರೀತಿ ತಾಪ ಆಗದಂತೆ ಪ್ಲಾನ್ ಮಾಡಿದ್ದರು.

ಅಂದಿನ ಇಟಲಿ ಹಾಗೂ ಜರ್ಮನಿಯ ಕಲಾವಿದರ ಕೈ ಚಳಕದಲ್ಲಿ ಮೂಡಿ ಬಂದಿರುವ ನವಿಲು ಆಕೃತಿಯ ಗಾಜಿನ ಗೋಪುರ ಅತ್ಯಂತ ಆಕರ್ಷಣೀಯವಾಗಿದೆ. ಕಲೆ, ಚಿತ್ರಕಲೆ ಹಾಗೂ ಇಂಜಿನಿಯರಿಂಗ್ ಟೆಕ್ನಾಲಜಿ ಈ ಗೋಪುರದಲ್ಲಿ ಮಿಳಿತವಾಗಿದೆ. ತ್ರಿ ಡಿ ಪೇಂಟಿಂಗ್ ಇರುವ ಗಾಜಿನ ಗೋಪುರ ನೋಡಿದರೆ ಕಣ್ಮನ ಸೆಳೆಯುತ್ತದೆ. ನಾವು ಯಾವ ಕಡೆ ನೋಡಿದರೂ ನವಿಲು ಅತ್ತ ಕಾಣಿಸುವಂತೆ ತ್ರಿ ಡಿ ಪೇಂಟಿಂಗ್ ಮಾಡಿಸಲಾಗಿದೆ.

1987ರಲ್ಲಿ ಆರಂಭವಾದ ಮೈಸೂರು ಅರಮನೆ ನಿರ್ಮಾಣ 1912ರಲ್ಲಿ ಪೂರ್ಣಗೊಂಡಿತು. ಮೈಸೂರು ಅರಮನೆಗಾಗಿ ರಾಜ ಪರಿವಾರದವರು 41,47,913



ರೂಪಾಯಿ ವೆಚ್ಚ ಮಾಡಿದರು. ಗಾಜಿನ ಗೋಪುರದ ನಿರ್ಮಾಣವಂತೂ ಅತ್ಯಂತ ಕಲಾತ್ಮಕವಾಗಿತ್ತು. ಗೋಪುರದ ಕೆಳಗೆ ಬಿಸಿಲು, ಮಳೆ ಬೀಳದಂತೆ ಹಾಗೂ ನೆರಳಾಗುವಂತೆ ಗಟ್ಟಿ ಮುಟ್ಟಾಗಿತ್ತು.

ಆದರೆ ಈಗ ಇದೇ ದರ್ಬಾರ್ ಹಾಲ್ ಹಾಗೂ ಕಲ್ಯಾಣ ಮಂಟಪದ ಗಾಜಿನ ಗೋಪುರ ಮಾಸಿ ಹೋಗಿದೆ. ಸೂಕ್ತ ನಿರ್ವಹಣೆ ಇಲ್ಲದ ಕಾರಣ ಕಳೆದ 40 ವರ್ಷಗಳಿಂದ ಗಾಜು ಬಿರುಕುಗೊಳ್ಳುತ್ತಿದೆ. ಗಾಜು ಬಿರುಕು ಬಿಟ್ಟು ಮಳೆ ನೀರು ಸೋರಿದಾಗ ನವಿಲು ಆಕೃತಿಯ ಗಾಜುಗಳನ್ನು ತೆರವು ಮಾಡಿ ಆ ಸ್ಥಳದಲ್ಲಿ ಬೇರೆ ಗ್ಲಾಸ್‌ಗಳನ್ನು ಅಳವಡಿಸುತ್ತಾ ಬರಲಾಗಿದೆ. ಇದರಿಂದ ದರ್ಬಾರ್ ಹಾಲ್ ಹಾಗೂ ಕಲ್ಯಾಣ ಮಂಟಪದ ಗಾಜಿನ ಗೋಪುರದಲ್ಲಿ ನವಿಲು ಆಕೃತಿಯ ಗಾಜುಗಳು ಮಾಯವಾಗಿವೆ. ಮಧ್ಯೆ ಮಧ್ಯೆ ಸಾದಾ ಗ್ಲಾಸ್‌ಗಳನ್ನು ಅಳವಡಿಸಿರುವ ಕಾರಣ ಒಂದು ಮತ್ತೊಂದಕ್ಕೆ ಸಂಬಂಧ ಇಲ್ಲದಂತಾಗಿದೆ.

ಇಟಲಿ ಹಾಗೂ ಜರ್ಮನಿಯ ಕಲಾವಿದರಂತೆ ನವಿಲು ಆಕೃತಿಯ ಗಾಜುಗಳನ್ನು ರೂಪಿಸಲು ಭಾರತದಲ್ಲಿ ಪೂನಾ ಹಾಗೂ ಕೇರಳದಲ್ಲಿರುವ ಇಬ್ಬರು ಕಲಾವಿದರಿಗೆ ಮಾತ್ರ ಸಾಧ್ಯ. ಈ ಇಬ್ಬರು, ಚೆನ್ನೈ ಹೈಕೋರ್ಟ್ ಹಾಗೂ ಕೊಲ್ಕತ್ತಾದಲ್ಲಿ ಇದೇ ಮಾದರಿಯ ಗಾಜಿನ ಗೋಪುರಗಳನ್ನು ಹೊಸದಾಗಿ ನಿರ್ಮಿಸಿದ್ದಾರೆ. ಮೈಸೂರು ಅರಮನೆಗೆ ಅವರನ್ನೆ ಕರೆಸಿ ಗಾಜಿನ ಗೋಪುರಗಳಲ್ಲಿ ಬಿರುಕು ಬಿಟ್ಟಿರುವ ನವಿಲು ಆಕೃತಿಯ ಗಾಜುಗಳನ್ನು ಹೊಸದಾಗಿ ಅಳವಡಿಸಲು ಮೈಸೂರು ಅರಮನೆ ಮಂಡಳಿ ತೀರ್ಮಾನಿಸಿತು.

ಈ ಸಂಬಂಧ 2012 ರಲ್ಲಿ ರೀಜಿನಲ್ ಕನ್ಸರ್ವೇಟಿವ್ ಲ್ಯಾಬೋರೇಟರಿ ಅಧಿಕಾರಿಗಳು ತಜ್ಞರನ್ನು ಕರೆಸಿದ್ದರು. ಆದರೆ ನವಿಲು ಆಕೃತಿಯ ಗಾಜು ಅಳವಡಿಸಲು ಚೌಕಾಸಿ ಮಾಡುವುದರೊಂದಿಗೆ, ಅವರನ್ನು ಮೈಸೂರಿಗೆ ಅಲೆಸಿದ ಕಾರಣ ಅವರು ಈ ಕೆಲಸದಲ್ಲಿ ಆಸಕ್ತಿ ಕಳೆದುಕೊಂಡರು. ಇದರಿಂದ ಹತ್ತು ವರ್ಷದ ಹಿಂದೆ ಆರಂಭವಾದ ಪ್ರಕ್ರಿಯೆ ಅಂದೇ ನಿಂತಿತು.

ಈಗ ದರ್ಬಾರ್ ಹಾಲ್ ಹಾಗೂ ಕಲ್ಯಾಣ ಮಂಟಪದ ಗಾಜಿನ ಗೋಪುರದ ಮೇಲೆ ಜರ್ಮನ್ ಟಾರ್ಪಾಲ್ ಹೊದಿಸಿ ಹಗ್ಗ ಬಿಗಿಯಲಾಗಿದೆ. ಅದು ಕೂಡ ಎರಡು ವರ್ಷಕ್ಕೊಮ್ಮೆ ಸತ್ವ ಕಳೆದುಕೊಂಡು ಮತ್ತೆ ಮಳೆ ನೀರು ಗೋಪುರದಿಂದ ಸುರಿಯುತ್ತಿದೆ. ಈ ಕಾರಣ ಆಗಾಗ ಟಾರ್ಪಾಲ್ ಬದಲಾಯಿಸಲಾಗುತ್ತಿದೆ. ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಫೌಂಡೇಷನ್ ವತಿಯಿಂದ ಗಾಜಿನ ಗೋಪುರ ನವೀಕರಿಸಲು ಪ್ರಮೋದಾದೇವಿ ಒಡೆಯರ್ ಆಸಕ್ತಿ ತೋರಿದ್ದರು. ಆದರೆ ಸರ್ಕಾರದ ನೀತಿ ನಿಯಮಗಳು ಅಡ್ಡವಾಯಿತು.

ಪ್ರತಿ ವರ್ಷ ಮೈಸೂರು ಅರಮನೆಗೆ ಕೋಟ್ಯಾಂತರ ರೂಪಾಯಿ ಆದಾಯ ಬರುತ್ತದೆ. ಆ ಹಣದಲ್ಲಿಯಾದರೂ ನಿರ್ವಹಣೆ ಮಾಡಬಹುದಲ್ಲವೇ? ಎಂದು ಪ್ರವಾಸಿಗರು ಬೇಸರ ವ್ಯಕ್ತಪಡಿಸುತ್ತಿದ್ದಾರೆ.

ಗಾಜಿನ ಗೋಪುರಕ್ಕೆ ಅಳವಡಿಸಿರುವ ಗಾಜುಗಳನ್ನು ಕೂಡಲೇ ನವೀಕರಿಸದಿದ್ದರೆ ಮುಂದೊಂದು ದಿನ ಇಡೀ ಗೋಪುರವೇ ಕುಸಿದು ಬೀಳುವ ಆತಂಕವಿದೆ.



ಮೈಸೂರು ಅರಮನೆ ದರ್ಬಾರ್ ಹಾಲ್ ಹಾಗೂ ಕಲ್ಯಾಣ ಮಂಟಪದ ಗಾಜಿನ ಗೋಪುರದ ಗಾಜುಗಳು ಒಡೆದಿವೆ. ಅಲ್ಲಿ ಅದೇ ಮಾದರಿಯ ಗಾಜುಗಳನ್ನು ಪುನರ್ ಅಳವಡಿಸುವ ಬಗ್ಗೆ ಚಿಂತನೆ ಇದೆ.

–ಡಾ.ಕೆ.ವಿ.ರಾಜೇಂದ್ರ, ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾಧಿಕಾರಿ



ನಾನು ನೋಡಿದಂತೆ ಕಳೆದ 40 ವರ್ಷದಿಂದ ದರ್ಬಾರ್ ಹಾಲ್ ಹಾಗೂ ಕಲ್ಯಾಣ ಮಂಟಪದ ಗಾಜಿನ ಗೋಪುರದ ನವಿಲು ಆಕೃತಿಯ ಗಾಜುಗಳು ಒಂದೊಂದಾಗಿ ಒಡೆದು ಹೋಗುತ್ತಿವೆ. ಕೂಡಲೇ ಇದನ್ನು ನವೀಕರಿಸಬೇಕು. ಗಾಜಿನ ಗೋಪುರವನ್ನು ನವೀಕರಿಸದಿದ್ದರೆ ಅದು ತನ್ನ ನೈಜತೆ ಕಳೆದುಕೊಳ್ಳುತ್ತದೆ. ಇದು ಸರ್ಕಾರದ ಜವಾಬ್ದಾರಿಯೂ ಆಗಿರುವ ಕಾರಣ ಕೂಡಲೇ ನವೀಕರಣ ಕಾರ್ಯ ಕೈಗೊಳ್ಳಬೇಕು.

– ಪ್ರೊ.ನಂಜರಾಜೇ ಅರಸ್, ಇತಿಹಾಸ ತಜ್ಞ



ದರ್ಬಾರ್ ಹಾಲ್ ಹಾಗೂ ಕಲ್ಯಾಣ ಮಂಟಪದ ಗಾಜಿನ ಗೋಪುರ ನವೀಕರಿಸಲು 2012 ರಲ್ಲೇ ಪ್ರಯತ್ನಿಸಲಾಯಿತು. ಆದರೆ ಕೆಲವು ಕಾರಣಗಳಿಂದ ಅದು ಸಾಧ್ಯವಾಗಲಿಲ್ಲ. ಈಗ ಗಾಜಿನ ಗೋಪುರದಲ್ಲಿ ಬಿರುಕು ಬಿಟ್ಟಿರುವ ನವಿಲು ಆಕೃತಿಯ ಗಾಜುಗಳನ್ನು ಅಳವಡಿಸಲು ತಜ್ಞ ಕಲಾವಿದರನ್ನು ಕರೆಸಬೇಕು. ಇದಕ್ಕೂ ಮೊದಲು ತಜ್ಞರಿರುವ ಸಮಿತಿ ರಚನೆ ಆಗಬೇಕು. ತರುವಾಯ ಸಮಿತಿ ವರದಿ ಆಧರಿಸಿ ನವೀಕರಣ ಕಾರ್ಯ ಆರಂಭಿಸಬೇಕಿದೆ.

– ಸುಬ್ರಹ್ಮಣ್ಯ, ಉಪ ನಿರ್ದೇಶಕರು, ಅರಮನೆ ಮಂಡಳಿ

ಬಂಡೀಪುರದಲ್ಲಿ ಗಾಯಗೊಂಡಿದ್ದ ಗಂಡಾನೆ ಮರಿ ಸಾವು



ಮೈಸೂರು,ಆ.28(ಎಂಟಿವೈ)– ಅಸ್ವಸ್ಥಗೊಂಡಿದ್ದ ಕಾಡಾನೆ ಮರಿ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದೆ. ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಕುಂದಕರೆ ವಲಯದಲ್ಲಿ ಈ ಘಟನೆ ನಡೆದಿದೆ.

ಬಂಡೀಪುರದ ಗುಂಡ್ಲುಪೇಟೆ ಉಪವಿಭಾಗದ ಕುಂದಕೆರೆ ವಲಯದ ಹೊನ್ನೆಮರದ ತಿಟ್ಟು ಸಮೀಪದ ಜಾನುವಾರು ತಡೆ ಕಂದಕದಲ್ಲಿ 3–4 ವರ್ಷದ ಕಾಡಾನೆಯ ಗಂಡು ಮರಿ ನಿತ್ರಾಣ ಸ್ಥಿತಿಯಲ್ಲಿ ಆ.24ರಂದು ಕಂಡು ಬಂದಿತ್ತು. ವಿಷಯ ತಿಳಿದು ಎಸಿಎಫ್ ಜಿ.ರವೀಂದ್ರ, ಆರ್‌ಎಫ್‌ಓ ದೀಪಾ ಹಾಗೂ ಇನ್ನಿತರರು ಕಂದಕದಲ್ಲಿ ಆನೆ ಮರಿ ಪತ್ತೆಹಚ್ಚಿದ್ದರು. ಅದರ ತಲೆಗೆ ಗಾಯವಾಗಿರುವುದು ಕಂಡು ಬಂದಿತ್ತು. ಕೂಡಲೇ ಪಶುವೈದ್ಯ ಡಾ.ಮಿರ್ಜಾ ವಾಸೀಂ ಅವರಿಂದ ಚಿಕಿತ್ಸೆ ಕೊಡಿಸಲಾಗಿತ್ತು.

ಅಲ್ಲದೆ, ಅದನ್ನು ಅರಣ್ಯ ಪ್ರದೇಶದ ಸುರಕ್ಷಿತ ಸ್ಥಳಕ್ಕೆ ಬಿಡಲಾಗಿತ್ತು. ಅಂದಿನಿಂದ ಅದರ ಮೇಲೆ ನಿಗಾ ವಹಿಸಲು ಸಿಬ್ಬಂದಿಗೆ ಸೂಚಿಸಲಾಗಿತ್ತು. ಆದರೆ, ಆ.27 ರಂದು ಮತ್ತೆ ಕಂದಕಕ್ಕೆ ಬಿದ್ದು ನಿತ್ರಾಣಗೊಂಡ ಸ್ಥಿತಿಯಲ್ಲಿದ್ದ ಆನೆ ಮರಿಗೆ ಮತ್ತೆ ಚಿಕಿತ್ಸೆ ಮುಂದುವರೆಸಲಾಗಿತ್ತು. ಅದಕ್ಕೆ ಕಬ್ಬು, ಬಾಳೆ, ಜೋಳದ ಹುಲ್ಲನ್ನು ನೀಡಲಾಗಿತ್ತು. ಆದರೆ, ಆಹಾರ ಸೇವಿಸದೇ ಅದರ ಆರೋಗ್ಯದಲ್ಲಿ ಮತ್ತಷ್ಟು ಏರುಪೇರಾಗಿ ಚಿಕಿತ್ಸೆಗೆ ಸ್ಪಂದಿಸದೆ ಸೋಮವಾರ ಮಧ್ಯಾಹ್ನ ಮೃತಪಟ್ಟಿದೆ.

ಸ್ಥಳಕ್ಕೆ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಡಾ.ಪಿ.ರಮೇಶ್ ಕುಮಾರ್, ಎಸಿಎಫ್ ಜಿ.ರವೀಂದ್ರ ಕುಂದಕೆರೆ ವಲಯದ ಆರ್‌ಎಫ್‌ಓ ಡಿ.ಶ್ರೀನಿವಾಸ್, ಎನ್‌ಜಿಓ ಸದಸ್ಯ ಆರ್.ರಘುರಾಮ್ ಸಮ್ಮುಖದಲ್ಲಿ ಪಶುವೈದ್ಯ ಡಾ. ಮಿರ್ಜಾ ವಾಸೀಂ ಮರಣೋತ್ತರ ಪರೀಕ್ಷೆ ನಡೆಸಿದರು. ಬಳಿಕ ನಿಯಮಾನುಸಾರ ಆನೆ ಮರಿ ಕಳೇಬರವನ್ನು ಅರಣ್ಯ ಪ್ರದೇಶದಲ್ಲಿ ಇತರ ಪ್ರಾಣಿಗಳ ಆಹಾರಕ್ಕಾಗಿ ಇಡಲಾಯಿತು. ಈ ಸಂದರ್ಭದಲ್ಲಿ ಡಿಆರ್‌ಎಫ್ ಬಿ.ಮನೋಹರ್, ಗಸ್ತುಪಾಲಕ ಡಿ.ಮಹೇಶ್, ವಿಶ್ವನಾಥ್ ಹಾಗೂ ಇನ್ನಿತರ ಸಿಬ್ಬಂದಿಗಳಿದ್ದರು.

ಇಂದು ಮೃಗಾಲಯಕ್ಕೆ ಪ್ರವೇಶಾವಕಾಶ

ಮೈಸೂರು,ಆ.28(ಎಂಟಿವೈ)– ಕೇರಳದ ಪ್ರಸಿದ್ಧ ಹಬ್ಬ ಓಣಂ ಆಚರಣೆ ಹಿನ್ನೆಲೆಯಲ್ಲಿ ಆ.29(ಮಂಗಳವಾರ) ಮೃಗಾಲಯದ ವಾರದ ರಜೆ ರದ್ದು ಮಾಡಿ, ಪ್ರವಾಸಿಗರ ವೀಕ್ಷಣೆಗೆ ಅವಕಾಶ ನೀಡಲಾಗಿದೆ ಎಂದು ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕ ಡಿ. ಮಹೇಶ್‌ಕುಮಾರ್ ತಿಳಿಸಿದ್ದಾರೆ.

ಓಣಂ ರಜೆ ಹಿನ್ನೆಲೆಯಲ್ಲಿ ಮೈಸೂರಿಗೆ ವಿವಿಧೆಡೆಯಿಂದ ಬರುವ ಪ್ರವಾಸಿಗರ ಸಂಖ್ಯೆ ಹೆಚ್ಚಾಗಿರುವುದರಿಂದ ಮೃಗಾಲಯ ಹಾಗೂ ಕಾರಂಜಿಕೆರೆಗೆ ಎಂದಿನಂತೆ ಪ್ರವಾಸಿಗರು ಬೆಳಗ್ಗೆ 8.30ರಿಂದ ಸಂಜೆ 5 ಗಂಟೆವರೆಗೆ ಮೃಗಾಲಯಕ್ಕೆ ಭೇಟಿ ನೀಡಬಹುದಾಗಿದೆ.

ನಾಳೆ ಯಜುರ್ ಉಪಾಕರ್ಮ

ಮೈಸೂರು, ಆ.28–ನಗರದ ಸರಸ್ವತಿಪುರಂ 1ನೇ ಮುಖ್ಯ ರಸ್ತೆಯಲ್ಲಿರುವ (ಸರಸ್ವತಿ ಚಿತ್ರಮಂದಿರದ ಮುಂಭಾಗ) ಶ್ರೀ ವೈಷ್ಣವ ಸಭಾ ವತಿಯಿಂದ ಆ.30 ರಂದು ಬುಧವಾರ ಬೆಳಗ್ಗೆ 8.30 ಗಂಟೆಗೆ ಶ್ರೀ ಶೋಭಕೃತ್ ನಾಮ ಸಂವತ್ಸರ ಯಜುರ್ ಉಪಾಕರ್ಮವನ್ನು ಆಯೋಜಿಸಲಾಗಿದೆ. ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ಶ್ರೀ ವೈಷ್ಣವ ಸಭಾದ ಕಾರ್ಯದರ್ಶಿ ಹೆಚ್.ಜಿ.ಸತ್ಯನಾರಾಯಣ್ ತಿಳಿಸಿದ್ದಾರೆ. ಮಾಹಿತಿಗೆ ಮೊಬೈಲ್ 9480194204 ಸಂಪರ್ಕಿಸುವುದು.

ಕೈಗಾರಿಕೆಗಾಗಿ ಭೂಮಿ ನೀಡಿದ ರೈತರ ಮಕ್ಕಳಿಗೆ ಉದ್ಯೋಗಕ್ಕೆ ಆಗ್ರಹಿಸಿ ಪ್ರತಿಭಟನೆ



ನಂಜನಗೂಡು, ಆ.28– ಕಡಕೊಳ ಕೈಗಾರಿಕಾ ಪ್ರದೇಶದಲ್ಲಿರುವ ಸಿರನ್, ಎಸ್.ಕೆ.ಎಫ್, ಆಟೋಲಿವ್ ಕಾರ್ಖಾನೆಗಳಿಗಾಗಿ ಭೂಮಿ ಕಳೆದುಕೊಂಡ ರೈತರ ಮಕ್ಕಳಿಗೆ ಉದ್ಯೋಗ ನೀಡುವಂತೆ ಒತ್ತಾಯಿಸಿ ಸಾಮೂಹಿಕ ನಾಯಕತ್ವದ ರೈತಸಂಘದ ಪದಾಧಿಕಾರಿಗಳು ಹಾಗೂ ಭೂಮಿ ಕಳೆದುಕೊಂಡ ರೈತರು ಕಾರ್ಖಾನೆಗಳ ಮುಂಭಾಗ ಬೃಹತ್ ಪ್ರತಿಭಟನೆ ನಡೆಸಿದರು.

ಕಡಕೊಳ ಕೈಗಾರಿಕಾ ಪ್ರದೇಶದಲ್ಲಿರುವ ಸಿರನ್ ಕಾರ್ಖಾನೆಯ ಬಳಿ ಜಮಾವಣೆಗೊಂಡ ಭೂಮಿ ಕಳೆದುಕೊಂಡ ರೈತರ ಕುಟುಂಬದವರು ಮತ್ತು ರೈತ ಸಂಘದ ಪದಾಧಿಕಾರಿಗಳು, ಕಾರ್ಖಾನೆಯ ಆಡಳಿತ ಮಂಡಳಿ ವಿರುದ್ಧ ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿ, ಆಕ್ರೋಶ ವ್ಯಕ್ತಪಡಿಸಿದರು.

ಸಾಮೂಹಿಕ ನಾಯಕತ್ವದ ರೈತ ಸಂಘದ ಜಿಲ್ಲಾಧ್ಯಕ್ಷ ಟಿ.ಆರ್.ವಿದ್ಯಾಸಾಗರ್ ಮಾತನಾಡಿ, ನಂಜನಗೂಡು ತಾಲೂಕಿನ ಹಿಮ್ಮಾವು, ಅಡಕನಹಳ್ಳಿ, ಕಡಕೊಳ ಕೈಗಾರಿಕಾ ಪ್ರದೇಶದಲ್ಲಿ ಸ್ಥಾಪನೆಯಾಗಿರುವ ಕೈಗಾರಿಕೆಗಳು, ಭೂಮಿ ಕಳೆದುಕೊಂಡ ರೈತರ ಮಕ್ಕಳಿಗೆ ಉದ್ಯೋಗ ನೀಡದೆ ವಂಚಿಸುತ್ತಿವೆ. ಶೇಕಡ 33 ರಷ್ಟು ಸ್ಥಳೀಯರಿಗೆ ಉದ್ಯೋಗ ನೀಡಬೇಕೆಂಬ ನಿಯಮವಿದ್ದರೂ ಸಹ ಕಾರ್ಖಾನೆಗಳು ನಿಯಮ ಪಾಲಿಸುತ್ತಿಲ್ಲ, ತಮ್ಮ ಹುಟ್ಟುಹಬ್ಬಕ್ಕೆ ಉದ್ಯೋಗ ಮೇಳ ಏರ್ಪಡಿಸುತ್ತೇವೆಂದು ಹೇಳಿಕೊಳ್ಳುವ ರಾಜಕಾರಣಿಗಳು ಬರೀ ಬ್ಯಾನರ್ ಮೇಲೆ ಹೆಸರಿಗೆ ಮಾತ್ರ ಉದ್ಯೋಗ ಮೇಳಗಳನ್ನು ಆಯೋಜಿಸಿ ವಂಚಿಸುತ್ತಿದ್ದಾರೆ. ಉದ್ಯೋಗ ಮೇಳ ಆಯೋಜಿಸುವ ರಾಜಕಾರಣಿಗಳು ರೈತರ ಮಕ್ಕಳಿಗೆ ಮೊದಲು ಉದ್ಯೋಗ ದೊರಕಿಸಿಕೊಡುವ ಕೆಲಸವನ್ನು ಮಾಡಬೇಕಿದೆ ಎಂದು ಹರಿಹಾಯ್ದರು.

ಕಾರ್ಖಾನೆಗಳ ಉದ್ದೇಶಕ್ಕಾಗಿ ಹಾಗೂ ಕೈಗಾರಿಕಾ ಪ್ರದೇಶದ ರಸ್ತೆಗಳಿಗೆ, ಕೈಗಾರಿಕಾ ನೀರು ಸರಬರಾಜು ಕೇಂದ್ರಕ್ಕೆ, ವಿದ್ಯುತ್ ಸರಬರಾಜು ಕೇಂದ್ರಕ್ಕೆ, ಮತ್ತು ಇನ್ನಿತರ ಕೈಗಾರಿಕಾ ಉದ್ದೇಶಕ್ಕೆ ಭೂಮಿ ಕಳೆದುಕೊಂಡ ರೈತರ ಮಕ್ಕಳಿಗೆ ಕಾರ್ಖಾನೆಗಳು ಉದ್ಯೋಗ ನೀಡಲು ಮುಂದಾಗಬೇಕು. ಅಲ್ಲದೆ ಕಡಕೊಳ ಕೈಗಾರಿಕಾ ಪ್ರದೇಶದಲ್ಲಿರುವ ಸಿರನ್, ಎಸ್.ಕೆ.ಎಫ್, ಆಟೋಲಿವ್ ಕಾರ್ಖಾನೆಗಳಿಗಾಗಿ ಭೂಮಿ ಕಳೆದುಕೊಂಡ ರೈತರ ಮಕ್ಕಳಿಗೆ ಕಾರ್ಖಾನೆಗಳು ಈ ಕೂಡಲೇ ಉದ್ಯೋಗ ನೀಡಲು ಮುಂದಾಗಬೇಕು, ಇಲ್ಲವಾದಲ್ಲಿ ಕಾರ್ಖಾನೆಗಳಿಗೆ ಬೀಗ ಜಡಿದು ಉಗ್ರ ಪ್ರತಿಭಟನೆಯನ್ನು ನಡೆಸಲಾಗುವುದು ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ರೈತಸಂಘದ ಜಿಲ್ಲಾ ಕಾರ್ಯದರ್ಶಿ ಹಿಮ್ಮಾವು ರಘು, ರೈತ ಸಂಘದ ತಾಲೂಕು ಅಧ್ಯಕ್ಷ ಸತೀಶ್ ರಾವ್, ಹಸಿರುಸೇನೆ ಅಧ್ಯಕ್ಷ ಬಂಗಾರನಾಯಕ, ಶಂಕರನಾಯಕ, ಶಿವಣ್ಣ, ಶೈಲಜಾ, ಸಿದ್ದಮ್ಮ, ಸವಿತಮ್ಮ, ಮಹದೇವಮ್ಮ ಸೇರಿದಂತೆ ಭೂಮಿ ಕಳೆದುಕೊಂಡ ರೈತರ ಕುಟುಂಬ ವರ್ಗದವರು ಮತ್ತು ರೈತಸಂಘದ ಪದಾಧಿಕಾರಿಗಳು ಹಾಜರಿದ್ದರು.

ಕೈಯಲ್ಲಿ ಪೆಟ್ರೋಲ್ ತುಂಬಿದ ಬಾಟಲಿ ಹಿಡಿದು ಕೆಲಸ ಖಾಯಂ ಮಾಡದ ಕಾರ್ಖಾನೆ ಮುಂದೆ ಪ್ರತಿಭಟನೆ!

ನಂಜನಗೂಡು, ಆ.28– ಖಾಯಂ ನೌಕರಿ ನೀಡುವುದಾಗಿ ಹೇಳಿ ಕಡಿಮೆ ಸಂಬಳಕ್ಕೆ 20 ವರ್ಷಗಳಿಗೂ ಹೆಚ್ಚು ಕಾಲ ದುಡಿಸಿಕೊಂಡು ಖಾಯಂ ನೌಕರಿಯನ್ನು ನೀಡದೆ, ನಮಗೆ ನ್ಯಾಯಯುತವಾಗಿ ಬರಬೇಕಾಗಿರುವ ಪರಿಹಾರದ ಹಣವನ್ನು ಕೊಡದೆ ಸತಾಯಿಸಲಾಗುತ್ತಿದೆ ಎಂದು ಆರೋಪಿಸಿ ನಗರದ ಕಲ್ಲಹಳ್ಳಿ ಕೈಗಾರಿಕಾ ಪ್ರದೇಶದಲ್ಲಿರುವ ನ್ಯೂ ಹಾರಿಜೆನ್ ಕಾರ್ಖಾನೆ ಗೇಟ್ ಮುಂಭಾಗ ಇಬ್ಬರು ಕಾರ್ಮಿಕರು ಪೆಟ್ರೋಲ್ ತುಂಬಿರುವ ಬಾಟಲ್ ಹಿಡಿದು ಆತ್ಮಹತ್ಯೆ ಮಾಡಿಕೊಳ್ಳುವ ಬೆದರಿಕೆಯೊಡ್ಡಿ, ಪ್ರತಿಭಟನೆ ನಡೆಸಿರುವ ಘಟನೆ ಜರುಗಿದೆ.



ಈ ವೇಳೆ ಸ್ಥಳಕ್ಕಾಗಮಿಸಿದ ಪೊಲೀಸರು ಕಾರ್ಮಿಕರನ್ನು ಸಂತೈಸಿ ಕಳುಹಿಸಿದರು. ನ್ಯೂ ಹಾರಿಜೆನ್ ಕಾರ್ಖಾನೆಯಲ್ಲಿ ದಿನಗೂಲಿ ಆಧಾರದ ಮೇಲೆ ದುಡಿದಿದ್ದ ಕಾರ್ಮಿಕರಾದ ಸುರೇಶ ಮತ್ತು ನಾಗಣ್ಣ ಎಂಬುವರು ಸೋಮವಾರ ಕಾರ್ಖಾನೆ ಮುಂಭಾಗ ಪೆಟ್ರೋಲ್ ಬಾಟಲ್ ಹಿಡಿದುಕೊಂಡು ನಮ್ಮನ್ನು ಖಾಯಂ ನೌಕರಿ ನೀಡುವುದಾಗಿ ಹೇಳಿ ಕಡಿಮೆ ಸಂಬಳಕ್ಕೆ 20 ವರ್ಷಗಳಿಗೂ ಹೆಚ್ಚು ಕಾಲ ದುಡಿಸಿಕೊಂಡು ಕಳೆದ 5 ತಿಂಗಳ ಹಿಂದೆ ಖಾಯಂ ಉದ್ಯೋಗ ನೀಡಲು ಸಾಧ್ಯವಿಲ್ಲ, ನೀವು ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡಿ ಇಲ್ಲವಾದಲ್ಲಿ ಪರಿಹಾರ ಪಡೆದು ಕೆಲಸ ಬಿಟ್ಟು ತೆರಳಿ ಎಂದು ಕಾರ್ಖಾನೆ ಆಡಳಿತ ಮಂಡಳಿ ತಿಳಿಸಿದೆ. ಖಾಯಂ ಉದ್ಯೋಗ ಬಿಟ್ಟು ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡಲು ನಮಗೆ ಇಷ್ಟವಿಲ್ಲ. ಆದ್ದರಿಂದ ನಮಗೆ ಪರಿಹಾರ ನೀಡಿ ಎಂದು ಮನವಿ ಪತ್ರವನ್ನು ಸಹ ಬರೆದು ಕೊಟ್ಟಿದ್ದೇವೆ. ಆದರೂ ಸಹ ಕಳೆದ ಐದು ತಿಂಗಳಿಂದ ಕೆಲಸವನ್ನು ನೀಡದೆ, ನಮಗೆ ನ್ಯಾಯಯುತವಾಗಿ ಬರಬೇಕಿರುವ ಬಾಕಿ ಸವಲತ್ತುಗಳನ್ನು ಕೊಡದಂತೆ ತಡೆಯೊಡ್ಡಲಾಗಿದೆ. ನಮಗೆ ನ್ಯಾಯ ಒದಗಿಸಿಕೊಡುವಂತೆ ಸ್ಥಳೀಯ ಶಾಸಕ ದರ್ಶನ್ ಧ್ರುವನಾರಾಯಣ್ ಅವರಿಗೂ ಮನವಿ ನೀಡಲಾಗಿದ್ದು, ಈಗಲಾದರೂ ಕಾರ್ಖಾನೆಯವರು ನಮಗೆ ಪರಿಹಾರ ಒದಗಿಸಬೇಕು. ಇಲ್ಲವಾದಲ್ಲಿ ಪೆಟ್ರೋಲ್ ಸುರಿದುಕೊಂಡು ಆತ್ಮಹತ್ಯೆ ಮಾಡಿಕೊಳ್ಳುತ್ತೇವೆ ಎಂದು ಬೆದರಿಕೆಯೊಡ್ಡಿದರು.

ಕಾರ್ಖಾನೆ ಮುಂಭಾಗ ಕಾರ್ಮಿಕರು ಪ್ರತಿಭಟನೆ ನಡೆಸುತ್ತಿದ್ದರೂ ಸಹ ಕಾರ್ಖಾನೆ ಆಡಳಿತ ಮಂಡಳಿ ನಿರ್ಲಕ್ಷ್ಯ ವಹಿಸಿತ್ತು. ಇದರಿಂದ ರೊಚ್ಚಿಗೆದ್ದ ಪ್ರತಿಭಟನಾ ನಿರತ ಕಾರ್ಮಿಕರು ಮೈ ಮೇಲೆ ಪೆಟ್ರೋಲ್ ಸುರಿದುಕೊಳ್ಳಲು ಮುಂದಾದರು. ಈ ವೇಳೆ ಸ್ಥಳದಲ್ಲಿದ್ದ ಕಾರ್ಖಾನೆಯ ಭದ್ರತಾ ಸಿಬ್ಬಂದಿಗಳು ಮತ್ತು ಪೊಲೀಸ್ ಸಿಬ್ಬಂದಿಗಳು ನೌಕರರನ್ನು ಸಂತೈಸಿ ಕಳುಹಿಸಿಕೊಟ್ಟರು. ಈ ಸಂಬಂಧ ಯಾವುದೇ ಪೊಲೀಸ್ ದೂರು ದಾಖಲಾಗಿರುವುದಿಲ್ಲ.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	**(ದೂ: 2521923)**
ಬೆದುರುಲಂಕ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಜೈಲರ್(ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ಗದರ್–2 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ಬೇಬಿ (ತೆ)	4 ಪ್ರದರ್ಶನಗಳು
ಗಾಯಿತ್ರಿ	
ಜೈಲರ್ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ಕಿಂಗ್ ಆಫ್ ಕೋತ (ತ)	4 ಪ್ರದರ್ಶನಗಳು
ಸಂಗಂ	
ಟೋಬಿ (ಕ)	4 ಪ್ರದರ್ಶನಗಳು
ಲಿಡೋ	
ಕೌಸಲ್ಯ ಸುಪ್ರಜಾ ರಾಮ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಗಾಂಡೀವಧಾರಿ ಅರ್ಜುನ (ತೆ)	4 ಪ್ರದರ್ಶನಗಳು
ಪ್ರಭಾ	
ನಮೋ ಭೂತಾತ್ಮ–2 (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕೌಸಲ್ಯ ಸುಪ್ರಜಾ ರಾಮ (ಕ): ಬೆ.10ಕ್ಕೆ, ಜೈಲರ್ (ತ): ಮ.12.50ಕ್ಕೆ, ಸಂ.4ಕ್ಕೆ, ರಾ.7.10ಕ್ಕೆ, ಕಿಂಗ್ ಆಫ್ ಕೋಥಾ (ಮ): ರಾ.10.25ಕ್ಕೆ.
ಸ್ಕ್ರೀನ್ 2	ರಾಖಿ ಔರ್ ರಾಣಿ ಕೀ ಪ್ರೇಮ್ ಕಹಾನಿ (ಹಿಂ): ಬೆ.9.50ಕ್ಕೆ, ಜೈಲರ್ (ಕ): ಮ.1ಕ್ಕೆ, ಗದರ್ 2 (ಹಿಂ): ಸಂ.4.10ಕ್ಕೆ, ಡ್ರೀಂ ಗರ್ಲ್ (ಹಿಂ): ರಾ.7.25ಕ್ಕೆ, ರಾ.10.05ಕ್ಕೆ.
ಸ್ಕ್ರೀನ್ 3	ರಾಮಚಂದ್ರ ಬಾಸ್ & ಕೋ (ಮ): ಬೆ.10ಕ್ಕೆ, ಗ್ರ್ಯಾನ್ ಟುರಿಸ್ಮೋ (ಇಂ): ಮ.1.30ಕ್ಕೆ, ರಾ.7.20ಕ್ಕೆ, ಗಾಂಡೀವಧಾರಿ ಅರ್ಜುನ (ತೆ): ಸಂ.4.30ಕ್ಕೆ, ಅಖೇಲಿ (ಹಿಂ): ರಾ.10ಕ್ಕೆ.
ಸ್ಕ್ರೀನ್ 4	ಟೋಬಿ (ಕ): ಬೆ.10ಕ್ಕೆ, ಮ.1ಕ್ಕೆ, ಸಂ.4.05ಕ್ಕೆ, ರಾ.7.10ಕ್ಕೆ, ರಾ.10.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಜೈಲರ್ (ಕ): ಬೆ.11.20ಕ್ಕೆ, ರಾ.9.50ಕ್ಕೆ, ಜೈಲರ್ (ತ): ಮ.2.50ಕ್ಕೆ, ಸಂ.6.20ಕ್ಕೆ.
ಸ್ಕ್ರೀನ್ 2	ಗೂಮರ್ (ಹಿಂ): ಬೆ.9.55ಕ್ಕೆ, ಓಎಂಜಿ 2 (ಹಿಂ): ಮ.12.55ಕ್ಕೆ, ರಾ.7.15ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ಸಂ.4.10ಕ್ಕೆ, ಬ್ಲೂ ಬೀಟಲ್ (ಇಂ): ರಾ.10.30ಕ್ಕೆ.
ಸ್ಕ್ರೀನ್ 3	ಗದರ್ 2 (ಹಿಂ): ಬೆ.9.55ಕ್ಕೆ, ರಾಖಿ ಔರ್ ರಾಣಿ ಕೀ ಪ್ರೇಮ್ ಕಹಾನಿ (ಹಿಂ): ಮ.1.25ಕ್ಕೆ, ಬ್ಲೂ ಬೀಟಲ್ (ಇಂ): ಸಂ.4.55ಕ್ಕೆ, ಆಚಾರ್ & ಕೋ (ಕ): ರಾ.7.45ಕ್ಕೆ, ಗೂಮರ್ (ಹಿಂ): ರಾ.10.10ಕ್ಕೆ.
ಸ್ಕ್ರೀನ್ 4	ಜೈಲರ್ (ತ): ಬೆ.10.30ಕ್ಕೆ, ಗದರ್ 2(ಹಿಂ): ಮ.2ಕ್ಕೆ, ಸಂ.6.10ಕ್ಕೆ, ಓಎಂಜಿ 2 (ಹಿಂ): ರಾ.9.40ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಈ ಪಟ್ಟಣಕ್ಕೆ ಏನಾಗಿದೆ (ಕ): ಬೆ.10.45ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಮ.1.15ಕ್ಕೆ, ಶೀಲಾ (ಕ): ಸಂ.4.15ಕ್ಕೆ, ಡಿಡಿ ರಿಟರ್ನ್ಸ್ (ತ): ಸಂ.6.30ಕ್ಕೆ, ರಾ.9ಕ್ಕೆ.
ಸ್ಕ್ರೀನ್ 2	ಕೌಸಲ್ಯ ಸುಪ್ರಜಾ ರಾಮ (ಕ): ಬೆ.1.15ಕ್ಕೆ, ರಾ.7ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ) ಸಂ.4.15ಕ್ಕೆ.
ಸ್ಕ್ರೀನ್ 3	ಕೌಸಲ್ಯ ಸುಪ್ರಜಾ ರಾಮ (ಕ): ಬೆ.10.30ಕ್ಕೆ, ಸಂ.4ಕ್ಕೆ, ಮೆಗ್ 2 ದಿ ಟ್ರೆಂಚ್ (3ಡಿ) (ಇಂ): ಮ.1.20ಕ್ಕೆ, ಸಂ.6.55ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 4	ಮೆಗ್ 2 ದಿ ಟ್ರೆಂಚ್ (3ಡಿ)(ಇಂ): ಬೆ.10.45ಕ್ಕೆ, ನಮೋ ಭೂತಾತ್ಮ (ಕ): ಮ.1.10ಕ್ಕೆ, ಮ.3.50ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಸಂ.6.30ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ರಾ.9.15ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಜೈಲರ್ (ತ): ಬೆ.8.35ಕ್ಕೆ, ಬೆ.11.40ಕ್ಕೆ, ಮ.3.40ಕ್ಕೆ, ಸಂ.6.45ಕ್ಕೆ, ರಾ.10.30ಕ್ಕೆ, ಜೈಲರ್ (ಕ): ಬೆ.8.25ಕ್ಕೆ, ಮ.3.10ಕ್ಕೆ, ಓಎಂಜಿ 2 (ಹಿಂ): ಬೆ.8.20ಕ್ಕೆ, ಬೆ.11.50ಕ್ಕೆ, ಸಂ.6.40ಕ್ಕೆ, ರಾ.10.15ಕ್ಕೆ, ಗದರ್ 2 (ಹಿಂ): ಮ.12.05ಕ್ಕೆ, ಮ.3.10ಕ್ಕೆ, ರಾ.7.10ಕ್ಕೆ, ರಾ.10ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ರಾ.9.45ಕ್ಕೆ, ಆಚಾರ್ & ಕೋ (ಕ): ಮ.3.55ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ಮ.3.25ಕ್ಕೆ, ರಾ.10.30ಕ್ಕೆ, ನಮೋ ಭೂತಾತ್ಮ (ಕ): ಬೆ.11.55ಕ್ಕೆ, ರಾಖಿ ಔರ್ ರಾಣಿ (ಹಿಂ): ಬೆ.9.20ಕ್ಕೆ, ಸಂ.6.20ಕ್ಕೆ, ರಾ.9.50ಕ್ಕೆ, ಓಪನ್‌ಹೈಮರ್ (ಇಂ): ಸಂ.6.35ಕ್ಕೆ, ಭೋಳಾ ಶಂಕರ್ (ತೆ): ಬೆ.9.05ಕ್ಕೆ, ಮ.12.30ಕ್ಕೆ, ಮ.2.55ಕ್ಕೆ, ಸಂ.6.20ಕ್ಕೆ, ಮೆಗ್ 2 (ಇಂ): ಮ.12.50ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ನಂಜನಗೂಡು ಬಳಿ ಅಪರಿಚಿತ ವ್ಯಕ್ತಿ ಕೊಲೆ

ನಂಜನಗೂಡು, ಆ.28– ತಾಲೂಕಿನ ಗೋಳೂರು ಸಮೀಪ ಹುಲ್ಲಹಳ್ಳಿ ನಾಲೆಯ ಏರಿಯ ಬಳಿ ಅಪರಿಚಿತ ವ್ಯಕ್ತಿಯನ್ನು ಕೊಲೆ ಮಾಡಿ ಗೋಣಿಚೀಲದಲ್ಲಿ ಕಟ್ಟಿ ಪೊದೆಯಲ್ಲಿ ಬಿಸಾಡಿ ಹೋಗಿರುವುದು ಸೋಮವಾರ ಸಂಜೆ ಪತ್ತೆಯಾಗಿದೆ.

ಏರಿಯ ಪೊದೆಯಲ್ಲಿ ಅನುಮಾನಾಸ್ಪದವಾಗಿ ಗೋಣಿಚೀಲವೊಂದು ಗಬ್ಬು ವಾಸನೆ ಬೀರುವುದನ್ನು ಕಂಡ ದಾರಿಹೋಕರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಧಾವಿಸಿದ ಪೊಲೀಸರು ಗೋಣಿಚೀಲವನ್ನು ಬಿಚ್ಚಿ ನೋಡಿದಾಗ ಸುಮಾರು 25 ರಿಂದ 30 ವರ್ಷ ವಯಸ್ಸಿನ ಯುವಕನನ್ನು, ಯಾರೋ ದುಷ್ಕರ್ಮಿಗಳು ಕೊಲೆ ಮಾಡಿ ಮೃತದೇಹವನ್ನು ಗೋಣಿಚೀಲದಲ್ಲಿ ತುಂಬಿ ಬಿಸಾಡಿ ಹೋಗಿದ್ದಾರೆ ಎನ್ನಲಾಗಿದೆ. ಇನ್ನು ತಲೆಯ ಭಾಗಕ್ಕೆ ಬಲವಾಗಿ ಹೊಡೆದಿರುವುದು ಕಂಡುಬಂದಿದ್ದು, ಮೃತದೇಹವು ಸಂಪೂರ್ಣ ಕೊಳೆತ ಸ್ಥಿತಿಯಲ್ಲಿರುವುದರಿಂದ ಸುಮಾರು ಮೂರ್ನಾಲ್ಕು ದಿನಗಳ ಹಿಂದೆಯೇ ಕೊಲೆ ಮಾಡಿರುವ ಬಗ್ಗೆ ಪೊಲೀಸರು ಶಂಕೆ ವ್ಯಕ್ತಪಡಿಸಿದ್ದಾರೆ. ಮೃತದೇಹವನ್ನು ತಾಲೂಕು ಸರ್ಕಾರಿ ಆಸ್ಪತ್ರೆಯ ಶವಾಗಾರದಲ್ಲಿ ಇರಿಸಲಾಗಿದ್ದು, ಈ ಕುರಿತು ಗ್ರಾಮಾಂತರ ಪೊಲೀಸರು ಸ್ವಯಂ ದೂರು ದಾಖಲಿಸಿಕೊಂಡು ವಾರಸುದಾರರ ಪತ್ತೆಗಾಗಿ ಮುಂದಾಗಿದ್ದಾರೆ. ಈ ಸಂಬಂಧ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಡಾ. ಯತೀಂದ್ರ, ಸುನೀಲ್ ಬೋಸ್‌ಗೆ ಟಿಕೆಟ್ ನೀಡಲು ಒತ್ತಾಯ

ತಿ.ನರಸೀಪುರ, ಆ.28– ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರಕ್ಕೆ ಯತೀಂದ್ರ ಸಿದ್ದರಾಮಯ್ಯ ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರಕ್ಕೆ ಸುನೀಲ್ ಬೋಸ್ ಅವರಿಗೆ ಟಿಕೆಟ್ ನೀಡುವಂತೆ ತಾ.ಪಂ.ಮಾಜಿ ಉಪಾಧ್ಯಕ್ಷ ಬಿ.ಮರಯ್ಯ ಒತ್ತಾಯಿಸಿದ್ದಾರೆ.



ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವರುಣ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಯತೀಂದ್ರ ಹಾಗೂ ಸಚಿವ ಮಹದೇವಪ್ಪ ಪುತ್ರ ಸುನೀಲ್ ಬೋಸ್ ಅವರಿಗೆ ಕಾಂಗ್ರೆಸ್ ವರಿಷ್ಠರು ಲೋಕಸಭಾ ಚುನಾವಣೆಗೆ ಸ್ಪರ್ಧಿಸಲು ಅವಕಾಶ ದೊರಕಿಸಿಕೊಟ್ಟಿದ್ದೇ ಆದಲ್ಲಿ ಈ ಇಬ್ಬರು ಯುವ ನಾಯಕರನ್ನು ಗೆಲ್ಲಿಸಿ ಪಾರ್ಲಿಮೆಂಟಿಗೆ ಕಳುಹಿಸಿಕೊಡುತ್ತೇವೆ ಎಂದರು.

ಯತೀಂದ್ರ ಹಾಗೂ ಬೋಸ್ ಯುವಕರಾಗಿದ್ದು ರಾಜ್ಯದ ಪರವಾಗಿ ಸಂಸತ್‌ನಲ್ಲಿ ದನಿ ಎತ್ತುವ ಎಲ್ಲಾ ಅರ್ಹತೆ ಹೊಂದಿದ್ದಾರೆ. ಹಾಗಾಗಿ ಇವರಿಬ್ಬರಿಗೂ ಮುಂಬರುವ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಟಿಕೆಟ್ ದೊರಕಿಸಿಕೊಡಬೇಕು ಎಂದು ಒತ್ತಾಯಿಸಿದರು.

ವರುಣ ಹಾಗೂ ಟಿ.ನರಸೀಪುರ ಕ್ಷೇತ್ರದಲ್ಲಿ ಯಾವುದೇ ಕೈಗಾರಿಕೆಗಳಿಲ್ಲವಾದ್ದರಿಂದ ನಿರುದ್ಯೋಗ ಸಮಸ್ಯೆ ಹೆಚ್ಚಿದೆ. ಕ್ಷೇತ್ರದ ಶಾಸಕರೇ ಮುಖ್ಯಮಂತ್ರಿಗಳಾಗಿರುವುದರಿಂದ ವರುಣ ಕ್ಷೇತ್ರದಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಹೆಚ್ಚಿನ ಒತ್ತು ನೀಡಿ ನಿರುದ್ಯೋಗ ಸಮಸ್ಯೆ ನಿವಾರಣೆಗೆ ಮುನ್ನುಡಿ ಬರೆಯಬೇಕೆಂದು ಮನವಿ ಮಾಡಿದರು.

ಉದ್ಯೋಗ ಮೇಳದ ಸದುಪಯೋಗ ಪಡಿಸಿಕೊಳ್ಳಿ: ಕೆಡಿಪಿ ಸದಸ್ಯ ಸುನೀಲ್ ಬೋಸ್‌ರವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಇದೇ ಮೊದಲ ಬಾರಿಗೆ ಬೃಹತ್ ಉದ್ಯೋಗ ಮೇಳ ನಡೆಸಲಾಗುತ್ತಿದೆ. ಮೇಳದಲ್ಲಿ ನೂರಾರು ಕಂಪನಿಗಳು ಭಾಗವಹಿಸುತ್ತಿದ್ದು ಅರ್ಹತೆಗನುಸಾರವಾಗಿ ಆಯ್ಕೆ ನಡೆಯಲಿದೆ. ಹಾಗಾಗಿ ಎಲ್ಲ ವಿದ್ಯಾವಂತ ನಿರುದ್ಯೋಗಿಗಳು ಮೇಳದ ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಗೃಹಲಕ್ಷ್ಮಿ ಯೋಜನೆ ಕಾರ್ಯಕ್ರಮಕ್ಕೆ ಹೆಚ್ಚು ಮಹಿಳೆಯರು ಭಾಗವಹಿಸಿ: ಇದೇ ತಿಂಗಳು 30 ರಂದು ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿರುವ ಗೃಹಲಕ್ಷ್ಮಿ ಯೋಜನೆ ಉದ್ಘಾಟನೆ ಸಮಾರಂಭಕ್ಕೆ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯೋಜನೆಯ ಸದುಪಯೋಗಪಡಿಸಿಕೊಳ್ಳಿ ಎಂದು ಬಿ.ಮರಯ್ಯ ಮನವಿ ಮಾಡಿದರು.

ಮಾಕೋಡು ಕೃಷಿ ಪತ್ತಿನ ಸಹಕಾರ ಸಂಘ ಜೆಡಿಎಸ್ ತೆಕ್ಕೆಗೆ



ರಾಮದುರು, ಆ.28– ಇಲ್ಲಿನ ಸಮೀಪದ ಮಾಕೋಡು ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳೇ ಗೆಲುವು ಸಾಧಿಸಿದರು.

ಸಾಲಗಾರರ ಕ್ಷೇತ್ರದ 12 ಸ್ಥಾನ ಮತ್ತು ಸಾಲಗಾರರಲ್ಲದ 1 ಕ್ಷೇತ್ರಕ್ಕೆ ಮತದಾನದ ಮೂಲಕ ಆಯ್ಕೆ ಮಾಡಲಾಯಿತು ಸಾಲಗಾರ ಕ್ಷೇತ್ರಕ್ಕೆ ಒಟ್ಟು 22 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದರೆ, ಸಾಲಗಾರರಲ್ಲದ ಕ್ಷೇತ್ರಕ್ಕೆ ಮೂವರು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದರು. ಒಟ್ಟು 940 ಷೇರುದಾರು ತಮ್ಮ ಮತವನ್ನು ಚಲಾಯಿಸುವ ಮೂಲಕ ಸಾಮಾನ್ಯ ಸ್ಥಾನದಿಂದ ಜವರಪ್ಪ, ರಮೇಶ್, ರಾಮಕೃಷ್ಣ, ಮಾದೇಗೌಡ, ಕೃಷ್ಣೇಗೌಡ, ಮಹಿಳಾ ಮೀಸಲು ಕ್ಷೇತ್ರದಿಂದ ದ್ರಾಕ್ಷಾಯಿಣಿ, ರಾಜಮ್ಮ, ಪರಿಶಿಷ್ಟ ಜಾತಿ ಸ್ಥಾನದಿಂದ ರಾಮಯ್ಯ, ಪರಿಶಿಷ್ಟ ಪಂಗಡ ಸ್ಥಾನದಿಂದ ಗೌರಮ್ಮ, ಹಿಂದುಳಿದ ವರ್ಗ ಎ ಸ್ಥಾನದಿಂದ ನಿಂಗೇಗೌಡ, ಹಿಂದುಳಿದ ವರ್ಗ ಬಿ ಸ್ಥಾನದಿಂದ ಮಹಾಲಿಂಗಪ್ಪ ಗೆಲುವು ಸಾಧಿಸಿದರು. ಹಾಗೂ ಸಾಲಗಾರರಲ್ಲದ ಸ್ಥಾನದಿಂದ ವಿಜಯ್ ಎಂ.ಎನ್ ಗೆಲುವು ಸಾಧಿಸಿದರು.

ತಾಪಂ ಮಾಜಿ ಅಧ್ಯಕ್ಷ ಜವರಪ್ಪ ಮಾತನಾಡಿ, ಮಾಜಿ ಶಾಸಕ ಕೆ. ಮಹದೇವ್ ತಮ್ಮ ಅಧಿಕಾರ ಅವಧಿಯಲ್ಲಿ ಕೈಗೊಂಡ ಅಂತಹ ಉತ್ತಮ ಕಾರ್ಯ ವೈಖರಿಯನ್ನು ಹಾಗೂ ಮೈಮುಲ್ ಅಧ್ಯಕ್ಷ ಪಿಎಂ ಪ್ರಸನ್ನರವರ ಕಾರ್ಯದಕ್ಷತೆಯನ್ನು ಮೆಚ್ಚಿ ಜೆಡಿಎಸ್ ಅಭ್ಯರ್ಥಿಗಳ ಗೆಲುವಿಗೆ ಬೆಂಬಲ ವ್ಯಕ್ತಪಡಿಸಿದ್ದಾರೆ ಎಂದರು.

ತಾಲೂಕು ಸಹಕಾರಿ ಸಂಘದ ರಿಟರ್ನಿಂಗ್ ಅಧಿಕಾರಿಯಾದ ಹಿತೇಂದ್ರ ಚುನಾವಣಾ ಕರ್ತವ್ಯ ನಿರ್ವಹಿಸಿದರು. ಈ ಸಂದರ್ಭ ಮುಖಂಡರಾದ ಶ್ರೀನಿವಾಸ್, ಸೋಮೇಗೌಡ, ಮೋಮಿನ್ ಶರೀಫ್, ಇತರರು ಹಾಜರಿದ್ದರು.

ಶಿಕ್ಷಕರ ದಿನ ಅದ್ದೂರಿಯಾಗಿ ಆಚರಿಸಲು ನಿರ್ಧಾರ

ಕೆ.ಆರ್.ನಗರ, ಆ.28– ಶಿಕ್ಷಕರ ದಿನಾಚರಣೆ ಮಾಡುವ ಸಂಬಂಧ ಪಟ್ಟಣದ ಗುರುಭವನದಲ್ಲಿ ಪೂರ್ವಭಾವಿ ಸಭೆಯನ್ನು ನಡೆಸಲಾಯಿತು. ಸಭೆಯಲ್ಲಿ 20ಕ್ಕೂ ಹೆಚ್ಚು ಶಿಕ್ಷಕರ ಸಂಘಟನೆಗಳ ಪದಾಧಿಕಾರಿಗಳು ಹಾಜರಿದ್ದು ಸಾಕಷ್ಟು ಉಪಯುಕ್ತವಾದ ಸಲಹೆ ಸೂಚನೆಗಳನ್ನು ನೀಡಿದರು.



ಸಭೆಯ ಅಧ್ಯಕ್ಷತೆ ವಹಿಸಿದ್ದ ಶಾಸಕ ಡಿ.ರವಿಶಂಕರ್ ಮಾತನಾಡಿ, ಸೆ.5ರಂದು ಪುರಸಭೆ ಬಯಲು ರಂಗಮಂದಿರದಲ್ಲಿ ಅದ್ದೂರಿಯಾಗಿ ದಿನಾಚರಣೆ ಮಾಡಲು ನಿರ್ಧರಿಸಲಾಗಿದ್ದು, ಇದಕ್ಕೂ ಮುನ್ನ ಸರ್ವಪಲ್ಲಿ ರಾಧಾಕೃಷ್ಣನ್‌ರವರ ಭಾವಚಿತ್ರವನ್ನು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಮಾಡಲಾಗುತ್ತದೆ ಎಂದು ತಿಳಿಸಿದರು.

ಆನಂತರ ನಡೆಯುವ ವೇದಿಕೆ ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕರಿಗೆ, ಪ್ರಶಸ್ತಿ ಪುರಸ್ಕೃತ ಶಿಕ್ಷಕರಿಗೆ ಸನ್ಮಾನ ಸಮಾರಂಭ ಮತ್ತು ಶಿಕ್ಷಕರಿಗಾಗಿ ನಡೆಸುವ ಕ್ರೀಡಾಕೂಟದಲ್ಲಿ ವಿಜೇತರಿಗೆ ಬಹುಮಾನ ವಿತರಣೆ ಸೇರಿದಂತೆ ಇತರ ಸಾಂಸ್ಕೃತಿಕ ಕಾರ್ಯಕ್ರಮವನ್ನು ನಡೆಸಲಾಗುತ್ತದೆ. ಶಿಕ್ಷಕ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಿರಬೇಕು ಎಂದು ಮನವಿ ಮಾಡಿದರು.

ದಿನಾಚರಣೆ ಯಶಸ್ವಿಗಾಗಿ ಇಲಾಖಾ ಅಧಿಕಾರಿಗಳು ಮತ್ತು ಸಂಘಟನೆಗಳ ಪದಾಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಬೇಕು ಎಂದು ಸಲಹೆ ನೀಡಿದ ಶಾಸಕರು, ಆಹ್ವಾನ ಪತ್ರಿಕೆಯನ್ನು ಸರ್ಕಾರ ನಿಯಮದಂತೆ ಮುದ್ರಿಸಿ ಸಂಬಂಧಪಟ್ಟ ಎಲ್ಲರಿಗೂ ತಲುಪಿಸಬೇಕು. ಜತೆಗೆ ಎಲ್ಲಾ ಸಂಘಟನೆಗಳ ಪದಾಧಿಕಾರಿಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು ಎಂದು ಬಿಇಒ ಅವರಿಗೆ ಸೂಚಿಸಿದರು.

ಸಭೆಯಲ್ಲಿ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಜೆ.ಅರುಣ್‌ಕುಮಾರ್, ತಹಸೀಲ್ದಾರ್ ಸಿ.ಎಸ್.ಪೂರ್ಣಿಮ, ಇಒ ಸತೀಶ್, ಬಿಇಒ ಆರ್.ಕೃಷ್ಣಪ್ಪ, ಶಿಕ್ಷಕರ ಸಂಘದ ಅಧ್ಯಕ್ಷ ನಾಗರಾಜು, ಸಿಆರ್‌ಪಿಗಳಾದ ಶಂಕರೇಗೌಡ, ವಸಂತಕುಮಾರ್, ಶಿಕ್ಷಣ ಸಂಯೋಜಕರಾದ ದಾಸಪ್ಪ, ಜಗದೀಶ್, ವಿವಿಧ ಸಂಘಟನೆಗಳ ಪದಾಧಿಕಾರಿಗಳಾದ ಸೈಯದ್‌ರಿಜ್ವಾನ್, ಮೋಹನ್, ಕೆ.ಪಿ.ಭಾರತಿ, ಸಿ.ಎನ್.ಸ್ವಾಮಿ ಮುಂತಾದವರು ಹಾಜರಿದ್ದರು.

ಆಲಗೂಡು ಡೇರಿ ಅಧ್ಯಕ್ಷರಾಗಿ ಶಿವಣ್ಣ ಆಯ್ಕೆ



ತಿ.ನರಸೀಪುರ, ಆ.28– ಆಲಗೂಡು ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಶಿವಣ್ಣ ಹಾಗೂ ಉಪಾಧ್ಯಕ್ಷರಾಗಿ ಎ.ಎನ್. ಹರೀಶ್ ಅವರು ಸೋಮವಾರ ಅವಿರೋಧವಾಗಿ ಆಯ್ಕೆಗೊಂಡರು.

ಪಟ್ಟಣದ ಆಲಗೂಡು ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ನೂತನ ಆಡಳಿತ ಮಂಡಳಿಗೆ ಅಧ್ಯಕ್ಷ ಉಪಾಧ್ಯಕ್ಷರನ್ನು ಆಯ್ಕೆ ಮಾಡಲು ಚುನಾವಣೆ ಸಭೆಯನ್ನು ಕರೆಯಲಾಗಿತ್ತು. ಅಧ್ಯಕ್ಷ ಸ್ಥಾನಕ್ಕೆ ಶಿವಣ್ಣ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಎ.ಎನ್.ಹರೀಶ್ ಅವರಿಬ್ಬರೇ ಉಮೇದುವಾರಿಕೆ ಸಲ್ಲಿಸಿ, ಅವಿರೋಧವಾಗಿ ಆಯ್ಕೆಯಾದರು.

ಚುನಾವಣಾಧಿಕಾರಿಯಾಗಿ ಕೆ.ರಘು ಅವರು ಕಾರ್ಯನಿರ್ವಹಿಸಿದರು. ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ ಬಳಿಕ ಪಟಾಕಿ ಸಿಡಿಸಿ, ಸಾರ್ವಜನಿಕರಿಗೆ ಸಿಹಿಯನ್ನು ವಿತರಿಸಲಾಯಿತು. ನೂತನ ಅಧ್ಯಕ್ಷ ಶಿವಣ್ಣ ಮಾತನಾಡಿ, ರೈತರಿಗೆ ಲಾಭದಾಯಕ ಉಪಕಸುಬಾಗಿರುವ ಹೈನುಗಾರಿಕೆ ಅಭಿವೃದ್ಧಿಗೆ ಆಡಳಿತ ಮಂಡಳಿ ನಿರ್ದೇಶಕರೆಲ್ಲರೂ ಒಗ್ಗಟ್ಟಿನಿಂದ ದುಡಿಯುತ್ತೇವೆ. ಹಾಲು ಉತ್ಪಾದಕರಿಗೆ ಸರ್ಕಾರದ ಸೌಲಭ್ಯಗಳನ್ನು ಪ್ರಾಮಾಣಿಕವಾಗಿ ತಲುಪಿಸುತ್ತೇವೆ ಎಂದು ತಿಳಿಸಿದರು.


ಸಂಘದ ನಿರ್ದೇಶಕರಾದ ಮಹದೇವ, ಬಿ.ಮಹೇಶ, ಮಾದಪ್ಪ, ಮಹೇಶ, ಎಸ್.ನಟೇಶ, ಚಿಕ್ಕರಾಚಯ್ಯ, ಮಂಜು, ಮಹದೇವಮ್ಮ, ಸುಂದರಮ್ಮ, ಮಹದೇವಮ್ಮ, ಕಾರ್ಯದರ್ಶಿ ಎಸ್.ರೇವಣ್ಣ, ಹಾಲು ಪರೀಕ್ಷಕ ಚೇತನ್, ಮುಖಂಡರಾದ ಎ.ಎನ್. ರಂಗೂನಾಯಕ, ಚಿಕ್ಕಮಹದೇವ ಕೆಂಚ ಹಾಗೂ ಇನ್ನಿತರು ಹಾಜರಿದ್ದರು.

ನಂಜನಗೂಡು ಮಾದರಿ ಕ್ಷೇತ್ರವಾಗಿ ಅಭಿವೃದ್ಧಿ

ಶಾಸಕ ದರ್ಶನ್ ಧ್ರುವನಾರಾಯಣ್ ಭರವಸೆ

ನಂಜನಗೂಡು, ಆ.28– ನನ್ನ ತಂದೆ ತಾಯಿಯ ಸಾವಿನ ದುಃಖದ ಸಂದರ್ಭದಲ್ಲಿ ಜೊತೆ ನಿಂತು ಧೈರ್ಯ ತುಂಬಿ ಮತಗಳನ್ನು ನೀಡಿ, ಐತಿಹಾಸಿಕ ಗೆಲುವು ತಂದುಕೊಟ್ಟ ಮತದಾರರ ಋಣವನ್ನು ನಾನು ಎಂದೂ ಮರೆಯುವುದಿಲ್ಲ, ನಿಮ್ಮ ಮನೆ ಮಗನಾಗಿ ಸೇವೆ ಸಲ್ಲಿಸುವ ಮೂಲಕ ನಿಮ್ಮ ಋಣವನ್ನು ತೀರಿಸುವ ಕೆಲಸವನ್ನು ಮಾಡುತ್ತೇನೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ್ ಹೇಳಿದರು.

ತಾಲೂಕಿನ ಬದನವಾಳು ಗ್ರಾಮದಲ್ಲಿ ಗ್ರಾಮಸ್ಥರು ಏರ್ಪಡಿಸಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ನನ್ನ ತಂದೆ ಈ ಭಾಗದಲ್ಲಿ ಎರಡು ಬಾರಿ ಸಂಸದರಾಗಿ, ಶಾಸಕರಾಗಿ ಜನರ ಸಂಕಷ್ಟಗಳಿಗೆ ಸ್ಪಂದಿಸುವ ಮೂಲಕ ಜನರ ಪ್ರೀತಿ ವಿಶ್ವಾಸ ಗಳಿಸಿದ್ದರು. ಅಲ್ಲದೆ ಕಳೆದ ಲೋಕಸಭೆ ಚುನಾವಣೆಯ ಸೋಲಿನ ನಂತರ ನಂಜನಗೂಡು ಕ್ಷೇತ್ರದ ಜನರೊಂದಿಗೆ ನಿಕಟ ಸಂಪರ್ಕವನ್ನಿಟ್ಟುಕೊಂಡು ಸಂಘಟನೆ ಮಾಡುವ ಮೂಲಕ ಚುನಾವಣೆಗೆ ತಯಾರಿ ನಡೆಸಿದ್ದರು, ಆದರೆ ವಿಧಿಯಾಟದಿಂದ ಅವರ ಆಸೆ ಈಡೇರಲಿಲ್ಲ. ಅವರ ಅಕಾಲಿಕ ಮರಣದಿಂದಾಗಿ ನೋವಿನಲ್ಲೂ ನಾನು ಚುನಾವಣೆ ಎದುರಿಸಬೇಕಾಯಿತು. ಆ ಸಂದರ್ಭದಲ್ಲಿ ನನ್ನ ಜೊತೆ ನಿಂತು ಮಾನಸಿಕ ಸ್ಥೈರ್ಯ ತುಂಬಿ ಅತ್ಯಧಿಕ ಮತಗಳನ್ನು ನೀಡಿ ಐತಿಹಾಸಿಕ ಗೆಲುವು ತಂದುಕೊಟ್ಟಿದ್ದಕ್ಕೆ ನಿಮಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.



ನನ್ನ ತಂದೆ ಧ್ರುವನಾರಾಯಣ್‌ರವರಿಗೆ ಈ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಅಭಿವೃದ್ಧಿಪಡಿಸಬೇಕು ಎಂಬ ಆಸೆ ಇತ್ತು. ಅವರ ಆಸೆಯನ್ನು ಈಡೇರಿಸುವ ಸಲುವಾಗಿ ನಾನು ನನ್ನ ಶಕ್ತಿ ಮೀರಿ ಅನುದಾನ ತಂದು ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಅಭಿವೃದ್ಧಿಪಡಿಸಲು ಶ್ರಮವಹಿಸುತ್ತೇನೆ ಎಂದರಲ್ಲದೆ, ಕ್ಷೇತ್ರದ ಪ್ರಮುಖ ಸಮಸ್ಯೆಗಳಾದ ಕಾಡುಪ್ರಾಣಿಗಳ ಹಾವಳಿಯ ಬಗ್ಗೆ, ಸರ್ಕಾರಿ ಆಸ್ಪತ್ರೆಗೆ ಅವಶ್ಯವಾಗಿ ಬೇಕಿರುವ ವೈದ್ಯಕೀಯ ಸಿಬ್ಬಂದಿಗಳು, ಹೆಚ್ಚುವರಿ ಡಯಾಲಿಸಿಸ್ ಕೇಂದ್ರವನ್ನು ಮಂಜೂರು ಮಾಡುವಂತೆ ಹಾಗೂ ಶಾಲಾ–ಕಾಲೇಜುಗಳ ಕಟ್ಟಡಗಳ ದುರಸ್ತಿಗೆ ಅನುದಾನ ನೀಡುವಂತೆ ಸದನದಲ್ಲಿ ಪ್ರಸ್ತಾಪಿಸಿ ಮುಖ್ಯಮಂತ್ರಿಗಳಿಗೆ ಮತ್ತು ಸಂಬಂಧಪಟ್ಟ ಸಚಿವರಿಗೆ ಮನವರಿಕೆ ಮಾಡಿಕೊಟ್ಟಿದ್ದೇನೆ, ಶೀಘ್ರದಲ್ಲೇ ಅನುದಾನ ದೊರಕುವ ನಿರೀಕ್ಷೆ ಇದೆ. ಈಗಾಗಲೇ ಎಪಿಎಂಸಿ ದುರಸ್ತಿಗೆ 3 ಕೋಟಿ ಅನುದಾನ ಮಂಜೂರಾಗಿದ್ದು, ಶೀಘ್ರದಲ್ಲೇ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಶಾಸಕ ದರ್ಶನ್ ಧ್ರುವನಾರಾಯಣ್‌ರವರಿಗೆ ಬದನವಾಳು ಗ್ರಾಮಸ್ಥರು ಸನ್ಮಾನಿಸಿ, ಗೌರವಿಸಿದರು. ಸಮಾರಂಭದಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ವಿಧಾನಸಭಾ ಕ್ಷೇತ್ರದ ಉಸ್ತುವಾರಿ ಹಿರೇಹಳ್ಳಿ ಸೋಮೇಶ್, ಬಿಕೆ ರವಿಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕುರಹಟ್ಟಿ ಮಹೇಶ್, ಶ್ರೀಕಂಠನಾಯಕ, ಸಿ.ಎಂ.ಶಂಕರ್, ಮುಖಂಡರಾದ ವಿಜಯ್ ಕುಮಾರ್, ಶ್ರೀನಿವಾಸಮೂರ್ತಿ, ದೊರೆಸ್ವಾಮಿನಾಯಕ, ಮಂಜುನಾಥ್, ಶಿವಪ್ಪದೇವರು, ನಾಗೇಶ್ ರಾಜ್, ಬದನವಾಳು ಸೋಮು, ಗ್ರಾಪಂ ಸದಸ್ಯರಾದ ಅವಿನಾಶ್, ಶಿವು, ನಾಗರಾಜು ಮುದ್ದುಮಾದಶೆಟ್ಟಿ, ಸೇರಿದಂತೆ ಹಲವಾರು ಪ್ರಮುಖರು ಇದ್ದರು.

ಬೀರ್ವಾಳ್ ಶಿವಣ್ಣ ನಿಧನ

ಸರಗೂರು, ಆ.28– ತಾಲೂಕಿನ ಮುಳ್ಳೂರು ಗ್ರಾಮ ಪಂಚಾಯತಿ ಉಪಾಧ್ಯಕ್ಷ ಬೀರ್ವಾಳ್ ಶಿವಣ್ಣ ಬಿ. [65] ನಿಧನರಾಗಿದ್ದಾರೆ. ಕೆಲದಿನಗಳ ಹಿಂದೆ ನಡೆದ ಚುನಾವಣೆಯಲ್ಲಿ ಗ್ರಾಪಂ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದರು. ಮೃತರು ಪತ್ನಿ, ಪುತ್ರ, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬೀರ್ವಾಳ್ ಗ್ರಾಮದ ಮೃತರ ಜಮೀನಿನಲ್ಲಿ ಮಂಗಳವಾರ 12 ಗಂಟೆಗೆ ನಡೆಸಲಾಗುತ್ತದೆ ಎಂದು ಮೃತರ ಅಣ್ಣನ ಮಕ್ಕಳಾದ ಕಾಂಗ್ರೆಸ್ ಮುಖಂಡ ಬೀರ್ವಾಳ್ ಚಿಕ್ಕಣ್ಣ ತಿಳಿಸಿದ್ದಾರೆ.



ವಿದ್ಯಾರ್ಥಿನಿ ಇರಿದು, ಅಪಹರಿಸಿ ನಂತರ ಆಸ್ಪತ್ರೆಗೆ ಸೇರಿಸಿದ ಕ್ಯಾಬ್ ಚಾಲಕ

ರಾಮನಗರ, ಆ.28– ತಾಲೂಕಿನ ಕಾಲೇಜೊಂದರಲ್ಲಿ ದ್ವಿತೀಯ ಪಿಯುಸಿ ಓದುತ್ತಿದ್ದ 17 ವರ್ಷದ ವಿದ್ಯಾರ್ಥಿನಿಯನ್ನು ಕಾಲೇಜು ಬಳಿ ಅಡ್ಡಗಟ್ಟಿದ ಯುವಕನೊಬ್ಬ, ಆಕೆಯ ಕುತ್ತಿಗೆಗೆ ಚಾಕುವಿನಿಂದ ಇರಿದು ಕಾರಿನಲ್ಲಿ ಅಪಹರಿಸಿ, ಅರ್ಧ ತಾಸಿನ ಬಳಿಕ ಆತನೇ ಆಸ್ಪತ್ರೆಗೆ ದಾಖಲಿಸಿರುವ ಘಟನೆ ನಡೆದಿದೆ.



ಅಪಹರಿಸಿದ ಬಳಿಕವೂ ಆಕೆಯ ತಲೆ ಹಾಗೂ ಬೆನ್ನಿಗೆ ಯುವಕ ಇರಿದಿರುವುದರಿಂದ, ಆಕೆಯ ಸ್ಥಿತಿ ಗಂಭೀರವಾಗಿದೆ. ಖಾಸಗಿ ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಳೆ. ಘಟನೆ ಬಳಿಕ, ರಾಮನಗರ ಪುರ ಠಾಣೆ ಪೊಲೀಸರು ಆರೋಪಿ ಚೇತನ್ ಡಿ.ಎನ್. ಎಂಬಾತನನ್ನು ಬಂಧಿಸಿದ್ದಾರೆ.

ಕನಕಪುರ ತಾಲ್ಲೂಕಿನ ಯುವಕ, ಬೆಂಗಳೂರಿನ ಸಾಫ್ಟ್‌ವೇರ್ ಕಂಪನಿಯೊಂದರ ಕ್ಯಾಬ್ ಚಾಲಕನಾಗಿ ಕೆಲಸ ಮಾಡುತ್ತಿದ್ದ. ವಿದ್ಯಾರ್ಥಿನಿಯನ್ನು ಪ್ರೀತಿಸುವಂತೆ ಕೆಲ ತಿಂಗಳುಗಳಿಂದ ಪೀಡಿಸುತ್ತಿದ್ದ. ಅದಕ್ಕೆ ಯುವತಿ ನಿರಾಕರಿಸಿದ್ದರಿಂದ ಕೃತ್ಯ ಎಸಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಎಲ್ಲರೆದುರೇ ಕೃತ್ಯ: ಬೆಳಿಗ್ಗೆ 9.15ರ ಸುಮಾರಿಗೆ ವಿದ್ಯಾರ್ಥಿನಿ ಕಾಲೇಜು ಕಾಂಪೌಂಡ್ ಹತ್ತಿರ ಬರುತ್ತಿದ್ದಾಗ ಕಾರಿನಲ್ಲಿ ಕಾಯುತ್ತಿದ್ದ ಯುವಕ, ಇತರ ವಿದ್ಯಾರ್ಥಿಗಳ ಎದುರೇ ಆಕೆಯನ್ನು ಅಡ್ಡಗಟ್ಟಿ ಕುತ್ತಿಗೆಗೆ ಚಾಕುವಿನಿಂದ ಇರಿದಿದ್ದಾನೆ. ಜೋರಾಗಿ ಕಿರುಚಿಕೊಂಡು ರಕ್ತಸ್ರಾವದಿಂದ ಕುಸಿದ ಆಕೆಯನ್ನು ಕಾರಿನೊಳಕ್ಕೆ ಎತ್ತಿ ಹಾಕಿಕೊಂಡು ಅಪಹರಿಸಿದ್ದಾನೆ.

ಘಟನೆ ಕುರಿತು ವಿದ್ಯಾರ್ಥಿಗಳು ಕಾಲೇಜಿನ ಪ್ರಾಂಶುಪಾಲರಿಗೆ ತಿಳಿಸಿದ್ದು, ಅವರು ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಬಂದ ಪೊಲೀಸರು ಯುವಕ ಮತ್ತು ಕಾರಿನ ಕುರಿತು ವಿದ್ಯಾರ್ಥಿಗಳು ಹಾಗೂ ಸ್ಥಳೀಯರಿಂದ ಮಾಹಿತಿ ಸಂಗ್ರಹಿಸಿದ್ದಾರೆ. ನಂತರ, ಪ್ರತ್ಯೇಕ ತಂಡಗಳಲ್ಲಿ ನಗರದ ವಿವಿಧ ಭಾಗದಲ್ಲಿ ಪತ್ತೆಗೆ ಕಾರ್ಯಾಚರಣೆ ಕೈಗೊಂಡರು.

ಜಿಪಿಎಸ್ ನೆರವು: ಕೃತ್ಯ ನಡೆದ ಸ್ಥಳದ ಅಕ್ಕಪಕ್ಕದಲ್ಲಿದ್ದ ಮತ್ತು ಕಾರು ಹೋಗಿರುವ ರಸ್ತೆಯ ಸಿಸಿಟಿವಿ ಕ್ಯಾಮೆರಾ ದೃಶ್ಯಾವಳಿಗಳನ್ನು ಸಂಗ್ರಹಿಸಿದ್ದಾರೆ. ಕಾರು ನೋಂದಣಿ ಸಂಖ್ಯೆ ಆಧರಿಸಿ, ಕಾರು ಚಾಲಕನನ್ನು ಪತ್ತೆ ಮಾಡಿ ವಿಚಾರಿಸಿದ್ದಾರೆ. ನಂತರ, ಕಾರಿನ ಜಿಪಿಎಸ್ ಟ್ರ್ಯಾಕ್ ಮಾಡಿದಾಗ ಕಾರು ನಗರದ ಖಾಸಗಿ ಆಸ್ಪತ್ರೆ ಬಳಿ ಇರುವುದು ಗೊತ್ತಾಗಿದೆ. ಸ್ಥಳಕ್ಕೆ ಬಂದ ಪೊಲೀಸರಿಗೆ ಕಾರಿನ ಜೊತೆಗೆ, ಯುವಕನೂ ಸಿಕ್ಕಿಬಿದ್ದಿದ್ದಾನೆ.

ಘಟನೆಯಿಂದ ಆತಂಕಗೊಂಡ ಪೋಷಕರು ಕಾಲೇಜು ಬಳಿ ಜಮಾಯಿಸಿದರು. ಕೆಲವರು ಕಾಲೇಜು ಬಳಿ ಪುಂಡರ ಹಾವಳಿ ಹೆಚ್ಚಾಗಿದ್ದು, ತಮ್ಮ ಮಗಳ ವರ್ಗಾವಣೆ ಪತ್ರ ಕೊಡಿ. ಬೇರೆ ಕಡೆ ಸೇರಿಸಿಕೊಳ್ಳುತ್ತೇವೆ ಎಂದು ಪ್ರಾಂಶುಪಾಲರನ್ನು ಒತ್ತಾಯಿಸಿದರು. ಕೃತ್ಯ ಎಸಗಿದ ಯುವಕನಿಗೆ ಕಠಿಣ ಶಿಕ್ಷೆ ವಿಧಿಸುವಂತೆ ಆಗ್ರಹಿಸಿದರು. ಆಸ್ಪತ್ರೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಾರ್ತಿಕ್ ರೆಡ್ಡಿ, ಶಾಸಕ ಇಕ್ಬಾಲ್ ಹುಸೇನ್, ಡಿಡಿಪಿಯು ಗೋವಿಂದರಾಜು ಭೇಟಿ ನೀಡಿ, ವಿದ್ಯಾರ್ಥಿನಿಯ ಆರೋಗ್ಯ ಕುರಿತು ವಿಚಾರಿಸಿದರು.

ಆತನ ವಿರುದ್ಧ ಐಪಿಸಿ 307 (ಕೊಲೆ ಯತ್ನ), 366ಎ (ಬಾಲಕಿ ಮೇಲೆ ದೌರ್ಜನ್ಯ) ಹಾಗೂ ಪೋಕ್ಸೊ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ರಾಮನಗರ ಪುರ ಠಾಣೆ ಪೊಲೀಸರು ತಿಳಿಸಿದರು.

ಸಾತನೂರು ಪೊಲೀಸರ ನಿರ್ಲಕ್ಷ್ಯ : ನಮ್ಮ ಹುಡುಗಿಯನ್ನು ಪ್ರೀತಿಸುವಂತೆ ಚೇತನ್ ಕಿರುಕುಳ ನೀಡುತ್ತಿದ್ದ. ಈ ಕುರಿತು ಊರಿನವರು ಎಚ್ಚರಿಕೆ ನೀಡಿದ್ದರೂ ಆತ ಸುಮ್ಮನಿರಲಿಲ್ಲ. ಇದರಿಂದ ಬೇಸತ್ತ ಆಕೆಯ ತಾಯಿ ಸಾತನೂರು ಪೊಲೀಸ್ ಠಾಣೆಗೆ ದೂರು ಕೊಟ್ಟಿದ್ದರು. ಆದರೂ, ಆತ ತನ್ನ ಕೃತ್ಯ ಮುಂದುವರಿಸಿದ್ದ. ಪೊಲೀಸರಿಗೆ 10 ಸಾವಿರ ಕೊಟ್ಟಿದ್ದೇನೆ. ಅವರೇನೂ ಮಾಡುವುದಿಲ್ಲ ಎಂದು ಹೇಳುತ್ತಿದ್ದ. ಆತನ ಕಾಟದಿಂದ ತಪ್ಪಿಸಿಕೊಳ್ಳಲು ತಾಯಿ ರಾಮನಗರ ತಾಲ್ಲೂಕಿನಲ್ಲಿರುವ ಸಂಬಂಧಿಕರ ಮನೆಗೆ ಮಗಳನ್ನು ಬಿಟ್ಟು, ಇಲ್ಲಿಯೇ ಕಾಲೇಜಿಗೆ ಸೇರಿಸಿದ್ದರು. ಊರು ಬಿಟ್ಟರೂ ಬಿಡದ ಆತ, ಕಾಲೇಜಿನ ಬಳಿಯೇ ಇಂತಹ ಕೃತ್ಯ ಎಸಗಿದ್ದಾನೆ ಎಂದು ಕಣ್ಣೀರಿಟ್ಟ ಸಂಬಂಧಿಕರು, 'ಸಾತನೂರು ಪೊಲೀಸರಿಗೆ ದೂರು ಕೊಟ್ಟಿದ್ದಾಗಲೇ, ಯುವಕನ ವಿರುದ್ಧ ಕ್ರಮ ಕೈಗೊಂಡಿದ್ದರೆ ನಮ್ಮ ಮಗಳಿಗೆ ಈ ಗತಿ ಬರುತ್ತಿರಲಿಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಂಸ್ಕೃತ ಎಲ್ಲಾ ಭಾಷೆಗೂ ಮಾತೃ ಸ್ಥಾನದಲ್ಲಿದೆ

ಪೇಜಾವರ ಮಠದ ಶ್ರೀ ವಿಶ್ವ ಪ್ರಸನ್ನ ತೀರ್ಥ ಶ್ರೀಪಾದಂಗಳವರ ವಿವರಣೆ

ಮೈಸೂರು, ಆ.28(ಎಸ್‌ಪಿಎನ್)– 'ಸಂಸ್ಕೃತ' ಎಲ್ಲಾ ಭಾಷೆಗಳಿಗೂ ಮಾತೃ ಭಾಷೆ. ಅದು ಪುರಾತನ ಭಾಷೆಯಾಗಿದೆ. ಈ ಭಾಷೆಯಲ್ಲಿ 'ಊನ್' ಎಂಬ ಪದ ಬೇರೆಬೇರೆ ಭಾಷೆಗಳಲ್ಲಿ ಒಂದೇ ರೀತಿ ಅರ್ಥಕೊಡುತ್ತದೆ(ನಂಬರ್ ಒನ್) ಎಂದು ಉಡುಪಿ ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದಂಗಳವರು ಅಭಿಪ್ರಾಯಪಟ್ಟರು.



ಮೈಸೂರು ವಿಶ್ವವಿದ್ಯಾನಿಲಯದ ಮಾನಸಗಂಗೋತ್ರಿ ಆವರಣದಲ್ಲಿ ಪ್ರಾಚ್ಯ ವಿದ್ಯಾ ಸಂಶೋಧನಾಲಯ ಮತ್ತು ಇಂದಿರಾ ಗಾಂಧಿ ರಾಷ್ಟ್ರೀಯ ಕಲಾ ಕೇಂದ್ರ ಸಹಯೋಗದೊಂದಿಗೆ ಆಯೋಜಿಸಿದ್ದ 'ಭಾಷಾ ವ್ಯಾಕರಣ ವಿಶ್ಲೇಷಣೆ' (ಶಬ್ದಶಾಸ್ತ್ರ) ಕುರಿತು ಆಯೋಜಿಸಿದ್ದ ವಿಚಾರ ಸಂಕಿರಣದಲ್ಲಿ ಭಾಗವಹಿಸಿ ಶ್ರೀಗಳು ಮಾತನಾಡಿದರು.

ಕನ್ನಡ, ತೆಲುಗು, ತಮಿಳು ಹಾಗೂ ಇಂಗ್ಲಿಷ್ ಸೇರಿದಂತೆ ಇತರೆ ಭಾಷೆಗಳಲ್ಲೂ 'ನಂಬರ್ ಒನ್' ಎಂಬುದಾಗಿ ಉಚ್ಚಾರಣೆ ಇದೆ. ಇಂತಹ ಪದಪುಂಜಗಳ ಉಗಮ ಸಂಸ್ಕೃತದಲ್ಲಿ ಮಾತ್ರ ಸಾಧ್ಯ. ಹಾಗಾಗಿ ನಮ್ಮ ಮನಸ್ಸಿನಾಳದ ಭಾವನೆಗಳನ್ನು ಪ್ರಕ್ರಿಯಿಸಬೇಕಾದರೆ, ಶಬ್ದಗಳು ಅತೀ ಮುಖ್ಯ. ಅಲ್ಲದೆ, ನಮ್ಮ ಅಭಿಪ್ರಾಯವನ್ನು ಇತರರಿಗೆ ತಿಳಿಸುವ ಮಾಧ್ಯಮವೇ ಶಬ್ದ ಎಂದರು.

ನಾವು ನಿತ್ಯ ಪ್ರತಿಕ್ರಿಯಿಸುವ ಶಬ್ದಗಳ ಅರ್ಥ ಕೆಡದಂತೆ, ಇತರರ ನಡುವೆ ಸ್ಪಷ್ಟವಾಗಿ ಸಂಪರ್ಕ ಸಾಧನವಾಗಿ ತಿಳಿಸುವ ಕ್ರಮವೇ 'ಶಬ್ದಶಾಸ್ತ್ರ'. ಶಬ್ಧವನ್ನು ಯಥಾವತ್ತಾಗಿ ಅಕ್ಷರ ರೂಪದಲ್ಲಿ ಇಳಿಸುವುದು ಸೂಕ್ತ ಮತ್ತು ಅಕ್ಷರ ರೂಪದಲ್ಲಿರುವುದನ್ನು ಯಥಾವತ್ತಾಗಿ ಉಚ್ಚರಿಸಬೇಕು. ಇಲ್ಲಿ ಸ್ವಲ್ಪ ವ್ಯತ್ಯಾಸಗಳಾಗಿ, ಮಾತುಗಳು ಭಿನ್ನವಾದರೆ ಅರ್ಥ ಕೆಡುತ್ತದೆ. ಇಂಗ್ಲಿಷ್‌ನಲ್ಲಿ ಇದು ದೊಡ್ಡ ಸಮಸ್ಯೆಯಲ್ಲ. ಅಲ್ಲಿ ಬರವಣಿಗೆ ಮತ್ತು ಉಚ್ಚಾರಣೆ ಭಿನ್ನ ಎಂದರು.

ಶ್ಲೋಕಗಳಲ್ಲಿ ಪ್ರಮೇಯ ಮತ್ತು ಅಪ್ರಮೇಯ ಎರಡರ ಅರ್ಥವೂ ಭಿನ್ನವಾಗಿದೆ. ಉಚ್ಚಾರಣೆ ಸ್ಪಷ್ಟವಾಗಿದ್ದರೆ ಮಾತ್ರ ನಾವು ಹೇಳುವ ವಿಷಯ ಸ್ಪಷ್ಟವಾಗಿರುತ್ತದೆ. ಶಬ್ಧಗಳಿಗೆ ಪ್ರಾಮುಖ್ಯತೆ ನೀಡುವುದು ಭಾರತೀಯ ಸಂವಹನದಲ್ಲಿ ಬಹುಮುಖ್ಯ. ಇಲ್ಲದಿದ್ದರೆ ಅನರ್ಥಕ್ಕೆ ಎಡೆಮಾಡಿಕೊಟ್ಟಂತಾಗುತ್ತದೆ, ಅಪಹಾಸ್ಯಕ್ಕೂ ಗುರಿಯಾಗುತ್ತೇವೆ. ಮಾತನಾಡುವ ಸಂದರ್ಭದಲ್ಲಿ ಪದಗಳ ಉಚ್ಚಾರಣೆ ಸಂದರ್ಭಕ್ಕೆ ಅನುಸಾರ ಯಾವುದು ಸೂಕ್ತವೋ ಅಂತಹ ಪದಗಳನ್ನು ಉಚ್ಚಾರಣೆ ಮಾಡಬೇಕು. ನಮಗೆ ಎರಡು ಅಥವಾ ಹಲವು ಪದಗಳು ದೊರೆತರೂ, ಯಾವುದು ಹೆಚ್ಚು ಸೂಕ್ತ, ದೋಷರಹಿತ ಎಂಬುದನ್ನು ಗಮನಿಸಿ ಬಳಸಬೇಕು. ಅಲ್ಲದೆ, ಇಂದಿಗೂ ಕನ್ನಡದ ಸಂಖ್ಯೆಯಲ್ಲಿ 'ಒಂಭತ್ತು' ಎಂಬ ಪದಕ್ಕೆ ಪರ್ಯಾಯ ಶಬ್ಧವಿಲ್ಲ ಎಂದರು.

ಪ್ರತಿಯೊಂದು ಭಾಷಾ ಬೆಳವಣಿಗೆಗೂ ವ್ಯಾಕರಣ ಜೋಡಣೆ ಅತೀ ಮುಖ್ಯ ಇದನ್ನು 4 ವೇದಗಳ ಶ್ಲೋಕಗಳಲ್ಲಿ ಕಾಣಬಹುದಾಗಿದೆ. ಅಲ್ಲದೆ ಅನೇಕ ಭಾಷಾ ತಜ್ಞರೂ ಇದರ ಬಗ್ಗೆ ಸಾಕಷ್ಟು ಚರ್ಚಿಸಿ, ಗ್ರಂಥಗಳ ರೂಪದಲ್ಲಿ ಇಂದಿನ ಪೀಳಿಗೆಗೆ ಸಂರಕ್ಷಿಸಿದ್ದಾರೆ. ಕನ್ನಡದಲ್ಲಿ ಯಾರಿಗಾದರೂ ನಮನಗಳನ್ನು ಹೇಳಬೇಕಾದರೆ, ಕೆಲವರು ಹೀಗೆ 'ಶಿರಸಾಷ್ಟಾಂಗ ನಮ್ಮಸ್ಕಾರ' ಎಂದು ಉಚ್ಚರಿಸುತ್ತಾರೆ. ಆದರೆ, ವ್ಯಾಕರಣ ಬದ್ಧವಾಗಿ ನೋಡಿದರೆ ತಪ್ಪು ಉಚ್ಚಾರಣೆಯಾಗುತ್ತದೆ. ನಿತ್ಯ ಮಾತನಾಡುವಾಗ ಎಲ್ಲರೂ ಹೇಳಿದಂತೆ ನಾವು ಹೇಳುವ ಪರಿಸ್ಥಿತಿಯಿದೆ. ಹೀಗೆ ದಿನನಿತ್ಯ ಬಳಕೆಯಲ್ಲಿರುವ ಪದಗಳ ಉಚ್ಚಾರಣೆಯಲ್ಲಿ ತಪ್ಪುಗಳನ್ನು ಕಾಣಬಹುದು ಎಂದು ಉದಾಹರಣೆ ಸಮೇತ ವಿವರಿಸಿದರು. ನಂತರ ಕೆಲ ವಿದ್ವಾಂಸರೊಂದಿಗೆ ಶ್ರೀಗಳು ಸಂವಾದ ನಡೆಸಿಕೊಟ್ಟರು.

ಪ್ರಾಚ್ಯವಿದ್ಯಾ ಸಂಶೋಧನಾಲಯ ನಿರ್ದೇಶಕ ಡಾ.ಡಿ.ಪಿ.ಮಧುಸೂದನಾಚಾರ್ಯ ಮಾತನಾಡಿ, ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದಂಗಳವರು ನಾಲ್ಕು ವೇದಗಳನ್ನು ಅಭ್ಯಾಸ ಮಾಡಿ, ವ್ಯಾಕರಣ ಶಾಸ್ತ್ರದಲ್ಲೂ ಅಪಾರ ವಿದ್ವತ್‌ಗಳಿಸಿದ್ದಾರೆ. ಇಂತಹ ಪೂಜ್ಯರು ಇಂದಿನ ಸಭೆಯಲ್ಲಿ ಶಬ್ದಶಾಸ್ತ್ರ ಕುರಿತು ಕೇಳುವುದೇ ನಮ್ಮ ಪುಣ್ಯ ಎಂದರು. ಈ ವೇಳೆ ಕಲಾ ಕೇಂದ್ರದ ಪ್ರಾದೇಶಿಕ ನಿರ್ದೇಶಕ ಡಿ.ಮಹೇಂದ್ರ ಇದ್ದರು.

ರಿಲಯನ್ಸ್ ಇಂಡಸ್ಟ್ರಿ ಲಿಮಿಟೆಡ್ ಬೋರ್ಡ್‌ಗೆ ರಾಜೀನಾಮೆ ನೀಡಿದ ನೀತಾ ಅಂಬಾನಿ

ನವದೆಹಲಿ: ಏಷ್ಯಾದ ಶ್ರೀಮಂತ ವ್ಯಕ್ತಿ ಹಾಗೂ ಉದ್ಯಮಿ ಮುಖೇಶ್ ಅಂಬಾನಿ ಅವರ ರಿಲಯನ್ಸ್ ಇಂಡಸ್ಟ್ರಿಲಿಮಿಟೆಡ್ ಬೋರ್ಡ್ 46ನೇ ಸಾಮಾನ್ಯ ವಾರ್ಷಿಕ ಸಭೆಯಲ್ಲಿ ಮಹತ್ವದ ನಿರ್ಧಾರಗಳು ಹೊರಬಿದ್ದಿದೆ.



ರಿಲಯನ್ಸ್ ಇಂಡಸ್ಟ್ರಿ ಲಿಮಿಟೆಡ್ ಬೋರ್ಡ್ ಸದಸ್ಯ ಸ್ಥಾನಕ್ಕೆ ನೀತಾ ಅಂಬಾನಿ ರಾಜೀನಾಮೆ ನೀಡಿದ್ದಾರೆ. ಇದೀಗ ಮಂಡಳಿಗೆ ಅಂಬಾನಿ ಮಕ್ಕಳಾದ ಇಶಾ, ಆಕಾಶ್ ಹಾಗೂ ಅನಂತ್ ಅಂಬಾನಿಯನ್ನು ಸೇರಿಸಲಾಗಿದೆ. ನೀತಾ ಅಂಬಾನಿ ರಾಜೀನಾಮೆಯನ್ನು ರಿಲಯನ್ಸ್ ಇಂಡಸ್ಟ್ರೀ ಸ್ವೀಕರಿಸಿದೆ. ನೀತಾ ಅಂಬಾನಿ ರಿಲಯನ್ಸ್ ಇಂಡಸ್ಟ್ರಿ ಲಿಮಿಟೆಡ್ ಬೋರ್ಡ್ ಸಮಿತಿಗೆ ಮಾತ್ರ ರಾಜೀನಾಮೆ ನೀಡಿದ್ದಾರೆ. ರಿಲಯನ್ಸ್ ಫೌಂಡೇಶನ್‌ನ ಮುಖ್ಯಸ್ಥೆಯಾಗಿ ನೀತಾ ಅಂಬಾನಿ ಮುಂದುವರಿಯಲಿದ್ದಾರೆ ಎಂದು ರಿಲಯನ್ಸ್ ಸ್ಪಷ್ಟಪಡಿಸಿದೆ.

ರಿಲಯನ್ಸ್ ಮುಖ್ಯಸ್ಥ ಮುಕೇಶ್ ಅಂಬಾನಿ ಅವರ ಮಕ್ಕಳಾದ ಇಶಾ ಅಂಬಾನಿ, ಆಕಾಶ್ ಅಂಬಾನಿ ಮತ್ತು ಅನಂತ್ ಅಂಬಾನಿ ಅವರನ್ನು ಕಂಪೆನಿಯ ಕಾರ್ಯ ನಿರ್ವಾಹಕಯೇತರ (ನಾನ್ ಎಕ್ಸಿಕ್ಯೂಟಿವ್) ನಿರ್ದೇಶಕರನ್ನಾಗಿ ನೇಮಿಸಲು ಸೋಮವಾರ ನಡೆದ ಸಭೆಯಲ್ಲಿ ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್ (ಆರ್‌ಐಎಲ್) ನಿರ್ದೇಶಕರ ಮಂಡಳಿ ಶಿಫಾರಸು ಮಾಡಿದೆ.

ಮಾನವ ಸಂಪನ್ಮೂಲ, ನಾಮನಿರ್ದೇಶನ ಮತ್ತು ಸಂಭಾವನೆ ಸಮಿತಿಯ ಶಿಫಾರಸುಗಳನ್ನು ಪರಿಗಣಿಸಿರುವ ಮಂಡಳಿ, ಈ ಮೂವರ ನೇಮಕಾತಿಗಾಗಿ ಅನುಮೋದನೆ ನೀಡಲು ಶಿಫಾರಸು ಮುಂದಿಟ್ಟಿದೆ. ಶೇರ್ ಹೋಲ್ಡರ್‌ಗಳ ಒಪ್ಪಿಗೆ ಬಳಿಕ ಅವರು ಅಧಿಕಾರ ಸ್ವೀಕರಿಸಿದ ದಿನಾಂಕದಿಂದ ನೇಮಕಾತಿಯು ಜಾರಿಗೆ ಬರಲಿದೆ.

ರಿಲಯನ್ಸ್ ಫೌಂಡೇಶನ್ ಮೇಲೆ ಹೆಚ್ಚಿನ ಗಮನ ಕೇಂದ್ರೀಕರಿಸಲು ಹಾಗೂ ಭಾರತದಲ್ಲಿ ಸಾಮಾಜಿಕ ಸೇವೆಯಲ್ಲಿ ತೊಡಗಿಸಿಕೊಳ್ಳಲು ನೀತಾ ಅಂಬಾನಿ ರಿಲಯನ್ಸ್ ಬೋರ್ಡ್ ಆಫ್ ಡೈರೆಕ್ಟರ್ಸ್‌ಗೆ ರಾಜೀನಾಮೆ ನೀಡಿದ್ದಾರೆ. ನೀತಾ ಅಂಬಾನಿ ನಾಯಕತ್ವದಲ್ಲಿ ರಿಲಯನ್ಸ್ ಫೌಂಡೇಶನ್ ಮಹತ್ವದ ಮೈಲಿಗಲ್ಲು ಸ್ಥಾಪಿಸಿದೆ ಎಂದು ಮುಕೇಶ್ ಹೇಳಿದ್ದಾರೆ.

ಪ್ರಜ್ಞಾನಂದ ಪೋಷಕರಿಗೆ ಎಲೆಕ್ಟ್ರಿಕ್ ಕಾರು ಉಡುಗೊರೆ

ಮುಂಬೈ: ಫಿಡೆ ಚೆಸ್ ವಿಶ್ವಕಪ್‌ನಲ್ಲಿ ರನ್ನರ್ ಅಪ್ ಆಗಿರುವ ಭಾರತದ ಗ್ರ್ಯಾಂಡ್ ಮಾಸ್ಟರ್ ಆರ್.ಪ್ರಜ್ಞಾನಂದ ಅವರ ಪೋಷಕರಿಗೆ ಉದ್ಯಮಿ ಆನಂದ ಮಹೀಂದ್ರಾ ಅವರು ಉಡುಗೊರೆಯಾಗಿ ಎಲೆಕ್ಟ್ರಿಕ್ ಕಾರನ್ನು ನೀಡುವುದಾಗಿ ಘೋಷಣೆ ಮಾಡಿದ್ದಾರೆ. ಎಕ್ಸ್ (ಟ್ವಿಟರ್) ಖಾತೆಯಲ್ಲಿ ಈ ಮಾಹಿತಿಯನ್ನು ಆನಂದ್ ಮಹಿಂದ್ರಾ ಹಂಚಿಕೊಂಡಿದ್ದಾರೆ.



ಪ್ರಜ್ಞಾನಂದ ಅವರನ್ನು ಪ್ರಶಂಸಿಸಲು ಥಾರ್ ವಾಹನವನ್ನು ಉಡುಗೊರೆಯಾಗಿ ನೀಡುವಂತೆ ಹಲವರು ಸಲಹೆ ನೀಡಿದ್ದಾರೆ. ಆದರೆ ನನ್ನ ಬಳಿ ಅದಕ್ಕಿಂತ ಉತ್ತಮ ಐಡಿಯಾ ಇದೆ. ಪ್ರಜ್ಞಾನಂದ ಅವರ ಪೋಷಕರಾದ ಶ್ರೀಮತಿ ನಾಗಲಕ್ಷ್ಮಿ ಹಾಗೂ ರಮೇಶ್‌ಬಾಬು ಅವರಿಗೆ ಎಲೆಕ್ಟ್ರಿಕ್ ಕಾರನ್ನು ಉಡುಗೊರೆಯಾಗಿ ನೀಡಬಹುದು. ಪ್ರಜ್ಞಾನಂದ ಅವರ ಸಾಧನೆಗೆ ಸಂಪೂರ್ಣ ಪ್ರೋತ್ಸಾಹ ಅವರಿಂದ ದೊರಕಿದೆ ಎಂದು ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ.

ಟ್ವೀಟ್‌ನಲ್ಲಿ ಮಹೀಂದ್ರಾ ಕಂಪನಿಯ ಕಾರ್ಯನಿರ್ವಾಹಕ ನಿರ್ದೇಶಕ ಮತ್ತು ಸಿಇಓ ಆಗಿರುವ ರಾಜೇಶ್ ಜೆಜುರಿಕರ್ ಅವರನ್ನು ಉಡುಗೊರೆ ನೀಡೋಣವೇ ಎಂದು ಪ್ರಶ್ನಿಸಿ ಟ್ಯಾಗ್ ಮಾಡಿದ್ದಾರೆ. ಈ ಬಗ್ಗೆ ಬಳಕೆದಾರರೊಬ್ಬರು, ಭವಿಷ್ಯದ ಹೂಡಿಕೆಯನ್ನು ಹೋಲಿಸಿ ಎಲೆಕ್ಟ್ರಿಕ್ ಕಾರನ್ನು ಉಡುಗೊರೆಯಾಗಿ ನೀಡುತ್ತಿರುವುದು ನಿಜಕ್ಕೂ ಪ್ರಶಂಸನೀಯ ಎಂದು ಕಾಮೆಂಟ್ ಮಾಡಿದ್ದಾರೆ.

ತೆಲಂಗಾಣದ ಕಾಂಗ್ರೆಸ್ ನಾಯಕನ ವಿರುದ್ಧ ಅತ್ಯಾಚಾರ ಪ್ರಕರಣ ದಾಖಲಿಸಿದ ಕರ್ನಾಟಕ ಪೊಲೀಸರು


ಬೆಂಗಳೂರು: ತೆಲಂಗಾಣದ ಕಾಂಗ್ರೆಸ್ ನಾಯಕನ ವಿರುದ್ಧ ಕರ್ನಾಟಕ ಪೊಲೀಸರು ಅತ್ಯಾಚಾರ ಪ್ರಕರಣ ದಾಖಲಿಸಿದ್ದಾರೆ. ಕುಂಭಂ ಶಿವಕುಮಾರ್ ರೆಡ್ಡಿ ವಿರುದ್ಧ ಪ್ರಕರಣ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ರೆಡ್ಡಿ ಅವರು ತೆಲಂಗಾಣದ ನಾರಾಯಣಪೇಟೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿದ್ದು, ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಈ ಕೃತ್ಯ ಎಸಗಿದ್ದಾರೆ ಎಂದು ಆರೋಪಿಸಲಾಗಿದೆ.

ಕಬ್ಬನ್ ಪಾರ್ಕ್ ಪೊಲೀಸರು ರೆಡ್ಡಿ ವಿರುದ್ಧ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಈ ಸಂಬಂಧ ರೆಡ್ಡಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಈ ಹಿಂದೆಯೂ ಅವರ ವಿರುದ್ಧ ಹೈದರಾಬಾದ್‌ನ ಪಂಜಗುಟ್ಟ ಪೊಲೀಸ್ ಠಾಣೆಯಲ್ಲಿ ಅತ್ಯಾಚಾರ ಮತ್ತು ವಂಚನೆ ಪ್ರಕರಣ ದಾಖಲಾಗಿತ್ತು ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ತನ್ನನ್ನು ಪಂಚತಾರಾ ಹೋಟೆಲ್‌ಗೆ ಕರೆಸಿಕೊಂಡು ಲೈಂಗಿಕ ಶೋಷಣೆ ಮಾಡಲಾಗಿತ್ತು, ತನ್ನ ನಗ್ನ ಚಿತ್ರಗಳನ್ನು ಕ್ಯಾಮರಾದಲ್ಲಿ ಸೆರೆಹಿಡಿದು ಬ್ಲಾಕ್ ಮೇಲ್ ಮಾಡುತ್ತಿದ್ದಾರೆ ಎಂದು ಸಂತ್ರಸ್ತೆ ಆರೋಪಿಸಿದ್ದಾರೆ.

1ನೇ ವರ್ಷದ ಪುಣ್ಯಸ್ಮರಣೆ



ಎಸ್.ಶ್ರೀಕಂಠ

ಜನನ: 30-05-1955 ಮರಣ: 29-08-2022

(ನಿವೃತ್ತ ಎಸ್‌ಬಿಎಂ ಬ್ಯಾಂಕ್ ನೌಕರರು)

ನೀವು ನಮ್ಮನ್ನಗಲಿ ಇಂದಿಗೆ ಒಂದು ವರ್ಷವಾದರೂ ಸದಾ ನಿಮ್ಮ ಸವಿ ನೆನಪಿನಲ್ಲಿರುವ

ದುಃಖತಪ್ತರು: ಪತ್ನಿ: ಎನ್.ಎಸ್. ಹೇಮಾವತಿ ಮಗಳು, ಅಳಿಯ, ಮಗ, ಸೊಸೆ ಹಾಗೂ ಮೊಮ್ಮಕ್ಕಳು ಮತ್ತು ಕುಟುಂಬವರ್ಗದವರು, ನಂಜನಗೂಡು.

ಕೈಲಾಸ ಶಿವಗಣಾರಾಧನಾ ಆಹ್ವಾನ ಪತ್ರಿಕೆ

ಜನನ 03.04.1945



ಶಿವೈಕ್ಯ 20.08.2023

ಶ್ರೀ ಕೆ.ಬಿ.ಸಿದ್ದಪ್ಪ ನವರು

ಕಲ್ಮಹಳ್ಳಿ

ಇವರು ದಿನಾಂಕ: 20.08.2023 ಭಾನುವಾರ ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ತತ್ಸಂಬಂಧ ಮೃತರ ಉತ್ತರ ಕ್ರಿಯಾದಿ ಕಾರ್ಯವನ್ನು ದಿನಾಂಕ: 30.08.2023 ಬುಧವಾರ ಬೆಳಗ್ಗೆ 10 ಗಂಟೆಗೆ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು ಶ್ರೀ ಕ್ಷೇತ್ರ ಸುತ್ತೂರು ಇವರ ದಿವ್ಯ ಪಾದಪೂಜೆಯನ್ನು ಹಾಗೂ ಶಿವಗಣರಾಧನೆಯನ್ನು ನಮ್ಮ ಸ್ವಗ್ರಾಮ ಕಲ್ಮಹಳ್ಳಿಯಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಆಗಮಿಸಿ ಶ್ರೀ ಗುರುಕೃಪೆಗೆ ಪಾತ್ರರಾಗಿ ಲಿಂಗೈಕ್ಯರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ದುಃಖತಪ್ತರು: ಶ್ರೀಮತಿ ಎನ್.ಸಿ.ಇಂದಿರ, ಮಕ್ಕಳಾದ ಕೆ.ಎಸ್.ಮಧು ಮತ್ತು ಕೆ.ಎಸ್.ಕಿರಣ್ ಹಾಗೂ ಕುಟುಂಬವರ್ಗದವರು.

4ನೇ ವರ್ಷದ ಸವಿನೆನಪು



ಶ್ರೀ ಬಿ.ನಿಂಗೇಗೌಡ

ನೀವು ನಮ್ಮನ್ನಗಲಿ ಇಂದಿಗೆ 4 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ

ಹೆಂಡತಿ, ಮಕ್ಕಳು, ಮೊಮ್ಮಕ್ಕಳು ಕುಟುಂಬವರ್ಗದವರು. ಡಿ ಸಾಲುಂಡಿ

19ನೇ ವರ್ಷದ ಪುಣ್ಯಸ್ಮರಣೆ



ಶ್ರೀಮತಿ ಜಯಲಕ್ಷ್ಮಿ

ನಿಧನ: 29.08.2004

477, ಹೆಬ್ಬಾಳು, ಮೈಸೂರು

ನೀವು ನಮ್ಮನ್ನಗಲಿ 19 ವರ್ಷ ಕಳೆದರೂ ನಿಮ್ಮ ನೆನಪು ಸದಾ ನಮ್ಮ ಮನದಲ್ಲಿ ಚಿರಸ್ಥಾಯಿಯಾಗಿರುತ್ತದೆ.

ಇಂತಿ ನಿಮ್ಮ: ಶ್ರೀ ದಾಸಪ್ಪ ಪತಿ ಮಕ್ಕಳು, ಮಗಳು,ಅಳಿಯಂದಿರು, ಸೊಸೆಯಂದಿರು, ಹಾಗೂ ಬಂಧುಗಳು ಮತ್ತು ಕುಟುಂಬವರ್ಗ